ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 86, ಪುಟಗಳು: 8, ಶುಕ್ರವಾರ, 5 ಜನವರಿ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶುಕ್ರವಾರ 5, ಜನವರಿ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
- ನವಮಿ, ಶುಕ್ರವಾರ,
- ಚಿತ್ತ ನಕ್ಷತ್ರ
- ರಾಹುಕಾಲ - 10:47 AM -12:28 PM
- ಗುಳಿಕಕಾಲ - 07:56 AM - 09:27 AM
- ಯಮಗಂಡಕಾಲ - 03:29 PM - 04:59 PM

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

### ಬಿಜೆಪಿಗರು ನನ್ನನ್ನೂ ಬಂಧಿಸಿ ಎನ್ನುತ್ತಿರುವುದು ತಾವು ಮಾಡಿದ ಅಕ್ರಮಗಳ ಪ್ರಾಯಶ್ಚಿತ್ತಕ್ಕಾಗಿಯೇ
# ಕಾಂಗ್ರೆಸ್ ಪ್ರಶ್ನೆ

**ಬೆಂಗಳೂರು:** ರಾಮ ಜನ್ಮಭೂಮಿ ವಿಚಾರವಾಗಿ ಹುಬ್ಬಳ್ಳಿಯಲ್ಲಿ ನಡೆದ ಗಲಭೆ ಪ್ರಕರಣದ ಆರೋಪಿ ಶ್ರೀಕಾಂತ್ ಪೂಜಾರಿಯನ್ನು ಪೊಲೀಸರು ಬಂಧಿಸಿದ್ದು ವಿಪಕ್ಷ ಬಿಜೆಪಿ ಆಕ್ರೋಶಕ್ಕೆ ಕಾರಣವಾಗಿದೆ. ಬಂಧನ ಖಂಡಿಸಿ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದ್ದು, ನಾಯಕರು ''ನಾನು ಕರಸೇವಕ-1992, ನನ್ನನ್ನೂ ಬಂಧಿಸಿ'' ಅಭಿಯಾನ ನಡೆಸುತ್ತಿದ್ದಾರೆ. ಈ ಬಗ್ಗೆ ಕಾಂಗ್ರೆಸ್ ಸರಣಿ ಟ್ವೀಟ್ ಮೂಲಕ ವ್ಯಂಗ್ಯವಾಡಿದೆ.

ಪುಟ 2




# 865 ಹಳ್ಳಿಗಳು ಮಹಾರಾಷ್ಟ್ರಕ್ಕೆ ಸೇರಬೇಕು
### ಕರ್ನಾಟಕದ ಮರಾಠಿ ಭಾಷಿಕರಿಗೆ ತನ್ನ ಆರೋಗ್ಯ ವಿಮೆ ನೀಡಲು ಮುಂದಾದ ಶಿಂಧೆ ಸರ್ಕಾರ: ಧೈರ್ಯಶೀಲ ಮಾನೆ



**ಬೆಳಗಾವಿ:** ಬೆಳಗಾವಿ ಗಡಿ ವಿವಾದವನ್ನು ಜೀವಂತವಾಗಿ ಇಡಲು ಮಹಾರಾಷ್ಟ್ರ ಪ್ರಯತ್ನಿಸುತ್ತಲೇ ಇದೆ. ಇದೀಗ ಮಹಾರಾಷ್ಟ್ರ ಸಂಸದ ಧೈರ್ಯಶೀಲ ಮಾನೆ ಬೆಳಗಾವಿಯಲ್ಲಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಬೆಳಗಾವಿ, ಕಾರವಾರ, ನಿಪ್ಪಾಣಿ, ಬೀದರ್, ಬಾಲ್ಕಿ ಸೇರಿದಂತೆ 865 ಹಳ್ಳಿಗಳು ಮಹಾರಾಷ್ಟ್ರಕ್ಕೆ ಸೇರಬೇಕು. ಗಡಿ ವಿವಾದ ಹೋರಾಟ ಸುಪ್ರೀಂಕೋರ್ಟ್ ನಲ್ಲಿದೆ. ನಮ್ಮ ಮುಖ್ಯಮಂತ್ರಿ ಏಕನಾಥ್ ಶಿಂಧೆ ಬರೀ ಹೇಳಿಕೆ ಕೊಡುವ ಸಿಎಂ ಅಲ್ಲ. ಗಡಿ ವಿವಾದದ ಹೋರಾಟದಲ್ಲಿ ಏಕನಾಥ್ ಶಿಂಧೆ ಜೈಲಿಗೆ ಹೋಗಿದ್ದರು. ಹೀಗಾಗಿ ಮಹಾರಾಷ್ಟ್ರ ಏಕೀಕರಣ ಸಮಿತಿ ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದ್ದಾರೆ.

ಕರ್ನಾಟಕದ ಗಡಿಯಲ್ಲಿ ಇರುವ ಮರಾಠಿ ಭಾಷಿಕರಿಗೆ ಮಹಾರಾಷ್ಟ್ರ ಸರ್ಕಾರ ಆರೋಗ್ಯ ವಿಮೆ ಜಾರಿ ಮಾಡಿದೆ. 865 ಹಳ್ಳಿಗಳಲ್ಲಿರುವ ಮರಾಠಿ ಭಾಷಿಕರಿಗೆ ಈ ಯೋಜನೆ ತಲುಪಿಸಬೇಕು. ಇದೇ ಕಾರಣಕ್ಕೆ ಮಹಾರಾಷ್ಟ್ರ ಸರ್ಕಾರ ಎಂಇಎಸ್‌ಗೆ ಪೂರ್ಣ ಅಧಿಕಾರ ನೀಡಿದೆ. ಎಂಇಎಸ್ ನ ಶಿಫಾರಸ್ಸು ಮೇರೆಗೆ ಆರೋಗ್ಯ ವಿಮೆ ಲಾಭ ಮರಾಠಿ ಭಾಷಿಕರಿಗೆ ಸಿಗಲಿದೆ. ಎಷ್ಟೇ ಕೋಟಿ ಖರ್ಚಾದರೂ ಪರವಾಗಿಲ್ಲ, ಮಹಾರಾಷ್ಟ್ರ ಸೇರಬಯಸುವ 865 ಹಳ್ಳಿಗಳ ಜನರ ಮನೆ ಮನೆಗೂ ಎಂಇಎಸ್ ಮುಖಂಡರು ಯೋಜನೆ ತಲುಪಿಸಬೇಕು ಎಂದು ಕರೆ ಕೊಟ್ಟರು.

ಈ ಆರೋಗ್ಯ ವಿಮೆ ಯೋಜನೆ ಗಡಿ ಹೋರಾಟಕ್ಕೆ ಬಲ ತಂದು ಕೊಡಲಿದೆ. ಈ ವಿಮೆ ಮೂಲಕ ಕರ್ನಾಟಕ, ಮಹಾರಾಷ್ಟ್ರದಲ್ಲಿ ಇರುವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದು.

ಪುಟ 2

## ಸಂಕ್ಷಿಪ್ತ ಸುದ್ದಿ

### ನೈಂಟಿ ಎಣ್ಣೆ ಕೊಡಿಸದಿದ್ದಕ್ಕೆ ವ್ಯಕ್ತಿಗೆ
# ಹಲ್ಲೆ!

**ಬೆಂಗಳೂರು:** ನೈಂಟಿ ಎಣ್ಣೆ ಕೊಡಿಸದಿದ್ದಕ್ಕೆ ಹಿರಿಯ ನಾಗರೀಕನ ಮೇಲೆ ಇಟ್ಟಿಗೆಯಿಂದ ಹಲ್ಲೆ ನಡೆಸಿದ ಘಟನೆ ಬೆಂಗಳೂರು ನಗರದ ಗಿರಿನಗರದಲ್ಲಿ ನಡೆದಿದೆ. ಸಿಂಗಾರ ವೇಲು ಹಲ್ಲೆಗೊಳಗಾದ ವ್ಯಕ್ತಿಯಾಗಿದ್ದು, ಧರ್ಮ ಕೃತ್ಯದ ನಂತರ ತಲೆಮರೆಸಿಕೊಂಡಿರುವ ಆರೋಪಿಯಾಗಿದ್ದಾನೆ.



ಪುಟ 2

### ಹಿಂದೂ ದೇವಾಲಯದ ಮೇಲೆ ಖಲಿಸ್ತಾನಿ ಬೆಂಬಲಿಗರಿಂದ
# ದಾಳಿ

**ಯುಕೆ:** ಅಮೆರಿಕದ ಕ್ಯಾಲಿಫೋರ್ನಿಯಾದಲ್ಲಿರುವ ಹಿಂದೂ ದೇವಾಲಯದ ಮೇಲೆ ಖಲಿಸ್ತಾನಿ ಬೆಂಬಲಿಗರು ಮತ್ತೆ ದಾಳಿ ನಡೆಸಿದ್ದಾರೆ. ದೇವಸ್ಥಾನದ ಫಲಕಕ್ಕೆ ಕಪ್ಪು ಬಣ್ಣ ಬಳಿಯಲಾಗಿದೆ, ದೇವಾಲಯವನ್ನು ಅಪವಿತ್ರಗೊಳಿಸಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಶೇರಾವಾಲಿ ದೇವಾಲಯವು ಕ್ಯಾಲಿಫೋರ್ನಿಯಾದ ಹೇವರ್ಡ್ ನಗರದಲ್ಲಿದೆ. ಅದೇ ಪ್ರದೇಶದಲ್ಲಿ ಸ್ವಾಮಿನಾರಾಯಣ ದೇವಸ್ಥಾನವೂ ಇದ್ದು, ಎರಡು ವಾರಗಳ ಹಿಂದೆ ಖಾಲಿಸ್ತಾನ್ ಬೆಂಬಲಿಗರು ಇದೇ ರೀತಿ ದಾಳಿ ನಡೆಸಿದ್ದರು.

ಪುಟ 2

### ಅಂಚೆ ಇಲಾಖೆಯಲ್ಲಿ ಉದ್ಯೋಗ ಗಿಟ್ಟಿಸಿಕೊಳ್ಳಲು ನಕಲಿ
# ಅಂಕಪಟ್ಟಿ

**ಕಲಬುರಗಿ:** ಅಂಚೆ ಇಲಾಖೆಯ 1714 ಹುದ್ದೆಗಳ ನೇಮಕಾತಿಯಲ್ಲಿ ಉದ್ಯೋಗ ಗಿಟ್ಟಿಸಿಕೊಳ್ಳಲು ಕಲಬುರಗಿಯಲ್ಲಿಅಭ್ಯರ್ಥಿಗಳು ಎಸ್ ಎಸ್‌ಎಲ್‌ಸಿ ನಕಲಿ ಮಾರ್ಕ್ ಕಾರ್ಡ್ ನೀಡಿ ಸಿಕ್ಕಿಬಿದ್ದ ಘಟನೆ ನಡೆದಿದೆ. ಅಂಚೆ ಇಲಾಖೆಯಿಂದ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪರಿಶೀಲನೆ ವೇಳೆ ಎಂಟು ಮಂದಿ ಅಭ್ಯರ್ಥಿಗಳು ಸಿಕ್ಕಿಬಿದ್ದಿದ್ದು, ನಕಲಿ ಅಂಕಪಟ್ಟಿ ಸಲ್ಲಿಸಿದ ಅಭ್ಯರ್ಥಿಗಳ ವಿರುದ್ಧ ಅಂಚೆ ಇಲಾಖೆಯಿಂದ ವಂಚನೆ ದೂರು ನೀಡಲು ಸಿದ್ಧತೆ ನಡೆಸಲಾಗುತ್ತಿದೆ.

ಪುಟ 2

# ಯುವನಿಧಿಗೆ 32 ಸಾವಿರ ಅರ್ಜಿ
## ಬೆಳಗಾವಿ ಮತ್ತು ಬೆಂಗಳೂರಿನಲ್ಲಿ ಹೆಚ್ಚು

**ಬೆಂಗಳೂರು:** ರಾಜ್ಯ ಸರ್ಕಾರದ ಐದನೇ ಗ್ಯಾರೆಂಟಿಯಾಗಿರುವ ಯುವನಿಧಿಗೆ ಅರ್ಜಿಸಲ್ಲಿಕೆ ಪ್ರಾರಂಭವಾಗಿ ಸುಮಾರು 10 ದಿನಗಳು ಕಳೆದಿವೆ. ಈ 10 ದಿನಗಳಲ್ಲಿ ಇಲ್ಲಿಯವರೆಗೆ ಒಟ್ಟು 32,184 ಪದವೀಧರರು ಅರ್ಜಿ ಸಲ್ಲಿಸಿದ್ದಾರೆ. ಕೇವಲ 32,000 ಅರ್ಜಿಗಳು ಸಲ್ಲಿಕೆಯಾಗಿವೆ. ಅಂದರೆ ಶೇ 6 ಪ್ರತಿಶತದಷ್ಟು ಅರ್ಹ ಫಲಾನುಭವಿಗಳು ಮಾತ್ರ ಯೋಜನೆಗೆ ಅರ್ಜಿ ಸಲ್ಲಿಸಿದ್ದಾರೆ. ಈ ಯೋಜನೆ ಅಡಿಯಲ್ಲಿ 2023 ರಲ್ಲಿ ಪದವಿ ಮತ್ತು ಡಿಪ್ಲೊಮಾ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಎರಡು ವರ್ಷಗಳ ಅವಧಿಗೆ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಂಚಿಕೊಂಡಿರುವ ಅಂಕಿಅಂಶಗಳ ಪ್ರಕಾರ, ಬೆಳಗಾವಿ ಮತ್ತು ಬೆಂಗಳೂರು ನಗರ ಜಿಲ್ಲೆಗಳು ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿವೆ. ಬೆಳಗಾವಿಯಲ್ಲಿ 3,900 ಅರ್ಜಿಗಳು ಸಲ್ಲಿಕೆಯಾಗಿದ್ದು, ಬೆಂಗಳೂರು ನಗರದಲ್ಲಿ 2,853 ಅರ್ಜಿಗಳು ಸಲ್ಲಿಕೆಯಾಗಿವೆ.




ಮೂರನೇ ಅತಿ ಹೆಚ್ಚು ಅರ್ಜಿ ಸಲ್ಲಿಕೆ ಬಾಗಲಕೋಟೆ 1,943, ನಂತರದ ಸ್ಥಾನದಲ್ಲಿ ವಿಜಯಪುರ 1,741 ಮತ್ತು ರಾಯಚೂರು 1,714 ಜಿಲ್ಲೆಗಳಿವೆ. ಉಡುಪಿ 236, ಕೊಡಗು 120, ಚಾಮರಾಜನಗರ 237 ಮತ್ತು ರಾಮನಗರ ಜಿಲ್ಲೆಯಲ್ಲಿ 329 ಅರ್ಜಿಗಳು ಸಲ್ಲಿಕೆಯಾಗಿವೆ.

ಪುಟ 2

# ಕಾಂಗ್ರೆಸ್‌ನಲ್ಲಿ ಮತ್ತೆ ಡಿನ್ನರ್ ಪಾಲಿಟಿಕ್ಸ್

**ಬೆಂಗಳೂರು:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮತ್ತೆ ಸುದ್ದಿಯ ಕೇಂದ್ರಬಿಂದುವಾಗಿದ್ದಾರೆ. ಕಾಂಗ್ರೆಸ್ ನಲ್ಲಿ ಮತ್ತೆ ಡಿನ್ನರ್ ಪಾಲಿಟಿಕ್ಸ್ ಸದ್ದು ಮಾಡುತ್ತಿದ್ದು, ಸತೀಶ್ ಜಾರಕಿಹೊಳಿ ಮತ್ತೆ ಗಮನ ಸೆಳೆಯುತ್ತಿದ್ದಾರೆ. ಇತ್ತೀಚಿಗಷ್ಟೇ ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಭೇಟಿಮಾಡಿದ್ದ ಸತೀಶ್ ಜಾರಕಿಹೊಳಿ ಮೂರು ಡಿಸಿಎಂ ಹುದ್ದೆಯ ದಾಳ ಉರುಳಿಸಿದ್ದರು. ಮುಂಬರುವ ಲೋಕಸಭೆ ಚುನಾವಣೆ ದೃಷ್ಟಿಯಿಂದ ಹಿಂದುಳಿದ ವರ್ಗದ ಹಾಗೂ ಅಲ್ಪಸಂಖ್ಯಾತ ಸಮುದಾಯದವರು ಡಿಸಿಎಂ ಆಗಬೇಕು ಎಂದು ಚರ್ಚೆ ನಡೆಸಿದ್ದೇನೆ. ನಾನು ಡಿಸಿಎಂ ಆಗಬೇಕು ಎಂದು ಕಾರ್ಯಕರ್ತರು ಹಾಗೂ ಮಠಾಧೀಶರು ಒತ್ತಾಯಿಸುತ್ತಿರೋದನ್ನು ವರಿಷ್ಠರ ಗಮನಕ್ಕೆ ತಂದಿರೋದಾಗಿ ಹೇಳಿದ್ದರು.



ಪುಟ 2

### ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಆಹ್ವಾನ ಕೊಟ್ಟಿದ್ದು ರಾಮ ಮಂದಿರ ಉದ್ಘಾಟನೆಗಲ್ಲ, ಭೇಟಿಗಷ್ಟೇ
# ವಿಹೆಚ್‌ಪಿ ಸ್ಪಷ್ಟನೆ

**ಬೆಳಗಾವಿ:** ಅಯೋಧ್ಯೆಯ ರಾಮ ಮಂದಿರ ಉದ್ಘಾಟನೆಗೆ ಪ್ರತಿಪಕ್ಷಗಳ ನಾಯಕರಿಗೆ ಆಹ್ವಾನ ನೀಡುತ್ತಿಲ್ಲ ಎಂಬ ಟೀಕೆಗಳ ಮಧ್ಯೆಯೇ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ವಿಶ್ವ ಹಿಂದೂ ಪರಿಷತ್ ಆಮಂತ್ರಣ ನೀಡಿರುವ ಬಗ್ಗೆ ಗುರುವಾರ ವರದಿಯಾಗಿತ್ತು. ಆದರೆ, ಈ ಆಮಂತ್ರಣ ರಾಮ ಮಂದಿರ ಉದ್ಘಾಟನೆಗಲ್ಲ, ರಾಮ ಮಂದಿರ ಭೇಟಿಗಷ್ಟೇ ಎಂದು ವಿಹೆಚ್ ಪಿ ಸ್ಪಷ್ಟಪಡಿಸಿದೆ. ರಾಮ ಮಂದಿರಕ್ಕೆ ಒಮ್ಮೆಯಾದರೂ ಭೇಟಿ ನೀಡಿ ಎಂದು ಆಹ್ವಾನ ನೀಡಲಾಗಿದೆ. ರಾಮ ಮಂದಿರಕ್ಕೆ ಭೇಟಿ ಕೊಡಿ ಅಂತಾ ಅಕ್ಷತಾ ಅಭಿಯಾನ ಆಮಂತ್ರಣ ನೀಡಿದ್ದೇವೆ ಎಂದು ವಿಹೆಚ್‌ಪಿ ಮುಖಂಡ ಪರಮೇಶ್ವರ್ ಹೆಗಡೆ ತಿಳಿಸಿದ್ದಾರೆ.

ಲಕ್ಷ್ಮೀ ಹೆಬ್ಬಾಳ್ಕರ್ ಅವರು ರಾಮ ಮಂದಿರಕ್ಕೆ 2 ಲಕ್ಷ ರೂಪಾಯಿ ದೇಣಿಗೆ ನೀಡಿದ್ದರು. ಹೀಗಾಗಿ ಅವರಿಗೆ ಆಹ್ವಾನ ನೀಡಿದ್ದೇವೆ. ಸಾಮಾನ್ಯರಿಂದ ಹಿಡಿದು ಎಲ್ಲರಿಗೂ ಪಕ್ಷಾತೀತವಾಗಿ ಆಹ್ವಾನ ನೀಡುತ್ತಿದ್ದೇವೆ. ಅದೇ ರೀತಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ನೀಡಿದ್ದೇವೆ.

ಪುಟ 2



### ಗಡಿಯಲ್ಲಿ ಶಾಂತಿ ನೆಲೆಸುವವರೆಗೂ ಸಂಬಂಧಗಳು ಸಾಮಾನ್ಯವಾಗಿರಲು
# ಸಾಧ್ಯವಿಲ್ಲ

**ನವದೆಹಲಿ:** ಗಡಿಯಲ್ಲಿ ಶಾಂತಿ ನೆಲೆಸುವವರೆಗೂ ಭಾರತ, ಚೀನಾಸಂಬಂಧ ಸಾಮಾನ್ಯವಾಗಿರುವುದಿಲ್ಲ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ. ಪೂರ್ವ ಲಡಾಖ್‌ನಲ್ಲಿ ಬಾಕಿ ಉಳಿದಿರುವ ಸಮಸ್ಯೆಗಳನ್ನು ಪರಿಹರಿಸಲು ಎರಡೂ ಕಡೆಯವರು ರಾಜತಾಂತ್ರಿಕ ಮತ್ತು ಮಿಲಿಟರಿ ಮಾತುಕತೆ ನಡೆಸುತ್ತಿದ್ದಾರೆ.



ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾತನಾಡಿ, ಚೀನಾ ಕುರಿತ ನಮ್ಮ ನಿಲುವು ಎಲ್ಲರಿಗೂ ತಿಳಿದಿದೆ. ಈ ಸಂಬಂಧಗಳು ಸಾಮಾನ್ಯವಲ್ಲ ಆದರೆ ನಾವು ಮಿಲಿಟರಿ ಮತ್ತು ರಾಜತಾಂತ್ರಿಕ ಮಟ್ಟದಲ್ಲಿ ಮಾತನಾಡಿದ್ದೇವೆ. ಅಕ್ಟೋಬರ್ ಮತ್ತು ನವೆಂಬರ್‌ನಲ್ಲಿ ಮಿಲಿಟರಿ ಮತ್ತು ರಾಜತಾಂತ್ರಿಕ ಮಟ್ಟದಲ್ಲಿ ಉಭಯ ಪಕ್ಷಗಳ ನಡುವೆ ನಡೆದ ಮಾತುಕತೆಗಳನ್ನು ಜೈಸ್ವಾಲ್ ಉಲ್ಲೇಖಿಸಿದ್ದಾರೆ.

ಪುಟ 2

### ಭ್ರಷ್ಟಾಚಾರ ಆರೋಪ ಸಾಬೀತು: ಮೈಶುಗರ್‌ನ ಮಾಜಿ ಅಧ್ಯಕ್ಷನ ವಿರುದ್ಧ ಕೇಸ್ ದಾಖಲಿಸಲು ಮುಂದಾದ
# ಸರ್ಕಾರ

**ಮಂಡ್ಯ:** ರಾಜ್ಯದ ಸರ್ಕಾರಿ ಸ್ವಾಮ್ಯದ ಏಕೈಕ ಸಕ್ಕರೆ ಕಾರ್ಖಾನೆ ಮೈಶುಗರ್ ಮಾಜಿ ಅಧ್ಯಕ್ಷ ನಾಗರಾಜಪ್ಪ ಅವರ ವಿರುದ್ಧದ ನೂರಾರು ಕೋಟಿ ಅಕ್ರಮ ಮತ್ತು ಭ್ರಷ್ಟಾಚಾರ ಆರೋಪ ಸಾಬೀತಾಗಿದೆ. ಈ ಹಿನ್ನೆಲೆಯಲ್ಲಿ ನಷ್ಟದ ಹಣ ವಸೂಲಿ ಮಾಡಿ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ರಾಜ್ಯ ಸರ್ಕಾರ ಮುಂದಾಗಿದೆ.



2008ರ ಮುಖ್ಯಮಂತ್ರಿಯಾಗಿದ್ದ ಬಿಎಸ್ ಯಡಿಯೂರಪ್ಪ ಅವರ ಕಾಲದಲ್ಲಿ ನಾಗರಾಜಪ್ಪ ಮೈಶುಗರ್ ಕಾರ್ಖಾನೆ ಅಧ್ಯಕ್ಷರಾಗಿದ್ದರು. ನಾಗರಾಜಪ್ಪ ಯಡಿಯೂರಪ್ಪ ಅವರ ಸಂಬಂಧಿ ಹಾಗೂ ಪರಮಾಪ್ತರಾಗಿದ್ದಾರೆ.

ಪುಟ 2

### ಹಂದಿ ಬೇಟೆಗೆ ಬಳಸುವ ಸ್ಫೋಟಕ ಉಂಡೆಯನ್ನು ಬಾಲ್ ಎಂದು ಆಟವಾಡಿದ ಮಕ್ಕಳು!
# ಬಾಲಕರು ಬಚಾವ್



**ತುಮಕೂರು:** ಶಾಲೆ ಪಕ್ಕದಲ್ಲೇ ಎಸೆದಿದ್ದ ಸಿಡಿಮದ್ದಿನ ಉಂಡೆ ಮಕ್ಕಳ ಕೈಗೆ ಸಿಕ್ಕಿದ್ದು, ಅದೃಷ್ಟವಶಾತ್ ಸಂಭಾವ್ಯ ದುರಂತ ಸ್ವಲ್ಪದರಲ್ಲೇ ತಪ್ಪಿದೆ. ತುಮಕೂರು ಜಿಲ್ಲೆ ಚಿಕ್ಕನಾಯನಕನಹಳ್ಳಿ ತಾಲ್ಲೂಕಿನ ಮಾದೇನಹಳ್ಳಿಯಲ್ಲಿ ಹಂದಿ ಬೇಟೆಗೆ ಬಳಸುವ ಸಿಡಿ ಮದ್ದಿನ ಉಂಡೆಯನ್ನು ಶಾಲೆಯೊಂದರ ಪಕ್ಕದಲ್ಲಿ ಎಸೆಯಲಾಗಿತ್ತು. ಇದನ್ನು ಬಾಲ್ ಅಂತ ಭಾವಿಸಿದ್ದ ಬಾಲಕನೊಬ್ಬ ಎತ್ತಿಕೊಂಡು ಶಾಲೆಯತ್ತ ತೆರಳಿದ್ದ. ಬಳಿಕ ಆ ಸಿಡಿ ಮದ್ದಿನ ಉಂಡೆಯನ್ನು ಕೈಯಲ್ಲಿ ಹಿಡಿದುಕೊಂಡು ಮಕ್ಕಳು ಓಡಾಡಿದ್ದರು.

ಪುಟ 2

### ಹಿಂದೂ ರಾಷ್ಟ್ರ: ಇದೊಂದು ರಾಜಕಾರಣಿಗಳು ಮತ ಬ್ಯಾಂಕ್‌ಗಾಗಿ ಸೃಷ್ಟಿಸಿರುವ
# ಭ್ರಮೆಯ ಚಿತ್ರಣ

**ಮೈಸೂರು:** ಭಾರತ ಹಿಂದೂ ರಾಷ್ಟ್ರವಾದರೆ ದಿವಾಳಿಯಾಗುತ್ತದೆ ಎಂಬ ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಸಂಬಂಧಿಸಿದಂತೆ ''ಇದೊಂದು ರಾಜಕಾರಣಿಗಳು ಮತ ಬ್ಯಾಂಕ್‌ಗಾಗಿ ಸೃಷ್ಟಿಸಿರುವ ಭ್ರಮೆಯ ಚಿತ್ರಣ ಎಂದು ಇತಿಹಾಸ ತಜ್ಞ ಡಾ. ಶೆಲ್ವಪಿಳ್ಳೈ ಅಯ್ಯಂಗಾರ್ ತಿಳಿಸಿದ್ದಾರೆ. ಭಾರತ ಯಾವುದೇ ಕಾರಣಕ್ಕೂ ದಿವಾಳಿಯಾಗುವುದಿಲ್ಲ. ಭಾರತ ಹಿಂದೂ ರಾಷ್ಟ್ರ ಆಗುತ್ತದೆ ಅನ್ನೋ ಚರ್ಚೆಯೇ ತಪ್ಪು ಎಂದು ಹೇಳಿದರು.



ಭಾರತ ಈಗಾಗಲೆ ಹಿಂದೂ ರಾಷ್ಟ್ರವಾಗಿದೆ. 1947ರಲ್ಲಿ ಹಿಂದೂಸ್ಥಾನ್ ಪಾಕಿಸ್ತಾನ್ ಅಂತ ವಿಭಜಿಸಲಾಗಿದೆ. ಹಿಂದೂ ರಾಷ್ಟ್ರ ಅಂದರೆ ಅಖಂಡ ಭಾರತ. ಅಖಂಡ ಭಾರತದಲ್ಲಿ ಪಾಕಿಸ್ತಾನ ಶ್ರೀಲಂಕಾ ಮತ್ತು ಬಾಂಗ್ಲಾದೇಶ ಎಲ್ಲ ಇದರ ಅಡಿಯಲ್ಲಿ ಇದ್ದವು. ಹಿಂದೂ ರಾಷ್ಟ್ರದಲ್ಲಿ ಸರ್ವಧರ್ಮ ಸಹಿಷ್ಣುತೆ ಇದೆ. ಎಲ್ಲರನ್ನೂ ಗೌರವಿಸುವುದೇ ಹಿಂದೂ ರಾಷ್ಟ್ರದ ವಿಶೇಷತೆ. ವಿಜಯನಗರದ ಕೃಷ್ಣದೇವರಾಯ, ಅಮೋಘ ವರ್ಷನ ಕಾಲದಿಂದಲೂ ಇದು ಸಾಬೀತಾಗಿದೆ ಎಂದು ಡಾ ಶೆಲ್ವಪಿಳ್ಳೈ ಅಯ್ಯಂಗಾರ್ ಅವರು ಹಿಂದೂ ರಾಷ್ಟ್ರದ ಅರ್ಥ ವಿವರಿಸಿದರು.

ಪುಟ 2

### ಖೇಲೋ ಇಂಡಿಯಾ ಯೂತ್ ಗೇಮ್ಸ್
# ಮೋದಿಗೆ ಆಹ್ವಾನ ನೀಡಿದ ಸಚಿವ ಉದಯನಿಧಿ ಸ್ಟಾಲಿನ್

**ದೆಹಲಿ:** ತಮಿಳುನಾಡು ಸಚಿವ ಮತ್ತು ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಗುರುವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡುವ ಮೂಲಕ ಜನವರಿ 19 ರಿಂದ 31ರ ವರೆಗೆ ನಡೆಯಲಿರುವ 'ಖೇಲೋ ಇಂಡಿಯಾ ಯೂತ್ ಗೇಮ್ಸ್'ಗೆ ಆಹ್ವಾನಿಸಿದ್ದಾರೆ. ಉದ್ಘಾಟನಾ ಸಮಾರಂಭಕ್ಕೆ ಪ್ರಧಾನಿ ಮೋದಿ ಆಗಮಿಸುತ್ತಿದ್ದಾರೆ ಎಂದು ಉದಯನಿಧಿ ಸ್ಟಾಲಿನ್ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಈ ಕುರಿತಾಗಿ ಪ್ರಧಾನಿ ಮೋದಿ ಅವರೊಂದಿಗಿನ ಭೇಟಿಯ ಫೋಟೋಗಳನ್ನು ಎಕ್ಸ್ ನಲ್ಲಿ ಹಂಚಿಕೊಂಡಿದ್ದು, ಜನವರಿ 19, 2024 ರಂದು ಚೆನ್ನೈನಲ್ಲಿ ನಡೆಯಲಿರುವ 'ಖೇಲೋ ಇಂಡಿಯಾ ಯೂತ್ ಗೇಮ್ಸ್‌ನ ಉದ್ಘಾಟನಾ ಸಮಾರಂಭ'ಕ್ಕೆ ಗೌರವಾನ್ವಿತ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಿದ್ದಕ್ಕೆ ಸಂತೋಷವಾಗಿದೆ ಎಂದು ಬರೆದುಕೊಂಡಿದ್ದಾರೆ.



ಪುಟ 2

## ಕಾಂಗ್ರೆಸ್ ಕಾನೂನನ್ನು ದುರ್ಬಳಕೆ ಮಾಡಿಕೊಳ್ತಿದೆ

**ಬೆಂಗಳೂರು:** ಕಾಂಗ್ರೆಸ್ ಕಾನೂನನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಕಿಡಿಕಾರಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು 'ರಾಮಮಂದಿರ ರಾಜಕೀಯ ಕಾರ್ಯಕ್ರಮವಲ್ಲ, ಅದೊಂದು ಧಾರ್ಮಿಕ ಕಾರ್ಯಕ್ರಮವಾಗಿದೆ. ಆದರೆ, ಇದರಲ್ಲಿ ಇಂಡಿಯಾ ಒಕ್ಕೂಟ ರಾಜಕೀಯ ಮಾಡುತ್ತಿದೆ ಎಂದಿದ್ದಾರೆ.



ಇದೇ ವೇಳೆ ಮಂತ್ರಾಕ್ಷತೆ ಕೊಡಲು ಅನ್ನಭಾಗ್ಯ ಅಕ್ಕಿ ಬಳಕೆ ಎಂಬ ಡಿಕೆ ಶಿವಕುಮಾರ್ ಹೇಳಿಕೆ ವಿಚಾರ 'ಅನ್ನಭಾಗ್ಯ ಯೋಜನೆಯಲ್ಲಿ ರಾಜ್ಯ ಸರ್ಕಾರದ ಕೊಡುಗೆ ಇಲ್ಲ, ಕಾಂಗ್ರೆಸ್‌ನವರು ಏನೇ ಹೇಳಿದರೂ ಪ್ರಧಾನಿ ಮೋದಿ ಪರವಾಗಿ ಆಗುತ್ತದೆ ಎನ್ನುವ ಮೂಲಕ ಬಸವರಾಜ ಬೊಮ್ಮಾಯಿ ತಿರುಗೇಟು ಕೊಟ್ಟಿದ್ದಾರೆ.

**ಹರಿಪ್ರಸಾದ್ ಹೇಳಿಕೆಗೆ ಮಾಜಿ ಸಿಎಂ ಬೊಮ್ಮಾಯಿ ತಿರುಗೇಟು:** 'ಮತ್ತೊಂದು ಗೋಧ್ರಾ, ಹತ್ಯಾಕಾಂಡ ಆಗದಂತೆ ನೋಡಿಕೊಳ್ಳಿ ಎಂದು ಹರಿಪ್ರಸಾದ್ ಹೇಳಿಕೆಗೆ ಮಾಜಿ ಸಿಎಂ ಬೊಮ್ಮಾಯಿ ತಿರುಗೇಟು ಕೊಟ್ಟಿದ್ದಾರೆ. ಎಂಎಲ್‌ಸಿ ಬಿಕೆ ಹರಿಪ್ರಸಾದ್ ಹೇಳಿಕೆ ಪ್ರಚೋದನಕಾರಿಯಾಗಿದೆ. ಗೃಹ ಸಚಿವರಿಗೆ ಮಾಹಿತಿ ಇಲ್ಲವಂತೆ, ಹಾಗಾದರೆ ಇದು ಗುಪ್ತಚರ ಇಲಾಖೆ ವೈಫಲ್ಯ. ಇದನ್ನು ಬೇರೆ ಯಾರಾದರೂ ಹೇಳಿದ್ದರೆ, ಸುಮ್ಮನೆ ಇರುತ್ತಿದ್ದರಾ?, ಕೂಡಲೇ ಎಂಎಲ್‌ಸಿ ಹರಿಪ್ರಸಾದ್ ಕರೆದು ಮಾಹಿತಿ ಪಡೆಯಬೇಕು. ಎಲ್ಲಾ ಗೂಂಡಾಗಳು ರಾಜಾರೋಷವಾಗಿ ಓಡಾಡುತ್ತಿದ್ದಾರೆ. ಇತ್ತ ಹುಬ್ಬಳ್ಳಿಯಲ್ಲಿ 32 ವರ್ಷದ ಹಿಂದಿನ ಕೇಸ್ ರೀ ಓಪನ್ ಮಾಡೋದು ಎಷ್ಟು ಸರಿ ಎಂದು ಕಬೊಮ್ಮಾಯಿ ವಾಗ್ದಾಳಿ ನಡೆಸಿದ್ದಾರೆ.

## ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಆಸಕ್ತಿ ಇಲ್ಲ

**ಬೆಂಗಳೂರು:** ನನಗೆ ಬೆಳಗಾವಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಆಸಕ್ತಿ ಇಲ್ಲ. ನಮ್ಮ ಪಕ್ಷದ ಕಾರ್ಯಕರ್ತರಿಗೆ ಈ ಬಾರಿ ಅವಕಾಶ ಸಿಗಲಿದೆ ಎಂದು ಬೆಂಗಳೂರಿನಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ ನೀಡಿದ್ದಾರೆ. ಬೆಳಗಾವಿ, ಚಿಕ್ಕೋಡಿ ಎರಡು ಲೋಕಸಭಾ ಕ್ಷೇತ್ರದಲ್ಲೂ ನಾನು, ನಮ್ಮ ಕುಟುಂಬದ ಸದಸ್ಯರು ಯಾರೂ ಸ್ಪರ್ಧಿಸುವುದಿಲ್ಲ. ಈ ಬಾರಿ ಪಕ್ಷದ ಕಾರ್ಯಕರ್ತರಿಗೆ ಅವಕಾಶ ಸಿಗಲಿದೆ. ಈ ಬಗ್ಗೆ ಹೈಕಮಾಂಡ್ ಏನು ಹೇಳುತ್ತದೋ ನೋಡೋಣ ಎಂದು ಹೇಳಿದರು. ಬೆಂಗಳೂರಿನಲ್ಲಿ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸಚಿವ ಸತೀಶ್ ಜಾರಕಿಹೊಳಿ, ಬೆಳಗಾವಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದಿದ್ದಾರೆ. ಹಾಗೂ ಪಕ್ಷದ ಕಾರ್ಯಕರ್ತರಿಗೆ ಟಿಕೆಟ್ ಸಿಗುವ ಭರವಸೆ ಹೊರ ಹಾಕಿದ್ದಾರೆ. ಇನ್ನು ಇದೇ ವೇಳೆ ರಾಮಮಂದಿರ ಉದ್ಘಾಟನೆ ಆಮಂತ್ರಣದ ಬಗ್ಗೆ ಮಾತನಾಡಿದ್ದಾರೆ. ರಾಮಮಂದಿರ ಉದ್ಘಾಟನೆ ಒನ್ ಮ್ಯಾನ್ ಶೋ ಆಗುತ್ತಿದೆ. ಕಾರ್ಯಕ್ರಮಕ್ಕೆ ಎಲ್ಲಾ ರಾಜಕೀಯ ಪಕ್ಷಗಳಿಗೆ ಆಹ್ವಾನ ಕೊಡಬೇಕು. ಲೋಕಸಭಾ ಚುನಾವಣೆ ಬೇರೆ ಬರುತ್ತಿದೆ. ಎಲ್ಲ ರಾಜಕೀಯ ಪಕ್ಷಗಳಿಗೆ ಆಹ್ವಾನ ಕೊಡಬೇಕು. ಇನ್ನೂ ಸಮಯ ಇದೆ ಆಹ್ವಾನ ಕೊಡಲಿ. ಯಾವ ಸಿಎಂಗೂ ಆಹ್ವಾನ ಕೊಟ್ಟಿಲ್ಲ. ಉತ್ತರ ಪ್ರದೇಶ ಸಿಎಂಗೆ ಮಾತ್ರ ಆಹ್ವಾನ ಇದೆ. ನನಗೆ ಆಹ್ವಾನ ಬಂದ್ರೆ, ಹೋಗಲ್ಲ, ನಮ್ಮ ಊರಿನಲ್ಲಿ ರಾಮಮಂದಿರ ಇದೆ, ಅಲ್ಲೇ ಪೂಜೆ ಮಾಡುತ್ತೇನೆ. ಸದ್ಯ ರಶ್ ಇರುತ್ತೆ, ಮುಂದೆ ಯಾವಾಗಾದರೂ ಹೋಗುತ್ತೇನೆ ಎಂದರು.

# ಭಯ ಹುಟ್ಟಿಸುವವರು ಭಯೋತ್ಪಾದಕರು ಹರಿಪ್ರಸಾದ್ ಹೇಳಿಕೆಗೆ ಪೇಜಾವರ ಶ್ರೀ ಕೆಂಡ

**ವಿಜಯಪುರ:** ಯಾರು ಹೇಳಿಕೆಗಳ ಮೂಲಕ ಭಯೋತ್ಪಾದನೆ ಮಾಡಬಾರದು. ಹೇಳಿಕೆಗಳಿಂದ ಭಯ ಹುಟ್ಟಿಸುವವರು ಭಯೋತ್ಪಾದಕರು ಎಂದು ಕಾಂಗ್ರೆಸ್ ನಾಯಕ ಬಿ.ಕೆ ಹರಿಪ್ರಸಾದ್ ವಿರುದ್ಧ ಪೇಜಾವರ ಶ್ರೀಗಳು ಕಿಡಿಕಾರಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೋಧ್ರಾ ಮಾದರಿಯ ಘಟನೆ ಮರುಕಳಿಸಬಹುದು ಎಂಬ ಬಿ.ಕೆ ಹರಿಪ್ರಸಾದ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ್ದಾರೆ. ಈ ವೇಳೆ, ಯಾಕೆ ನೇರವಾಗಿ ಇಲಾಖೆಗಳಿಗೆ ಹೋಗಿ ಮಾಹಿತಿ ನೀಡುತ್ತಿಲ್ಲ? ಇವರು ಯಾರನ್ನು ರಕ್ಷಣೆ ಮಾಡುತ್ತಿದ್ದಾರೆ? ಕೇಳಿದ್ರೆ ಹೇಳುತ್ತೇವೆ ಎನ್ನುವುದು ವಿಧ್ವಂಸಕ ಕೃತ್ಯ ನಡೆಯಲಿ ಎಂದಂತೆ ಅಲ್ಲವೇ? ಇವರು ವಿಧ್ವಂಸಕ ಕೃತ್ಯ ನಡೆಸುವವರನ್ನ ರಕ್ಷಣೆ ಮಾಡ್ತಿದ್ದಾರಾ ಎಂದು ಪ್ರಶ್ನೆಗಳ ಮಳೆ ಸುರಿಸಿದ್ದಾರೆ.



ಜವಾಬ್ದಾರಿ ಸ್ಥಾನದಲ್ಲಿ ಇರುವವರು ಈ ರೀತಿ ಮಾತನಾಡಬಾರದು. ಈಗ ಭಯ ಹುಟ್ಟಿದೆ, ಈಗ ಭಯೋತ್ಪಾದಕರು ಯಾರು? ಯಾರು ಹೇಳ್ತಿದ್ದಾರೋ ಅವರು ಸ್ವತಃ ಭಯೋತ್ಪಾದಕರು ಎಂದು ಆಕ್ರೋಶ ಹೊರಹಾಕಿದ್ದಾರೆ.

ರಾಮ ಭಕ್ತರನ್ನ ಹೆದರಿಸುವ ನೆಪದಲ್ಲಿ ಇಡೀ ದೇಶವನ್ನು ಹೆದರಿಸುತ್ತಿದ್ದಾರೆ. ಕೃತ್ಯ ನಡೆದರೆ ರಾಮಭಕ್ತರ ಮೇಲಷ್ಟೇ ಅಲ್ಲ, ಎಲ್ಲರ ಮೇಲೂ ಪರಿಣಾಮ ಬೀರಲಿದೆ. ತಮಗೆ ಮಾಹಿತಿ ಇದ್ದರೆ ಅದನ್ನು ಬಹಿರಂಗಪಡಿಸಬೇಕು. ಸಂಬಂಧಪಟ್ಟವರಿಗೆ ಹೋಗಿ ಮಾಹಿತಿ ಕೊಡಬೇಕು. ಅದನ್ನು ಬಿಟ್ಟು ಹೀಗೆ ಆಗಲಿದೆ ಎಂದು ಭಯ ಹುಟ್ಟಿಸುವುದಲ್ಲ. ಇವರು ಯಾರಿಗೆ ಅನುಕೂಲ ಮಾಡಿಕೊಡುತ್ತಿದ್ದಾರೆ? ರಾಮಭಕ್ತರಿಗೋ, ದುಷ್ಕರ್ಮಿಗಳಿಗೋ ಎಂದು ಪ್ರಶ್ನಿಸಿದ್ದಾರೆ. ಇನ್ನೂ ಹುಬ್ಬಳ್ಳಿ ಕರಸೇವಕನ ಬಂಧನ ಪ್ರಕರಣದ ವಿಚಾರವಾಗಿ, ತಪ್ಪು ಮಾಡಿದ್ರೆ ತಪ್ಪಿತಸ್ಥರಿದ್ದರೆ ಶಿಕ್ಷೆ ಕೊಡುವುದು ಸರಿ. ಇಂತಹ ಸಮಯ ಸಂದರ್ಭದಲ್ಲಿ ಈ ಘಟನೆ ನಡೆಯುತ್ತಿರುವಂತಹದು ಸರಿಯಲ್ಲ. ಇದು ತಪ್ಪು ಸಂದೇಶ ಕೊಡುತ್ತಿದೆ. ಹಾಗಾಗಿ ಈ ಬಗ್ಗೆ ಸರ್ಕಾರ ಜಾಗೃತವಾಗಿರಬೇಕು ಎಂದು ಸಲಹೆ ನೀಡಿದ್ದಾರೆ.

# ಕಾಂಗ್ರೆಸ್ ನಾಯಕ ಹರಿಪ್ರಸಾದ್‌ಗೆ ನೋಟಿಸ್ ಕೊಡೋದಿಲ್ಲ

**ಬೆಂಗಳೂರು:** ರಾಮಮಂದಿರ ಉದ್ಘಾಟನೆ ವೇಳೆ ಬಿಜೆಪಿ ಗೋಧ್ರಾ, ಹತ್ಯಾಕಾಂಡದ ರೀತಿ ಮಾಡಲು ಪ್ಲ್ಯಾನ್ ಮಾಡಿದೆ ಎಂಬ ಕಾಂಗ್ರೆಸ್ ನಾಯಕ ಹರಿಪ್ರಸಾದ್ ವಿವಾದದ ಹೇಳಿಕೆಗೆ ಯಾವುದೇ ನೋಟಿಸ್ ಕೊಡಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದರು.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಹರಿಪ್ರಸಾದ್ ಹೇಳಿಕೆ ಬಗ್ಗೆ ಗೃಹ ಇಲಾಖೆಗೆ ಯಾವುದೇ ಮಾಹಿತಿ ಇಲ್ಲ. ಒಂದು ವೇಳೆ ಅಂತಹ ಮಾಹಿತಿ ಬಂದರೆ, ಅದನ್ನ ಹ್ಯಾಂಡಲ್ ಮಾಡೋಕೆ ನಮ್ಮ ಇಲಾಖೆ ಸಮರ್ಥವಾಗಿ ಇದೆ. ಅಂತಹ ಘಟನೆಗಳು ಆಗೋಕೆ ನಾವು ಬಿಡೊಲ್ಲ. ಸಂದರ್ಭ ಬಂದರೆ ಹರಿಪ್ರಸಾದ್ ಅವರನ್ನ ಕರೆದು ಬೇಕಿದ್ರೆ ಕೇಳೋಣ ಎಂದರು.

ನಮ್ಮ ಇಲಾಖೆಗೆ ಇದನ್ನ ಹೇಗೆ ಹ್ಯಾಂಡಲ್ ಮಾಡಬೇಕು ಅಂತ ಗೊತ್ತಿದೆ. ಹರಿಪ್ರಸಾದ್ ಹಿರಿಯ ನಾಯಕರು. ಅವರು ಹೇಳಬೇಕಿದ್ರೆ, ಅವರ ಬಳಿ ಮಾಹಿತಿ ಇರಬೇಕು. ಹರಿಪ್ರಸಾದ್‌ಗೆ ನೋಟಿಸ್ ಕೊಟ್ಟು ಕರೆಯೋ ಅವಶ್ಯಕತೆ ಇಲ್ಲ. ಹೇಳಿಕೆ ಕೊಟ್ಟವರಿಗೆಲ್ಲಾ ನೋಟಿಸ್ ಕೊಡೋಕೆ ಹೋದ್ರೆ, ಎಷ್ಟು ಜನರಿಗೆ ನೋಟಿಸ್ ಕೊಡಬೇಕಾಗುತ್ತೆ ಎಂದು ತಿಳಿಸಿದರು.

ಸೂಕ್ಷ್ಮ ವಿಚಾರ ಆಗಿರೋದ್ರಿಂದ ನಾವು ಎಲ್ಲಾ ಗ್ರಹಿಸುತ್ತೇವೆ. ನಮ್ಮ ಇಂಟಲಿಜೆನ್ಸ್ ಸೋರ್ಸ್ ಅವರು ನೋಡ್ತಾರೆ. ಒಂದು ವೇಳೆ ಅಂತಹ ಮಾಹಿತಿ ಇದ್ದರೆ ಅದಕ್ಕೆ ಕ್ರಮ ತೆಗೆದುಕೊಳ್ತಾರೆ ಎಂದು ಹೇಳಿದರು.

# ಹಿಂದೂಗಳು ದರ್ಬಲಗೊಂಡರೆ ಮತ್ತೊಂದು ಪಾಕ್ ಸೃಷ್ಟಿ

**ಚಿಕ್ಕಮಗಳೂರು:** ಹಿಂದೂಗಳನ್ನು ದುರ್ಬಲಗೊಳಿಸುವುದು, ಹಿಂದೂಗಳನ್ನು ಒಡೆದಾಳುವ ನೀತಿ ಕಾಂಗ್ರೆಸ್‌ನದ್ದಾಗಿದೆ. ಇದು ಮತ್ತೊಂದು ಪಾಕಿಸ್ತಾನ ಹಾಗೂ ಆಫ್ಘಾನಿಸ್ಥಾನದ ನಿರ್ಮಾಣಕ್ಕೆ ಕಾರಣವಾಗಲಿದೆ ಎಂದು ಮಾಜಿ ಸಚಿವ ಸಿ.ಟಿ ರವಿ ಹೇಳಿದ್ದಾರೆ.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ಈ ವೇಳೆ, ಒಂದು ಕಾಲದಲ್ಲಿ ಪಾಕಿಸ್ತಾನ, ಅಫ್ಘಾನಿಸ್ತಾನ ಹಾಗೂ ಬಾಂಗ್ಲಾದೇಶ ಇವು ಅಖಂಡ ಭಾರತದ ಭಾಗವಾಗಿದ್ದವು. ಗಾಂಧಾರಿಯ ತವರು ಮನೆ ಆಫ್ಘಾನಿಸ್ತಾನವಾಗಿತ್ತು. ಅಲ್ಲಿ ನೂರಕ್ಕೆ ನೂರು ಜನ ಹಿಂದೂಗಳಿದ್ದರು. ಈಗ ಮತ್ತೆ ಭಾರತದಲ್ಲಿ ಹಿಂದೂಗಳ ಸಂಖ್ಯೆ ಕಡಿಮೆಯಾದರೆ ಪಾಕಿಸ್ತಾನ ಆಗಲಿದೆ. ಹಿಂದೂಗಳು ಒಗ್ಗಟ್ಟಾಗಿದ್ದರೆ ಪಾಕಿಸ್ತಾನ ಎನ್ನುವ ವಿಚಾರವೇ ತಲೆ ಎತ್ತುವುದಿಲ್ಲ ಎಂದಿದ್ದಾರೆ.

ಭಾರತದಲ್ಲಿ ಹಿಂದೂಗಳು ಕಡಿಮೆ ಆದಾಗ ಅದು ಮೊಘಲ್‌ಸ್ಥಾನ, ಅಥವಾ ಪಾಕಿಸ್ತಾನ ಆಗುತ್ತದೆ. ಹಿಂದೂಗಳು ಬಹುಸಂಖ್ಯಾತರಾಗಿದ್ದರೆ ಭಾರತ ಹಾಗೂ ಸಂವಿಧಾನ ಉಳಿಯುತ್ತದೆ. ಹಿಂದೂಗಳು ಅಲ್ಪಸಂಖ್ಯಾತರಾದರೆ ಭಾರತ ಹಾಗೂ ಸಂವಿಧಾನ ಉಳಿಯುವುದಿಲ್ಲ. ಹಿಂದೂ ರಾಷ್ಟ್ರವಾದರೆ ಆಫ್ಘಾನಿಸ್ತಾನ ಆಗಲು ಜಾಗವೇ ಇರುವುದಿಲ್ಲ. ಕಾಂಗ್ರೆಸ್ ನದ್ದು ಎಸ್‌ಡಿಪಿಐ ಹಾಗೂ ಪಿಎಫ್‌ಐ ಬೆಂಬಲಿಸುವ ನೀತಿಯಾಗಿದೆ. ನಿಮ್ಮ ಮನಸ್ಸಿನಿಂದ ತಾಲಿಬಾನ್ ಚಿಂತನೆ ತೆಗೆದು ಹಾಕಿ. ಇತಿಹಾಸ ಅರಿಯದವನು ಇತಿಹಾಸ ಸೃಷ್ಟಿಸಲಾರ ಎಂದು ಅವರು ತಿರುಗೇಟು ಕೊಟ್ಟಿದ್ದಾರೆ.

ನಾನು ಪ್ರತಿಭಟನೆ ಮಾಡಿದ್ದಕ್ಕೆ ವಶಕ್ಕೆ ಪಡೆದಿದ್ದರು. ಈಗ ಪ್ರಕರಣ ಇಲ್ಲ ಎಂದು ಬಿಡುಗಡೆ ಮಾಡಿದ್ದಾರೆ. ಶ್ರೀಕಾಂತ್ ಪೂಜಾರಿ ಬಿಡುಗಡೆ ಆಗುವವರೆಗೂ ಹೋರಾಟ ಮುಂದುವರಿಸುತ್ತೇವೆ. ಇಡೀ ರಾಜ್ಯದಾದ್ಯಂತ ಹೋರಾಟ ನಡೆಸುತ್ತೇವೆ ಎಂದು ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ.

ದಾವಣಗೆರೆಯಲ್ಲಿ ಮಂಗಳವಾರ ನಡೆದ ಕಾರ್ಯಕ್ರಮವೊಂದರಲ್ಲಿ ಸಿಎಂ ಸಿದ್ದರಾಮಯ್ಯ ಪುತ್ರ ಯತೀಂದ್ರ ಅವರು, ನಮ್ಮ ದೇಶ ಹಿಂದೂ ರಾಷ್ಟ್ರ ಆಗಬಾರದು. ಹಿಂದೂ ರಾಷ್ಟ್ರವಾದರೆ ಅದಕ್ಕಿಂತ ದೊಡ್ಡ ಅಪಾಯ ಮತ್ತೊಂದಿಲ್ಲ. ಇದನ್ನು ಅಂಬೇಡ್ಕರ್ ಅವರೇ ಹೇಳಿದ್ದಾರೆ. ನಮ್ಮ ದೇಶ ಹಿಂದೂ ರಾಷ್ಟ್ರವಾದರೆ ದೇಶಕ್ಕೆ ತೊಂದರೆ ಎಂದು ಅವರು ಹೇಳಿದ್ದರು.

# ಶ್ರೀಕಾಂತ್ ಪೂಜಾರಿ ರಾಮಭಕ್ತನ ಸೋಗಿನಲ್ಲಿರುವ ವೃತ್ತಿ ಪರ ಕ್ರಿಮಿನಲ್

**ಬೆಂಗಳೂರು:** ಹುಬ್ಬಳ್ಳಿಯಲ್ಲಿ ಕರಸೇವಕ ಶ್ರೀಕಾಂತ್ ಪೂಜಾರಿ ಹಾಗೂ ಇತರರ ಬಂಧನ ಖಂಡಿಸಿ ಬಿಜೆಪಿ ಪ್ರತಿಭಟನೆ ತೀವ್ರಗೊಳಿಸಿದೆ. ಈ ಮಧ್ಯೆ, ಬಿಜೆಪಿ ಪ್ರತಿಭಟನೆಯ ಬೆಂಕಿಗೆ ತುಪ್ಪ ಸುರಿಯುವಂಥ ಹೇಳಿಕೆಯನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನೀಡಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಅವರು, ಶ್ರೀಕಾಂತ್ ಪೂಜಾರಿ ಶ್ರೀರಾಮ ಅಥವಾ ಶ್ರೀಕೃಷ್ಣನಂತೆ ಆದರ್ಶ ಪುರುಷ ಅಲ್ಲ. ರಾಮಭಕ್ತನ ಸೋಗಿನಲ್ಲಿರುವ ವೃತ್ತಿಪರ ಕ್ರಿಮಿನಲ್ ಎಂದು ಟೀಕಿಸಿದ್ದಾರೆ.



'ಹಳೆಯ ಪ್ರಕರಣವೊಂದರಲ್ಲಿ ಹುಬ್ಬಳ್ಳಿ ಪೊಲೀಸರು ಬಂಧಿಸಿರುವ ಶ್ರೀಕಾಂತ್ ಪೂಜಾರಿ ಶ್ರೀರಾಮನಂತೆ ಆದರ್ಶ ಪುರುಷನೂ ಅಲ್ಲ, ಶ್ರೀಕೃಷ್ಣನಂತೆ ಅವತಾರ ಪುರುಷನೂ ಅಲ್ಲ. ಆತ ವೃತ್ತಿಪರ ಕ್ರಿಮಿನಲ್ ಅಷ್ಟೆ. ಶ್ರೀಕಾಂತ್ ಪೂಜಾರಿ ವಿರುದ್ಧ 1992 ರಿಂದ 2014 ರವರೆಗೆ ಹುಬ್ಬಳ್ಳಿಯ ವಿವಿಧ ಠಾಣೆಗಳಲ್ಲಿ ಸುಮಾರು 16 ಕ್ರಿಮಿನಲ್ ಪ್ರಕರಣ ದಾಖಲಾಗಿವೆ. ಇಂತಹ ಕ್ರಿಮಿನಲ್ ಹಿನ್ನೆಲೆಯಿರುವ ವ್ಯಕ್ತಿ ರಾಮಭಕ್ತ ಎಂಬ ಸೋಗು ಹಾಕಿಕೊಂಡರೆ ಕಾನೂನು ಕ್ರಮ ತೆಗೆದುಕೊಳ್ಳಬಾರದೆ' ಎಂದು ಗುಂಡೂರಾವ್ ಪ್ರಶ್ನಿಸಿದ್ದಾರೆ.

'ರಾಜಕೀಯ ಕಾರಣಗಳಿಗಾಗಿ ಕ್ರಿಮಿನಲ್ ಹಿನ್ನೆಲೆ ಹೊಂದಿರುವ ವ್ಯಕ್ತಿಯ ಬೆಂಬಲಕ್ಕೆ ನಿಂತಿರುವ ರಾಜ್ಯ ಬಿಜೆಪಿ ನಾಯಕರಿಗೆ ಮಾನ, ಮರ್ಯಾದೆ ಮತ್ತು ಸಂಸ್ಕಾರವೇ ಇಲ್ಲದಂತಾಗಿದೆ. ದೀರ್ಘಾವಧಿಯಿಂದ ಬಾಕಿ ಉಳಿದಿರುವ ಪ್ರಕರಣಗಳ ವಿಚಾರಣಾ ಪ್ರಮಾಣಪತ್ರವನ್ನು ನ್ಯಾಯಾಲಯ ಕೇಳಿದೆ. ಅದರಂತೆ ಪೊಲೀಸರು ಇತ್ಯರ್ಥವಾಗದ ಹಳೆಯ ಪ್ರಕರಣ ಸಂಬಂಧ ಶ್ರೀಕಾಂತ್ ಪೂಜಾರಿ ಹೆಸರಿದ್ದುದರಿಂದ ಬಂಧಿಸಿದ್ದಾರೆ. ನ್ಯಾಯಾಲಯದ ಸೂಚನೆಯ ಅನುಸಾರ ಪೊಲೀಸರು ಕ್ರಮ ತೆಗೆದುಕೊಂಡಿದ್ದಾರೆ. ಈ ವಿಚಾರ ತಿಳಿದಿದ್ದರೂ ರಾಜ್ಯ ಬಿಜೆಪಿ ನಾಯಕರು ಕ್ರಿಮಿನಲ್ ಪರ ಪ್ರತಿಭಟನೆ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ' ಎಂದು ಗುಂಡೂರಾವ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಮಧ್ಯೆ, ಕರಸೇವಕರ ಬಂಧನ ಖಂಡಿಸಿ ಎರಡನೇ ದಿನವೂ ಬಿಜೆಪಿ ಪ್ರತಿಭಟನೆ ಮುಂದುವರಿದಿದೆ. ಸಾಮಾಜಿಕ ಜಾಲತಾಣಗಳಲ್ಲಿಯೂ ಬಿಜೆಪಿ ನಾಯಕರು ಪ್ರೊಫೈಲ್ ಪಿಕ್ಚರ್ ಬದಲಾಯಿಸುವ ಮೂಲಕ ಪ್ರತಿಭಟನೆ ವ್ಯಕ್ತಪಡಿಸುತ್ತಿದ್ದಾರೆ.

## ಕಾಂಗ್ರೆಸ್ ಪ್ರಶ್ನೆ

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಅವರು ಈ ಪೋಸ್ಟರ್ ಹಿಡಿದು ಕುಳಿತರೆ ಸೂಕ್ತ. ಬಿಜೆಪಿಗರೆಲ್ಲರೂ ನನ್ನನ್ನೂ ಬಂಧಿಸಿ ಎಂದು ಒತ್ತಾಯಿಸುತ್ತಿರುವುದು ತಾವು ಮಾಡಿದ ಅಕ್ರಮಗಳ, ಹಗರಣಗಳ ಪ್ರಾಯಶ್ಚಿತ್ತಕ್ಕಾಗಿಯೇ ಎಂದು ಕಾಂಗ್ರೆಸ್ ಪ್ರಶ್ನಿಸಿದೆ. ಅಲ್ಲದೆ, ಕಾಂಗ್ರೆಸ್ ಹಂಚಿಕೊಂಡ ವಿಜಯೇಂದ್ರ ಅವರ ಎಡಿಟೆಡ್ ಪೋಸ್ಟರ್ ನಲ್ಲಿ, ನಾನು ಖಖಉಖ ಮೂಲಕ ಲಂಚ ಪಡೆದಿದ್ದೇನೆ, 40,000 ಕೋಟಿಯ ಅಕ್ರಮದಲ್ಲಿ ಪಾಲುದಾರ, ನನ್ನನ್ನು ಬಂಧಿಸಿ ಎಂದು ಬರೆಯಲಾಗಿದೆ.

ರಾಜ್ಯ ಬಿಜೆಪಿ ನಾಯಕರು ನಿಜವಾಗಿಯೂ ಹಿಡಿದು ಕೂರಬೇಕಾದ ಪೋಸ್ಟರ್ ಹೀಗಿರಬೇಕು. ಸಿಟಿ ರವಿ ಅವರೇ ನಿಮ್ಮನ್ನು ಬಂಧಿಸಬೇಕಾದ ಕಾರಣಗಳು ಬೇರೆ ಇವೆಯಲ್ಲವೇ ಎಂದು ಟ್ವೀಟ್ ಮಾಡಿದೆ. ಅಲ್ಲದೆ, ಕಾಂಗ್ರೆಸ್ ಹಂಚಿಕೊಂಡ ಸಿಟಿ ರವಿ ಅವರ ಎಡಿಟೆಡ್ ಪೋಸ್ಟರ್ ನಲ್ಲಿ, ನಾನು ಕಾರು ಚಲಾಯಿಸಿ ಇಬ್ಬರ ಹತ್ಯೆ ಮಾಡಿದ್ದೇನೆ, ನನ್ನನ್ನೂ ಬಂಧಿಸಿ ಎಂದು ಎಡಿಟೆಡ್ ಪೋಸ್ಟರ್ ಹಿಡಿದಿರುವ ಫೋಟೋವನ್ನು ಹಂಚಿಕೊಂಡಿದೆ.

ನನ್ನನ್ನೂ ಬಂಧಿಸಿ ಎನ್ನುತ್ತಿರುವ ಸುನಿಲ್ ಕುಮಾರ್ ಅವರೇ, ಪರಶುರಾಮ ಮೂರ್ತಿಗೆ ಕಂಚಿನ ಬದಲು ಫೈಬರ್ ಹಾಕಿದ್ದಕ್ಕೆ ನಿಮ್ಮನ್ನು ಬಂಧಿಸಬೇಕೆ ಅಥವಾ ಸರ್ಕಾರದ ಸಿಮೆಂಟ್ ಕಳ್ಳತನದ ಆರೋಪಕ್ಕಾಗಿ ಬಂಧಿಸಬೇಕೆ ರಾಮನ ಹೆಸರಲ್ಲಿ ರಾವಣನ ಕೆಲಸ ಮಾಡುವ ಆರೋಪಿಗಳನ್ನು ಬಂಧಿಸಬೇಕಲ್ಲವೇ ಎಂದು ಕಾಂಗ್ರೆಸ್ ಪ್ರಶ್ನಿಸಿ ಸುನಿಲ್ ಕುಮಾರ್ ವಿರುದ್ಧ ಪೋಸ್ಟರ್ ಹಂಚಿಕೊಂಡಿದೆ.

ಕೆಎಸ್ ಈಶ್ವರಪ್ಪ ಅವರು ಹಿಡಿಯಬೇಕಾದ ಪೋಸ್ಟರ್ ಇದು! ನ್ಯಾಯಾಲಯದಲ್ಲಿ ಬಿಜೆಪಿಗರ ಅಕ್ರಮಗಳು, ಅನಾಚಾರಗಳು, ಹಗರಣಗಳು ಸಾಬೀತಾದರೆ ನನ್ನನ್ನೂ ಬಂಧಿಸಿ ಎಂದು ಹೇಳುವುದೇ ಬೇಡ, ಬಂಧನ ಆಗೇ ಆಗುತ್ತದೆ! ಎಂದು ಕಾಂಗ್ರೆಸ್ ಬರೆದುಕೊಂಡಿದೆ. ಅಲ್ಲದೆ, ಈಶ್ವರಪ್ಪ ವಿರುದ್ಧ ಹಂಚಿಕೊಂಡ ಪೋಸ್ಟರ್ ನಲ್ಲಿ, ನಾನು 40 ಪರ್ಸೆಂಟ್ ಕಮಿಷನ್ ನುಂಗಿ ಸಂತೋಷ್ ಪಾಟೀಲ್ ಸಾವಿಗೆ ಕಾರಣನಾಗಿದ್ದೇನೆ. ನನ್ನನ್ನು ಬಂಧಿಸಿ ಎಂದು ಬರೆಯಲಾಗಿದೆ.

ಇತ್ತೀಚೆಗೆ ಸಂಸತ್ ಅಧಿವೇಶನ ನಡೆಯುತ್ತಿದ್ದಾಗ ಸ್ಮೋಕ್ ಬಾಂಬ್ ದಾಳಿ ನಡೆಸಿದ ಘಟನೆ ನಡೆದಿತ್ತು. ಇದನ್ನೇ ಮುಂದಿಟ್ಟುಕೊಂಡು ಸಂಸದ ಪ್ರತಾಪ್ ಸಿಂಹ ವಿರುದ್ಧ ಟ್ವೀಟ್ ಮಾಡಿದ ಕಾಂಗ್ರೆಸ್, ಪ್ರತಾಪ್ ಸಿಂಹ ಅವರೇ, ನೀವು ಈ ಪೋಸ್ಟರ್ ಹಿಡಿದು ಕೂರುವ ಧೈರ್ಯ ತೋರಿಸಿ, ನಿಮ್ಮವರೇ ಹೇಳುವ ದಮ್ಮು, ತಾಕತ್ತು ಪ್ರದರ್ಶಿಸಿ! ಎಂದು ಸವಾಲು ಹಾಕಿದ್ದಾರೆ. ಸಂಸದರ ವಿರುದ್ಧ ಹಂಚಿಕೊಂಡ ಪೋಸ್ಟರ್ ನಲ್ಲಿ, ನಾನು ಸಂಸತ್ ದಾಳಿಕೋರರಿಗೆ ಪಾಸ್ ಕೊಟ್ಟು ಸಹಕರಿಸಿದ್ದೇನೆ, ನನ್ನನ್ನೂ ಬಂಧಿಸಿ ಎಂದು ಬರೆಯಲಾಗಿದೆ.

## ಮಹಾರಾಷ್ಟ್ರಕ್ಕೆ ಸೇರಬೇಕು

ಗಡಿ ಭಾಗದ ಮರಾಠಿ ಭಾಷಿಕರ ಪರವಾಗಿ ಮಹಾರಾಷ್ಟ್ರ ಸರ್ಕಾರವಿದೆ ಎಂದರು.

ಮಹಾರಾಷ್ಟ್ರ ಸರ್ಕಾರದಿಂದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ

ಆರೋಗ್ಯ ವಿಮೆ ಹೆಸರಿನಲ್ಲಿ ಮಹಾರಾಷ್ಟ್ರ ಸರ್ಕಾರ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರುತ್ತಿದೆ. ಮಹಾರಾಷ್ಟ್ರ ಸರ್ಕಾರ ಸಿಮೋಲಂಘನೆ ಮಾಡಿ ಉದ್ಧಟನ ಪ್ರದರ್ಶನ ಮಾಡಿದೆ. ಗಡಿಯಲ್ಲಿರುವ 856 ಹಳ್ಳಿಗಳಲ್ಲಿ ತನ್ನ ಸರ್ಕಾರದ ''ಮಹಾತ್ಮ ಫುಲೆ ಆರೋಗ್ಯ ವಿಮೆ'' ಜಾರಿ ಮಾಡಲು ಮುಂದಾಗಿದೆ. ಈ ಮೂಲಕ ಸುಪ್ರೀಂ ಕೋರ್ಟ್ ನಲ್ಲಿರುವ ಕೇಸ್ ಗೆ ಅನುಕೂಲ ಆಗುವ ಸಾಕ್ಷಿಗಳನ್ನು ಸಂಗ್ರಹಿಸಲು ತಯಾರಾಗಿದೆ.

ಈ ಸಂಬಂಧ ಸದ ಧೈರ್ಯಶೀಲ್ ಮಾನೆ ನೇತೃತ್ವದಲ್ಲಿ ಬೆಳಗಾವಿಯಲ್ಲಿ ಸಭೆ ನಡೆದಿದೆ. ಕರ್ನಾಟಕ ಮಹಾರಾಷ್ಟ್ರ ಗಡಿ ವಿವಾದದ ಮಹಾರಾಷ್ಟ್ರ ಉನ್ನಾಧಿಕಾರಿ ಸಮಿತಿ ಅಧ್ಯಕ್ಷ ಧೈರ್ಯಶೀಲ್ ಮಾನೆ, ಬೆಳಗಾವಿ ನಗರದ ಮರಾಠ ಮಂದಿರದಲ್ಲಿ ಎಂಇಎಸ್ ಪುಂಡರೊಂದಿಗೆ ಸಭೆ ನಡೆಸಿದರು. ಈ ಸಭೆಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ಮಂಗೇಶ ಚಿವಟೆ ಸಹ ಭಾಗಿಯಾಗಿದ್ದರು.

## 32 ಸಾವಿರ ಅರ್ಜಿ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ಮಾತನಾಡಿ, ಅರ್ಜಿ ಸಲ್ಲಿಕೆಯಲ್ಲಿ ಬೆಂಗಳೂರು ಮತ್ತು ಬೆಳಗಾವಿ ಅಗ್ರಸ್ಥಾನದಲ್ಲಿವೆ. ಈ ಎರಡೂ ಜಿಲ್ಲೆಗಳು ಹೆಚ್ಚು ಕಾಲೇಜುಗಳನ್ನು ಹೊಂದಿವೆ ಅಂದರೆ ಹೆಚ್ಚು ಪದವೀಧರರು ಈ ಜಿಲ್ಲೆಗಳಲ್ಲಿದ್ದಾರೆ.

2022–2023ರ ಶೈಕ್ಷಣಿಕ ವರ್ಷದಲ್ಲಿ ಪದವಿ ಪಡೆದ ಸುಮಾರು 5.3 ಲಕ್ಷ ಯುವಕರನ್ನು ಅರ್ಹ ಫಲಾನುಭವಿಗಳೆಂದು ಗುರುತಿಸಲಾಗಿದೆ. ಆದರೆ, ಉದ್ಯೋಗ ಹೊಂದಿರುವವರು ಮತ್ತು ಉನ್ನತ ಶಿಕ್ಷಣ ಪಡೆಯುತ್ತಿರುವವರು ಅರ್ಹರಲ್ಲ. ಈ ಆರ್ಥಿಕ ವರ್ಷಕ್ಕೆ ಒಟ್ಟು 250 ಕೋಟಿ ರೂ.ಗಳನ್ನು ಮೀಸಲಿಡಲಾಗಿದ್ದು, ಮುಂದಿನ ವರ್ಷ ಈ ಯೋಜನೆಗೆ 1,250 ಕೋಟಿ ರೂ. ಮತ್ತು ನಂತರದ ವರ್ಷ 2,500 ಕೋಟಿ ರೂ. ಮೀಸಲಿಡಲಾಗುತ್ತದೆ. ಸ್ವಾಮಿ ವಿವೇಕಾನಂದ ಜಯಂತಿ ಅಂಗವಾಗಿ ಜನವರಿ 12ರಂದು ಶಿವಮೊಗ್ಗದಲ್ಲಿ ನಡೆಯುವ ವಿಶೇಷ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಭತ್ಯೆ ಜಮಾ ಮಾಡಲಾಗುವುದು.

ಯೋಜನೆಯಡಿ ನಿರುದ್ಯೋಗ ಸಹಾಯಧನವನ್ನು ಪದವಿ ಪಡೆದವರಿಗೆ ಮಾಸಿಕ 3,000 ರೂ. ಮತ್ತು ಡಿಪ್ಲೊಮಾ ಪಡೆದವರಿಗೆ 1,500 ರೂ. ನೀಡಲಾಗುತ್ತದೆ. ವಿದ್ಯಾರ್ಥಿಗಳ ಫಲಿತಾಂಶಗಳ ಘೋಷಣೆಯ 180 ದಿನಗಳ ನಂತರ ನಿರುದ್ಯೋಗಿಯಾಗಿ ಉಳಿಯುವ ಅಭ್ಯರ್ಥಿಗಳು ಭತ್ಯೆಗೆ ಅರ್ಹರಾಗಿರುತ್ತಾರೆ. ಫಲಿತಾಂಶಗಳನ್ನು ಪ್ರಕಟಿಸಿದ ದಿನಾಂಕದಿಂದ ಎರಡು ವರ್ಷಗಳ ಅವಧಿಗೆ ಅಥವಾ ಫಲಾನುಭವಿಯು ಉದ್ಯೋಗಿ/ಸ್ವಯಂ ಉದ್ಯೋಗಿಯಾಗುವವರೆಗೆ, ಭತ್ಯೆ ನೀಡಲಾಗುತ್ತದೆ.

## ಡಿನ್ನರ್ ಪಾಲಿಟಿಕ್ಸ್

ಸಹಕಾರ ಸಚಿವ ರಾಜಣ್ಣ ಕೂಡ ಬಹಿರಂಗವಾಗೇ ಹೋದಲ್ಲಿ ಬಂದಲ್ಲೆಲ್ಲಾ ಮೂರು ಡಿಸಿಎಂ ಹುದ್ದೆಗಳ ಸೃಷ್ಟಿ ಬಗ್ಗೆ ಒತ್ತಾಯಿಸುತ್ತಿದ್ದಾರೆ. ವೀರಶೈವ ಲಿಂಗಾಯತ, ಅಲ್ಪಸಂಖ್ಯಾತ ಮತ್ತು ಪರಿಶಿಷ್ಟ ವರ್ಗದವರಿಗೆ ಡಿಸಿಎಂ ಹುದ್ದೆ ನೀಡಬೇಕು. ಇದರಿಂದ ಮುಂಬರುವ ಲೋಕಾಸಭೆ ಚುನಾವಣೆಯಲ್ಲಿ ಪಕ್ಷಕ್ಕೆ ಅನುಕೂಲವಾಗುತ್ತದೆ ಎಂದು ಹೇಳ್ತಿದ್ದಾರೆ. ಗುರುವಾರ ತುಮಕೂರಿನಲ್ಲಿ ಮತ್ತೆ ಇದೇ ಮಾತನ್ನು ಪುನರುಚ್ಚರಿಸಿದ್ದರು.

ಸಚಿವ ಸತೀಶ್ ಜಾರಕಿಹೊಳಿ ಗುರುವಾರ ಡಿನ್ನರ್ ನೆಪದಲ್ಲಿ ತಮ್ಮ ನಿವಾಸದಲ್ಲಿ ಸಭೆ ನಡೆಸಿದ್ದಾರೆ. ಸಚಿವರಾದ ಡಾ.ಜಿ. ಪರಮೇಶ್ವರ್, ಡಾ.ಹೆಚ್.ಸಿ. ಮಹದೇವಪ್ಪ, ಕೆ.ಎಚ್. ಮುನಿಯಪ್ಪ, ಕೆ.ಎನ್. ರಾಜಣ್ಣ ಸಭೆಯಲ್ಲಿ ಭಾಗವಹಿಸಿದ್ದಾರೆ. ರಾತ್ರಿ 9 ಗಂಟೆಯಿಂದ 11 ಗಂಟೆಯವರೆಗೆ ರಹಸ್ಯವಾಗಿ ಮಾತುಕತೆ ನಡೆದಿದೆ. ಸಭೆಯಲ್ಲಿ ಹಾಜರಿದ್ದವರ ಪೈಕಿ ಸತೀಶ್ ಜಾರಕಿಹೊಳಿ, ಗೃಹ ಸಚಿವ ಪರಮೇಶ್ವರ್ ಕೂಡ ಡಿಸಿಎಂ ಸ್ಥಾನದ ರೇಸ್‌ನಲ್ಲಿ ಪ್ರಮುಖವಾಗಿ ಇದ್ದಾರೆ ಎಂಬುದು ಗಮನಾರ್ಹ. ಇವರೆಲ್ಲ ಸತೀಶ್ ಜಾರಕಿಹೊಳಿ, ಮಹದೇವಪ್ಪ, ಕೆ.ಎನ್.ರಾಜಣ್ಣ ಇವರೆಲ್ಲಾ ಸಿಎಂ ಸಿದ್ದರಾಮಯ್ಯ ಬಣಕ್ಕೆ ಸೇರಿದವರು ಎಂಬುದೂ ವಿಶೇಷ.

ಡಿಸಿಎಂ ಡಿಕೆ ಶಿವಕುಮಾರ್ ಉಪಮುಖ್ಯಮಂತ್ರಿಯಾಗಿದ್ದರೂ ಕೂಡ ಸಿಎಂ ಸಿದ್ದರಾಮಯ್ಯಗಿಂತ ತುಂಬಾ ಚುರುಕಿನಿಂದ ರಾಜಕೀಯ ದಾಳಗಳನ್ನು ಉರುಳಿಸುತ್ತಿದ್ದಾರೆ. ಸಂಪುಟ ವಿಸ್ತರಣೆ ವೇಳೆಯೇ ಎರಡು–ಮೂರು ಡಿಸಿಎಂ ಹುದ್ದೆ ಸೃಷ್ಟಿಸೋದಾದರೆ ತಮಗೆ ಆ ಸ್ಥಾನವೇ ಬೇಡ. ಕೊಡೋಡಿದ್ದರೆ ಒಬ್ಬನಿಗೇ ಕೊಡಿ ಎಂದು ಹೈಕಮಾಂಡ್ ಮುಂದೆ ಪಟ್ಟುಹಾಕಿದ್ದರು. ಅದರಲ್ಲಿ ಯಶಸ್ವಿಯೂ ಆಗಿದ್ದರು. ಇನ್ನು ಡಿ.ಕೆ. ಶಿವಕುಮಾರ್ ಬೆಂಬಲಿಗ ಶಾಸಕರಂತೂ ಎರಡೂವರೆ ವರ್ಷದ ಬಳಿಕ ಡಿ.ಕೆ. ಶಿವಕುಮಾರ್ ಅವರೇ ಸಿಎಂ ಎಂದು ಬಹಿರಂಗವಾಗಿ ಹೇಳುತ್ತಿದ್ದಾರೆ. ಆದರೆ ಸಿದ್ದರಾಮಯ್ಯ ಅಷ್ಟು ಸುಲಭವಾಗಿ ಸಿಎಂ ಸ್ಥಾನ ಬಿಟ್ಟುಕೊಟ್ಟುಕೊಡುವುದು ಅನುಮಾನ. ಪ್ರತಿದಾಳ ಉರುಳಿಸೋದ್ರಲ್ಲಿ ಅವರು ನಿಸ್ಸೀಮರಾಗಿದ್ದಾರೆ. ಹೀಗಿರುವಾಗಲೇ ಸಿದ್ದರಾಮಯ್ಯ ಬಣದ ಸತೀಶ್ ಜಾರಕಿಹೊಳಿ, ರಾಜಣ್ಣ ಮೂರು ಡಿಸಿಎಂ ದಾಳ ಉರುಳಿಸಿದ್ದಾರೆ. ಒಂದು ವೇಳೆ ಮೂರು ಡಿಸಿಎಂ ಹುದ್ದೆ ಸೃಷ್ಟಿಯಾದ್ರೆ, ಡಿಕೆಶಿ ನಾಗಾಲೋಟಕ್ಕೆ ಬ್ರೇಕ್ ಬೀಳಲಿದೆ ಎಂಬುದು ಸಿದ್ದರಾಮಯ್ಯ ಬಣದ ಲೆಕ್ಕಾಚಾರವಾಗಿದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ.

ಸಭೆ ಬಳಿಕ ಮಾತನಾಡಿದ ಹೆಚ್.ಸಿ. ಮಹದೇವಪ್ಪ, ಸಚಿವ ಸತೀಶ್ ಜಾರಕಿಹೊಳಿ ಊಟಕ್ಕೆ ಕರೆದಿದ್ದರು ಬಂದಿದ್ದೆವು ಎಂದಷ್ಟೇ ಹೇಳಿದ್ದಾರೆ. ಕೆ.ಎಚ್. ಮುನಿಯಪ್ಪ ಮಾತನಾಡಿ, ನಾನು ಊಟಕ್ಕೆ ಬಂದಿದ್ದೆ, ಉಳಿದವರು ಯಾವ ಕಾರಣಕ್ಕೆ ಬಂದಿದ್ದರೋ ಗೊತ್ತಿಲ್ಲ ಎಂದಿದ್ದಾರೆ.

ಮೊದಲನೆ ಪುಟದಿಂದ...

ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ 3 ಡಿಸಿಎಂ ಹುದ್ದೆ ಸೃಷ್ಟಿಗೆ ಬೇಡಿಕೆ ಹೆಚ್ಚಾಗುತ್ತಿದೆ. ಈ ಎಲ್ಲ ಬೆಳವಣಿಗೆ ಮಧ್ಯೆ ಮತ್ತೆ ಸತೀಶ್ ಜಾರಕಿಹೊಳಿ ದಲಿತ ನಾಯಕರ ಸಭೆ ನಡೆಸಿರುವುದು ಕುತೂಹಲ ಕೆರಳಿಸಿದೆ.

## ಸರ್ಕಾರ

ಅಧ್ಯಕ್ಷರಾಗಿದ್ದ ಅವಧಿಯಲ್ಲಿ ನಾಗರಾಜಪ್ಪ ಅವರು ಹೊಸ ಮಿಲ್ ಖರೀದಿ, ಡಿಸ್ಟಿಲರಿ ಮಾರಾಟ–ಸೋರಿಕೆ, ಮೈ ರಮ್, ಮೈ ವಿಸ್ಕಿ, ಸಕ್ಕರೆ ಮಾರಾಟದಲ್ಲಿ ಭಾರಿ ಅಕ್ರಮ, ಭ್ರಷ್ಟಾಚಾರ ಎಸಗಿದ್ದಾರೆ. ನಾಗರಾಜಪ್ಪ ಮೈಶುಗರ್ ಅಧ್ಯಕ್ಷರಾಗಿದ್ದ ವೇಳೆ ಕಾರ್ಖಾನೆಗೆ 121 ಕೋಟಿ ರೂ. ನಷ್ಟವಾಗಿತ್ತು ಎಂಬ ಆರೋಪ ಕೇಳಿಬಂದಿತ್ತು.

ಪ್ರಕರಣ ಸಂಬಂಧ ಸದಾನಂದಗೌಡ ನೇತೃತ್ವದ ಸರ್ಕಾರ ಲೋಕಾಯುಕ್ತ ತನಿಖೆಗೆ ವಹಿಸಿತ್ತು. ಲೋಕಾಯುಕ್ತ ತನಿಖೆ ವೇಳೆ ಅಕ್ರಮ, ಭ್ರಷ್ಟಾಚಾರ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನಾಗರಾಜಪ್ಪರಿಂದ ನಷ್ಟದ ಹಣ ವಸೂಲಿ ಮಾಡಿ, ಸಿವಿಲ್ ಪ್ರಕರಣ ದಾಖಲಿಸಲು ಲೋಕಾಯುಕ್ತ ಆದೇಶಿಸಿತ್ತು.

ಲೋಕಾಯುಕ್ತ ನ್ಯಾಯಾಧೀಶರ ಆದೇಶ ಪಾಲಿಸಲು ಈ ಹಿಂದಿನ ಸರ್ಕಾರ ಹಿಂದೇಟು ಹಾಕಿದವು. ಆದರೆ ಇದೀಗ ಹಾಲಿ ಸರ್ಕಾರ ಪ್ರಕರಣ ದಾಖಲಿಸಲು ಮುಂದಾಗಿದೆ. ಹೀಗಾಗಿ ಆಪಾದಿತ ಅಧ್ಯಕ್ಷ ನಾಗರಾಜಪ್ಪ ಮತ್ತು ಕುಟುಂಬದ ಆಸ್ತಿ ವಿವರದ ಪಟ್ಟಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಮೈಶುಗರ್ ವ್ಯವಸ್ಥಾಪಕ ನಿರ್ದೇಶಕ ರವಿಕುಮಾರ್ ಪತ್ರ ಬರೆದಿದ್ದಾರೆ.

## ವಿಹೆಚ್‌ಪಿ ಸ್ಪಷ್ಟನೆ

ರಾಮ ಮಂದಿರಕ್ಕೆ ಹೋಗಿ ಬನ್ನಿ ಎಂದು ಆಮಂತ್ರಣ ಕೊಟ್ಟಿದ್ದೇವೆ ಎಂದು ಅವರು ಹೇಳಿದ್ದಾರೆ.

ಫೆಬ್ರವರಿಯಲ್ಲಿ ರಾಮ ಮಂದಿರಕ್ಕೆ ಭೇಟಿ ಕೊಡುವುದಾಗಿ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯಿಸಿದ್ದಾರೆ. ಆದಷ್ಟು ಬೇಗ ರಾಮನ ದರ್ಶನ ಪಡೆಯುವಂತೆ ಮನವಿ ಮಾಡಿದ್ದೇವೆ ಎಂದು ವಿಹೆಚ್‌ಪಿ ತಿಳಿಸಿದೆ.

'ಅಕ್ಷತಾ ಅಭಿಯಾನ'ದ ಅಂಗವಾಗಿ ಗುರುವಾರ ವಿಶ್ವ ಹಿಂದೂ ಪರಿಷತ್ ಪ್ರಮುಖರು ಹೆಬ್ಬಾಳ್ಕರ್ ಮನೆಗೆ ತೆರಳಿ ಆಹ್ವಾನ ನೀಡಿದ್ದರು. ರಾಮ ಮಂದಿರ ಉದ್ಘಾಟನೆ ಆಹ್ವಾನ ವಿಚಾರ ರಾಜಕೀಯ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಈ ಬೆಳವಣಿಗೆ ನಡೆದಿತ್ತು.

ರಾಮ ಮಂದಿರ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿಲ್ಲ ಎಂಬ ವಿಚಾರವಾಗಿ ಕಾಂಗ್ರೆಸ್ ನಾಯಕರು ಟೀಕಾಪ್ರಹಾರ ನಡೆಸುತ್ತಿರುವ ಬೆನ್ನಲ್ಲೇ ಹೆಬ್ಬಾಳ್ಕರ್ ಗೆ ಆಹ್ವಾನ ನೀಡಿರುವುದು ಕುತೂಹಲಕ್ಕೆ ಕಾರಣವಾಗಿತ್ತು.

## ಉದಯನಿಧಿ ಸ್ಟಾಲಿನ್

ಸಿಎಂ ಎಂಕೆ ಸ್ಟಾಲಿನ್ ಅವರ ಕೋರಿಕೆ ಮೇರೆಗೆ ತಮಿಳುನಾಡಿನ ಪ್ರವಾಹ ಪೀಡಿತ ಜಿಲ್ಲೆಗಳಿಗೆ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳನ್ನು ಕೈಗೊಳ್ಳಲು ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯನ್ನು ತಕ್ಷಣವೇ ಬಿಡುಗಡೆ ಮಾಡುವಂತೆ ತಮಿಳುನಾಡು ಸರ್ಕಾರದ ಪರವಾಗಿ ಉದಯನಿಧಿ ಸ್ಟಾಲಿನ್ ಪ್ರಧಾನಿಗೆ ಮನವಿ ಮಾಡಿದ್ದಾರೆ. ಅಗತ್ಯ ಕ್ರಮಗಳನ್ನು ಕೈಗೊಳ್ಳುವುದಾಗಿ ಪ್ರಧಾನಿ ಭರವಸೆ ನೀಡಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ.

ತಮಿಳುನಾಡಿನ ಸಾರ್ವಜನಿಕ ಪ್ರಾಮುಖ್ಯತೆಯ ಬಗ್ಗೆ, ವಿಶೇಷವಾಗಿ ತಮಿಳುನಾಡಿನ ಕ್ರೀಡೆಗಳ ಬಹುಮುಖಿ ಅಭಿವೃದ್ಧಿಯ ಬಗ್ಗೆ ಪ್ರಧಾನಿಯವರೊಂದಿಗೆ ಚರ್ಚಿಸಲಾಗಿದೆ. ಸಭೆಯಲ್ಲಿ, ಸಿಎಂ ಟ್ರೋಫಿ ಗೇಮ್ಸ್ 2023 ಮತ್ತು ತಮಿಳುನಾಡು ಆಯೋಜಿಸಿದ್ದ ಏಷ್ಯನ್ ಪುರುಷರ ಹಾಕಿ ಚಾಂಪಿಯನ್ ಶಿಪ್‌ನ ಯಶಸ್ವಿ ನಿರ್ವಹಣೆಯನ್ನು ಪ್ರದರ್ಶಿಸುವ ಕಾಫಿ ಟೇಬಲ್ ಪುಸ್ತಕವನ್ನು ಪ್ರಧಾನಿಗೆ ನೀಡಲಾಗಿದೆ.

ಉದಯನಿಧಿ ಸ್ಟಾಲಿನ್ ಪ್ರಧಾನಿ ಮೋದಿ ಅವರನ್ನು ಎರಡನೇ ಬಾರಿಗೆ ಭೇಟಿಯಾಗಿದ್ದು, ಕಳೆದ ವರ್ಷ, ಫೆಬ್ರವರಿ 28 ರಂದು ರಾಜ್ಯಕ್ಕೆ ನೀಟ್ ವಿನಾಯಿತಿಗಾಗಿ ತಮಿಳುನಾಡಿನ ಬೇಡಿಕೆಗಾಗಿ ಭೇಟಿ ಮಾಡಿದ್ದರು. ಜೊತೆಗೆ ಕ್ರೀಡಾ ಸಂಬಂಧಿತ ವಿಷಯಗಳ ಬಗ್ಗೆಯೂ ಚರ್ಚೆ ಮಾಡಿದ್ದರು.

## ಭ್ರಮೆಯ ಚಿತ್ರಣ

ಜನರಲ್ಲಿ ಗೊಂದಲ ಮೂಡಿಸಲು ಮತ ಬ್ಯಾಂಕ್ ಗಟ್ಟಿಗೊಳಿಸಿಕೊಳ್ಳಲು ಈ ರೀತಿ ಚರ್ಚೆ ಹುಟ್ಟುಹಾಕಲಾಗಿದೆ. ಇದನ್ನು ಕೇವಲ ರಾಜಕಾರಣಿಗಳು ಮಾತ್ರ ಮಾತನಾಡುತ್ತಿದ್ದಾರೆ. ರಾಜಕಾರಣಿಗಳ ಈ ವಾದ ಒಪ್ಪಲು ಸಾಧ್ಯವಿಲ್ಲ. ದೇಶದ ಆರ್ಥಿಕ ತಜ್ಞರು, ವ್ಯಾಪಾರಿಗಳು, ಉದ್ಯಮಿಗಳು ಮತ್ತು ಧಾರ್ಮಿಕ ಮುಖಂಡರು ಈ ಚರ್ಚೆ ಮಾಡಬೇಕು. ಇದೊಂದು ಅರ್ಥವೇ ಇಲ್ಲದ ಜನರಲ್ಲಿ ಭ್ರಮೆ, ಭಯ ಸೃಷ್ಟಿಸಲು ಹೇಳಿರುವ ಮಾತುಗಳು ಅಷ್ಟೇ ಎಂದರು.

ಧರ್ಮದ ಹಿಂದೆ ಹೋದರೆ ದೇಶವು ಅಭಿವೃದ್ಧಿ ಕಾಣುವುದಿಲ್ಲ, ನಮ್ಮ ದೇಶವನ್ನು ಹಿಂದೂ ರಾಷ್ಟ್ರ ಮಾಡಲು ಹೊರಟಿದ್ದಾರೆ. ಧರ್ಮದ ಹೆಸರಿನಲ್ಲಿ ಹೋದರೆ ಭಾರತ ದೇಶ ಪಾಕಿಸ್ತಾನ, ಅಫಘಾನಿಸ್ತಾನ ದೇಶಗಳ ರೀತಿ ದಿವಾಳಿ ಆಗುತ್ತದೆ ಎಂದು ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ ಹೇಳಿದ್ದರು.

ದಾವಣಗೆರೆ ಜಿಲ್ಲೆ ರುದ್ರನಕಟ್ಟೆ ಗ್ರಾಮದಲ್ಲಿ ನಡೆದಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ್ದ ಅವರು, ನಮ್ಮ ದೇಶ ಹಿಂದೂ ರಾಷ್ಟ್ರ ಆಗಬಾರದು, ಹಿಂದೂ ರಾಷ್ಟ್ರವಾದರೆ ಅದಕ್ಕಿಂತ ದೊಡ್ಡ ಅಪಾಯ ಮತ್ತೊಂದಿಲ್ಲ. ಇನ್ನು ಅಂಬೇಡ್ಕರ್ ಹೇಳಿದ್ದಾರೆ. ಅಲ್ಲದೆ ಯಾವುದೇ ಕಾರಣಕ್ಕೂ ನಮ್ಮ ದೇಶ ಹಿಂದೂ ರಾಷ್ಟ್ರವಾದರೆ ದೇಶಕ್ಕೆ ತೊಂದರೆ ಎಂದಿದ್ದರು.

## ಬಾಲಕರು ಬಚಾವ್

ಯುವರಾಜ ಎಂಬ ಬಾಲಕನಿಗೆ ಸ್ಫೋಟಕ ಸಿಕ್ಕಿದ್ದು, ಆತ ಅದನ್ನು ಶ್ರೀನಿವಾಸ್ ಎಂಬ ಹುಡುಗನಿಗೆ ನೀಡಿದ್ದ. ಆ ಸ್ಫೋಟಕ ಉಂಡೆಯನ್ನು ಮನೆಗೆ ತೆಗೆದುಕೊಂಡು ಹೋಗಿದ್ದ ಶ್ರೀನಿವಾಸ್ ತಂದೆಗೆ ನೀಡಿದ್ದ. ಇದು ಯಾವುದೋ ಮಾಟ ಮಂತ್ರದ ಬಾಲ್ ಇರಬೇಕೆಂದು ಭಾವಿಸಿದ ಶ್ರೀನಿವಾಸ್ ತಂದೆ ಅದನ್ನು ದೂರಕ್ಕೆ ಎಸೆದಿದ್ದರು.

ಶ್ರೀನಿವಾಸ್ ತಂದೆ ಎಸೆದಿದ್ದ ಬಾಲ್ ಅನ್ನು ಬೀದಿನಾಯಿಯೊಂದು ಕಚ್ಚಿದ್ದು, ಅಷ್ಟರಲ್ಲಿ ಅದು ಸ್ಫೋಟಗೊಂಡಿದೆ. ಬಾಯಿ ಛಿದ್ರಗೊಂಡು ನಾಯಿ ಸ್ಥಳದಲ್ಲೇ ಪ್ರಾಣ ಬಿಟ್ಟಿದೆ. ಅದೃಷ್ಟವಶಾತ್ ಬಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಸ್ಫೋಟಗೊಂಡಿರುವುದು ಹಂದಿ ಬೇಟೆಯಾಡಲು ಬಳಸುವ ಮದ್ದಿನ ಉಂಡೆಯಾಗಿದೆ. ಅದನ್ನು ಶಾಲೆ ಪಕ್ಕದಲ್ಲಿ ಎಸೆದರು ಯಾರು ಎಂಬ ಪ್ರಶ್ನೆ ಇದೀಗ ಉದ್ಭವಿಸಿದೆ. ಸ್ಥಳಕ್ಕೆ ಚಿಕ್ಕನಾಯಕನಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸದ್ಯ ಪೊಲೀಸರು ಮಕ್ಕಳಿಂದ ಮಾಹಿತಿ ಪಡೆದು ವಿಚಾರಣೆ ಮುಂದುವರೆಸಿದ್ದಾರೆ.

**ದಿಢೀರ್ ಹೊತ್ತಿ ಉರಿದ ಕಾರು:** ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ಹೊಸಪಾಳ್ಯ ಗೇಟ್ ಬಳಿ ರಾಷ್ಟ್ರೀಯ ಹೆದ್ದಾರಿ 206 ರಲ್ಲಿ ಕಾರೊಂದು ಹೊತ್ತಿ ಉರಿದಿದೆ. ಗುಬ್ಬಿಯಿಂದ ತುಮಕೂರು ಕಡೆ ಬರ್ತಿದ್ದ ಹೋಂಡಾ ಐಕಾನ್ ಕಾರಿನಲ್ಲಿ ಚಲಿಸುತ್ತಿರುವಾಗ ದಿಢೀರ್ ಆಗಿ ಬೆಂಕಿ ಕಾಣಿಸಿಕೊಂಡಿದೆ. ಕೂಡಲೇ ಕಾರಿನಿಂದ ಕೆಳಗೆ ಇಳಿದ ನಾಲ್ವರು ಸವಾರರು ಅಪಾಯದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ಅಗ್ನಿ ಶಾಮಕ ದಳದ ಸಿಬ್ಬಂದಿ ಭೇಟಿ ನೀಡಿ ಬೆಂಕಿ ನಂದಿಸಿದ್ದಾರೆ. ಕಾರು ಸಂಪೂರ್ಣ ಸುಟ್ಟು ಭಸ್ಮವಾಗಿದೆ. ಗುಬ್ಬಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

## ಹಲ್ಲೆ!

ಗಿರಿನಗರದ ಮೂಕಾಂಬಿಕನಗರದಲ್ಲಿ ಸಿಂಗಾರ ವೇಲು ಎಂಬುವವರು ತಮ್ಮ ಮನೆಯ ಬಳಿ ಕಬಾಬ್ ತಿನ್ನುತ್ತಿದ್ದರು. ಈ ವೇಳೆ ಆರೋಪಿ ಧರ್ಮ ಬಂದು ತನಗೆ ನೈಂಟಿ ಎಣ್ಣೆ ಕೊಡಿಸು ಅಂತ ಪೀಡಿಸಿದ್ದಾನೆ. ಕೊಡಿಸದಿದ್ದಾಗ ಕುಪಿತಗೊಂಡ ಧರ್ಮ, ಸಿಂಗಾರ ವೇಲು ಅವರಿಗೆ ಕಾಲಲ್ಲಿ ಒದ್ದಿದ್ದಲ್ಲದೇ, ಇಟ್ಟಿಗೆಯಿಂದ ಮುಖಕ್ಕೆ ಹಲ್ಲೆ ನಡೆಸಿ ಸ್ಥಳದಿಂದ ಪರಾರಿಯಾಗಿದ್ದಾನೆ.

ಘಟನೆಯಲ್ಲಿ ಸಿಂಗಾರ ವೇಲು ಅವರ ತುಟಿ ಹರಿದುಹೋಗಿದ್ದು, ಆಸ್ಪತ್ರೆಗೆ ದಾಖಲಿಸಿ ಪ್ಲಾಸ್ಟಿಕ್ ಸರ್ಜರಿ ಮಾಡಿಸಲಾಗಿದೆ. ಸದ್ಯ, ಹಲ್ಲೆಯ ಸಂಪೂರ್ಣ ದೃಶ್ಯಾವಳಿ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ವಿಡಿಯೋ ಟಿವಿ9ಗೆ ಲಭ್ಯವಾಗಿದೆ. ಡಿಸೆಂಬರ್ 29 ರ ರಾತ್ರಿ 8:30 ರ ಸುಮಾರಿಗೆ ನಡೆದ ಘಟನೆ ಇದು ಎಂದು ತಿಳಿದುಬಂದಿದೆ. ಪ್ರಕರಣ ದಾಖಲಿಸಿಕೊಂಡಿರುವ ಗಿರಿನಗರ ಠಾಣಾ ಪೊಲೀಸರು ಆರೋಪಿ ಧರ್ಮನಿಗಾಗಿ ಶೋಧಕಾರ್ಯ ನಡೆಸುತ್ತಿದ್ದಾರೆ.

## ದಾಳಿ

ಹಿಂದೂ ಅಮೇರಿಕನ್ ಫೌಂಡೇಶನ್ ಸಹ ಸಾಮಾಜಿಕ ಮಾಧ್ಯಮದಲ್ಲಿ ಬರಹದ ಚಿತ್ರವನ್ನು ಹಂಚಿಕೊಂಡಿದೆ. ಫೌಂಡೇಶನ್ ಘಟನೆಗೆ ಸಂಬಂಧಿಸಿದಂತೆ ಪೊಲೀಸರೊಂದಿಗೆ ಸಂಪರ್ಕದಲ್ಲಿದೆ ಖಾಲಿಸ್ತಾನ್ ಬೆಂಬಲಿಗರು ಮತ್ತು ಹಿಂದೂ ವಿರೋಧಿ ಬೆದರಿಕೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದೇವಾಲಯಗಳ ಭದ್ರತೆಗಾಗಿ ಕ್ಯಾಮೆರಾಗಳು ಮತ್ತು ಅಲಾರಾಂ ಸಿಸ್ಟಮ್‌ಗಳನ್ನು ಸ್ಥಾಪಿಸಲು ಮನವಿ ಮಾಡಿದ್ದಾರೆ.




ಎರಡು ವಾರಗಳ ಹಿಂದೆ, ಡಿಸೆಂಬರ್ 23 ರಂದು, ಖಲಿಸ್ತಾನ್ ಬೆಂಬಲಿಗರು ಕ್ಯಾಲಿಫೋರ್ನಿಯಾದ ನೆವಾರ್ಕ್ ನಗರದಲ್ಲಿ ಹಿಂದೂ ದೇವಾಲಯವನ್ನು ಧ್ವಂಸಗೊಳಿಸಿದರು. ದೇವಾಲಯದ ಗೋಡೆಗಳ ಮೇಲೆ ಭಾರತ ಮತ್ತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ದ್ವೇಷಪೂರಿತ ಘೋಷಣೆಗಳನ್ನು ಬರೆಯಲಾಗಿತ್ತು.

ಆ ವೇಳೆ ಭಾರತದ ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಉಗ್ರರು ಮತ್ತು ಪ್ರತ್ಯೇಕತಾವಾದಿಗಳಿಗೆ ಜಾಗ ನೀಡಬಾರದು ಎಂದು ಪುನರುಚ್ಚರಿಸಿದ್ದರು. ಇದಕ್ಕೂ ಮೊದಲು ಡಿಸೆಂಬರ್ 27 ರಂದು ಕೆನಡಾದ ಬ್ರಿಟಿಷ್ ಕೊಲಂಬಿಯಾ ಪ್ರಾಂತ್ಯದ ಸರ್ರೆ ನಗರದ ಪ್ರಮುಖ ಹಿಂದೂ ಉದ್ಯಮಿಯೊಬ್ಬರ ಮನೆಯ ಮೇಲೆ ಗುಂಡುಗಳನ್ನು ಹಾರಿಸಲಾಗಿತ್ತು.

ದಾಳಿ ನಡೆದ ಮನೆ ಸರ್ರೆಯ ಲಕ್ಷ್ಮೀ ನಾರಾಯಣ ದೇವಸ್ಥಾನದ ಅಧ್ಯಕ್ಷ ಸತೀಶ್ ಕುಮಾರ್ ಅವರ ಹಿರಿಯ ಪುತ್ರನಿಗೆ ಸೇರಿದ್ದು ಎಂದು ಪೊಲೀಸರು ತಿಳಿಸಿದ್ದಾರೆ. ಗುಂಡಿನ ದಾಳಿಯಲ್ಲಿ ಯಾರಿಗೂ ಗಾಯಗಳಾಗಿಲ್ಲ, ಆದರೆ ಬುಲೆಟ್‌ನಿಂದ ಮನೆಗೆ ಹಾನಿಯಾಗಿತ್ತು.

## ಅಂಕಪಟ್ಟಿ

ಪರೀಕ್ಷಾ ಅಕ್ರಮದ ತವರು ಎಂಬ ಕುಖ್ಯಾತಿಗೆ ಒಳಗಾಗುತ್ತಿರುವ ಕಲಬುರಗಿಯಲ್ಲಿ ಇದೀಗ ಮತ್ತೊಂದು ಅಕ್ರಮ ಬಯಲಿಗೆ ಬಂದಿದೆ. ಈ ಹಿಂದೆ 545 ಪಿಎಸ್ ಐ ನೇಮಕಾತಿ ಪರೀಕ್ಷೆ, ಕೆಇಎ ವಿವಿಧ ಹುದ್ದೆಗಳ ನೇಮಕಾತಿ ಸೇರಿದಂತೆ ವಿವಿಧ ಇಲಾಖೆಯಲ್ಲಿನ ನೇಮಕಾತಿಯಲ್ಲಿ ಅಕಮ್ರ ಎಸಗಲಾಗಿದೆ. ವ್ಯಾಪಕ ಅಕ್ರಮ ನಡೆಯುತ್ತಿರುವುದರಿಂದ ಜಿಲ್ಲೆಯಲ್ಲಿ ನೇಮಕಾತಿ ಪರೀಕ್ಷೆ ನಡೆಸದಿರುವ ನಿರ್ಧಾರಕ್ಕೆ ಬರಲಾಗಿದೆ.

ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ಜನವರಿ 13 ರಂದು ರಾಜ್ಯಾದ್ಯಂತ ನಡೆಯಲಿದೆ. ಆದರೆ, ಕಲಬುರಗಿಯಲ್ಲಿ ನೇಮಕಾತಿ ಪರೀಕ್ಷೆ ನಡೆಸದೆ ನಿಗದಿ ಮಾಡಲಾಗಿರುವ ಪರೀಕ್ಷಾ ಕೇಂದ್ರವನ್ನು ಬೆಂಗಳೂರಿಗೆ ಸ್ಥಳಾಂತರಿಸಲಾಗಿದೆ.

## ಸಾಧ್ಯವಿಲ್ಲ

ಒಂದು ವಿಚಾರದ ಬಗ್ಗೆ ಮಾತನಾಡಿದಾಗ ಮಾತ್ರ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಸಾಧ್ಯ. ಗಡಿಯಲ್ಲಿ ಶಾಂತಿ ನೆಲೆಸುವವರೆಗೆ ಚೀನಾ ಜತೆಗಿನ ಬಾಂಧವ್ಯ ಸಹಜವಾಗಿರಲು ಸಾಧ್ಯವಿಲ್ಲ ಎಂದು ಭಾರತ ಹೇಳಿದೆ. ಮೇ 5, 2020 ರಂದು ಪ್ಯಾಂಗೊಂಗ್ ಸರೋವರ ಪ್ರದೇಶದಲ್ಲಿ ಹಿಂಸಾತ್ಮಕ ಘರ್ಷಣೆಯ ನಂತರ ಪೂರ್ವ ಲಡಾಖ್ ಗಡಿಯಲ್ಲಿ ಬಿಕ್ಕಟ್ಟು ಉಂಟಾಗಿತ್ತು.

ಆರ್ಥಿಕ ಅಭಿವೃದ್ಧಿ ಮತ್ತು ಸಾಮಾಜಿಕ ಆಡಳಿತದಲ್ಲಿ ಭಾರತವು ಅತ್ಯುತ್ತಮ ಫಲಿತಾಂಶಗಳನ್ನು ಸಾಧಿಸಿದೆ. ದೇಶದ ಆರ್ಥಿಕತೆಯು ವೇಗವನ್ನು ಪಡೆದುಕೊಂಡಿದೆ ಮತ್ತು ಭಾರತವು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಲ್ಲಿ ಒಂದಾಗುವ ಹಾದಿಯಲ್ಲಿದೆ ಎಂದು ಅವರು ಹೇಳಿದರು.

# ಮೈಸೂರಿನಲ್ಲಿ ರೇಷ್ಮೆ ಸೀರೆಗಳ ಪ್ರದರ್ಶನ: ಸಿಲ್ಕ್ ಇಂಡಿಯ-2024



**ಮೈಸೂರು :** ಸಂಕ್ರಾಂತಿ ಹಬ್ಬದ ಪ್ರಯುಕ್ತ ನಗರದ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಏರ್ಪಡಿಸಿದ್ದ 6 ದಿನಗಳ ಸಿಲ್ಕ್ ಇಂಡಿಯ-2024 ರೇಷ್ಮೇ ಸೀರೆಗಳ ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಹೆಸರಾಂತ ಫ್ಯಾಷನ್ ಡಿಸೈನರ್ ಜಯಂತಿ ಬಲ್ಲಾಳ್ ಚಾಲನೆ ನೀಡಿದರು.

ಬಳಿಕ ಅವರು ಮಾತನಾಡಿ.

6 ದಿನಗಳ ಕಾಲ ಇಲ್ಲಿ ಪ್ರದರ್ಶನ ಮತ್ತು ಮಾರಾಟ ನಡೆಯಲಿದೆ. ಮೇಳದಲ್ಲಿ ಕಾಶ್ಮೀರದಿಂದ ಕಾಂಚಿಪುರಂ ವರೆಗಿನ ರೇಷ್ಮೆ ಸೀರೆ ಉತ್ಪಾದಕರು, ರೇಷ್ಮೆ ಸೀರೆ ವಿನ್ಯಾಸಗಾರರು ಮತ್ತು ರೇಷ್ಮೆ ಸಹಕಾರ ಸಂಘಗಳ 45 ಕ್ಕೂ ಹೆಚ್ಚಿನ ಮಳಿಗೆಗಳಲ್ಲಿ ನಮ್ಮ ರಾಜ್ಯದ ಸಾಂಪ್ರದಾಯಿಕ ರೇಷ್ಮೆ ಸೀರೆ ಮತ್ತು ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ನಡೆಯಲಿದೆ ಎಂದರು. ಭಾರತವು ರೇಷ್ಮೆ ಉತ್ಪಾದನೆಯಲ್ಲಿ ಪ್ರಪಂಚದಲ್ಲಿಯೇ ಮುಂಚೂಣಿಯಲ್ಲಿದ್ದು, ಇಲ್ಲಿನ ರೇಷ್ಮೆಗೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೇಡಿಕೆ ಇದೆ. ದೇಶದಲ್ಲಿ ವಾಯುಗುಣ ಮತ್ತು ನಿಸರ್ಗಕ್ಕೆ ಅನುಗುಣವಾಗಿ 4 ವಿವಿಧ ಪ್ರಭೇದದ ರೇಷ್ಮೆಗಳಿದ್ದು ಅವುಗಳಲ್ಲಿ ತಸ್ಸರ್, ಎರಿ, ಮುಲ್ಬಾರಿ ಮತ್ತು ಮುಗಾ ರೇಷ್ಮೆಯ ಪ್ರಮುಖವಾಗಿದ್ದು, ಇದರಲ್ಲಿ ತಸ್ಸರ್ ಮತ್ತು ಮುಗಾ ರೇಷ್ಮೆಯು ಒಂದು ನೈಜವಾದ ಹಾಗೂ ಉಷ್ಣವಲಯದಲ್ಲಿ ಬೆಳೆಯುವ ವನ್ಯ ರೇಷ್ಮೆ ಹಾಗೂ ಸಾವಯವ (ಆರ್ಗಾನಿಕ್) ರೇಷ್ಮೆಯಾಗಿದೆ. ತಸ್ಸರ್ ಮತ್ತು ಮುಗಾ ರೇಷ್ಮೆ ಉತ್ಪಾದನೆಯಲ್ಲಿ ಅಸ್ಸಾಂ, ಬಿಹಾರ್ ಮತ್ತು ಛತ್ತಿಘಡ್ ರಾಜ್ಯಗಳು ದೇಶದಲ್ಲಿ ಪ್ರಮುಖವಾಗಿದೆ.

ನೇಕಾರರು ಮತ್ತು ಕುಶಲಕರ್ಮಿಗಳು ಉತ್ಪಾದಿಸುವ ಉತ್ಪನ್ನಗಳಿಗೆ ದೇಶದ ಮುಖ್ಯ ನಗರಗಳಲ್ಲಿ ಮಾರಾಟ ಮೇಳವನ್ನು ಆಯೋಜಿಸುವ ಮೂಲಕ ನೇರವಾಗಿ ಅವರ ಉತ್ಪನ್ನಗಳು ಗ್ರಾಹಕರಿಗೆ ತಲುಪಿಸುವಂತೆ ವ್ಯವಸ್ಥೆ ಮಾಡುವುದು ಮತ್ತು ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇಕಾರರೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಿ ಕಡಿಮೆ ದರದಲ್ಲಿ ಗ್ರಾಹಕರಿಗೆ ಉತ್ತಮ ಗುಣಮಟ್ಟದ ರೇಷ್ಮೇ ವಸ್ತ್ರಗಳನ್ನು ಕೊಡುವುದು ಸಂಸ್ಥೆಯ ಉದ್ದೇಶವಾಗಿದೆ ಎಂದರು.

ಮೇಳದಲ್ಲಿ ತಸ್ಸರ್ ರೇಷ್ಮೆ ಸೀರೆಗಳು, ಕ್ರೇಪ್ ಮತ್ತು ಜಾರ್ಜೆಟ್ ಸಿಲ್ಕ್ ಸೀರೆಗಳು, ಆರ್ನಿ ರೇಷ್ಮೆ ಸೀರೆಗಳು, ಧರ್ಮಾವರಂ ಸೀರೆಗಳು, ಕಾಂಚಿಪುರಂ ಸಿಲ್ಕ್ ಮತ್ತು ಮದುವೆ ಸೀರೆಗಳು, ರಾ ಸಿಲ್ಕ್ ಮತ್ತು ಕೋಸಾ ಸೀರೆಗಳು, ಕಲ್ಕೊತ್ತಾ ಗಣಪತಿ ಸೀರೆಗಳು, ಢಾಕ ಸೀರೆಗಳು, ಡಿಸೈನರ್ ಎಂಬ್ರಾಯಿಡರಿ ಸೀರೆ ಮತ್ತು ಡ್ರೆಸ್, ಬಲ್ಲೂಚಿರಿ ರೇಷ್ಮೆ, ಮಟ್ಕಾ ಸೀರೆಗಳು, ಪ್ರಿಂಟೆಡ್ ಸೀರೆಗಳು, ಪಶ್ಮೀನಾ ಸೀರೆಗಳು, ಡಿಸೈನರ್ ಡ್ರೆಸ್ ಮೇಟಿರಿಯಲ್ಸ್ ಮತ್ತು ಸೀರೆಗಳು, ಬಾಗಲ್ಪುರ್ ರೇಷ್ಮೆ ಸೀರೆ ಮತ್ತು ಡ್ರೆಸ್, ಉಪ್ಪಡಾ ಮತ್ತು ಗೊಡ್ವಾಲ್ ಸೀರೆಗಳು, ಮಹೇಶ್ವರಿ ಮತ್ತು ಕೋಟಾ ಸಿಲ್ಕ್, ಟೆಂಪಲ್ ಬಾರ್ಡರ್‌ಉಳ್ಳ ಮುಲ್ಬಾರಿ ಸಿಲ್ಕ್, ಕಲ್ಕೋತ್ತಾ ರೇಷ್ಮೆ ಸೀರೆಗಳು, ಬನಾರಸ್ ಮತ್ತು ಜಮ್ದಾನಿ ರೇಷ್ಮೆ, ಶಿಫಾನ್ ಸೀರೆಗಳು, ಬುಟ್ಟಿ ಸೀರೆಗಳು, ಚಂದೇರಿ ಸಿಲ್ಕ್ ಮತ್ತು ಕೈ ಅಚ್ಚಿನ ಸೀರೆಗಳು ಪ್ರದರ್ಶನಗೊಳ್ಳಲಿದೆ. ಇದಲ್ಲದೆ ಕುರ್ತಾ, ಸ್ಟೋಲ್ಸ್, ಶಾಲುಗಳು, ಸಲ್ವಾರ್ ಕಮೀಜ್ ಮತ್ತು ಉಡುಪಿನ ಬಟ್ಟೆಗಳು, ಕುಶನ್ ಕವರ್‌ಗಳು ಮತ್ತು ಬೆಡ್ಶೀಟ್‌ಗಳನ್ನು ಈ ವಸ್ತುಪ್ರದರ್ಶನದಲ್ಲಿ ಪ್ರದರ್ಶಿಸಿ ಮಾರಾಟ ಮಾಡುವರು. ಈ ವಸ್ತುಗಳನ್ನು ಉತ್ಪಾದಕರೆ ನೇರವಾಗಿ ಗ್ರಾಹಕರಿಗೆ ತಲುಪಿಸುತ್ತಿರುವುದರಿಂದ ವಸ್ತುಗಳು ನ್ಯಾಯಯುತ ಬೆಲೆಯಲ್ಲಿ ದೊರಕುತ್ತಿವೆ ಎಂದರು.

# ಉತ್ತುವಳ್ಳಿಯಲ್ಲಿ ಸಿಡಿಮದ್ದು ಸಿಡಿದು ಹಸುವಿಗೆ ಗಾಯ

**ಚಾಮರಾಜನಗರ:** ಹಂದಿಗಳನ್ನು ಬೇಟೆಯಾಡಲು ಇಟ್ಟಿದ್ದ ಸಿಡಿಮದ್ದು ಸಿಡಿದು ಹಸುವೊಂದು ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಉತ್ತುವಳ್ಳಿಯಲ್ಲಿ ನಡೆದಿದೆ. ಗ್ರಾಮದ ಮಲ್ಲಣ್ಣ ಎಂಬುವವರಿಗೆ ಸೇರಿದ



ಹಸುವೊಂದು ಗಾಯಗೊಂಡಿದೆ. ಗ್ರಾಮದ ಸಮೀಪದ ಜಾಗವೊಂದರಲ್ಲಿ ಹಸುಗಳು ಮೇಯಲು ಹೋಗಿದ್ದಾಗ ಹಂದಿ ಬೇಟೆಯಾಡಲು ಮಣ್ಣಿನಲ್ಲಿ ಇಟ್ಟಿದ್ದ ಸಿಡಿಮದ್ದು ತಿಂದಿದೆ. ಕೂಡಲೇ ಸಿಡಿದು ಹಸುವಿನ ಮುಖಕ್ಕೆ ಗಂಭೀರ ಗಾಯಗಳಾಗಿದೆ. ಹಲವು ವರ್ಷಗಳಿಂದಲೂ ಈ ಭಾಗದಲ್ಲಿ ಕಾಡು ಹಂದಿಗಳ ಬೇಟೆಗೆ ಸಿಡಿಮದ್ದುಗಳನ್ನು ಇಡಲಾಗುತ್ತಿದೆ. ಹಸುಗಳು ಮೇವು ಮೇಯಲು ಹೋದಾಗ ಈ ರೀತಿಯ ಘಟನೆಗಳು ನಡೆಯುತ್ತಿವೆ. ಕಾಡುಹಂದಿಗಳ ಬೇಟೆಗೆ ಸಿಡಿಮದ್ದುಗಳನ್ನು ಇಡುವವರ ವಿರುದ್ಧ ಕ್ರಮವಹಿಸುವ ನಿಟ್ಟಿನಲ್ಲಿ ಸಂಬಂಧಪಟ್ಟವರು ಮುಂದಾಗಬೇಕು. ಆ ಮೂಲಕ ಜಾನುವಾರುಗಳಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕು ಎಂದು ರೈತರು ಮನವಿ ಮಾಡಿದ್ದಾರೆ.

# ವಿದ್ಯೆಯೊಂದಿಗೆ ಮಾನವೀಯ ಮೌಲ್ಯಗಳೂ ಮುಖ್ಯ

ಮೈಸೂರು: ವಿದ್ಯೆಯೊಂದಿಗೆ ಮಾನವೀಯ ಮೌಲ್ಯಗಳು ಕೂಡ ಮುಖ್ಯ. ಮಾನವೀಯತೆ ಇಲ್ಲದ ವಿದ್ಯೆ ಮೌಢ್ಯಕ್ಕೆ ಸಮ ಎಂದು ಹೆಚ್ಚುವರಿ ಪೊಲೀಸ್ ಅಧೀಕ್ಷ ಡಾ.ಬಿ.ಎನ್.ನಂದಿನಿ ಹೇಳಿದರು.

ನಗರದ ಎಂ.ಎಂ.ಕೆ. ಮತ್ತು ಎಸ್‌ಡಿಎಂ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಕಾಲೇಜು ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಶೈಕ್ಷಣಿಕ ಪ್ರಗತಿಯೊಂದಿಗೆ ಆರ್ಥಿಕ ಬೆಳವಣಿಗೆಯೂ ಮುಖ್ಯವಾಗುತ್ತದೆ. ಆತ್ಮಸಾಕ್ಷಾತ್ಕಾರವೇ ಶಿಕ್ಷಣ. ಒಂದು ಹೆಣ್ಣು ಕಲಿತರೆ ಶಾಲೆಯೇ ತೆರೆದಂತೆ ಎಂಬ ನಾಣ್ನುಡಿ ಕಲಿಕೆಯ ಮಹತ್ವವನ್ನು ತಿಳಿಸುತ್ತದೆ ಎಂದರು. ವಿದ್ಯೆಯ ಹಂಬಲಕ್ಕೆ ಮೊಬೈಲ್, ಟಿವಿ, ಮಾಧ್ಯಮಗಳಿಂದ ದೂರವಿರುವುದು ಅಗತ್ಯ. ಆಧುನೀಕರಣ, ನಗರೀಕರಣದಿಂದ ಆಗುವ ದುಷ್ಪರಿಣಾಮದ ಬಗ್ಗೆ ತಿಳಿಸಿದ ಅವರು, ವಿದ್ಯಾರ್ಥಿಗಳನ್ನು ಜಾಗೃತರಾಗಬೇಕು ಎಂದು ಸಲಹೆ ನೀಡಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಂ.ಮರಿಸ್ವಾಮಿ ಮಾತನಾಡಿ, ಪಿಯುಸಿಯ ಹಂತ ವಿದ್ಯಾರ್ಥಿಗಳ ಅತ್ಯುನ್ನತ ಉತ್ತಮ ಹಂತ. ಕಲಿಕೆಯ ಪ್ರಾಮುಖ್ಯತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು. ವಿದೇಶಗಳಲ್ಲಿನ ಶಿಕ್ಷಣದ ಪದ್ಧತಿ ಬಗ್ಗೆ ತಿಳಿಸುತ್ತಾ, ಸ್ವದೇಶಿ ಹಾಗೂ ವಿದೇಶಿ ಕಲಿಕೆ ವ್ಯತ್ಯಾಸ ತಿಳಿಸಿದರು.

ವಿದೇಶದಲ್ಲಿ ಶಿಕ್ಷಣದ ಮೌಲ್ಯದ ಜೊತೆಗೆ ಮಾನವೀಯ ಮೌಲ್ಯ, ದೇಶಪ್ರೇಮ, ವಿದ್ಯಾರ್ಥಿಗಳ ಕೊಡುಗೆ, ಪಾತ್ರಗಳ ಬಗ್ಗೆ ತಿಳಿಸಿಕೊಡುತ್ತಾರೆ. ನಮ್ಮ ದೇಶದಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರದ ಮೌಲ್ಯವನ್ನು ತಿಳಿಸಿಕೊಡಲಾಗುತ್ತದೆ. ಗುರುಹಿರಿಯರ ಗೌರವವನ್ನು ನಮ್ಮ ದೇಶದಲ್ಲಿ ವಿದ್ಯೆಯೊಂದಿಗೆ ಕಲಿಸಲಾಗುತ್ತದೆ. ಇಂದಿನ ಯುಗ ಮಾಧ್ಯಮದ ಯುಗ. ಮಾಧ್ಯಮಗಳ ಬಳಕೆಯ ದುಷ್ಪರಿಣಾಮ ತಿಳಿಸಿ, ದೇಶಪ್ರೇಮ, ದೇಶಕ್ಕಾಗಿ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರ ಪುಸ್ತಕಗಳನ್ನು ಓದುವ ಬಗ್ಗೆ ತಿಳಿಸಿದರು. ಪ್ರಾಂಶುಪಾಲ ನಯನಕುಮಾರಿ ಕಾಲೇಜಿನ ವಾರ್ಷಿಕ ವರದಿ ಮಂಡಿಸಿದರು. ವಿದ್ಯಾರ್ಥಿ ಕ್ಷೇಮ ಪಾಲನಾ ಅಧಿಕಾರಿ ಹಾಗೂ ವಾಣಿಜ್ಯ ವಿಭಾಗದ ಮುಖ್ಯಸ್ಥೆ ಸಿ.ಜಯಲಕ್ಷ್ಮಿ ಇತರರಿದ್ದರು.



## ಉತ್ಸವ ಮೂರ್ತಿಗಳಿಗೆ ಅಶುದ್ಧ ನೀರು ಎರಚಿದ ಪ್ರಕರಣ

# ನಂಜನಗೂಡು ಬಂದ್

**ನಂಜನಗೂಡು:** ಇಲ್ಲಿನ ಶ್ರೀಕಂಠೇಶ್ವರ ದೇಗುಲದಲ್ಲಿ ಇತ್ತೀಚೆಗೆ ನಡೆದ ಅಂಧಕಾಸುರ ವಧೆ ಧಾರ್ಮಿಕ ಕಾರ್ಯಕ್ಕೆ ಅಡ್ಡಿಪಡಿಸಿ, ಉತ್ಸವ ಮೂರ್ತಿಗಳಿಗೆ ಅಶುದ್ಧ ನೀರು ಎರಚಿದ ಪ್ರಕರಣವನ್ನು ಖಂಡಿಸಿ ಶ್ರೀಕಂಠೇಶ್ವರ ಭಕ್ತ ಮಂಡಳಿ ಗುರುವಾರ ಕರೆ ನೀಡಿದ್ದ ನಂಜನಗೂಡು ಬಂದ್‌ಗೆ ಜನರಿಗೆ ಉತ್ತಮ ಬೆಂಬಲ ವ್ಯಕ್ತವಾಯಿತು.



ವಹಿವಾಟು ನಡೆಸುವಂತೆ ತಾಲ್ಲೂಕು ಆಡಳಿತವು ವ್ಯಾಪಾರಿಗಳಿಗೆ ಧ್ವನಿವರ್ಧಕದ ಮೂಲಕ ಪ್ರಚಾರ ಮನವಿ ಮಾಡಿದ್ದರೂ, ವ್ಯಾಪಾರಿಗಳು ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬಂದ್‌ನಲ್ಲಿ ಪಾಲ್ಗೊಂಡರು.

ಬಿಜೆಪಿ ಮುಖಂಡ ಬಿ.ಹರ್ಷವರ್ಧನ್ ನೇತೃತ್ವದಲ್ಲಿ ಸುಮಾರು 3 ಸಾವಿರಕ್ಕೂ ಹೆಚ್ಚು ಮಂದಿ ಪ್ರತಿಭಟನಾ ಮೆರವಣಿಗೆಯಲ್ಲಿ ಪಾಲ್ಗೊಂಡು, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವಂತೆ ಆಗ್ರಹಿಸಿದರು.

ನಗರದ ಬಜಾರ್ ರಸ್ತೆ, ಅಂಗಡಿ ಬೀದಿ, ರಾಷ್ಟ್ರಪತಿ ರಸ್ತೆ, ಎಂಜಿಎಸ್ ರಸ್ತೆ, ಹುಲ್ಲಹಳ್ಳಿ ರಸ್ತೆ ಸೇರಿದಂತೆ ಎಲ್ಲೆಡೆ ಜನ ಸಂಚಾರವಿರಲಿಲ್ಲ. ತಾಲ್ಲೂಕು ವಕೀಲರ ಸಂಘದ ಕರೆಯಂತೆ ವಕೀಲರು ನ್ಯಾಯಾಲಯದ ಕಾರ್ಯ ಕಲಾಪವನ್ನು ಬಹಿಷ್ಕರಿಸಿ ಬಂದ್‌ಗೆ ಬೆಂಬಲ ಸೂಚಿಸಿದರು. ಔಷಧ ಅಂಗಡಿ ವರ್ತಾರು, ಮಾಲೀಕರು ಮೆರವಣಿಗೆಯಲ್ಲಿ ಪಾಲ್ಗೊಂಡರು.

ದೇವಾಲಯ ಪ್ರದಕ್ಷಿಣೆ: ರಾಕ್ಷಸ ಮಂಟಪ ವೃತ್ತದಲ್ಲಿ ಸಮಾವೇಶಗೊಂಡ ಭಕ್ತರು, ಸ್ಥಳೀಯರು, ವ್ಯಾಪಾರಿಗಳು ಸಂಸ್ಕೃತ ಪಾಠಶಾಲಾ ಬೀದಿ, ಅಂಗಡಿ ಬೀದಿ ಮೂಲಕ ಶ್ರೀಕಂಠೇಶ್ವರಸ್ವಾಮಿ ದೇವಾಲಯದ ಪ್ರದಕ್ಷಿಣೆ ಹಾಕಿದರು. ರಾಷ್ಟ್ರಪತಿ ರಸ್ತೆಯ ಮೂಲಕ ಪ್ರಸನ್ನ ಚಿಂತಾಮಣಿ ಗಣಪತಿ ದೇವಾಲಯದವರೆಗೂ ಬೃಹತ್ ಮೆರವಣಿಗೆ ನಡೆಸಿದರು. ಈ ವೇಳೆ ತಾಲ್ಲೂಕು ಹಾಗೂ ಜಿಲ್ಲಾಡಳಿತ ವೈಫಲ್ಯ ಖಂಡಿಸಿ ಘೋಷಣೆ ಕೂಗಿದರು.

ಚಿಂತಾಮಣಿ ಗಣಪತಿ ದೇವಾಲಯ ವೃತ್ತದಲ್ಲಿ ತಹಶೀಲ್ದಾರ್ ಶಿವಪ್ರಸಾದ್ ಪ್ರತಿಭಟನಕಾರರಿಂದ ಮನವಿ ಪತ್ರ ಸ್ವೀಕರಿಸಿದರು.

ಮುಖಂಡ ಹರ್ಷವರ್ಧನ್ ಮಾತನಾಡಿ, ಅಂಧಕಾಸುರನ ವಧೆ ಕಾರ್ಯಕ್ರಮ ಯಾವುದೋ ಸಂಘಟನೆ, ಸಂಘ ಸಂಸ್ಥೆಯಿಂದ ಮಾಡಿದ್ದಲ್ಲ. ಧಾರ್ಮಿಕ ದತ್ತಿ ಇಲಾಖೆ ಕೈಪಿಡಿ ಆಧಾರದ ಮೇಲೆಯೇ ಪ್ರತಿ ವರ್ಷ ಆಚರಿಸಿಕೊಂಡು ಬರಲಾಗುತ್ತಿದೆ. ಪ್ರಕರಣದ ಬಗ್ಗೆ ಶಾಸಕರು ಮೌನಕ್ಕೆ ಶರಣಾಗಿದ್ದಾರೆ. ಅವರಿಗೆ ಕ್ಷೇತ್ರದ ಆಡಳಿತದ ಮೇಲೆ ಹಿಡಿತವಿಲ್ಲ ಎಂದು ದರ್ಶನ್ ಧ್ರುವನಾರಾಯಣ ವಿರುದ್ಧ ವಾಗ್ದಾಳಿ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಈಚೆಗೆ ದೇವಾಲಯ ಪ್ರವೇಶ ಮಾಡದಿರುವುದು. ಪುತ್ರ ಯತೀಂದ್ರ ಭಾರತ ಹಿಂದೂ ರಾಷ್ಟ್ರವಾದರೆ ಉಳಿಗಾಲವಿಲ್ಲವೆಂಬ ಹೇಳಿಕೆ ನೀಡಿರುವುದು. ಹಿಂದೂ ಧಾರ್ಮಿಕ ಆಚರಣೆಗಳಿಗೆ ಸರ್ಕಾರವೇ ಹಿಂಬಾಗಿಲಿನಿಂದ ಅಡ್ಡಿಪಡಿಸುತ್ತಿದೆ ಎಂಬ ಅನುಮಾನ ಜನರಲ್ಲಿ ಮೂಡಿದೆ? ಎಂದು ಕಳವಳ ವ್ಯಕ್ತಪಡಿಸಿದರು.

ಮುಖಂಡರಾದ ಎನ್.ಆರ್.ಕೃಷ್ಣಪ್ಪಗೌಡ, ಸಿಂಧೂವಳ್ಳಿ ಕೆಂಪಣ್ಣ, ಚಿಕ್ಕರಂಗನಾಯ್ಕ, ಮಹೇಶ್, ಶ್ರೀನಿವಾಸರೆಡ್ಡಿ, ಕಪಿಲೇಶ್, ಎನ್.ಸಿ.ಬಸವಣ್ಣ, ಮಹೇಶ್, ಹೆಮ್ಮರಗಾಲ ಶಿವಣ್ಣ, ಎಸ್.ಚಂದ್ರಶೇಖರ್, ಗಿರೀಶ್, ಎನ್.ಜೆ.ಸುನಿಲ್, ಆನಂದ್ ಬಿ.ನಾಯರ್, ನಿತಿನ್, ರವಿ, ಕಿರಣ್ ಪಾಲ್ಗೊಂಡಿದ್ದರು.

# ವಕೀಲರು ಗೌರವದಿಂದ ವರ್ತನೆ ಮಾಡಬೇಕು - ಎ.ಎಸ್.ಪೊನ್ನಣ್ಣ

**ಬೆಂಗಳೂರು:** ಸಮಾಜದ ರಕ್ಷಣೆ ನಮ್ಮ ಹಕ್ಕು. ವಕೀಲರು ಗೌರವದಿಂದ ವರ್ತನೆ ಮಾಡಬೇಕು, ವಕೀಲ ವೃತ್ತಿಗೆ ಗೌರವ ನೀಡುವುದು ತಮ್ಮೆಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿಯವರ ಕಾನೂನು ಸಲಹೆಗಾರರಾದ ಎ.ಎಸ್.ಪೊನ್ನಣ್ಣ ಅವರು ತಿಳಿಸಿದರು. ವಕೀಲರ ಸಂಘದ ವತಿಯಿಂದ ಬೆಂಗಳೂರಿನ ಮ್ಯಾಜಿಸ್ಟ್ರೇಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಅಭಿನಂದನಾ ಸಮಾರಂಭದಲ್ಲಿ ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ಅವರು, ವಕೀಲರು ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಬೇಕು. ಸಮಾಜದ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಗೂಂಡಾಗಳಂತೆ ವರ್ತನೆ ಮಾಡಬಾರದು. ವಕೀಲರು ವೃತ್ತಿಧರ್ಮವನ್ನು ಪಾಲನೆ ಮಾಡುವುದರ ಮೂಲಕ ಬೇರೆಯವರಿಗೆ ಮಾದರಿಯಾಗಬೇಕು ಎಂದು ತಿಳಿಸಿದರು. ಮಾನ್ಯ ಮುಖ್ಯಮಂತ್ರಿಗಳ, ಉಪಮುಖ್ಯಮಂತ್ರಿಗಳ, ಕಾನೂನು ಸಚಿವರ ಮತ್ತು ಗೃಹ ಸಚಿವರ ಇಚ್ಛಾಶಕ್ತಿಯಿಂದ ವಕೀಲರ ಕಾಯ್ದೆ ಜಾರಿಗೆ ಬಂದಿದೆ. ವಕೀಲರ ಮೇಲಿರುವ ಅಭಿಮಾನದಿಂದ ವಕೀಲರ ಕಾಯ್ದೆಯನ್ನು ಮಾನ್ಯ ಕಾನೂನು ಸಚಿವರು ಉಭಯಸದನಗಳಲ್ಲಿ ಮಂಡಿಸಿದ್ದು, ವಕೀಲರ ಕಾಯ್ದೆ ಜಾರಿಗೆ ಬಂದಿದೆ. 2018ರಲ್ಲಿ ವಕೀಲರ ಕಾಯ್ದೆ ಸಮಿತಿಯನ್ನು ರಚಿಸಲಾಗಿತ್ತು. ಕಾರಣಾಂತರಗಳಿಂದ ಕಾಯ್ದೆ ಜಾರಿಗೆ ಬರಲಿಲ್ಲ. ಸುಮಾರು 15 ಸಾವಿರ ವಕೀಲರು ಹೋರಾಟದಲ್ಲಿ ಭಾಗವಹಿಸಿ ಹೋರಾಟದ ಫಲವಾಗಿ ಈ ಕಾಯ್ದೆ ಇಂದು ಜಾರಿಗೆ ಬಂದಿದೆ ಎಂದರು.

# ಮಹಿಳೆಯರ ಮಾನಸಿಕ ಆರೋಗ್ಯ ಕುರಿತು ವೆಬಿನಾರ್

**ಚಿಕ್ಕಬಳ್ಳಾಪುರ:** ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "Women Mental Health" Online Lecture Series ಅನ್ನು 2024ರ ಜನವರಿ 08 ರಿಂದ 12 ರವರಿಗೆ ಆಯೋಜಿಸಲಾಗುತ್ತಿದ್ದು, ಸಂಪನ್ಮೂಲ ತಜ್ಞರು ವೆಬಿನಾರ್ ಮೂಲಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಪದವಿ ಪೂರ್ವ, ವಿಜ್ಞಾನ ತಂತ್ರಜ್ಞಾನ ಇಂಜಿನಿಯರಿಂಗ್, ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಜನಸಾಮಾನ್ಯರು ಇದರ ಸದುಪಯೋಗವನ್ನು ಪಡೆಯಬಹುದಾಗಿದ್ದು, ಮೇಲ್ಕಂಡ Webinar Link ಮೂಲಕ ಅಥವಾ ಅಕಾಡೆಮಿಯ YouTube Channel (Live Telecast) ನಲ್ಲಿ ವೀಕ್ಷಿಸಬಹುದಾಗಿದೆ. ಈ ತಾಂತ್ರಿಕ ಉಪನ್ಯಾಸದ ವಿವರವುಳ್ಳ ಫ್ಲಯರ್ ಅನ್ನು ಲಗತ್ತಿಸಿಲಾಗಿದ್ದು, ಹೆಚ್ಚಿನ ವಿವರಗಳನ್ನು ದೂ. 080-29721550, ಅಕಾಡೆಮಿಯ ವೆಬ್ ಸೈಟ್ www.kstacademy.in ಹಾಗೂ ಅಕಾಡೆಮಿಯ ಸಾಮಾಜಿಕ ಜಾಲತಾಣಗಳಲ್ಲಿ ಪಡೆಯಬಹುದಾಗಿದೆ ಎಂದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎ.ಎಂ.ರಮೇಶ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾವಿತ್ರಿಬಾಯಿ ಶೋಷಿತರ ಪಾಲಿನ ಅಕ್ಷರ ಸಂಜೀವಿನಿ

**ಪಿರಿಯಾಪಟ್ಟಣ:** ಅಸಮಾನತೆಯಿಂದ ಬಳಲುತ್ತಿದ್ದ ಹೆಣ್ಣು ಮಕ್ಕಳಿಗೆ ಅಕ್ಷರದ ಬೆಳಕು ನೀಡಿದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿ ಬಾಯಿ ಫುಲೆ ಎಂದು ತಾಲ್ಲೂಕು ಸಾವಿತ್ರಿ ಬಾಯಿ ಫುಲೆ ಶಿಕ್ಷಕರ ಸಂಘದ ಅಧ್ಯಕ್ಷೆ ಗಾಯತ್ರಿ ತಿಳಿಸಿದರು.



ಪಟ್ಟಣದ ಸರ್ಕಾರಿ ಕಿರಿಯ ಪ್ರಾಥಮಿಕ ಪೇಟೆ ಶಾಲೆಯಲ್ಲಿ ಸಾವಿತ್ರಿಬಾಯಿ ಫುಲೆ ಅವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಾವಿತ್ರಿ ಬಾಯಿ ಫುಲೆಯವರು 19 ನೇ ಶತಮಾನದ ಆದಿಯಲ್ಲಿ ಸ್ತ್ರೀ ಕುಲಕ್ಕೆ ಶಿಕ್ಷಣದ ಮೂಲಕ ರಹದಾರಿ ತೋರಿ ಹೊಸ ಮನ್ವಂತರಕ್ಕೆ ನಾಂದಿ ಹಾಡಿದ ದೇಶದ ಮೊದಲ ಮಹಿಳಾ ಶಿಕ್ಷಕಿ, ವೈದಿಕ ಶಾಹಿಗಳ ದಬ್ಬಾಳಿಕೆಯ ವಿರುದ್ಧ ಧ್ವನಿ ಎತ್ತಿ ಆ ಮೂಲಕ ಮಹಿಳೆಯರಿಗೆ ಸ್ವಾಭಿಮಾನದ ಬದುಕು ಕಟ್ಟಿಕೊಟ್ಟು ಅಂಧಕಾರದಲ್ಲಿ ಬಳಲುತ್ತಿದ್ದ ಮಹಿಳೆಯರಿಗೆ ಶಿಕ್ಷಣ ಸಂಜೀವಿನಿಯಾದರು. ಇವರು ಮಹಾರಾಷ್ಟ್ರದ ಸತಾರ ಜಿಲ್ಲೆಯ ನಯಂಗಾವ್ ಗ್ರಾಮದಲ್ಲಿ 1831ರ ಜನವರಿ 3 ರಲ್ಲಿ ನವಾಶೆ ಪಾಟೀಲ್ ಹಾಗೂ ಲಕ್ಷ್ಮೀಬಾಯಿಯವರ ಹಿರಿಯ ಮಗಳಾಗಿ ಜನಿಸಿದರು, ಈಕೆ ಬಾಲ್ಯದಲ್ಲಿಯೇ ದೀರ ದಿಟ್ಟ ಹುಡುಗಿಯಾಗಿದ್ದು, ತನ್ನ 9 ನೇ ವಯಸ್ಸಿಗೆ ತನಗಿಂತ 3 ವರ್ಷ ಹಿರಿಯರಾದ ಜ್ಯೋತಿಬಾಪುಲೆ ಯವರೊಂದಿಗೆ ವಿವಾಹವಾಯಿತು. ಅಕ್ಷರ ಕಲಿಯದ ಸಾವಿತ್ರಿ ಬಾಯಿ ಫುಲೆಯವರಿಗೆ ತನ್ನ ಪತಿಯಿಂದಲೆ ಅಕ್ಷರಭ್ಯಾಸ ಪ್ರಾರಂಭವಾಯಿತು. ಆಗಿನ ಕಾಲದ ಸಾಮಾಜಿಕ ಶೋಷಣೆಗಳಾದ ವಿಧವಾ ವಿವಾಹ, ಸತಿಪದ್ದತಿ, ಬಾಲ್ಯವಿವಾಹ, ದೇವದಾಸಿ ಪದ್ಧತಿ ಇವುಗಳ ವಿರುದ್ಧ ಹೋರಾಡಬೇಕಾದರೆ ಮೊದಲಿಗೆ ಹೆಣ್ಣು ಮಕ್ಕಳಿಗೆ ಶಿಕ್ಷಣವಾಗಬೇಕೆಂದು ಅರಿತಿದ್ದರು. ಅದರಲ್ಲೂ ಅಸ್ಪೃಶ್ಯರ ಶೂದ್ರಾತಿ ಶೂದರರ ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಿ ಈ ಅನಿಷ್ಟ ಪದ್ಧತಿಯನ್ನು ಹೋಗಲಾಡಿಸಬೇಕೆಂದು ಜ್ಯೋತಿ ಬಾಪುಲೆಯವರು 1846ರಲ್ಲಿ ಹೆಣ್ಣು ಮಕ್ಕಳ ಶಾಲೆಯನ್ನು ಪ್ರಾರಂಭಿಸಿದರು.

ಬಾಲ್ಯವಿವಾಹವಾಗಿದ್ದರೂ, ಪತಿ ಜ್ಯೋತಿಬಾ ಅವರಿಂದ ಪ್ರೇರಣೆ ಪಡೆದು ಅಕ್ಷರ ಕಲಿತು ಶಿಕ್ಷಕ ತರಬೇತಿ ಮುಗಿಸಿ, ದಲಿತ ಮತ್ತು ಶೋಷಿತ ಸಮುದಾಯದ ಬಾಲಕಿಯರಿಗೆ ಶಾಲೆ ಪ್ರಾರಂಭಿಸಿ, ಶಿಕ್ಷಕಿಯಾದ ಸಾವಿತ್ರಿಬಾಯಿ ಫುಲೆ ಅವರ ಜೀವನ ರೋಚಕವಾದುದು. ಸಮಾಜದ ಬಹಿಷ್ಕಾರ ಹಾಗೂ ಹೆಜ್ಜೆ ಹೆಜ್ಜೆಗೂ ಅವಮಾನ ಅನುಭವಿಸಿದರೂ, ಛಲ ಬಿಡದೇ ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡಿದ ಸಾವಿತ್ರಿಬಾಯಿಯನ್ನು ಭಾರತೀಯ ಸಮಾಜ ಎಂದೂ ಮರೆಯಬಾರದು.

ಸಾವಿತ್ರಿಬಾಯಿ ಫುಲೆ ಆದಿಯಾಗಿ ನಮ್ಮ ದೇಶವನ್ನು ರಾಷ್ಟ್ರಪತಿಯಾಗಿದ್ದ ಪ್ರತಿಭಾ ಪಾಟೀಲ, ಪ್ರಧಾನಿ ಇಂದಿರಾ ಗಾಂಧಿ, ಗಗನಯಾತ್ರಿ ಕಲ್ಪನಾ ಚಾವ್ಲಾ, ದ್ರೌಪದಿ ಮುರ್ಮು ನೆನಪಿಡುವಂತಹ ಮಹಿಳೆಯರು ಎಂದರು. ಸಂಘದ ಗೌರವಾಧ್ಯಕ್ಷೆ ಜಯಂತಿ, ಉಪಾಧ್ಯಕ್ಷರಾದ ಜಯಶ್ರೀ, ಮಹದೇವಮ್ಮ, ಸಹ ಕಾರ್ಯದರ್ಶಿಗಳಾದ ಮಂಜುಳಾ, ಮೇರಿ ಸ್ಟೆರ್ಲಾ , ಲತಾ, ಸಂಘಟನಾ ಕಾರ್ಯದರ್ಶಿಗಳಾದ ಹೇಮಲತಾ, ರಸೀಯಾ ಬಾನು, ಶಿಲ್ಪಾ , ರೂಪ, ನಿರ್ಮಲಾ ಶಿಕ್ಷಕರಾದ ಪ್ರವೀಣ್, ಚಂದ್ರು, ವೀಣಾ, ಸೇರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಪೌರಕಾರ್ಮಿಕರಿಗೆ ಸಂಬಳ ನೀಡುವಂತೆ ಆಗ್ರಹ

**ಚಾಮರಾಜನಗರ:** ನಗರಸಭೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸಂಬಳ ನೀಡುವಂತೆ ಆಗ್ರಹಿಸಿ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಮಹಾಸಂಘದ ಜಿಲ್ಲಾ ಸಮಿತಿ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ನಗರದ ನಗರಸಭೆ ಕಚೇರಿ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು ಪ್ರತಿಭಟನೆ ನಡೆಸಿದರು. ನಗರಸಭೆ ಪೌರಾಯುಕ್ತರು ಹಾಗೂ ಇತರೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಚಾಮರಾಜನಗರ ನಗರಸಭೆಯಲ್ಲಿ ಕಳೆದ 2 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ಕಸದ ವಿಲೇವಾರಿ ವಾಹನ ಚಾಲಕರು, ಲೋಡರ್‌ಗಳು, ಕ್ಲೀನರ್ ಸೇವೆ ಮಾಡುತ್ತಿದ್ದಾರೆ. ಇವರಿಗೆ ಪ್ರತಿ ತಿಂಗಳು ಸಂಬಳವಾದರೆ ಮಾತ್ರ ಅವರ ಜೀವನ ನಡೆಸಲು ಸಾಧ್ಯವಾಗುತ್ತದೆ. ಆದರೆ, ನಗರಸಭೆಯಲ್ಲಿ ಇಲ್ಲಿಯ ತನಕ ತಿಂಗಳಿಗೆ ಸರಿಯಾಗಿ ಸಂಬಳ ನೀಡುತ್ತಿಲ್ಲ ಎಂದು ದೂರಿದರು.ಇದರಿಂದ ಕಾರ್ಮಿಕರಿಗೆ ತುಂಬಾತೊಂದರೆಯಾಗುತ್ತಿದೆ. ಕಳೆದ ನಾಲ್ಕು ತಿಂಗಳಿಂದಲೂ ಸಂಬಳ ಕಾರ್ಮಿಕರ ಖಾತೆಗೆ ಜಮೆ ಮಾಡಬೇಕು. ಅಲ್ಲದೇ ಇಎಸ್‌ಐ ನೀಡದ ಹಿನ್ನೆಲೆಯಲ್ಲಿ ಕಾರ್ಮಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮತ್ತು ಪಿಎಫ್ ಹಣವನ್ನು ಕಲ್ಪಿಸಬೇಕು. ಕಾರ್ಮಿಕರಿಗೆ ಸಮವಸ್ತ್ರ ಕೂಡಲೇ ನಾಲ್ಕು ತಿಂಗಳ ಸಂಬಳ ನೀಡಬೇಕು. ಜೊತೆಗೆ ಪ್ರತಿ ಕೊಡಿಸಬೇಕು. ನಗರಸಭೆಯಿಂದ ಕಾರ್ಮಿಕರಿಗೆ ಗುರುತಿನ ಚೀಟಿ ತಿಂಗಳು ಒಂದರಿಂದ 5ನೇ ತಾರೀಖಿನೊಳಗೆ ಸಂಬಳವನ್ನು ಕೊಡಿಸಬೇಕು. ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮಾಡಿಸಬೇಕುಪಟ್ಟು ಹಿಡಿದರು.

.ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಪ್ರತಿಭಟನಾಕಾರರ ಮನವಿ ಆಲಿಸಿದರು. ಕೂಡಲೇ ಎರಡು ತಿಂಗಳ ಸಂಬಳ ಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈಗ ಎರಡು ತಿಂಗಳ ಸಂಬಳ ಕೊಡಿಸುತ್ತೇನೆ. ಇನ್ನೆರಡು ತಿಂಗಳ ಸಂಬಳವನ್ನು ಕೆಲ ದಿನಗಳಲ್ಲೇ ಕೊಡಿಸಲಾಗುವುದು. ಅಲ್ಲದೇ ಸಮವಸ್ತ ಕೊಡಿಸಲು ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು. ಸಂಘದ ಜಿಲ್ಲಾಧ್ಯಕ್ಷ ಸಿ.ಶಂಕರ ಅಂಕನಶೆಟ್ಟಿಪುರ, ಕುಮಾರ, ಅಜಿತ್, ಸುಜಿತ್, ಪಾರ್ವತಿ, ಜಾನಕಿ, ಪ್ರಭು, ಕಾರ್ತಿಕ್ ಸೇರಿದಂತೆ ಇತರರು ಭಾಗವಹಿಸಿದ್ದರು.



# ಅರ್ಜಿ ಆಹ್ವಾನ

**ರಾಮನಗರ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ದೌರ್ಜನ್ಯ ಪ್ರತಿಬಂಧ ಮತ್ತು ಅಸ್ಪೃಶ್ಯತೆ ನಿವಾರಣೆ ಬಗ್ಗೆ ಹಾಗೂ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಪರಿಶಿಷ್ಟ ಜಾತಿ/ಪಂಗಡದ ಸರ್ಕಾರೇತರ ಸಂಘ/ಸಂಸ್ಥೆಗಳ ಮೂಲಕ ಜಾಗೃತಿ/ಅರಿವು ಮೂಡಿಲು ಬೀದಿ ನಾಟಕಗಳನ್ನು ಗ್ರಾಮ ಮಟ್ಟಗಳಲ್ಲಿ ಪರಿಣಾಮಕಾರಿಯಾಗಿ ಆಯೋಜಿಸುವ ಬಗ್ಗೆ ಸಂಘ/ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ಜ. 16 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಚನ್ನಪಟ್ಟಣ ಈ ಕಚೇರಿಯನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕಿನ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವರ ಕಲಬುರಗಿ ಪ್ರವಾಸ

**ಬೆಂಗಳೂರು:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಜನವರಿ 6 ರಂದು ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಏರ್ ಪೋರ್ಟ್‌ನಲ್ಲಿ ಪೈಲಟ್‌ಗಳತ್ತ ಲೇಸರ್ ಲೈಟ್ ಬಿಡುವ ಕಿಡಿಗೇಡಿಗಳು

**ಮೈಸೂರು:** ಮಂಡಕಳ್ಳಿಯಲ್ಲಿರುವ ವಿಮಾನ ನಿಲ್ದಾಣದಲ್ಲಿ ರಾತ್ರಿ ಸಂದರ್ಭ ವಿಮಾನ ಲ್ಯಾಂಡಿಂಗ್ ಮತ್ತು ಟೇಕ್ ಆಫ್ ಆಗುವ ವೇಳೆ ಕಿಡಿಗೇಡಿಗಳು ಬಿಡುವ ಲೇಸರ್ ಲೈಟ್‌ನಿಂದ ಪೈಲಟ್‌ಗಳಿಗೆ ತೊಂದರೆಯಾಗುತ್ತಿದೆ ಎಂದು ಮೈಸೂರು ವಿಮಾನ ನಿಲ್ದಾಣದ ಅಧಿಕಾರಿಗಳು ಪೊಲೀಸರಿಗೆ ದೂರು ನೀಡಿದ್ದಾರೆ.

» **ದೂರು ದಾಖಲಿಸಿದ ಅಧಿಕಾರಿಗಳು**

ಕಳೆದ ಒಂದು ತಿಂಗಳಿನಿಂದ ಲೇಸರ್ ಲೈಟ್ ನಿಂದ ಸಮಸ್ಯೆ ಉಂಟಾದ ಬಗ್ಗೆ ಮೈಸೂರು ವ್ಯಾಪ್ತಿಯಲ್ಲಿ ವಿಮಾನ ಚಾಲನೆ ಮಾಡುವ ಪೈಲಟ್‌ಗಳು ನಿಲ್ದಾಣದ ನಿರ್ದೇಶಕರ ಗಮನಕ್ಕೆ ತಂದಿದ್ದಾರೆ. ವಿಮಾನ ಲ್ಯಾಂಡಿಂಗ್ ಹಾಗೂ ಟೇಕ್ ಆಫ್ ಮಾಡುವ ವೇಳೆ ಕಿಡಿಗೇಡಿಗಳು ಲೇಸರ್ ಲೈಟ್ ಬಿಡುತ್ತಿದ್ದಾರೆ. ಇದರಿಂದ ಪೈಲಟ್‌ಗಳಿಗೆ ಬಹಳ ಸಮಸ್ಯೆ ಆಗುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಮಾರುಕಟ್ಟೆಗಳಲ್ಲಿ ಸುಲಭವಾಗಿ ಸಿಗುವ, ಹೈ ರೆಸಲ್ಯೂಷನ್ ಇರುವ ನೀಲಿ ಲೇಸರ್ ಲೈಟ್ ಅನ್ನು ವಿಮಾನಗಳ ಕಡೆಗೆ ಬಿಡುತ್ತಾರೆ. ಇದರಿಂದ ಕಣ್ಣು ಬಿಡಲು ಆಗುವುದಿಲ್ಲ, ಅಲ್ಲದೆ ಕೆಲ ಸಮಯ ಏನೂ ಸಹ ಕಾಣುವುದಿಲ್ಲ. ಇದು ಪೈಲಟ್‌ಗಳಿಗೆ ಸಮಸ್ಯೆಯಾಗಿದೆ. ರನ್ ವೇಯ ಎರಡು ಕಡೆಗಳಿಂದಲೂ, ಇಂತಹ ಸಮಸ್ಯೆ ಎದುರಾಗಿದೆ. ಮನೆಗಳ ಮಹಡಿ ಮೇಲಿಂದ ಮೋಜಿಗಾಗಿ ಯಾರಾದರೂ ಈ ರೀತಿ ಉಪಟಳ ನೀಡುತ್ತಿದ್ದಾರೋ ಅಥವಾ ಉದ್ದೇಶ ಪೂರ್ವಕವಾಗಿಯೇ ಈ ಕೃತ್ಯ ಎಸಗುತ್ತಿದ್ದಾರೆಯೇ ಎಂಬುದು ತಿಳಿದಿಲ್ಲ. ಈ ಬಗ್ಗೆ ಮೈಸೂರು ವಿಮಾನ ನಿಲ್ದಾಣದ ಅಧಿಕಾರಿಗಳು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.



# ಆಯುರ್ವೇದ ಅನೇಕ ರೋಗ ಗುಣಪಡಿಸುತ್ತೆ

**ಮೈಸೂರು:** ಆಯುರ್ವೇದವು ಭಾರತದ ವೈದ್ಯ ಪದ್ಧತಿಯಾಗಿದ್ದು, ಇಂದು ವಿಶ್ವಮನ್ನಣೆಯನ್ನು ಪಡೆದುಕೊಂಡಿದೆ ಎಂದು ಶಾಸಕ ಜಿ.ಟಿ.ದೇವೇಗೌಡ ತಿಳಿಸಿದರು.



ಅವರು ಇಂದು ಆಯುಷ್ ಇಲಾಖೆಯು ಚಾಮುಂಡೇಶ್ವರಿ ಕ್ಷೇತ್ರದ ಲಿಂಗಾಂಬುದಿಪಾಳ್ಯ ಗ್ರಾಮದಲ್ಲಿ ಏರ್ಪಡಿಸಿದ್ದ ಆಯುಷ್ ಸೇವಾ ಗ್ರಾಮ ಎಂಬ ವಿಶಿಷ್ಠ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಆರ್ಯುದೇವದಕ್ಕೆ ತನ್ನದೆ ಆದ ವಿಶೇಷ ಶಕ್ತಿ ಇದೆ. ಪುರಾತನ ಕಾಲದಲ್ಲಿ ಆರ್ಯುವೇದ ಬಳಸಿಕೊಂಡು ಚಿಕಿತ್ಸೆ ಪಡೆದು ಸಾಧ್ಯ ಇಲ್ಲ ಎಂಬುದನ್ನು ಸಾಧಿಸಿರುವ ಕೀರ್ತಿ ಆಯುರ್ವೇದಕ್ಕೆ ಇದೆ ಎಂದರು.

ಆರ್ಯುವೇದವು ನಮ್ಮ ದೇಹದ ಪಂಚೇಂದ್ರಿಯಗಳನ್ನು ನಿಯಂತ್ರಿಸುತ್ತದೆ. ಆರ್ಯುವೇದವನ್ನು ನಾವು ಚಿಕಿತ್ಸೆಗಿಂತ ಮುಖ್ಯವಾಗಿ ಬದುಕಿನ ಭಾಗ ಎಂಬುದಾಗಿ ಪರಿಗಣಿಸಬೇಕಾಗಿದೆ. ಮುಂದಿನ ಪೀಳಿಗೆಗೆ ಈ ಪದ್ಧತಿಯನ್ನು ತಲುಪಿಸುವ ಕಾರ್ಯ ಮಾಡಬೇಕು. ಆರ್ಯುವೇದ ಪದ್ಧತಿಯನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅದರ ನಿಯಮಗಳನ್ನು ಬದುಕಿನಲ್ಲಿ ಪಾಲಿಸಬೇಕು. ಇದರಿಂದ ಆತ್ಮಸ್ಥೈರ್ಯ ವೃದ್ಧಿಯಾಗಿ ಗುಣಾತ್ಮಕ ಯೋಚನೆ ಮೂಡುತ್ತದೆ ಎಂದರು.

ಆಯುರ್ವೇದವು ಅನೇಕ ರೋಗಗಳನ್ನು ಗುಣಪಡಿಸುವ ಶಕ್ತಿಯನ್ನು ಹೊಂದಿದೆ , ಆಯುರ್ವೇದದ ಮೂಲಕ ಅನೇಕ ರೋಗಗಳನ್ನು ಗುಣಪಡಿಸುವ ಪದ್ಧತಿ ಯುಗ ಯುಗದಿಂದಲೂ ಇದೆ. ಈ ಪದ್ಧತಿ ಮನಸ್ಸು ಮತ್ತು ದೇಹ ಎರಡನ್ನೂ ಗುಣಪಡಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಆದರೆ ಆಯುರ್ವೇದ ಪದ್ಧತಿ ತಲೆಮಾರುಗಳಿಂದ ಇದ್ದರೂ, ಕೊರೊನಾ ವಕ್ಕರಿಸಿದ ಮೇಲೆ ಸಾಕಷ್ಟು ಜನಪ್ರಿಯವಾಗಿದೆ. ಆದರೆ ಅರಿವು ಮತ್ತು ಜ್ಞಾನದ ಕೊರತೆಯಿಂದ ಆಯುರ್ವೇದದ ಬಗ್ಗೆ ಕೆಲವು ತಪ್ಪುಗ್ರಹಿಕೆಗಳಿವೆ. ಆದ್ದರಿಂದ ಆಯುರ್ವೇದ ಬಗ್ಗೆ ನಾವು ತಿಳಿದುಕೊಳ್ಳಬೇಕು ಈ ನಿಟ್ಟಿನಲ್ಲಿ ಆಯುಷ್ ಇಲಾಖೆ ಕೈಗೊಂಡಿರುವ ಈ ಕಾರ್ಯಕ್ರಮ ಶ್ಲಾಘನೀಯ ಎಂದರು.

ಇಂದಿನ ಹೈಪರ್ ಟೆನ್ಷನ್ ಪ್ರಪಂಚದಲ್ಲಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಬಹಳ ಮುಖ್ಯ ಈ ನಿಟ್ಟಿನಲ್ಲಿ ಪ್ರತಿ ನಿತ್ಯ ಯೋಗ, ಧ್ಯಾನಗಳನ್ನು ಮಾಡಬೇಕು.

ಹಣ -ಆಸ್ತಿ ಸಂಪಾದನೆ, ಉಳಿತಾಯ ಮುಂತಾದ ವಿಚಾರಗಳತ್ತ ಗಮನ ಹರಿಸುವಂತೆಯೇ, ಆರೋಗ್ಯದತ್ತಲೂ ಗಮನ ಹರಿಸುವುದರಿಂದ, ಆರ್ಥಿಕ ಸಮಸ್ಯೆಗಳೂ ಪರಿಹಾರ ಕಾಣುತ್ತವೆ. ಭಾರತದ ಪಾರಂಪರಿಕ ಆಯುರ್ವೇದ ಚಿಕಿತ್ಸೆ ಪಡೆದುಕೊಳ್ಳುವುದರಿಂದ, ಆರೋಗ್ಯ ಸಮಸ್ಯೆಗಳು ದೂರವಾಗುತ್ತವೆ. ಜೊತೆಗೆ, ದೇಹ- ಮನಸ್ಸೂ ಸುಸ್ಥಿತಿಯಲ್ಲಿರುತ್ತದೆ. ಪ್ರಾಕೃತಿಕ ಆರೋಗ್ಯ ವನ್ನು ದಯಪಾಲಿಸುವ ನಿಟ್ಟಿನಲ್ಲಿ ಆಯುಷ್ ಇಲಾಖೆಯು ಅನೇಕ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಪುಷ್ಪಾ , ಗ್ರಾಮದ ಮುಖಂಡರಾದ ದೇವಯ್ಯ, ಯೋಗೇಶ್, ಬಂಗಾರಪ್ಪ ರಾಮಣ್ಣ, ಲಕ್ಷ್ಮಯ್ಯ, ದಾಸಯ್ಯ, ಮಲ್ಲಯ್ಯ, ಯಶೋಧ, ಪುಟ್ಟಯ್ಯ, ರಾಮಸ್ವಾಮಿ, ಕೃಷ್ಣಪ್ಪ, ಸೇರಿದಂತೆ ಹಲವಾರು ಮುಖಂಡರು ಭಾಗವಹಸಿದ್ದರು.

## 7ಕ್ಕೆ ಸೇವಾಲಾಲ್ ಜಯಂತಿ ಪೂರ್ವಭಾವಿ ಸಭೆ

**ಹುಳಿಯಾರು:** ಸದ್ಗುರು ಸೇವಾಲಾಲ್ ಜಯಂತಿ ಆಚರಣೆಯ ಪೂರ್ವಸಿದ್ಧತೆಗಾಗಿ ಶ್ರೀ ಸೇವಾಲಾಲ್ ಮರಿಯಮ್ಮ ದೇವಿ ತಾಂಡಾಭಿವೃದ್ಧಿ ಟ್ರಸ್ಟ್ ವತಿಯಿಂದ ಜನವರಿ 7 ರಂದು ಭಾನುವಾರ ಮಧ್ಯಾಹ್ನ 3 ಗಂಟೆಗೆ ಶಿರಾ-ಹುಳಿಯಾರು ರಸ್ತೆಯಲ್ಲಿರುವ ಶ್ರೀ ಠೋಕ್ರಿಬನ್ನಿ ದೇವಸ್ಥಾನದಲ್ಲಿ ಪೂರ್ವಭಾವಿ ಸಭೆ ನಡೆಸಲು ತೀರ್ಮಾನಿಸಲಾಗಿದೆ.



ಸಭೆಯಲ್ಲಿ ಸೇವಾಲಾಲ್ ಜಯಂತಿ ಆಚರಣೆಗೆ 2024 ರ ಸಾಲಿಗೆ ಸೀಮಿತವಾಗಿ ಸ್ವಾಗತ ಸಮಿತಿ ರಚಿಸಿ ಬ್ಯಾಂಕ್ ಖಾತೆ ತೆರೆಯುವ, ಚುನಾಯಿತ ಪ್ರತಿನಿಧಿಗಳಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ, ಉದ್ಯೋಗ ಮೇಳ, ಸಾಂಸ್ಕೃತಿಕ ಕಾರ್ಯಕ್ರಮಗಳು ಸೇರಿದಂತೆ ಜಯಂತಿ ಆಚರಣೆಯ ರೂಪುರೇಷಗಳನ್ನು ಸಿದ್ಧಪಡಿಸುವುದು ಹಾಗೂ ಹುಳಿಯಾರು ಸೇವಾಲಾಲ್ ಪುತ್ಥಳಿ ಮಾಡಿಸುವ ಬಗ್ಗೆ ಚರ್ಚಿಸಿ ನಿರ್ಧಾರ ಮಾಡಲಾಗುವುದು. ಸದರಿ ಸಭೆಗೆ ಚಿಕ್ಕನಾಯಕನಹಳ್ಳಿ ತಾಲೂಕಿನ ತಾಂಡಗಳ, ನಾಯಕ್, ಕಾರ್ವೋ, ಕಾರ್‌ಬಾರಿಗಳು ಯುವಕರು ತಾಯಂದಿರು ಆಗಮಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವಿಶ್ವ ಕೌಶಲ್ಯ ಸ್ಪರ್ಧೆಗೆ ಅರ್ಜಿ

**ರಾಮನಗರ:** ರಾಮನಗರ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ವಿಶ್ವ ಕೌಶಲ್ಯ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ಈ ಸ್ಪರ್ಧೆಗೆ ಅರ್ಹ ಅಭ್ಯರ್ಥಿಗಳಿಂದ ವಿವಿಧ ಹಂತಗಳಲ್ಲಿ ಆಯ್ಕೆ ಮಾಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಜಿಲ್ಲೆ, ವಿಭಾಗ, ರಾಜ್ಯ ಮಟ್ಟದಲ್ಲಿ ಹಾಗೂ ರಾಷ್ಟ್ರಮಟ್ಟದಲ್ಲಿ ಎಲ್ಲ ಹಂತದಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಕೇಂದ್ರ ಸರ್ಕಾರದ ವತಿಯಿಂದ 2024ರಲ್ಲಿ ಫ್ರಾನ್ಸಿನ ಲಿಯೋನ್‌ದಲ್ಲಿ ನಡೆಯುವ ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು 01.01.1999 ರಂದು ಅಥವಾ ನಂತರ ಜನಿಸಿರುವ ಆಸಕ್ತಿಯುಳ್ಳ ಅಭ್ಯರ್ಥಿಗಳು ಜ. 7 ರೊಳಗೆ ವೆಬ್‌ಸೈಟ್‌ನಲ್ಲಿ ಹೆಸರು ನೊಂದಾಯಿಸಿಕೊಳ್ಳಬೇಕು.ಹೆಚ್ಚಿನ ಮಾಹಿತಿಗೆ ಜಿಲ್ಲಾ ಸಂಯೋಜಕರಾದ ತೇಜೇಶ್ ಬಾಬು ಕೆ.ವಿ ಮೊ.ನಂ. 9738145009 ಅಥವಾ ಸಹಾಯವಾಣಿ 18005999918 (ವಿಸ್ತರಣೆ ಸಂಖ್ಯೆ:4) ಸಂಪರ್ಕಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವನಿಧಿಗೆ ಅರ್ಜಿ ಆಹ್ವಾನ

**ರಾಮನಗರ:** ಸರ್ಕಾರದ ಮಹತ್ತರ ಯೋಜನೆಯಾದ ಯುವನಿಧಿ ಯೋಜನೆಯಡಿ ಈಗಾಗಲೇ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, 2022-2023ನೇ ಸಾಲಿನಲ್ಲಿ ಪದವಿ, ಡಿಪ್ಲೊಮಾ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದಾಗಿದೆ.2023ರಲ್ಲಿ ಪದವಿ/ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಪದವಿ, ಡಿಪ್ಲೊಮಾ ನಂತರ ಕನಿಷ್ಠ 6 ತಿಂಗಳ ಅವಧಿಯವರೆಗೆ ಸರಕಾರಿ/ಖಾಸಗಿ ಉದ್ಯೋಗ ಹೊಂದಿಲ್ಲದವರು, ಉಚಿತವಾಗಿ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು, ರಾಮನಗರ ಜಿಲ್ಲೆ, ಮೊ.ನಂ. 9902736747 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕಿ ಅಪಹರಣ: ನಾಲ್ವರು ವಶಕ್ಕೆ

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ಪಟ್ಟಣದಲ್ಲಿ ಮನೆ ಮನೆಗೆ ತೆರಳಿ ಕೂದಲು ಸಂಗ್ರಹಿಸುತ್ತಿದ್ದ 16 ವರ್ಷದ ಬಾಲಕಿಯನ್ನು ಮಂಗಳವಾರ ಸಂಜೆ ಅಪಹರಿಸಿ ಕಾರಿನಲ್ಲಿ ಕರೆದೊಯ್ಯುತ್ತಿದ್ದ ಕೇರಳದ ನಾಲ್ವರನ್ನು ಕೊಳ್ಳೆಗಾಲ ಪಟ್ಟಣ ಪೊಲೀಸರು ವಶಕ್ಕೆ ಪಡೆದಿದ್ದಾರೆ.ಕೇರಳ ರಾಜ್ಯದ ಮಲ್ಲಪ್ಪುರಂ ಜಿಲ್ಲೆಯ ಯಡಪಾಡ್ ಗ್ರಾಮದ ಇಸ್ಮಾಯಿಲ್, ಅಯೂಬ್, ಆಲಿ, ಉಮರ್ ಪೊಲೀಸ್ ವಶದಲ್ಲಿರುವವರು. ಮೈಸೂರು ಜಿಲ್ಲೆಯ ತಿ.ನರಸೀಪುರ ತಾಲ್ಲೂಕಿನ ಗ್ರಾಮವೊಂದರ ಬಾಲಕಿ ಹಾಗೂ ಕುಟುಂಬದ ಸದಸ್ಯರು ಕೂದಲು ಸಂಗ್ರಹ ಮತ್ತು ಮಾರಾಟಕ್ಕಾಗಿ ಕೊಳ್ಳೇಗಾಲಕ್ಕೆ ಬಂದಿದ್ದರು. ಮಂಗಳವಾರ ಸಂಜೆ ಕೊಳ್ಳೆಡಗಾಲದ ವಾಸವಿ ವಿದ್ಯಾ ಕೇಂದ್ರದ ಮುಂಭಾಗದಲ್ಲಿ ಬಾಲಕಿ ಕೂದಲು ಸಂಗ್ರಹಿಸುತ್ತಿದ್ದಳು. ಈ ವೇಳೆ ಕುಡಿತ ಮತ್ತಿನಲ್ಲಿದ್ದ ನಾಲ್ವರು, ಬಾಲಕಿಗೆ ಚಾಕೊಲೆಟ್ ನೀಡಿ 'ನಿನಗೆ ಊಟ ಕೊಡಿಸುತ್ತೇವೆ' ಎಂದು ಹೇಳಿ ಕಾರಿನಲ್ಲಿ ಕೂರಿಸಿಕೊಂಡು ಕೊಳ್ಳೇಗಾಲ ತಾಲ್ಲೂಕಿನ ಮಧುವನ ಹಳ್ಳಿ ಗ್ರಾಮದಲ್ಲಿ ಹೋಗುತ್ತಿದ್ದರು. 'ಈ ಸಂದರ್ಭದಲ್ಲಿ ಕಾರು ಬೈಕ್ ಗೆ ಡಿಕ್ಕಿ ಹೊಡೆಯಿತು. ಗ್ರಾಮಸ್ಥರು ಕಾರನ್ನು ತಡೆದರು. ನಂತರ ಗ್ರಾಮಸ್ಥರು ಕಾರಿನಲ್ಲಿದ್ದವರನ್ನು ನೋಡಿದಾಗ ನಾಲ್ವರು ನಶೆಯಲ್ಲಿದ್ದರು. ಬಾಲಕಿಯ ಬಾಯಿಯನ್ನು ಮುಚ್ಚಿದ್ದರು. ಗ್ರಾಮಸ್ಥರನ್ನು ಕಂಡ ಬಾಲಕಿ 'ನನ್ನನ್ನು ಅಪಹರಣ ಮಾಡಿದ್ದಾರೆ' ಎಂದು ಕಿರುಚಿಕೊಂಡು ಅಳಲು ಆರಂಭಿಸಿದಳು' ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ನಂತರ ಗ್ರಾಮಸ್ಥರು ನಾಲ್ವರಿಗೆ ಥಳಿಸಿ ಗ್ರಾಮದ ಅಂಬೇಡ್ಕರ್ ಭವನದ ಮುಂದೆ ಕೂರಿಸಿಕೊಂಡು ಪೊಲೀಸರಿಗೆ ಮಾಹಿತಿ ನೀಡಿದರು. ಸ್ಥಳಕ್ಕೆ ಬಂದ ಪೊಲೀಸರು ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ಮಾಡುತ್ತಿದ್ದಾರೆ. ಯಾವ ಉದ್ದೇಶಕ್ಕೆ ಆರೋಪಿಗಳು ಬಾಲಕಿಯನ್ನು ಅಪಹರಿಸಿದ್ದಾರೆ ಎಂಬುದು ತಕ್ಷಣಕ್ಕೆ ಗೊತ್ತಾಗಿಲ್ಲ. ಬಾಲಕಿಯನ್ನು ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗಿದೆ.

# ಉದ್ಯೋಗ ಗಿಟ್ಟಿಸಿಕೊಳ್ಳಲು ಇಂಗ್ಲಿಷ್ ಅನಿವಾರ್ಯ

**ಹುಳಿಯಾರು:** ಗ್ರಾಮೀಣ ವಿದ್ಯಾರ್ಥಿಗಳು ಇಂದಿನ ವೇಗದ ಜಗತ್ತಿನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ, ಉದ್ಯೋಗ ಗಿಟ್ಟಿಸಿಕೊಳ್ಳುವಲ್ಲಿ ಇಂಗ್ಲಿಷ್‌ನ ಅಗತ್ಯ ಇದ್ದೇ ಇದೆ. ಹೀಗಾಗಿ ವಿದ್ಯಾರ್ಥಿಗಳು ದಿನಕ್ಕೆ ಅರ್ಧ ಗಂಟೆಯಾದರೂ ತಮ್ಮ ಸಹಪಾಠಿಗಳೊಂದಿಗೆ, ಹಿತೈಷಿಗಳೊಂದಿಗೆ ಇಂಗ್ಲಿಷ್‌ನಲ್ಲಿ ಮಾತಾಡಬೇಕು. ಅಲ್ಲದೆ ಪತ್ರಿಕೆಗಳನ್ನು ಓದಿ ಸಾಮಾನ್ಯ ಜ್ಞಾನ ಹೆಚ್ಚಿಸಿಕೊಳ್ಳಬೇಕು. ಹೆಚ್ಚು ಹೆಚ್ಚು ಶೈಕ್ಷಣಿಕ ಅರ್ಹತೆಗಳನ್ನು, ಪದವಿಗಳನ್ನು ಪಡೆಯುವತ್ತ ಗಂಭೀರವಾಗಿ ಕಾರ್ಯ ಪ್ರವೃತ್ತರಾಗಬೇಕು ಎಂದು ತಿಪಟೂರಿನ ಪಲ್ಲಾಗಟ್ಟಿ ಅಡವಪ್ಪ ಕಲ್ಪತರು ಕಾಲೇಜಿನ ಆಂಗ್ಲ ವಿಭಾಗ ಮುಖ್ಯಸ್ಥರಾದ ಡಾ. ಉದಯರವಿ ಶಾಸ್ತ್ರಿ ತಿಳಿಸಿದರು. ಹುಳಿಯಾರಿನ ಬಿಎಂಎಸ್ ಸರಕಾರಿ ಪ್ರಥಮ ಕಾಲೇಜಿನ ಇಂಗ್ಲಿಷ್ ವಿಭಾಗವು ಐಚ್ಛಿಕ ಇಂಗ್ಲಿಷ್ ವಿದ್ಯಾರ್ಥಿಗಳಿಗೆ ಅಮೆರಿಕನ್ ಸಾಹಿತ್ಯ,ಜಾಗತಿಕ ಸಾಹಿತ್ಯ ಹಾಗೂ ಆತ್ಮಕಥನಗಳು ಬಗ್ಗೆ ಸೋಮವಾರ ಹಮ್ಮಿಕೊಂಡಿದ್ದ ಪಠ್ಯಾಧಾರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ ನಾವು



ಮಾಡುವ ಪ್ರತಿಯೊಂದು ಹೆಚ್ಚಿನ ಪ್ರಯತ್ನವೂ ನಮ್ಮ ಒಳಿತಿಗೆ ಕಾರಣವಾಗುತ್ತದೆ. ಆತ್ಮ ಗೌರವದ ಬದುಕಿಗೆ ಉದ್ಯೋಗ, ಧನ, ಸ್ವಾವಲಂಬನೆ ಅತ್ಯಗತ್ಯ. ಹೀಗಾಗಿ ನಿಗದಿತ ಸಮಯದಲ್ಲಿ ತಮ್ಮ ಶೈಕ್ಷಣಿಕ ಗುರಿಗಳನ್ನು, ಔದ್ಯೋಗಿಕ ಗುರಿಗಳನ್ನು ಸಾಧಿಸಲು ಪರಿಶ್ರಮ ಪಡಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಪಠ್ಯದ ಸಾರವನ್ನು ಗ್ರಹಿಸಿ ತಮ್ಮದೇ ವಿಧದಲ್ಲಿ ಆ ಪಠ್ಯದ ಆಶಯವನ್ನು ಸಾಹಿತ್ಯಿಕ, ಭೌಗೋಳಿಕ, ಸಾಮಾಜಿಕ, ಸಾಂಸ್ಕೃತಿಕ ಹೀಗೆ ಬಹು ಆಯಾಮಗಳಲ್ಲಿ ವಿಶ್ಲೇಷಿಸಲು, ಸ್ವಂತಿಕೆಯಿಂದ ಅಭಿಪ್ರಾಯ ಮಂಡಿಸಲು ಶಕ್ತರಾಗಬೇಕು. ಕಾವ್ಯ, ನಾಟಕ, ಕಾದಂಬರಿ ಹೀಗೆ ಸಾಹಿತ್ಯ ಕೃತಿಗಳು ಆಳವಾದ ದಾರ್ಶನಿಕತೆ, ತಾತ್ವಿಕತೆ ಹಾಗೂ ಸಾಂಕೇತಿಕತೆಗಳನ್ನು ಹೊಂದಿದ್ದು ನಮ್ಮ ಬದುಕನ್ನು ಸುಸಂಸ್ಕೃತ ಗೊಳಿಸುತ್ತವೆ ಹಾಗೂ ಅರಿವನ್ನು ವಿಸ್ತಾರಗೊಳಿಸುತ್ತವೆ. ಅದೇ ಸಮಯ ಉತ್ತಮ ಅಂಕಗಳನ್ನು ಗಳಿಸಲು ಸಾಹಿತ್ಯಿಕ ಪರಿಭಾಷೆ, ವಿಮರ್ಶೆಯ ಶೈಲಿ, ಅಂದದ ಕೈ ಬರಹವೂ ಮುಖ್ಯ ಎಂದು ಕಿವಿ ಮಾತು ಹೇಳಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಮೋಹನ್ ಕುಮಾರ್ ಮಿರ್ಲೆ ಅಧ್ಯಕ್ಷತೆ ವಹಿಸಿದ್ದರು. ತೃತೀಯ ಬಿ ಎ ವಿದ್ಯಾರ್ಥಿನಿಯರು ನಾಡಗೀತೆ ಹಾಡಿದರು. ಆಂಗ್ಲ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಸುಷ್ಮಾ ಎಲ್ ಬಿರಾದಾರ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಆಂಗ್ಲ ವಿಭಾಗದ ಮುಖ್ಯಸ್ಥರಾದ ಡಾ.ಜಯಶ್ರೀ ಬಿ ಕದ್ರಿ, ಅತಿಥಿಗಳನ್ನು ಪರಿಚಯಿಸಿದರು. ರಾಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಮಂಜುನಾಥ್ ಹಾಗೂ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಪ್ರೊ.ಮಲ್ಲಿಕಾರ್ಜುನ್ ಕಾರ್ಯಕ್ರಮಕ್ಕೆ ಶುಭ ಕೋರಿದರು.

ದ್ವಿತೀಯ ಬಿಎ ವಿದ್ಯಾರ್ಥಿನಿಯರು ಪ್ರೇರಣಾ ಗೀತೆ ಹಾಡಿದರು. ತೃತೀಯ ಬಿಎ ವಿದ್ಯಾರ್ಥಿ ದುರ್ಗಾ ದರ್ಶನ್ ಸ್ವಾಗತಿಸಿದರು. ಪೂಜಾಶ್ರೀ ಕಾರ್ಯಕ್ರಮ ನಿರೂಪಣೆ ಮಾಡಿದರು. ಯಶಸ್ವಿನಿ ಧನ್ಯವಾದಗೈದರು. ತೃತೀಯ ಬಿಎ ವಿದ್ಯಾರ್ಥಿಗಳಾದ ಸೈಯದ್ ಸಿದ್ದಿಕ್ ಹಾಗೂ ರಂಜಿತಾ ತಾಂತ್ರಿಕ ಸಹಾಯ ನೀಡಿದರು.

# ಬೇಲೂರು ದೇಗುಲದಲ್ಲಿ ಕೊಠಾರೋತ್ಸವಕ್ಕೆ ಪುರಾತತ್ವ ಇಲಾಖೆ ನಿಬಂಧನೆ

**ಬೇಲೂರು:** ಇಲ್ಲಿನ ಶ್ರೀಚನ್ನಕೇಶವಸ್ವಾಮಿ ದೇಗುಲದಲ್ಲಿ ಧಾರ್ಮಿಕ ಆಚರಣೆಯಾದ ಕೊಠಾರೋತ್ಸವ ಆಚರಣೆಗೆ ಆರ್ಕಲಾಜಿಕಲ್ ಆಫ್ ಇಂಡಿಯಾ ಇಲಾಖೆ ಅಧಿಕಾರಿಗಳು ಕೆಲವೊಂದು ನಿಬಂಧನೆ ಹೇರಿದ್ದಾರೆ.

ಈ ಸಂಬಂಧ ದೇಗುಲದ ಆಡಳಿತಾಧಿಕಾರಿಗಳಿಗೆ ಪತ್ರ ಬರೆದಿರುವ ಪುರಾತತ್ವ ಇಲಾಖೆ ಅಧಿಕಾರಿಗಳು, ದೇಗುಲ ನಮ್ಮ ವ್ಯಾಪ್ತಿಗೆ ಒಳಪಡುವುದರಿಂದ ಜನವರಿ 5 ರಿಂದ ನಡೆಸಲ್ಪಡುವ ಕೊಠಾರೋತ್ಸವದ ಸಂದರ್ಭ ಪ್ರತಿನಿತ್ಯ ರಾತ್ರಿ 7.30 ಗಂಟೆಯೊಳಗೆ ಕಾರ್ಯಕ್ರಮ ಪೂರ್ಣಗೊಳಿಸಬೇಕು ಹಾಗೂ ಹರಿಕಥೆ, ಸಂಗೀತ ಹೊರತುಪಡಿಸಿ ನೃತ್ಯ ಇನ್ನಿತರ ಕಾರ್ಯಕ್ರಮ ನಡೆಸುವುದಾದರೆ ಪ್ರತಿನಿತ್ಯದ ಕಾರ್ಯಕ್ರಮಕ್ಕೆ ಪುರಾತತ್ವ ಇಲಾಖೆಗೆ 25 ಸಾವಿರ ರೂ. ನೀಡಬೇಕೆಂದು ನಿಬಂಧನೆ ಹಾಕಿದ್ದಾರೆ.

2015 ರಲ್ಲಿ ಒಮ್ಮೆ ಇದೆ ರೀತಿ ಪತ್ರ ಬರೆದು ಕೊಠಾರೋತ್ಸವದಲ್ಲಿ ಯಾವುದೆ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಅವಕಾಶವಿಲ್ಲ ಎಂದು ಪತ್ರ ಬರೆದಿದ್ದ ಪುರಾತತ್ವ ಇಲಾಖೆ ಅಧಿಕಾರಿಗಳು ಕೆಲವರ ಒತ್ತಾಸೆಯಿಂದ ಮೌನವಾಗಿದ್ದರು. ಆದರೆ ಇದೀಗ ದೇಗುಲ ಯುನೆಸ್ಕೋ ಪಟ್ಟಿಗೆ ಸೇರ್ಪಡೆಗೊಂಡ ನಂತರ ನಿಯಮವನ್ನು ಬಿಗಿಗೊಳಿಸಲು ಹೊರಟಿದ್ದಾರೆ ಎಂದು ಹೇಳಲಾಗುತ್ತಿದೆ.

ದೇಗುಲ ಲೋಕಾರ್ಪಣೆಗೊಂಡ 1117 ನೇ ಇಸವಿಯಲ್ಲಿ ರಾಮಾನುಜಾಚಾರ್ಯರ ಕಾಲಾವಧಿಯಲ್ಲಿ ಆಚರಣೆಗೆ ಬಂದ ಕೊಠಾರೋತ್ಸವದಲ್ಲಿ ಕೃಷಿಕರಿಗೆ ಮನರಂಜನೆ ನೀಡುವ ಉದ್ದೇಶದಿಂದ ಸಾಂಸ್ಕೃತಿಕ ಕಾರ್ಯಕ್ರಮ




ಆಯೋಜನೆ ಮಾಡಲಾಗುತ್ತಿತ್ತು. ಕೃಷಿಕರು ತಾವು ಬೆಳೆದ ಧವಸ ಧಾನ್ಯ ತಂದು ದೇವರಿಗೆ ಒಪ್ಪಿಸಿ, ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಿಸಿ ತೆರಳುವುದು ಪದ್ಧತಿಯಾಯಿತು. ಆ ನಂತರ ಕೊಠಾರೋತ್ಸವ 1032 ರಲ್ಲಿ ಮುಜರಾಯಿ ಇಲಾಖೆಯಲ್ಲಿ ದಾಖಲೆಯಾಯಿತು. ರಾತ್ರಿ ವೇಳೆ ದೇಗುಲದ ಬಾಗಿಲು ಮುಚ್ಚುವ ಸಮಯ 7.30 ಆಗಿರುವುದರಿಂದ ಕೊಠಾರೋತ್ಸವಕ್ಕೆ ರಾತ್ರಿ 9 ಗಂಟೆಯವರಗೂ ಕಾಲಾವಕಾಶ ಬೇಕಾಗುವುದರಿಂದ ಹೆಚ್ಚುವರಿ ವೇಳೆಗೆ ಅನುಮತಿ ಕೋರಿ ಮುಜರಾಯಿ ಇಲಾಖೆಯಿಂದ ಪುರಾತತ್ವ ಇಲಾಖೆ ಅಧಿಕಾರಿಗಳಿಗೆ ಪತ್ರ ಬರೆಯಲಾಗಿತ್ತು. ಆದರೆ ಇದೀಗ ಪುರಾತತ್ವ ಇಲಾಖೆ ಅಧಿಕಾರಿಗಳು ನಿಬಂಧನೆ ಹಾಕಿರುವುದು ಧಾರ್ಮಿಕ ಆಚರಣೆಗೆ ಅಡ್ಡಿಯಾಗಿದೆ. ಕನಿಷ್ಠ 8.30 ರ ತನಕವಾದರೂ ಬಾಗಿಲು ತೆರೆದು ಕಾರ್ಯಕ್ರಮಕ್ಕೆ ಅವಕಾಶ ನೀಡಬೇಕೆಂಬ ಬೇಡಿಕೆ ದೇಗುಲದ ವ್ಯವಸ್ಥಾಪನ ಸಮಿತಿಯವರದು.

ಈಗ ಕೊಠಾರೋತ್ಸವಕ್ಕೆ ನಿಬಂಧನೆ ಹಾಕುವ ಪುರಾತತ್ವ ಇಲಾಖೆ ಅಧಿಕಾರಿಗಳು ಭವಿಷ್ಯದಲ್ಲಿ ದೇಗುಲದ ಧಾರ್ಮಿಕ ಆಚರಣೆಗೆ ಏನೆಲ್ಲಾ ಕಂಡೀಷನ್ ಹಾಕುವರೊ ಗೊತ್ತಿಲ್ಲ. ಹಾಗೇನಾದರೂ ಆದಲ್ಲಿ ದೇವಾಲಯದ ದೇವರ ಉತ್ಸವ ಇನ್ನಿತರ ಧಾರ್ಮಿಕ ಆಚರಣೆಗೆ ಅಡಚಣೆ ಸಾಧ್ಯತೆಯನ್ನು ಅಲ್ಲಗೆಳೆಯುವಂತಿಲ್ಲ. ಈ ಬಗ್ಗೆ ಭಕ್ತ ಸಮೂಹ, ಸಾರ್ವಜನಿಕರು, ಸಂಘ ಸಂಸ್ಥೆಗಳು, ಧಾರ್ಮಿಕ ಮುಖಂಡರು ಚರ್ಚೆ ನಡೆಸುವ ಸಾಧ್ಯತೆಯಿದೆ.

**ಹರಿಕಥೆ, ಸಂಗೀತ ಕಾರ್ಯಕ್ರಮ ಹೊರತುಪಡಿಸಿ ಉಳಿದ ಕಾರ್ಯಕ್ರಮ ನಡೆಸುವುದಾದರೆ ದಿನವೊಂದಕ್ಕೆ 25 ಸಾವಿರ ರೂ ಕೊಡುವಂತೆ ಹಾಗೂ ರಾತ್ರಿ 7.30 ಕ್ಕೆ ಕಾರ್ಯಕ್ರಮ ಮುಗಿಸುವಂತೆ ನಿಬಂಧನೆ ಹಾಕಿ ಪುರಾತತ್ವ ಇಲಾಖೆಯ ಬೆಂಗಳೂರಿನ ಅಧಿಕಾರಿಗಳು ಪತ್ರ ಬರೆದಿದ್ದಾರೆ. ಇದಕ್ಕೂ ಮೀರಿ ಅನುಮತಿ ಬೇಕಿದ್ದರೆ ದೆಹಲಿ ಹಂತದಲ್ಲಿ ಅಧಿಕಾರಿಗಳೊಂದಿಗೆ ಪತ್ರ ವ್ಯವಹಾರ ನಡೆಸುವಂತೆ ಸೂಚಿಸಿದ್ದಾರೆ. ಪತ್ರ ಬರೆಯಲಾಗಿದೆ. ಜಿಲ್ಲಾಧಿಕಾರಿ ಭೇಟಿ ಮಾಡಿ ವಿಷಯ ಚರ್ಚಿಸುತ್ತೇವೆ.**

**| ಡಾ.ನಾರಾಯಣಸ್ವಾಮಿ**
**ವ್ಯವಸ್ಥಾಪನ ಸಮಿತಿ ಅಧ್ಯಕ್ಷರು**

# ದೊಡ್ಡಬಿದರೆಯಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ

**ಹುಳಿಯಾರು:** ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆ ಯೋಜನೆಗಳಲ್ಲಿ ಒಂದಾದ ಪ್ರಧಾನಮಂತ್ರಿ ಸುರಕ್ಷಾ ಹಾಗೂ ಜೀವನ ಜ್ಯೋತಿ ವಿಮಾ ಯೋಜನೆಗಳು ಕೇವಲ 20 ಹಾಗೂ 436 ರೂಪಾಯಿಗಳಿಗೆ ವಾರ್ಷಿಕ ಪ್ರೀಮಿಯಂ ಪಡೆದು 2 ಲಕ್ಷ ಹಣ ಬರುವಂತೆ ಮಾಡಿರುವುದು ನಿಜಕ್ಕೂ ಶ್ಲಾಘನೀಯ ಎಂದು ದೊಡ್ಡಬಿದರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ನಾಗೇಶ್ ನುಡಿದರು.

ಹುಳಿಯಾರು ಹೋಬಳಿ ದೊಡ್ಡಬಿದರೆ ಗ್ರಾಮದಲ್ಲಿ ಹುಳಿಯಾರಿನ ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ ಚಿಕ್ಕನಾಯಕನಹಳ್ಳಿ ಇವರು ಜಂಟಿಯಾಗಿ ಮಂಗಳವಾರ ಏರ್ಪಡಿಸಿದ್ದ ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಕೇಂದ್ರ ಸರ್ಕಾರದವು ದೇಶದ ಎಲ್ಲ ಜನರನ್ನು ಆಕರ್ಷಿಸುವಂಥ ಕಡಿಮೆ ವೆಚ್ಚದ ಯೋಜನೆಗಳನ್ನು ಜಾರಿಗೆ ತಂದಿರುವುದು ಶ್ಲಾಘನೀಯ. ವಿಕಸಿತ ಭಾರತ ಸಂಕಲ್ಪ ಯಾತ್ರೆಯು ನಮ್ಮ ದೊಡ್ಡಬಿದರೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಡೆಯುತ್ತಿರುವುದು ತುಂಬಾ ಸಂತೋಷದ ವಿಷಯ ಎಂದರು.

ಹುಳಿಯಾರು ಭಾರತೀಯ ಸ್ಟೇಟ್ ಬ್ಯಾಂಕಿನ ಮ್ಯಾನೇಜರ್ ಲೋಹಿತ್ ಮಾತನಾಡಿ ವಿಶ್ವಕರ್ಮ ಯೋಜನೆ ಅಡಿಯಲ್ಲಿ ಗ್ರಾಮ ಪಂಚಾಯಿತಿಯಿಂದ ಆಯ್ಕೆಯಾದ ಫಲಾನುಭವಿಗಳಿಗೆ ತರಬೇತಿ ನೀಡಿ ನಂತರ ಸಾಲ ನೀಡಲು ನಮ್ಮ ಬ್ಯಾಂಕು ಸಿದ್ದವಿದೆ ಎಂದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡಿ ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲ ರೈತರಿಗೆ ತುಂಬಾ ಪ್ರಯೋಜನವಾಗಿದ್ದು ಕಡಿಮೆ ಬಡ್ಡಿ ದರದಲ್ಲಿ ಸಾಲ ಪಡೆದು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಸಾಲ ಪಡೆದು ಆರ್ಥಿಕವಾಗಿ ಸಬಲರಾದ ಫಲಾನುಭವಿಗಳನ್ನು ಮಾತನಾಡಿಸಲಾಯಿತು. ಜೊತೆಗೆ ಡ್ರೋನ್ ಮುಖಾಂತರ ಔಷಧಿ ಸಿಂಪಡಿಸುವ ಕೀಟನಾಶಕ ಹಾಗೂ ಗೊಬ್ಬರ ಸಿಂಪಡಿಸುವ ದ್ರೋಣ್ ಪ್ರಾತ್ಯಕ್ಷತೆಯನ್ನು ಸಮಾಜ ಸೇವಕ ತುಮಕೂರಿನ ಉಮೇಶ್ ನಡೆಸಿಕೊಟ್ಟರು. ಕೊನೆಯಲ್ಲಿ ಭಾರತ ದೇಶವನ್ನು ಬಲಪಡಿಸುವ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು ಈ ಸಮಾರಂಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಾಲಿನಿ ಹಾಗೂ ಉಪಾಧ್ಯಕ್ಷರಾದ ರತ್ನಮ್ಮ, ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಅಂಬಿಕಾಬಾಯಿ, ಬಿ.ಕೆ. ಲಕ್ಷ್ಮಿ, ಅಪ್ಸನಾ ಖಾನ್, ಲಲಿತಮ್ಮ, ಬವಿತಾ ಮತ್ತಿತರರು ಸೇರಿದಂತೆ ಸ್ವಸಹಾಯ ಸಂಘದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.




**ಹುಳಿಯಾರು ಹೋಬಳಿ ದೊಡ್ಡಬಿದರೆ ಗ್ರಾಮದಲ್ಲಿ ಹುಳಿಯಾರಿನ ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ, ಚಿಕ್ಕನಾಯಕನಹಳ್ಳಿ ಇವರು ಜಂಟಿಯಾಗಿ ಮಂಗಳವಾರ ಏರ್ಪಡಿಸಿದ್ದ ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಕಾರ್ಯಾಗಾರದಲ್ಲಿ ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡಿದರು.**

# ಕೃಷಿಭಾಗ್ಯ ಯೋಜನೆಗಾಗಿ ಅರ್ಜಿ ಆಹ್ವಾನ

**ಹುಳಿಯಾರು:** ಕೃಷಿ ಭಾಗ್ಯ ಯೋಜನೆಯು ರಾಜ್ಯ ಸರ್ಕಾರದಮಹತ್ವಕಾಂಕ್ಷಿ ಯೋಜನೆ ಯಾಗಿದ್ದು ರೈತರ ಹಿತದೃಷ್ಟಿಯಿಂದ 2023-24ನೇ ಸಾಲಿನಿಂದ ಅನುಷ್ಠಾನ ಮಾಡಲು ಆದೇಶಿಸಲಾಗಿರುತ್ತದೆ ಎಂದು ಸಹಾಯಕ ಕೃಷಿ ನಿರ್ದೇಶಕ ಎಚ್.ಎಸ್. ಶಿವರಾಜ್‌ಕುಮಾರ್ ಅವರು ತಿಳಿಸಿದ್ದಾರೆ. ಸದರಿ ಯೋಜನೆಯನ್ನು ಕೃಷಿ ನೀತಿ 2004 ರ ಅನ್ವಯ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನಗೊಳಿಸುತ್ತಿದ್ದು ಮಳೆಯ ನೀರನ್ನು ಸಂಗ್ರಹಿಸಿ ಸಂಧಿಗ್ಧ ಪರಿಸ್ಥಿತಿಯಲ್ಲಿ ಬೆಳೆಗಳಿಗೆ ನೀರುಣಿಸಿ ನೀರಿನ ಸಮರ್ಪಕ ಬಳಕೆ ಮಾಡುವುದನ್ನು ಉತ್ತೇಜಿಸುವ ಸಲುವಾಗಿ ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.

ಕೃಷಿಭಾಗ್ಯ ಯೋಜನೆಯು ಪ್ಯಾಕೇಜ್ ಮಾದರಿಯಲ್ಲಿದ್ದು. ಕ್ಷೇತ್ರ ಬದು, ಕೃಷಿ ಹೊಂಡ, ಪಾಲಿಥಿನ್ ಹೊದಿಕೆ, ಡೀಸೆಲ್ / ಪೆಟ್ರೋಲ್ ಪಂಪ್ ಸೆಟ್, ಲಘು ನೀರಾವರಿ ಘಟಕ ಹಾಗೂ ತಂತಿ ಬೇಲಿ ಒಳಗೊಂಡಂತೆ ಆರು ಘಟಕಗಳನ್ನು ಹೊಂದಿರುತ್ತದೆ. ಅರ್ಜಿದಾರರು ಯೋಜನೆಯ ಸಮಗ್ರ ಸದುಪಯೋಗ ಪಡೆಯಲು ಎಲ್ಲಾ ಘಟಕಗಳನ್ನು ಅನುಷ್ಠಾನ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಕ್ಷೇತ್ರ ಬದು ನಿರ್ಮಾಣಕ್ಕೆ, ನೀರು ಸಂಗ್ರಹಣಾ ರಚನೆಗೆ ನೀರು ಇಂಗದಂತೆ ತಡೆಯಲು ಪಾಲಿಥಿನ್ ಹೊದಿಗೆ ಸಾಮಾನ್ಯ ವರ್ಗಕ್ಕೆ ಶೇ.80 ರಷ್ಟು, ಪ.ಜಾತಿ ಪಂಗಡಕ್ಕೆ ಶೇ.90 ರಷ್ಟು ಸಹಾಯಧನ, ಕೃಷಿ ಹೊಂಡದ ಸುತ್ತಲೂ ತಂತಿಬೇಲಿಗೆ ಸಾಮಾನ್ಯ ವರ್ಗಕ್ಕೆ ಶೇ.40 ರಷ್ಟು ಪ.ಜಾತಿ ಪಂಗಡಕ್ಕೆ ಶೇ.50 ರಷ್ಟು ಹೊಂಡದಲ್ಲಿ ನೀರು ಹಾಯಿಸಲು ಸಾಮಾನ್ಯ ವರ್ಗಕ್ಕೆ ಶೇ.50 ರಷ್ಟು. ಪ.ಜಾತಿ, ಪಂಗಡಕ್ಕೆ ಶೇ.90 ರಷ್ಟು, ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ ನೀರಾವರಿ ಯೋಜನೆಯ ಒಗ್ಗೂಡಿಸುವಿಕೆಯಡಿ ಶೇ.90 ರಷ್ಟು ಸಹಾಯಧನ ನೀಡಲಾಗುವುದು. ಆಸಕ್ತ ರೈತರು ಅರ್ಜಿಗಳನ್ನು ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳಾದ ಆಧಾರ್ ಪ್ರತಿ, ಪಹಣಿ, ಭಾವಚಿತ್ರ, ಜಾತಿ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಗಳೊಂದಿಗೆ ತಮ್ಮ ತಮ್ಮ ಹೋಬಳಿ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿಗಳನ್ನು ಸಲ್ಲಿಸುವುದು.



# ಶಾಸಕರ ವಿರುದ್ಧ ಘೋಷಣೆ ಕೂಗಿ ಆಕ್ರೋಶ

**ಚಾಮರಾಜನಗರ:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತ ಸಂಘದ ವತಿಯಿಂದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ನಾಲ್‌ರೋಡ್ ನಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಯಿತು. ನಾಲ್‌ರೋಡ್ ಪ್ರಮುಖ ರಸ್ತೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಸರ್ಕಾರ, ಜಿಲ್ಲಾಡಳಿತ, ಶಾಸಕರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಸ್ತೆ ತಡೆ ಹಿನ್ನೆಲೆಯಲ್ಲಿ ತಮಿಳುನಾಡು, ಮಾರ್ಟಳ್ಳಿ, ಜಲ್ಲಿಪಾಳ್ಯ ಕಡೆ ತೆರಳುವ ವಾಹನಗಳ ಸಂಚಾರ ಬಂದ್ ಆಗಿದ್ದು ಪ್ರಯಾಣಿಕರು ಪರದಾಡಿದರು.

ಹನೂರು ತಾಲೂಕಿನಲ್ಲಿರುವ ಕಾಡಂಚಿನ ರೈತರ ಸಮಸ್ಯೆಗಳು ಬಹಳಷ್ಟಿದ್ದು ಈ ಭಾಗದ ಅಭಿವೃದ್ಧಿ ಕಡೆಗೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಗಮನಹರಿಸದೆ ನಿರ್ಲಕ್ಷ್ಯ ಮಾಡಿದ್ದಾರೆ. ರಾಮಾಪುರದಿಂದ ನಾಲ್ ರೋಡ್ ಮೂಲಕವಾಗಿ ಜಲ್ಲಿಪಾಳ್ಯವರೆಗಿನ ರಸ್ತೆಯು ತೀರಾ ಹದಗೆಟ್ಟಿದ್ದು 40 ಟನ್ ಭಾರ ಹೊರುವ ವಾಹನಗಳು ಈ ಭಾಗದಲ್ಲಿ ಓಡಾಡುತ್ತಿವೆ. ಆದ್ದರಿಂದ ಗುಣಮಟ್ಟದ ಡಾಂಬರು ರಸ್ತೆ ನಿರ್ಮಾಣ ಮಾಡಬೇಕು. ಮಾರ್ಟಳ್ಳಿ ಗ್ರಾಮ ಹಾಗೂ ಹೂಗ್ಯಂ ಗ್ರಾಮಗಳ ಜಮೀನುಗಳ ಪೋಡಿ ಸಮಸ್ಯೆ ಬಗೆಹರಿಸಬೇಕು ಎಂದು ಆಗ್ರಹಿಸಿದರು. ಮಾರ್ಟಳ್ಳಿಯಿಂದ ಜಲ್ಲಿಪಾಳ್ಯದವರೆಗಿನ ಕಾಡಂಚಿನ ಪ್ರದೇಶಗಳ ಜಮೀನುಗಳಲ್ಲಿ ಕಾಡುಪ್ರಾಣಿಗಳ ಹಾವಳಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಹೆಚ್ಚಾಗಿದ್ದು ರೈಲ್ವೆ ಕಂಬಿಗಳ ಅಳವಡಿಸಬೇಕು. ನಾಲ್‌ರೋಡಿನಿಂದ ಜಲ್ಲಿಪಾಳ್ಯದವರೆಗೆ ನಿರಂತರ ಜ್ಯೋತಿ ವಿದ್ಯುತ್ ಸರಬರಾಜು ಸ್ಥಗಿತಗೊಂಡಿದ್ದು ಕೂಡಲೇ ಪುನರ್ ಆರಂಭಿಸಬೇಕು. ಪಂಪ್‌ಸೆಟ್‌ಗಳಿಗೆ ಹಗಲು ವೇಳೆ 7 ತಾಸು ತ್ರೀ ಫೇಸು ವಿದ್ಯುತ್ ನೀಡಬೇಕು ಎಂದರು.

ಕೂಡಲೂರು ಹಾಗೂ ಸುಳ್ವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಆದ್ದರಿಂದ ಆರೋಗ್ಯ ಸಿಬ್ಬಂದಿ ಸರಿಯಾಗಿ ಕೆಲಸ ಮಾಡುವಂತೆ ಕ್ರಮವಹಿಸಬೇಕು. ಸ್ಥಳೀಯವಾಗಿ ಲಭ್ಯವಿರುವ ಕೊಟ್ಟಿಗೆ ಗೊಬ್ಬರವು ಹೊರ ರಾಜ್ಯಕ್ಕೆ ಸಾಗಾಣಿಕೆಯಾಗುತ್ತಿದ್ದು ಸ್ಥಳೀಯ ರೈತರಿಗೆ ಗೊಬ್ಬರ ದೊರಕುತ್ತಿಲ್ಲ. ಆದ್ದರಿಂದ ಕೊಟ್ಟಿಗೆ ಗೊಬ್ಬರವು ಹೊರ ರಾಜ್ಯಕ್ಕೆ ಹೋಗದಂತೆ ನಿರ್ಬಂಧ ವಿಧಿಸಬೇಕು ಎಂದು ಒತ್ತಾಯಿಸಿದರು.

ಸ್ಥಳಕ್ಕೆ ಆರೋಗ್ಯ ಇಲಾಖೆ, ಅರಣ್ಯ ಇಲಾಖೆ, ಸೆಸ್ಕ್ ಇಲಾಖೆ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು ಆಗಮಿಸಿ ಪ್ರತಿಭಟನಾಕಾರರ ಮನವೊಲಿಸಲು ಯತ್ನಿಸಿದರು. ಆದರೆ, ಪ್ರತಿಭಟನಾಕಾರರು ಸ್ಥಳಕ್ಕೆ ಜಿಲ್ಲಾಧಿಕಾರಿ ಬರಬೇಕು ಎಂದು ಪಟ್ಟುಹಿಡಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಪದಾಧಿಕಾರಿಗಳು, ಮುಖಂಡರು, ಮಾರ್ಟಳ್ಳಿ, ವೆಟ್ಟುಕಾಡು, ಬಿದರಹಳ್ಳಿ, ಸಂದನಪಾಳ್ಯ, ಪೆದ್ದನಪಾಳ್ಯ, ಕೂಡೂರು, ಹೂಗ್ಯಂ, ಜಲ್ಲಿಪಾಳ್ಯ ಸೇರಿದಂತೆ ಇತರೆ ಗ್ರಾಮಗಳ ಗ್ರಾಮಸ್ಥರು ಭಾಗವಹಿಸಿದ್ದರು.

# ಹಬ್ಬ ಆಚರಣೆಗಳಲ್ಲಿ ವೈಜ್ಞಾನಿಕ ಸತ್ವ ಅಡಗಿದೆ

**ಮಂಡ್ಯ:** ಭಾರತೀಯ ಸಂಸ್ಕೃತಿ ಬಿಂಬಿಸುವ ಹಬ್ಬ ಆಚರಣೆಗಳಲ್ಲಿ ವೈಜ್ಞಾನಿಕ ತಳಹದಿ ಮತ್ತು ಸತ್ವ ಹಡಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜ್‌ಗೌಡ ಹೇಳಿದರು.

ನಗರದಲ್ಲಿರುವ ಶ್ರೀ ವಿದ್ಯಾ ಗಣಪತಿ ದೇವಾಲಯದ ಹೊಯ್ಸಳ ಸಭಾಂಗಣದಲ್ಲಿ ಶ್ರೀ ರಂಜಿನಿ ಕಲ ವೇದಿಕೆ ಮಂಡ್ಯ, ಹೊಯ್ಸಳ ಕರ್ನಾಟಕ ಸೇವಾ ಟ್ರಸ್ಟ್, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು, ಜಿಲ್ಲಾ ಕರ್ನಾಟಕ ರಕ್ಷಣಾ ವೇದಿಕೆ, ಸಹನಾ ಸೇಲ್ಸ್ ಅಂಡ್ ಸರ್ವಿಸಸ್, ಹೀರೋ ಎಲೆಕ್ಟ್ರಿಕಲ್ ಅಂಡ್ ಮೋಟಾರ್ಸ್ ಮತ್ತು ಇನ್ನಿತರ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜನತೆಗೆ ನೂತನ ವರ್ಷದ ಶುಭ ಕೋರಲು ಹೊಸ ವರ್ಷ 2024 ಹಾಗೂ ಸಾಹಿತಿ ಡಾ. ಶಂಕರ ಹಲ್ಲೇಗೆರೆ ರಚಿತ ಕವನ ಸಂಕಲನ ಬಿಡುಗಡೆ ಮತ್ತು ಸಾಂಸ್ಕೃತಿಕ- ಗಣ್ಯರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಿಟೀಷರ ಆಗಮನದಿಂದ ಭಾರತದೇಶದಲ್ಲಿ ವಿದೇಶಿ ದಿನದರ್ಶಿಕೆಯಲ್ಲಿ ಜ.1ರಂದು ಹೊಸವರ್ಷ ಎಂದು ಕ್ಯಾಲೆಂಡರ್ ಬದಲಿಸುವ ದಿನವಾಗಿದೆ, ಇದರಲ್ಲಿ ವಿಶೇಷತೆ ಏನೂ ಇಲ್ಲ, ಜನವರಿ ಒಂದು ನಮಗೆ ಹೊಸ ವರ್ಷವೇನೂ ಅಲ್ಲಾ.. ಅದು ನಾವೂ ಸರ್ಕಾರಿ ಕಛೇರಿಗಳಲ್ಲಿ , ಬ್ಯಾಂಕಿಂಗ್ ವಹಿವಟಿನಲ್ಲಿ ಅನುಸರಿಸುವ ಕ್ಯಾಲೆಂಡರ್ ಮಾತ್ರವಾಗಿದೆ.. ಆದರೆ ಭಾರತೀಯ ಸಂಸ್ಕೃತಿ ಬಿಂಬಿಸುವ ಪಾಕೃತಿಕ ಹಬ್ಬ-ಆಚರಣೆಗಳಲ್ಲಿ ವೈಜ್ಞಾನಿಕ ತಳಹದಿ, ಸತ್ವವಿದೆ, ಪ್ರಾಕೃತಿಕ ಬದಲಾವಣೆಯೊಂದಿಗೆ ಆರೋಗ್ಯಕರ ಮಾಹಿತಿಯಿದೆ ಎಂದು ನುಡಿದರು. ಪ್ರಾಕೃತಿಕ ಬದಲಾವಣೆಯಲ್ಲಿ ಬರುವ ಯುಗಾದಿ ನಮಗೆ ಹೊಸ ವರ್ಷವಾಗಿದೆ. ಸೂರ್ಯ ತನ್ನ ದಿಕ್ಕನ್ನೂ ಬದಲಿಸುವ ಸಂಕ್ರಾಂತಿ, ಮಹಾಶಿವರಾತ್ರಿ, ದೀಪಾವಳಿ, ರಾಷ್ಟ್ರೀಯ ಹಬ್ಬಗಳು, ನಾಡಹಬ್ಬಗಳು, ಶ್ರೀರಾಮ - ಶ್ರೀಕೃಷ್ಣ ಸೇರಿದಂತೆ ಮಹಾಪುರುಷರ ಜಯಂತಿಗಳು, ಗ್ರಾಮೀಣ ಸೊಗಡಿನಿಂದ ಕೂಡಿದ ಹಬ್ಬಗಳು, ಮನೆ ಮಂದಿಯನ್ನು ಸಂಭ್ರಮದಿಂದ ಇರುವಂತೆ ಆಚರಿಸುವ ಹಬ್ಬಗಳಲ್ಲಿ ನಮ್ಮ ಸಂಸ್ಕೃತಿ ಸಂಪ್ರದಾಯದ ಜೊತೆ ವೈಜ್ಞಾನಿಕತೆಯ ಮಹತ್ವವಿದೆ ಎಂದು ತಿಳಿಸಿದರು.

ನೂತನ ಕ್ಯಾಲೆಂಡರ್ ನ ಹೊಸವರ್ಷದ ಆರಂಭದಿನವು ಎಲ್ಲರಿಗೂ ಒಳಿತನ್ನು ಮಾಡಲಿ, ವೈಜ್ಞಾನಿಕ ಮನೋಭಾವ ಹೆಚ್ಚಿಸಲಿ ಎಂದು ತಿಳಿಸಿದ ಡಾ.ಈ.ಸಿ.ನಿಂಗರಾಜ್ ಗೌಡ ರವರು, ಇತ್ತೀಚಿನ ವರ್ಷಗಳಲ್ಲಿ ನಮ್ಮ ದೇಶದ ಯುವ ಜನತೆ ಜನವರಿ ಒಂದರಂದು ಪಾಶ್ಚಿತ್ಯರಂತೆ ಮೋಜು-ಮಸ್ತಿಗೆ ಹೆಚ್ಚು ಮಹತ್ವ ಕೊಡದೇ, ಆಧ್ಯಾತ್ಮಿಕ ಶ್ರದ್ಧಾಕೇಂದ್ರಗಳಾದ ದೇವಸ್ಥಾನಗಳಿಗೆ ಅತಿಹೆಚ್ಚು ಜನರು ಹೋಗುತ್ತೀರುವುದು ಶ್ಲಾಘನೀಯವಾಗಿದೆ ಎಂದು ತಿಳಿಸಿದರು. ನಾವೂ ನವಯುಗದ ಅನ್ವೇಷಣೆಗಳಾದ ವಿಜ್ಞಾನ, ತಂತ್ರಜ್ಞಾನ ಮತ್ತು ಡಿಜಟಿಕರಣದೊಂದಿಗೆ, ನಮ್ಮ ಸಾಹಿತ್ಯ ಸಂಸ್ಕೃತಿಯನ್ನೂ ವಿಶ್ವಕ್ಕೆ ಪರಿಚಯಿಸಿ, ಬೆಳೆಸುವ ಜವಬ್ದಾರಿ ನಮ್ಮೆಲ್ಲರ ಮೇಲೆಯಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಸಂಗೀತ, ಕೃತಿ ಬಿಡಗಡೆಯೊಂದಿಗೆ ದೈವಿಶಕ್ತಿ ಕ್ರೇಂದ್ರದಲ್ಲಿ ಆಚರಿಸುತ್ತಿರುವುದು ಉಲ್ಲಾಸ ಉಂಟುಮಾಡುತ್ತಿದೆ ಎಂದರು.

ಸಾಹಿತಿ ಡಾ. ಶಂಕರ ಹಲ್ಲೇಗೆರೆ ರಚಿತ ಗೆಲುವು ನಗಬೇಕು ಮತ್ತು ಕಿನ್ನರ ಲೋಕ ಎರಡು ಕವನ ಸಂಕಲನಗಳನ್ನು ಲೋಕಾರ್ಪಣೆ ಗೊಳಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವವರನ್ನು ಗಣ್ಯರ ಸಮ್ಮುಖದಲ್ಲಿ ಅಭಿನಂದಿಸಲಾಯಿತು. ಗಮಕವಿಧುಷಿ ಧರಿತ್ರಿಅನಂತರಾವ್ ಮತ್ತು ತಂಡದಿಂದ ಭಕ್ತಿಸುಧಾ ಕಾರ್ಯಕ್ರಮ ನಡೆಯಿತು. ಶ್ರೀರಂಜಿನಿ ಕಲಾವೇಧಿಕೆ ಅಧ್ಯಕ್ಷ ಗಮಕವಿದ್ವಾನ್ ಸಿ.ಪಿ ವಿದ್ಯಾಶಂಕರ್ , ನಿವೃತ್ತ ಜೀವ ವಿಮೆ ಅಧಿಕಾರಿ ಡಾ. ಎಸ್ ಶ್ರೀನಿವಾಸ ಶೆಟ್ಟಿ, ಕಲಾ ಪೋಷಕ ಬಿ ಎಂ ಅಪ್ಪಾಜಪ್ಪ, ವೈದ್ಯರಾದ ಡಾ. ಚಂದ್ರಶೇಖರ್. ಮನೋವೈದ್ಯರಾದ ಡಾ. ಟಿ ಎಸ್ ಸತ್ಯನಾರಾಯಣ ರಾವ್, ಕ್ರೀಡಾ ಪ್ರಾಧಿಕಾರ ಮಾಜಿ ಅಧ್ಯಕ್ಷ ಪಿಎಂ ಸೋಮಶೇಖರ್, ಯುವ ಮುಖಂಡ ವಿನಯ್ ಕುಮಾರ್ ರಂಗಭೂಮಿ ಕಲಾವಿದ ಸಂಪಹಳ್ಳಿ ಬಸವರಾಜು, ದರಿತ್ರಿ ಆನಂದ ರಾವ್ ಇದ್ದರು.

# ಯುವನಿಧಿ ಯೋಜನೆ ಬಳಸಿಕೊಳ್ಳಲು ಕರೆ

**ಕೋಲಾರ:** ಜಿಲ್ಲೆಯ ಯುವಕರು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ರವರು ಕರೆ ಕೊಟ್ಟರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಹಮ್ಮಿಕೊಳ್ಳಾಗಿದ್ದ, ಯುವನಿಧಿ ಯೋಜನೆಯ ಫಲಾನುಭವಿಗಳನ್ನು ನೋಂದಣಿ ಮಾಡಿಸುವ ಕುರಿತು ಜಿಲ್ಲೆಯ ಎಲ್ಲಾ ಪ್ರಾಂಶುಪಾಲರೊಂದಿಗಿನ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಸರ್ಕಾರದ ಎಲ್ಲ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದು ಈ ಜಿಲ್ಲೆಯಲ್ಲಿ ಸಾಂಪ್ರದಾಯಿಕವಾಗಿ ಬಂದಿರುವ ವಾಡಿಕೆ. ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗೃಹಲಕ್ಮಿ, ಗೃಹಜ್ಯೋತಿ, ಅನ್ನಭಾಗ್ಯ ಯೋಜನೆಗಳನ್ನು ನಮ್ಮ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನ ಮಾಡಲಾಗಿದೆ. ಮಾನ್ಯ ಮುಖ್ಯಮಂತ್ರಿಗಳು ರಾಜ್ಯ ಸರ್ಕಾರದ ಯೋಜನೆಗಳು ಅನುಷ್ಟಾನಗೊಂಡಿರುವ ಪ್ರಗತಿ ಕಂಡು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ. ಅದರಂತೆ ಈ ಯುವನಿಧಿ ಯೋಜನೆಯ ಗ್ಯಾರೆಂಟಿಯನ್ನೂ ಸಹ ಯಶಸ್ವಿಯಾಗಿ ಅನುಷ್ಠಾನ ಮಾಡಲಾಗುವುದೆಂಬ ನಿರೀಕ್ಷೆಯಲ್ಲಿ ರಾಜ್ಯ ಸರ್ಕಾರ ಇದೆ. ಸರ್ಕಾರದ ನಿರೀಕ್ಷೆಗನುಗುಣವಾಗಿ ನಾವು ನಮ್ಮ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸಬೇಕಿದೆ. ಈ ಹಿನ್ನೆಲೆಯಲ್ಲಿ ಯುವನಿಧಿ ಯೋಜನೆಯ ಪರಿಣಾಮಕಾರಿ ಅನುಷ್ಟಾನಕ್ಕಾಗಿ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರ ಸಹಕಾರ ಅಗತ್ಯವಾಗಿದೆ ಎಂದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಮೂಲಕ ಈ ಯೋಜನೆ ಜಾರಿಗೊಳ್ಳುತ್ತಿದ್ದು, ಹೆಚ್ಚು ಹೆಚ್ಚು ಫಲಾನುಭವಿಗಳನ್ನು ಈ ಯೋಜನೆಯಲ್ಲಿ ತೊಡಗಿಸಿಕೊಳ್ಳಬೇಕಿರುತ್ತದೆ. ಇದರಿಂದ ನಿರುದ್ಯೋಗಿ ಯುವಕರ ನಿಖರ ಮಾಹಿತಿ ಸರ್ಕಾರಕ್ಕೆ ಲಭ್ಯವಾಗುವುದಲ್ಲದೇ, ಅಂಥವರಿಗೆ ವಿದ್ಯೆಗೆ ತಕ್ಕ ಉದ್ಯೋಗ ದೊರಕಿಸಿಕೊಡಲು ಇಂತಹ ಯೋಜನೆಗಳು ಪರಿಣಾಮಕಾರಿಯಾಗುತ್ತವೆ ಎಂದು ಅಭಿಪ್ರಾಯ ಪಟ್ಟರು.

ಕಾಲೇಜು ಮಟ್ಟದಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಲು ಕಾರ್ಯಾಗಾರಗಳನ್ನು ಏರ್ಪಡಿಸಿ ಫಲಾನುಭವಿಗಳನ್ನು ಗುರುತಿಸಲು ಯೋಜನೆ ರೂಪಿಸಿಕೊಳ್ಳಲು ತಿಳಿಸಿದರು. 2022-23ನೇ ಸಾಲಿನಲ್ಲಿ ಪದವಿ/ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು, ಪದವಿ/



ಡಿಪ್ಲೊಮಾ ನಂತರ ಕನಿಷ್ಠ 6 ತಿಂಗಳ ಅವಧಿಯ ವರೆಗೆ ಖಾಸಗಿ ಅಥವಾ ಸರ್ಕಾರಿ ಉದ್ಯೋಗ ಹೊಂದಿಲ್ಲದವರು, ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವಿದ್ಯಾಭ್ಯಾಸ ಮುಂದುವರೆಸದೇ ಇರುವವರು ಕರ್ನಾಟಕದಲ್ಲಿ ವಾಸವಿರುವವರು ಎಸ್.ಎಸ್.ಎಲ್.ಸಿ, ಪಿ.ಯು.ಸಿ ಪದವಿ/ಡಿಪ್ಲೊಮಾ ಪ್ರಮಾಣ ಪತ್ರಗಳನ್ನು ಸಲ್ಲಿಸುವ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅಲ್ಲದೇ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಸಹ ಅರ್ಜಿ ಸಲ್ಲಿಸಬಹುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಶ್ರೀನಿವಾಸ್, ಜಿಲ್ಲೆಯ ವಿವಿಧ ಪದವಿ/ ಡಿಪ್ಲೊಮಾ ಕಾಲೇಜುಗಳ ಪ್ರಾಂಶುಪಾಲರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕರವೇ ನಾರಾಯಣಗೌಡ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ

ಹುಳಿಯಾರು: ಕನ್ನಡ ನಾಮಫಲಕ ಕಡ್ಡಾಯ ಆಗ್ರಹಿಸಿ ಕೆಲ ಅಂಗಡಿ ಬೋರ್ಡ್‌ಗಳ ತೆರವಿಗೆ ಯತ್ನಿಸಿದ ನಾರಾಯಣಗೌಡ ಅವರ ಬಂಧನವನ್ನು ಖಂಡಿಸಿ ಹುಳಿಯಾರಿನಲ್ಲಿ ಕರವೇ ಕಾರ್ಯಕರ್ತರು ಪ್ರತಿಭಟನೆ ಮೂಲಕ ಬುಧವಾರ ಆಕ್ರೋಶ ವ್ಯಕ್ತಪಡಿಸಿ ನಾರಾಯಣಗೌಡ ಸೇರಿ ಕನ್ನಡಿಗರನ್ನು ಬಿಡುಗಡೆ ಮಾಡದೇ ಇದ್ದರೆ ಉಗ್ರ ಹೋರಾಟ ಕೈಗೊಳ್ಳುತ್ತೇವೆ ಎಂದು ಎಚ್ಚರಿಸಿದರು.



ಹುಳಿಯಾರು ಕರವೇ ವೃತ್ತದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಯು ಡಾ.ರಾಜ್ ಕುಮಾರ್ ರಸ್ತೆ, ಪೊಲೀಸ್ ಠಾಣೆ ವೃತ್ತದ ಮೂಲಕ ನಾಡಕಚೇರಿ ತಲುಪಿತಿ ಅಲ್ಲಿ ಉಪತಹಸೀಲ್ದಾರ್ ವಿನುತಾ ಅವರಿಗೆ ಮನವಿ ಸಲ್ಲಿಸಿದರು. ಮೆರವಣಿಗೆಯಲ್ಲಿ ರಾಜ್ಯ ಸರ್ಕಾರ ಹಾಗೂ ಪೊಲೀಸರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕರವೇ ಅಧ್ಯಕ್ಷ ಬೇಕರಿ ಪ್ರಕಾಶ್ ಮಾತನಾಡಿ ಬೆಂಗಳೂರಿನಲ್ಲಿ ಕನ್ನಡ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎನ್ನುವುದು ಕನ್ನಡಿಗರ ಹೋರಾಟ. ನಮ್ಮ ಹೋರಾಟದಿಂದ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ ಕನ್ನಡ ನಾಮಪಲಕ ಅಳವಡಿಕೆಗೆ ಸುಗ್ರೀವಾಜ್ಞೆ ಹೊರಡಿಸಲು ಮುಂದಾಗಿರುವುದು ಸ್ವಾಗತಾರ್ಹವಾದರೂ ಪೊಲೀಸರನ್ನು ಮುಂದೆ ಬಿಟ್ಟು ಹಿರಿಯ ಹೋರಾಟಗಾರ ನಾರಾಯಣ ಗೌಡ ಸೇರಿದಂತೆ ಹಲವರನ್ನು ಬಂಧಿಸಿ ಜೈಲಿಗೆ ಕಳುಹಿಸಿರುವುದು ನಾಚಿಕೆಗೇಡಿನ ಸಂಗತಿ. ಹೊರ ರಾಜ್ಯದಿಂದ ಬಂದು ರಾಜ್ಯದಲ್ಲಿ ಬಂದು ವ್ಯಾಪಾರ ಮಾಡುವವರು ಇಲ್ಲಿನ ಭಾಷೆಗೆ ಗೌರವ ಕೊಡದೇ ಇರುವುದರ ಬಗ್ಗೆ ಚಕಾರ ಎತ್ತದೆ ಕನ್ನಡ ಉಳಿಸಲು ಹೊರಟಿರುವ ಹೋರಾಟಗಾರರನ್ನು ಬಂಧಿಸಿರುವುದು ನಾನು ಕನ್ನಡಿಗ, ನಾನು ಕನ್ನಡಪರ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶೋಭೆ ತರುವುದಿಲ್ಲ ಎಂದು ಹೇಳಿದರು.

ಚಲನಚಿತ್ರ ನಟ ಗೌಡಿ ಮಾತನಾಡಿ ಅಂಗಡಿಗಳ ಮೇಲೆ ಕನ್ನಡ ನಾಮಫಲಕಕ್ಕಾಗಿ ವೇದಿಕೆ ಮೂರು ತಿಂಗಳಿಂದ ಜನಜಾಗೃತಿ ಅಭಿಯಾನ ನಡೆಸುತ್ತ ಬಂದಿದೆ. ಅದಾಗಿಯೂ ಅದನ್ನು ಕಡೆಗಣಿಸಲಾಗಿತ್ತು. ಹೀಗಾಗಿ ಶೇ.60 ರಷ್ಟು ಕನ್ನಡ ಬಳಸುವಂತೆ ಒತ್ತಾಯಿಸಿ ಇಂಗ್ಲಿಷ್ ಹಾಗೂ ಹಿಂದಿ ನಾಮಫಲಕಗಳನ್ನು ತೆಗೆದು ಎಸೆಯುವ ಮೂಲಕ ಕನ್ನಡ ಜಾಗೃತಿ ಮೂಡಿಸುವ ಸಂದರ್ಭದಲ್ಲಿ ಕರವೇ ರಾಜ್ಯಾಧ್ಯಕ್ಷ ಟಿ ಎ ನಾರಾಯಣಗೌಡ ಮತ್ತು ಕಾರ್ಯಕರ್ತರನ್ನು ಸುಳ್ಳು ಪ್ರಕರಣ ದಾಖಲಿಸಿ ಬಂಧಿಸಿರುವುದು ಖಂಡನೀಯ. ಬಂಧಿಸಿರುವ ನಾರಾಯಣ ಗೌಡ ಹಾಗೂ ಕನ್ನಡಪರ ಹೋರಾಟಗಾರರನ್ನು ಕೂಡಲೇ ಬೇಷರತ್ ಬಿಡುಗಡೆ ಮಾಡದೇ ಇದ್ದರೆ ಕನ್ನಡಪರ ಸಂಘಟನೆಗಳು ಉಗ್ರ ಹೋರಾಟ ನಡೆಸಲಿವೆ. ಮುಂದಿನ ದಿನಗಳಲ್ಲಿ ನಡೆಯುವ ಹೋರಾಟಕ್ಕೆ ಸರ್ಕಾರವೇ ನೇರ ಹೊಣೆ ಆಗಲಿದೆ ಎಂದರು.

ಈ ಪ್ರತಿಭಟನೆಯಲ್ಲಿ ಕರವೇ ತಾಲೂಕು ಅಧ್ಯಕ್ಷ ಮೆಡಿಕಲ್ ಚನ್ನಬಸವಯ್ಯ, ಕಾರ್ಯಕರ್ತರುಗಳಾದ ಬಸವರಾಜು, ಕೋರಿಯರ್ ಹರೀಶ್, ಲಕ್ಷ್ಮೀಕಾಂತ್, ಸಂತೋಷ್, ರಘು, ತಿಮ್ಮಣ್ಣ, ಮಂಜುನಾಥ್, ಆಂಜನಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

**ಕರ್ನಾಟಕ ರಾಜ್ಯದಲ್ಲಿ ಕನ್ನಡ ಭಾಷೆಯೇ ಸಾರ್ವಭೌಮವಾಗಿದೆ. ಆದರೂ ಕನ್ನಡ ಭಾಷೆಯ ನಾಮಫಲಕಗಳು ಕಾಣದಾಗುತ್ತಿರುವ ಈ ಸಂದರ್ಭದಲ್ಲಿ ಕನ್ನಡಕ್ಕಾಗಿ ಹೋರಾಟ ಮಾಡುತ್ತಿದ್ದ ನಾರಾಯಣಗೌಡ ಹಾಗೂ ಕನ್ನಡ ಪರ ಹೋರಾಟಗಾರರನ್ನು ಖೈದಿಗಳಂತೆ ಬಂಧಿಸಿ ಜೈಲಿನಲ್ಲಿ ಇಟ್ಟಿರುವುದು ಅಕ್ಷಮ್ಯ. ಆಂಗ್ಲ ನಾಮಫಲಕ ತೆಗೆಯಲು ಹೇಳಿದ ಕನ್ನಡಪರ ಹೋರಾಟಗಾರರನ್ನು ಅಪರಾಧಿಗಳಂತೆ ಬಿಂಬಿಸಬಾರದು. ನಾಡುನುಡಿ, ಜಲಕ್ಕಾಗಿ ಹೋರಾಟ ಮಾಡುವ ಕನ್ನಡದ ಹೋರಾಟಗಾರರನ್ನು ಈ ಕೂಡಲೇ ಬಿಡುಗಡೆ ಮಾಡಬೇಕೆಂದು.**

**| ಮೆಡಿಕಲ್ ಚನ್ನಬಸವಯ್ಯ**, ಅಧ್ಯಕ್ಷ, ಕರವೇ, ಚಿಕ್ಕನಾಯಕನಹಳ್ಳಿ

# ಸಾರ್ವಜನಿಕ ಸಮಸ್ಯೆ ಪರಿಶೀಲನೆ

**ಮಂಡ್ಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ, ಕಾರ್ಯಕ್ರಮಗಳ ಕುರಿತು 2023 ಆಗಸ್ಟ್ 09 ರಂದು ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ರಾಜ್ಯದಲ್ಲಿನ ಎಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರತಿ ತಿಂಗಳ ಎರಡನೇ ಬುಧವಾರದಂದು ವ್ಯಾಪಕ ಪ್ರಚಾರ ನೀಡುವ ಮೂಲಕ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಶಾಸನಬದ್ದ ಕಾರ್ಯಗಳ/ಯೋಜನೆ/ಕಾರ್ಯಕ್ರಮಗಳ ಅನುಷ್ಟಾನ ಹಾಗೂ ಸಾರ್ವಜನಿಕ ಸಮಸ್ಯೆ ಕುರಿತು ದೂರು/ಮನವಿಗಳನ್ನು ಸ್ವೀಕರಿಸಿ, ಅವುಗಳನ್ನು ಆದ್ಯತೆ ಮೇರೆಗೆ ಪರಿಗಣಿಸಿ ಇತ್ಯರ್ಥಗೊಳಿಸಲು ಸೂಚಿಸಿದ್ದು, ಗ್ರಾಮ ಪಂಚಾಯಿತಿಗಳಿಗೆ ಭೇಟಿ ಇದರ ಬಗ್ಗೆ ಕ್ರಮವಹಿಸಿ ಕೈಗೊಂಡ ಕ್ರಮಗಳ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಹಾಗೂ ಆಯುಕ್ತಾಲಯಕ್ಕೆ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ. ಅದರಂತೆ ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜನವರಿ 10 ರಂದು ಬೆಳಗ್ಗೆ 11:30 ಗಂಟೆಗೆ ಮದ್ದೂರು ತಾಲ್ಲೂಕಿನ ಕದಲೂರು ಗ್ರಾಮ ಪಂಚಾಯಿತಿಗೆ ಭೇಟಿ ನೀಡುತ್ತಿದ್ದಾರೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾವೇರಿಕಿಚ್ಚು : ಕರ್ನಾಟಕ ಸೇನಾಪಡೆ ಪ್ರತಿಭಟನೆ

**ಚಾಮರಾಜನಗರ:** ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 121 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಒಣ ತರಕಾರಿ ಸೊಪ್ಪು ಹಿಡಿದು ಪ್ರತಿಭಟನೆ ನಡೆಸಲಾಯಿತು. ನಗರದ ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ .ಚಾ. ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ದ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 121 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ , ಒಣ ತರಕಾರಿ ಸೊಪ್ಪು ಹಿಡಿದು ಪ್ರತಿಭಟನೆ ನಡೆಸಲಾಗಿದೆ . ತಮಿಳುನಾಡಿನಲ್ಲಿ ನೀರು ತುಂಬಿದ್ದರೂ ಕೂಡ ಕಾವೇರಿ ನೀರಿನ ವಿಚಾರದಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಿಲ್ಲ. ಕರ್ನಾಟಕ ರಾಜ್ಯದ ಮೇಲೆ ಮಲತಾಯಿಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿದರು.ರೈತರ ಜೀವನಾಡಿಯಾದ ಕಾವೇರಿ ನೀರನ್ನು ಸಂರಕ್ಷಣೆ ಮಾಡಬೇಕು ಮಳೆ ಅಭಾವದಿಂದ ರಾಜ್ಯದಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಎಲ್ಲತರದ ಬೆಳೆಗಳು ಸಂಪೂರ್ಣ ಒಣಗುತ್ತಿವೆ. ರಾಜ್ಯದಲ್ಲಿ ನೀರಿನ ಅಭಾವ ಇದ್ದು, ಮುಂದಿನ ದಿನಗಳಲ್ಲಿ ತೀವ್ರ ಬರಗಾಲ ಬರಲಿದೆ.ಹೀಗಾಗಿ ಕರ್ನಾಟಕ ಸರ್ಕಾರ ಎಚ್ಚೆತ್ತುಗೊಂಡು ತಮಿಳುನಾಡಿಗೆ ಬಿಟ್ಟಿರುವ ನೀರನ್ನು ನಿಲ್ಲಿಸಬೇಕು. ಕೇಂದ್ರ ಮಧ್ಯಪ್ರವೇಶಿಸಿ ಕರ್ನಾಟಕಕ್ಕೆ ನ್ಯಾಯ ಒದಗಿಸಿ ರಾಜ್ಯದ ಜನತೆಗೆ ನೀರು ಉಳಿಸಬೇಕು .ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದರು. ಪ್ರತಿಭಟನೆಯಲ್ಲಿ ಪಣ್ಯದಹುಂಡಿ ರಾಜು, ಮಹೇಶ್ ಗೌಡ,ಚಾ. ರಾ.ಕುಮಾರ್,ಚಾ.ರಾ.ಕುಮಾರ್, ರವಿಚಂದ್ರುಪ್ರಸಾದ್ ಕಹಳೆ,ಗು.ಪುರುಷೋತ್ತಮ್,ವೀರಭದ್ರ, ಮಂಜು ಇದ್ದರು.



# ಬಿಜೆಪಿ ಕಚೇರಿಯಲ್ಲಿ ಸಾವಿತ್ರಿ ಬಾಪುಲೆ ಜಯಂತಿ ಆಚರಣೆ

**ಚಾಮರಾಜನಗರ:** ದೀನ, ದಲಿತರು ಹಾಗು ಶೋಷಿತ ಸಮುದಾಯ ಮಕ್ಕಳು ಹಾಗು ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ದೇಶದ ಪ್ರಪ್ರಥಮ ಮಹಿಳಾ ಶಿಕ್ಷಕಿ ಮಾತೆ ಸಾವಿತ್ರಿ ಬಾಪುಲೆ ಎಂದು ಬಿಜೆಪಿ ಎಸ್ಸಿ ಮೋರ್ಚಾ ಅಧ್ಯಕ್ಷ ಮೂಡ್ನಾಕೂಡು ಪ್ರಕಾಶ್ ಬಣ್ಣಿಸಿದರು.

**» ಜಿಲ್ಲಾ ಬಿಜೆಪಿ ಕಛೇರಿಯಲ್ಲಿ ಬಿಜೆಪಿ ಪರಿಶಿಷ್ಟ ಜಾತಿ ಮೋರ್ಚಾದಿಂದ ಅಕ್ಷರ ಮಾತೆ ಸಾವಿತ್ರಿ ಬಾ ಫುಲೆ ಸ್ಮರಣೆ**

ನಗರದ ಜಿಲ್ಲಾ ಬಿಜೆಪಿ ಕಛೇರಿಯಲ್ಲಿ ಬಿಜೆಪಿ ಪರಿಶಿಷ್ಟ ಜಾತಿ ಮೋರ್ಚಾ ದಿಂದ ನಡೆದ ಅಕ್ಷರ ಮಾತೆ ಸಾವಿತ್ರಿ ಬಾ ಫುಲೆ ಜಯಂತಿ ಕಾರ್ಯಕ್ರಮದಲ್ಲಿ ಬಾಪುಲೆ ಅವರು ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸಾವಿತ್ರಿ ಬಾಪುಲೆ ಅವರು ಆ ಕಾಲಘಟ್ಟದಲ್ಲಿ ಶೋಷಿತರು ಮತ್ತು ಮಹಿಳೆಯರಿಗೆ ಇದ್ದ ಶಿಕ್ಷಣ ಮತ್ತು ಶೈಕ್ಷಣಿಕ ನಿರ್ಬಂಧಗಳನ್ನು ತೊಡೆದು ಹಾಕಿ ನಿರ್ಭೀತಿಯಿಂದ ವಿದ್ಯಾವಂತರಾಗಲು ಶ್ರಮಿಸಿದ ಭಾರತೀಯ ಶಿಕ್ಷಣ ಮಾತೆ. ವಿದ್ಯಾಭ್ಯಾಸದಿಂದ ವಂಚಿತರಾಗಿದ್ದ ಸಮುದಾಯಕ್ಕೆ ಅಕ್ಷರ ಕಲಿಸಲು ಹೊರಟ ಸಾವಿತ್ರಿ ಬಾ ಫುಲೆಯವರಿಗೆ ಪಟ್ಟಭದ್ರ ಹಿತಾಸಕ್ತಿಗಳು ತಡೆವೊಡ್ಡಿದರು. ಯಾವುದೇ ಬೆದರಿಕೆಗಳಿಗೆ ಜಗ್ಗದೇ ಆ ಮಕ್ಕಳಿಗೆ ಶಿಕ್ಷಣ ಕಲಿಸಿದ ಧೀಮಂತೆ ನಾಯಕಿ ಎಂದರು.

ಅವರು ಬೀದಿಯಲ್ಲಿ ಹೋಗುತ್ತಿದ್ದಾಗ ಕೆಸರು, ಸಗಣಿ ಎರಚಿ ಅವಮಾನ ಮಾಡಿದರೂ ಎದೆಗುಂದದೆ ವಂಚಿತ ಸಮುದಾಯಗಳಿಗೆ ವಿದ್ಯಾರ್ಜನೆ ಮಾಡಿ, ಆ ಕಾಲದಲ್ಲಿ ಬಹಳಷ್ಟು ಮಕ್ಕಳು ಶಿಕ್ಷಣವನ್ನು ಪಡೆಯುವಂತೆ ಮಾಡಿದರು. ಅವರ ಕುಟುಂಬಗಳು ಶಿಕ್ಷಣ ಕಲಿಯುವಂತೆ ಮಾಡಿದರು. ಅವರು ಅಂದು ನೀಡಿದ ವಿದ್ಯಾದಾನ ಬಹಳಷ್ಟು ಮಂದಿ ಬಾಳಿನಲ್ಲಿ ನಂದಾದೀಪವಾಗಿದೆ.

ಇಂಥ ಮಹಾನ್ ಸಾಧಕಿ ಅಕ್ಷರ ಮಾತೆ ಸಾವಿತ್ರೆಬಾಪುಲೆ ಅವರ ಜಯಂತಿ ಆಚರಿಸುವ ಪುಣ್ಯ ನಮ್ಮದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ಉಪಾಧ್ಯಕ್ಷ ವೇಣುಗೋಪಾಲ್, ಗ್ರಾಮಾಂತರ ಮಂಡಲದ ಅಧ್ಯಕ್ಷ ಮುತ್ತಿಗೆ ಮೂರ್ತಿ, ಮುಖಂಡರಾದ ಹೊಂಗನೂರು ಮಹದೇವಸ್ವಾಮಿ, ಶುಭೋದಯ ಸಿದ್ದರಾಜು, ದಡದಹಳ್ಳಿ ಶಂಕರ್, ಸಿದ್ದಯ್ಯನಪುರ ಶಿವರಾಜು, ಕೂಸಣ್ಣ, ಸಾಣೆಗಾಲ ಮಹೇಶ್ ಇದ್ದರು.




## ನಿವೃತ್ತ ಅರಣ್ಯ ಸಂರಕ್ಷಣಾಧಿಕಾರಿ ರಾಜು ಸಲಹೆ

# ಸಂಪನ್ಮೂಲ ಸಮಾನ ಹಂಚಿಕೆ ಆಗಲಿ

**ಚಾಮರಾಜನಗರ:** ದೇಶದಲ್ಲಿರುವ ಸಂಪನ್ಮೂಲ ಸಮಾನಾಂತರವಾಗಿ ಹಂಚಿಕೆಯಾದ ಆದಾಗ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ ಎಂದು ನಿವೃತ್ತ ಅರಣ್ಯ ಸಂರಕ್ಷಣಾಧಿಕಾರಿ ರಾಜು ಹೇಳಿದರು.

ತಾಲೂಕಿನ ಸಂತೇಮರಹಳ್ಳಿಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸರ್ವೋದಯ ಸಾಮರಸ್ಯ ವೇದಿಕೆ ವತಿಯಿಂದ ನಡೆದ ಪ್ರಜಾಪ್ರಭುತ್ವ ಮತ್ತು ಸಾಮರಸ್ಯ ಸಮಾಜದಲ್ಲಿ ಯುವಕರ ಪಾತ್ರ ಕುರಿತ ಚಿಂತನ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.



ನಮ್ಮದು ಪ್ರಜಾಪ್ರಭುತ್ವ ರಾಷ್ಟ್ರ ಮಹಾನ್ ನಾಯಕರು ದೇಶಕ್ಕೆ ಸ್ವಾತಂತ್ರ್ಯ ಕೊಡಿಸಲು ತಮ್ಮ ಪ್ರಾಣವನ್ನೇ ಪಣಕಿಟ್ಟು ಹೋರಾಟ ಮಾಡಿ, ಬ್ರಿಟಿಷರ ಬಳಿ ಇದ್ದ ಅಧಿಕಾರವನ್ನು ಪಡೆದುಕೊಂಡರು. ನಂತರ ಡಾ.ಬಿ.ಆರ್. ಅಂಬೇಡ್ಕರ್ ಅವರು ವಿವಿಧತೆಯಲ್ಲಿ ಏಕತೆಯನ್ನು ಹೊಂದಿರುವ ಭಾರತಕ್ಕೆ ಅಭಿವೃದ್ಧಿ ಪರವಾದ ಎಲ್ಲಾ ವರ್ಗದವರು ಒಪ್ಪುವಂತಹ ಸಂವಿಧಾನವನ್ನು ಸಮರ್ಪಣೆ ಮಾಡಿದರು. ಇದರಲ್ಲಿ ದೇಶದ ಪ್ರತಿಯೊಬ್ಬ ನಾಗರೀಕನಿಗೂ ಹಕ್ಕು ಹಾಗು ಕರ್ತವ್ಯಗಳ ಬಗ್ಗೆ ಮನವರಿಕೆ ಮಾಡಿಕೊಟ್ಟರು. ದೇಶದ ಎಲ್ಲರಿಗೂ ಒಂದೇ ಓಟಿನ ಮಹತ್ವನ್ನು ನೀಡಿದರು. ಇದರ ಪರಿಣಾಮ ನಾವೆಲ್ಲರು ಇಂದು ಸ್ವಾಭಿಮಾನದಿಂದ ಬದುಕುವಂತೆ ಹಾಕಿದೆ ಎಂದರು.

ಇದೇ ಮಾದರಿಯಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಕಟ್ಟಿಕೊಂಡು ಸಾಮರಸ್ಯ ಮೂಡಿಸುವ ನಿಟ್ಟಿನಲ್ಲಿ ಯುವಕರ ಪಾತ್ರ ಬಹಳ ಮುಖ್ಯವಾಗಿದೆ. ದೇಶದ ಸಂಪತ್ತು ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು. ಶಿಕ್ಷಣ, ಆರೋಗ್ಯ, ಉದ್ಯೋಗ ಹಾಗೂ ಸಮಾನತೆ ಎಲ್ಲರ ಹಕ್ಕಾಗಬೇಕಾಗಿದೆ. ಈ ನಿಟ್ಟಿನಲ್ಲಿ ನಮ್ಮ ನಿರಂತರ ಪ್ರಯತ್ನ ಸಾಗಬೇಕು ಎಂದರು.

ಪ್ರಜಾಪ್ರಭುತ್ವದಲ್ಲಿ ಮತದಾರರೇ ನಾಯಕರು. ಹೀಗಾಗಿ ಎರಡು ಮತ್ತು ಮೂರನೇ ದರ್ಜೆ ನಾಯಕರನ್ನು ಹುಟ್ಟುಹಾಕಬೇಕು. ಒಳ್ಳೆಯ ನಾಯಕನ್ನು ಆಯ್ಕೆ ಮಾಡಿಕೊಳ್ಳುವುದು ನಿಮ್ಮ ಕರ್ತವ್ಯವಾಗಿದೆ. ಸಂವಿಧಾನ, ಪ್ರಜಾಪ್ರಭುತ್ವ ಬಗ್ಗೆ ನಂಬಿಕೆ ಮೂಡಿಸುವುದೇ ಸಾಮಾಜಿಕ ಸಾಮರಸ್ಯ ವೇದಿಕೆ ಉದ್ದೇಶ. ಬುದ್ದ, ಬಸವ ಅಂಬೇಡ್ಕರ್ ಸದಾ ಚಿರಸ್ಥಾಯಿಯಾಗಿರುತ್ತಾರೆ. ಮೊಘಲ್ ದೊರೆ ಆಡಳಿತ ಕಾಲದಲ್ಲಿ ಈ ಸಮಾಜದ ಪರ ಕಾಳಜಿ ಇರಲಿಲ್ಲ. ತದ ನಂತರ 250 ವರ್ಷಗಳ ಬ್ರಿಟಿಷರ ಆಡಳಿತ ನಡೆಸಿದರು ಯಾವುದೇ ಪ್ರಯೋಜನ ವಾಗಲಿಲ್ಲ ಎಂದರು.

12ನೇ ಶತಮಾನದಲ್ಲಿ ಬಸವಣ್ಣ ಆಶಯ ಹಾಗೂ ಬಾಬಾ ಸಾಹೇಬಸ್ ಅಂಬೇಡ್ಕರ್ ಅವರ ಸಂವಿಧಾನ ಚಿಂತನೆಗಳು ಒಂದೇ ಆಗಿವೆ. ಅಂದು ಬಸವಣ್ಣ ಸಾರಿದ ಅಖಿತ ಸಂದೇಶ ಹಾಗು ವಚನ ಸಂಪುಟಗಳಲ್ಲು, 15ನೇ ಶತಮಾನತದಲ್ಲಿ ಬಂದ ಪುರಂದಾಸರು, ದಾಸರ ಕೀರ್ತನೆಗಳು ಸಹ ಸಂವಿಧಾನ ಆಶಯಕ್ಕೆ ತಕ್ಕಂತೆ ಇದೆ. ಹೀಗಾಗಿ ಸಂವಿಧಾನದಲ್ಲಿ ಸಮಾನತೆ, ಸ್ವಾತಂತ್ರ, ಭ್ರಾತೃತ್ವ ಅಡಕವಾಗಿದೆ ಎಂದರು.

ದೇಶದ ಜನಸಂಖ್ಯೆಯಲ್ಲಿ ಶೇಕಡ 40 ರಷ್ಟು ಮಂದಿ ಯುವಕರಿದ್ದಾರೆ. ಹೀಗಾಗಿ ದೇಶದ ಸಂಪನ್ಮೂಲಗಳ ಹಂಚಿಕೆಯಾದರೆ, ಮತ್ತು ದೇಶದಲ್ಲಿರುವ 60 ಕೋಟಿ ಯುವಕರನ್ನು ಬಳಕೆ ಮಾಡಿಕೊಂಡು ಅಭಿವೃದ್ದಿಯತ್ತ ಸಾಗಿದರೆ, ನಮ್ಮ ಅಭಿವೃದ್ದಿ ಹೊಂದಿದ ರಾಷ್ಟಗಳ ಸಾಲಿನಲ್ಲಿ ನಿಲ್ಲಲಿದೆ ಎಂದರು. ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎನ್‌ರಿಚ್ ಮಹದೇವಸ್ವಾಮಿ ಮಾತನಾಡಿ, ಜಗಜ್ಯೋತಿ ಬಸವಣ್ಣ, ಅಂಬೇಡ್ಕರ್ ಮಹಿಳೆಯರ ಪರ ಮೊಟ್ಟಮೊದಲ ಪ್ರತಿಪಾದಕರು.ಅಂಬೇಡ್ಕರ್ ಅವರು ಸಂವಿಧಾನ ಬರೆಯದಿದ್ದರೆ ತುಂಬಾ ಸಮಸ್ಯೆ ಯಾಗುತ್ತಿತ್ತು. ದೇಶಕ್ಕೆ ಸ್ವಾತಂತ್ರ?ಯ ಬಂದು 76 ವರ್ಷಗಳು ಕರೆದಿದ್ದರೂ. ಮಹಿಳೆಯ ಸ್ಥಿತಿ ಸುಧಾರಣೆಯಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಗ್ರಾ.ಪಂ.ಮಾಜಿ ಅಧ್ಯಕ್ಷ ಶಂಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಾಜಿ ಛೇರ್ಮನ್ ದೇಮಹಳ್ಳಿ ಶಿವಮಲ್ಲಪ್ಪ, ಮುಖಂಡರಾದ ಜನ್ನೂರು ರೇವಣ್ಣ, ತಾ.ಪಂ. ಮಾಜಿ ಅಧ್ಯಕ್ಷ ಪುಟ್ಟರಾಜೇಗೌಡ, ತಾ.ಪಂ. ಉಪಾಧ್ಯಕ್ಷ ರವೀಶ್, ನಗರಸಭಾ ಮಾಜಿ ಸದಸ್ಯ ಬಸವರಾಜು, ಮುಖಂಡರಾದ ಬಾಗಳಿರೇವಣ್ಣ, ಬಸವನಪುರ ರಾಜಶೇಖರ್, ವಿ.ಶ್ರೀನಿವಾಸಪ್ರಸಾದ್, ಸಿ.ಎಂ.ಕೃಷ್ಣಮೂರ್ತಿ, ರಾಜು, ಬಸವರಾಜು, ಮಾಲಂಗಿ ಮೂರ್ತಿ, ತೊರಹಳ್ಳಿ ಕುಮಾರ್,ಕೋಳಿ ಬಸವರಾಜು ಮೊದಲಾಧವರು ಭಾಗವಹಿಸಿದ್ದರು.

# ಕಟ್ಟುಪಾಡುಗಳ ನಡುವೆ ವ್ಯಾಸಂಗ ಮಾಡಿದ ಸಾವಿತ್ರಿ ಬಾಪುಲೆ

**ಚಾಮರಾಜನಗರ:** ಸಾವಿತ್ರಿ ಬಾಪುಲೆ ಕುಟುಂಬದಲ್ಲಿ ಸಾಕಷ್ಟು ಕಟ್ಟುಪಾಡುಗಳು ಇತ್ತು. ಅವರನ್ನು ವ್ಯಾಸಂಗ ಮಾಡಲು ಸಮಾಜ ಬಿಡಲಿಲ್ಲ. ಓದಲು ಹೋಗುತ್ತಿದ್ದಾರೆ ಅಂದರೆ ಅವರನ್ನು ಅಡ್ಡ ಹಾಕಿ ತೊಂದರೆ ಕೊಡುತ್ತಿದ್ದರು. ಆದರೂ ಅವರು ಕಷ್ಟಪಟ್ಟು ಶಿಕ್ಷಣ ಪಡೆದು, ಸಮಾಜ ಸುಧಾರಕರಾದರು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್ ಬುಧವಾರ ತಿಳಿಸಿದರು.




ನಗರದ ಡಾ.ರಾಜಕುಮಾರ್ ರಂಗಮಂದಿರದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ವತಿಯಿಂದ ಕಲಿಕಾ ಬಲವರ್ಧನೆಗಾಗಿ ವಿದ್ಯಾರ್ಥಿ ಚಟುವಟಿಕಾ ಪುಸ್ತಕಗಳ ಕುರಿತು ಶೈಕ್ಷಣಿಕ ಕಾರ್ಯಾಗಾರ ಹಾಗೂ ಸಾವಿತ್ರಿ ಬಾಪುಲೆ ಜನ್ಮದಿನಾಚರಣೆ ಮತ್ತು ಸಾವಿತ್ರಿ ಬಾಪುಲೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು.

ಸಾವಿತ್ರಿ ಬಾಪುಲೆ ಅವರಿಗೆ ಯಾವುದರಲ್ಲೂ ಮುಂದೆ ಬರಲು ಅವಕಾಶಗಳು ಇರಲಿಲ್ಲ. ಆದರೆ, ಅವರ ಪತಿಯ ಸಂಪೂರ್ಣ ಸಹಕಾರ ಇತ್ತು. ಅವರು ಮಾಡಿರುವ ಕೆಲಸ ನೋಡಿ ಭಾರತ ಸರ್ಕಾರ ಅಂಚೆ ಚೀಟಿಗಳನ್ನು ಬಿಡುಗಡೆ ಮಾಡಿದೆ. ಅಲ್ಲದೆ ಅವರ ಹೆಸರಿನಲ್ಲಿ ವಿಶ್ವವಿದ್ಯಾಲಯ ಸ್ಥಾಪಿಸಲೂ ಮುಂದಾಗಿದೆ ಎಂದು ಹೇಳಿದರು.

ಸದ್ಯದಲ್ಲೇ ಚುನಾವಣೆ ನಡೆಯಲಿದೆ. ಶಿಕ್ಷಕರ ಜವಾಬ್ದಾರಿ ಹೆಚ್ಚಾಲಿದೆ. ಆದಷ್ಟೂ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಿ. ಸರ್ಕಾರಿ ಶಾಲೆ ಉಳಿಸುವ ಕೆಲಸ ಮಾಡಿ ಎಂದು ಅರಸ್ ಹೇಳಿದರು.

ಬೆಂಗಳೂರಿನ ಸಹಾಯಕ ಪ್ರಾಧ್ಯಾಪಕ ಪ್ರೊ. ಸುರೇಶ್ ಗೌತಮ್ ಮಾತನಾಡಿ, 170 ವರ್ಷಗಳ ಹಿಂದೆಯೇ ಸಾವಿತ್ರಿ ಬಾ ಫುಲೆ ತನ್ನ ಮಡಿಲಿನಲ್ಲಿ ಅಕ್ಷರವನ್ನು ಕಾಪಾಡಿಕೊಂಡು ಅಸ್ಪೃಶ್ಯರ ಕೇರಿಗಳಲ್ಲಿ ಅಕ್ಷರದ ಜ್ಯೋತಿಯನ್ನು ಬೆಳಗಿದರು ಎಂದರು.

ಚಾಮರಾಜನಗರ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ರಾಜೀವ್ ಮಾತನಾಡಿ, ಶಿಕ್ಷಕರು ಪೂರ್ವಾಗ್ರಹ ಬಿಟ್ಟು ಕೆಲಸ ಮಾಡಬೇಕು. ಚಟುವಟಿಕೆ ಪುಸ್ತಕದಲ್ಲಿರುವ ಮಾರ್ಗದಲ್ಲಿ ಸಾವಿರಾರು ಚಟುವಟಿಕೆಗಳನ್ನು ಮಕ್ಕಳಿಗೆ ಕೊಟ್ಟು ಕೌಶಲ ವೃದ್ದಿಸಲು ಪ್ರೇರಣೆ ನೀಡಬೇಕು. ಆಗ ಮಾತ್ರ ಉತ್ತಮ ಶಿಕ್ಷಕರಾಗಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ಸಾವಿತಿ ಬಾಪುಲೆ ಪ್ರಶಸ್ತಿ ಪ್ರಧಾನವನ್ನು ಕೃಷ್ಣಮೂರ್ತಿ, ಸಿ.ಮಲ್ಲಪ್ಪ, ಎಂ.ಶಿವರಾಜ್, ಎನ್.ಶಿವಶಂಕರ, ಡಿ.ಪುಷ್ಪರಾಜ್, ವಿಜಯಕುಮಾರಿ, ನಾಗರತ್ನ, ಎಸ್.ಉಮಾಮಹೇಶ್ವರಿ, ರಾಜೇಶ್ವರಿ, ಬಿ.ಮಂಜುಳ, ಫಹಿಮುನ್ನಿಸಾ ಅವರಿಗೆ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಯಟ್ ಪ್ರಾಂಶುಪಾಲ ಎಂ.ಕಾಶಿನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಣ್ಣೇಗೌಡ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಜಿಲ್ಲಾ ಅಧ್ಯಕ್ಷ ಕೆ.ಎಸ್.ಮಾದಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹದೇವಸ್ವಾಮಿ, ಮೈಸೂರು ವಿಭಾಗೀಯ ಉಪಾಧ್ಯಕ್ಷ ಲಾಲಿಂಗಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ಎನ್.ಸುಧಾ ಇದ್ದರು.

# ಕಣ್ಣಿನ ಆರೋಗ್ಯ ಉತ್ತಮವಾಗಿರಲು ಸಮಯಕ್ಕೆ ಸರಿಯಾಗಿ ಪರೀಕ್ಷೆ ಮಾಡಿಸಿಕೊಳ್ಳಿ

**ವಿಜಯಪುರ:** ಪ್ರತೀ ಜೀವಿಗೆ ಅಗತ್ಯವಾದ ಅಂಗಾಗ ಕಣ್ಣುಗಳಾಗಿದ್ದು, ಕಣ್ಣಿನ ಆರೋಗ್ಯ ಉತ್ತಮವಾಗಿರಬೇಕೆಂದರೆ ನಿಯಮಿತ ಪರೀಕ್ಷೆ ಮಾಡಿಸಿಕೊಳ್ಳುವುದು ಅಗತ್ಯ ಎಂದು ಪುರಸಭಾ ಅಧ್ಯಕ್ಷರಾದ ವಿಮಲ ಬಸವರಾಜ್ ತಿಳಿಸಿದರು.

ಪಟ್ಟಣದ ಪುರಸಭಾ ರೋಜಗಾರ ಕಛೇರಿ ಆವರಣದಲ್ಲಿ ಪುರಸಭೆ ಹಾಗೂ ದೃಷ್ಟಿ ಕಣ್ಣಿನ ಆಸ್ಪತ್ರೆ ವತಿಯಿಂದ ಪುರಸಭಾ ಸಿಬ್ಬಂದಿಗೆ ಏರ್ಪಡಿಸಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು, ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಸಣ್ಣ ಮಕ್ಕಳಲ್ಲಿಯೇ ದೃಷ್ಟಿ ಸಮಸ್ಯೆ ಕಾಡುತ್ತಿದೆ. ಇದರಿಂದ ಎಲ್ಲರೂ ಕಣ್ಣಿಗೊಂದು ಗ್ಲಾಸ್ ಹಾಕಿಕೊಳ್ಳುವ ಅನಿವಾರ್ಯತೆ ಎದುರಾಗಿದ್ದು, ಮಕ್ಕಳಿಗೆ ಪೋಷಕರು ಹೆಚ್ಚು ಮೊಬೈಲ್ ಹಾಗೂ ಟಿವಿ ನೋಡಲು ಅವಕಾಶ ನೀಡಬಾರದು ಎಂದರು. ದೃಷ್ಟಿ ಹಾಸ್ಪಿಟಲ್ ಮ್ಯಾನೇಜರ್ ಚಿಕ್ಕೇಗೌಡ ಮಾತನಾಡಿ, ಕಣ್ಣಿನ ಆರೋಗ್ಯಕ್ಕೆ ಬಹುಮುಖ್ಯವಾಗಿ ಬೇಕಾಗಿರುವುದು ಆರೋಗ್ಯಕರ ಕೊಬ್ಬಿನ ಅಂಶ, ಉತ್ತಮ ಪ್ರಮಾಣ ಪ್ರೋಟೀನ್‌ಯುಕ್ತ ಆಹಾರಗಳು ಅಗತ್ಯ. ಹಾಲು ಮತ್ತು ಹಾಲಿನ ಉತ್ಪನ್ನಗಳು ಕಣ್ಣು ಮಾತ್ರವಲ್ಲದೆ ದೇಹದ ಆರೋಗ್ಯವನ್ನು ಕಾಪಾಡುತ್ತವೆ. ಮಾಂಸಾಹಾರಿಗಳಾಗಿದ್ದರೆ ಸಂಸ್ಕರಿತ ಮಾಂಸಾಹಾರವನ್ನು ಸೇವಿಸದಿರುವುದು ಒಳ್ಳೆಯದು ಎಂದರು. ದೃಷ್ಟಿ ಕಣ್ಣಿನ ಆಸ್ಪತ್ರೆ ವೈದ್ಯರಾದ ಸಂಜಯ್ ಕುಮಾರ್ ಮಾತನಾಡಿ, ಪ್ರತಿಯೊಬ್ಬರು ಹೆಚ್ಚು ಹೊತ್ತು ಮೊಬೈಲ್, ಕಂಪ್ಯೂಟರ್ ನೋಡುವುದರಿಂದ ಕಣ್ಣಿಗೆ ದಣಿವಾಗುತ್ತದೆ. ಹೀಗಾಗಿ 20:20 ನಿಯಮ ಪಾಲಿಸುವುದು ಒಳ್ಳೆಯದು. ಅಂದರೆ ಪ್ರತಿ 20 ನಿಮಿಷಕ್ಕೊಮ್ಮೆ ಕನಿಷ್ಠ 5 ನಿಮಿಷವಾದರೂ ವಿಶ್ರಾಂತಿ ನೀಡಿ ಇದರಿಂದ ದೃಷ್ಟಿ ಸಮಸ್ಯೆ ಬರದಂತೆ ತಡೆಯಬಹುದಾಗಿದೆ ಎಂದರು. ಉಪಾಧ್ಯಕ್ಷ ಕೇಶವಪ್ಪ, ಕಂದಾಯ ಅಧಿಕಾರಿ ಚಂದ್ರು, ಕಂದಾಯ ನಿರೀಕ್ಷಕ ತ್ಯಾಗರಾಜ್, ಪರಿಸರ ಅಭಿಯಂತರ ಶೇಖರ್, ಪುರಸಭಾ ಸಿಬ್ಬಂದಿ ಲಿಂಗಣ್ಣ, ಅನಿಲ್, ಸುನಿಲ್, ಗೋಪಿಕೃಷ್ಣ, ಪವನ್ ಜೋಶಿ, ಮಂಜುನಾಥ್, ಮೇಸ್ತ್ರಿ ನಾಗರಾಜ್ ಹಾಗೂ ಪೌರಕಾರ್ಮಿಕರು, ದೃಷ್ಟಿ ಕಣ್ಣಿನ ಆಸ್ಪತ್ರೆ ವೈದ್ಯರಾದ ಮಧುಸುಧನ್, ಅನಿಕೇತನ್ ಹಾಜರಿದ್ದರು.



# ಬಾಲಕಿ ಅಪಹರಣ ಯತ್ನ; ಕೇರಳದ ನಾಲ್ವರು ವಶಕ್ಕೆ

**ಕೊಳ್ಳೇಗಾಲ:** ನಗರದಲ್ಲಿ ಮನೆ ಮನೆಗೆ ತೆರಳಿ ಕೂದಲು ಸಂಗ್ರಹಿಸುತ್ತಿದ್ದ 16 ವರ್ಷದ ಬಾಲಕಿಯನ್ನು ಮಂಗಳವಾರ ಸಂಜೆ ಅಪಹರಿಸಿ ಕಾರಿನಲ್ಲಿ ಕರೆದೊಯ್ಯುತ್ತಿದ್ದ ಕೇರಳದ ನಾಲ್ವರನ್ನು ನಗರ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮಲ್ಲಪ್ಪುರಂ ಜಿಲ್ಲೆಯ ಯಡಪಾಡ್ ಗ್ರಾಮದ ಇಸ್ಮಾಯಿಲ್, ಅಯೂಬ್, ಆಲಿ, ಉಮರ್ ಪೊಲೀಸ್ ವಶದಲ್ಲಿರುವವರು. ಮೈಸೂರು ಜಿಲ್ಲೆಯ ತಿ.ನರಸೀಪುರ ತಾಲ್ಲೂಕಿನ ಗ್ರಾಮವೊಂದರ ಬಾಲಕಿ ಹಾಗೂ ಕುಟುಂಬದ ಸದಸ್ಯರು ಕೂದಲು ಸಂಗ್ರಹ ಮತ್ತು ಮಾರಾಟಕ್ಕಾಗಿ ನಗರಕ್ಕೆ ಬಂದಿದ್ದರು. ಮಂಗಳವಾರ ಸಂಜೆ ನಗರದ ವಾಸವಿ ವಿದ್ಯಾ ಕೇಂದ್ರದ ಮುಂಭಾಗದಲ್ಲಿ ಬಾಲಕಿ ಕೂದಲು ಸಂಗ್ರಹಿಸುತ್ತಿದ್ದಳು. ಈ ವೇಳೆ ಕುಡಿತ ಮತ್ತಿನಲ್ಲಿದ್ದ ನಾಲ್ವರು, ಬಾಲಕಿಗೆ ಚಾಕೊಲೆಟ್ ನೀಡಿ ನಿನಗೆ ಊಟ ಕೊಡಿಸುತ್ತೇವೆ? ಎಂದು ಹೇಳಿ ಕಾರಿನಲ್ಲಿ ಕೂರಿಸಿಕೊಂಡು ತಾಲ್ಲೂಕಿನ ಮಧುವನ ಹಳ್ಳಿ ಗ್ರಾಮದಲ್ಲಿ ಹೋಗುತ್ತಿದ್ದರು. ಈ ಸಂದರ್ಭದಲ್ಲಿ ಕಾರು ಬೈಕ್ ಗೆ ಡಿಕ್ಕಿ ಹೊಡೆಯಿತು. ಗ್ರಾಮಸ್ಥರು ಕಾರನ್ನು ತಡೆದರು. ನಂತರ ಗ್ರಾಮಸ್ಥರು ಕಾರಿನಲ್ಲಿದ್ದವರನ್ನು ನೋಡಿದಾಗ ನಾಲ್ವರು ನಶೆಯಲ್ಲಿದ್ದರು. ಬಾಲಕಿಯ ಬಾಯಿಯನ್ನು ಮುಚ್ಚಿದ್ದರು. ಗ್ರಾಮಸ್ಥರನ್ನು ಕಂಡ ಬಾಲಕಿ ನನ್ನನ್ನು ಅಪಹರಣ ಮಾಡಿದ್ದಾರೆ ಎಂದು ಕಿರುಚಿಕೊಂಡು ಅಳಲು ಆರಂಭಿಸಿದಳು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ನಂತರ ಗ್ರಾಮಸ್ಥರು ನಾಲ್ವರಿಗೆ ಥಳಿಸಿ ಗ್ರಾಮದ ಅಂಬೇಡ್ಕರ್ ಭವನದ ಮುಂದೆ ಕೂರಿಸಿಕೊಂಡು ಪೊಲೀಸರಿಗೆ ಮಾಹಿತಿ ನೀಡಿದರು. ಸ್ಥಳಕ್ಕೆ ಬಂದ ಪೊಲೀಸರು ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ಮಾಡುತ್ತಿದ್ದಾರೆ. ಯಾವ ಉದ್ದೇಶಕ್ಕೆ ಆರೋಪಿಗಳು ಬಾಲಕಿಯನ್ನು ಅಪಹರಿಸಿದ್ದಾರೆ ಎಂಬುದು ತಕ್ಷಣಕ್ಕೆ ಗೊತ್ತಾಗಿಲ್ಲ. ಬಾಲಕಿಯನ್ನು ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗಿದೆ.

# ಪ್ರಚಾರಕ್ಕೆ ರಾಮಮಂದಿರ ಬಳಸಬೇಡಿ

**ಚನ್ನಪಟ್ಟಣ :** ರಾಮಮಂದಿರ ನಿರ್ಮಾಣ ಭಾರತೀಯರ ದೊಡ್ಡ ಆಸೆಯಾಗಿದೆ. ಒಬ್ಬರು ಒಂದು ಕಡೆ ರಾಮಮಂದಿರ ನಿರ್ಮಾಣ ಮಾಡಬೇಕು ಅಂತ. ಮತ್ತೊಬ್ಬರು ದೇಶದಲ್ಲೇಡೆ ರಾಮಮಂದಿರ ನಿರ್ಮಾಣ ಮಾಡಬೇಕು ಅಂತಾರೆ ಎಂದು ಸಂಸದ ಡಿ.ಕೆ.ಸುರೇಶ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದರೆ ಕೆಲವರು ಪ್ರಚಾರಕ್ಕೆ ಇದನ್ನು ಬಳಸಿಕೊಳ್ಳುತ್ತಾರೆ. ಅದರೆ, ಹಳ್ಳಿ ಹಳ್ಳಿಗಳಲ್ಲೂ ರಾಮಮಂದಿರ ಆಗಬೇಕು ಅನ್ನೋದು ನಮ್ಮ ಉದ್ದೇಶ. ರಾಮಮಂದಿರ ಉದ್ಘಾಟನೆಗೆ ನನಗೆ ಆಹ್ವಾನ ಬಂದಿಲ್ಲ. ಆಹ್ವಾನ ಬಂದ್ರೆ ನೋಡೋಣ ಎಂದರು.

ಪೊಲೀಸರು ಯಾರನ್ನು ಉದ್ದೇಶಪೂರ್ವಕವಾಗಿ ಬಂಧನ ಮಾಡಿಲ್ಲ. ಕೆಲ ದುರ್ಘಟನೆ ನಡೆಯಬಹುದು ಎಂಬ ಗುಮಾನಿ ಮೇಲೆ ಬಂಧನ ಮಾಡಲಾಗಿದೆ. ಇದು ಶಾಂತಿ ಸುವ್ಯವಸ್ಥೆ ದೃಷ್ಟಿಯಿಂದ ಮಾಡಿರುವ ಕ್ರಮ ಎಂದರು. ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ವಿಚಾರಕ್ಕೆ, ಈ ಬಗ್ಗೆ ನಮಗೆ ಮಾಹಿತಿ ಇಲ್ಲ, ನಾನು ಊರಿನಲ್ಲಿ ಇರಲಿಲ್ಲ, ಮಾಹಿತಿ ತಿಳಿದುಕೊಳ್ತೀನಿ ಎಂದರು.

ಗೋದ್ರಾ ಮಾದರಿ ದುರಂತ ಎಂಬ ಬಿ.ಕೆ.ಹರಿಪ್ರಸಾದ್ ಹೇಳಿಕೆ ವಿಚಾರಕ್ಕೆ, ಇವತ್ತು ಅಯೋಧ್ಯೆ ವಿವಾದಾತ್ಮಕ ಕ್ಷೇತ್ರ. ಸುಪ್ರೀಂ ಕೋರ್ಟ್ ತೀರ್ಪಿನ ಬಳಿಕ ಅಯೋಧ್ಯೆಯಲ್ಲಿ ಮಂದಿರ ನಿರ್ಮಾಣ ಆಗಿದೆ. ರಾಮಮಂದಿರಕ್ಕೂ ರಕ್ಷಣೆ ಬೇಕು, ಭಕ್ತರಿಗೂ ರಕ್ಷಣೆ ಕೊಡಬೇಕು. ಏನೇ ಇದ್ರೂ ರಕ್ಷಣೆ ಕೊಡುವುದು ಸರ್ಕಾರದ ಕರ್ತವ್ಯ. ಆ ದೃಷ್ಟಿಯಿಂದ ಹರಿಪ್ರಸಾದ್ ಅವರು ಹೇಳಿದ್ದಾರೆ ಎಂದರು.

## ನಾನು ರಾಮನನ್ನು ಪೂಜೆ ಮಾಡ್ತೀನಿ

**ನಾನೂ ಕೂಡಾ ರಾಮಭಕ್ತ, ನಾನು ರಾಮನನ್ನು ಪೂಜೆ ಮಾಡ್ತೀನಿ. ನಾನು ಎಲ್ಲ ದೇವರನ್ನು ಪೂಜಿಸುತ್ತೇನೆ ರಾಮನಗರದಲ್ಲಿ ರಾಮೋತ್ಸವವನ್ನ ನಡೆಸಬೇಕು ಎಂದು ಚಿಂತನೆ ಮಾಡಿದ್ದು, ಅದನ್ನ ಭಕ್ತಿ ಪೂರ್ವಕವಾಗಿ ಮಾಡೇ ಮಾಡುತ್ತೇವೆ ಎಂದು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ನಾನೂ ರಾಮನ ಭಕ್ತ, ಚಿಕ್ಕವಯಸ್ಸಿನಿಂದಲೇ ಎಲ್ಲ ದೇವರ ಪೂಜೆ ಮಾಡಿದ್ದೇನೆ. ಅಂತೆಯೇ ರಾಮನ ಪೂಜೆಯನ್ನೂ ಮಾಡ್ತೇನೆ. ರಾಮಮಂದಿರ ವಿಚಾರವನ್ನ ಯಾರೋ ರಾಜಕೀಯವಾಗಿ ಬಳಸಿಕೊಳ್ಳಬಹುದು. ಆದರೆ ನಾವು ಬಳಸಿಕೊಳ್ಳಲ್ಲ. ಲೋಕಸಭಾ ಚುನಾವಣೆ ದೃಷ್ಟಿಯಿಂದ ಮಾಡುತ್ತಿದ್ದಾರೋ ಇಲ್ವೋ ಗೊತ್ತಿಲ್ಲ. ನಾವು ರಾಮನನ್ನ ಮನೆ ದೇವರು ಅಂತ ಪೂಜೆ ಮಾಡುತ್ತೇವೆ. ಅವರಿಗೆ ರಾಮನ ಪೂಜೆ ಹೊಸದಿರಬಹುದು, ನಮಗೆ ಹೊಸದೇನಲ್ಲ ಎಂದು ತಿಳಿಸಿದರು.**

## ಪಶು ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೆ.ಮ.ನಾಗಭೂಷಣ್ ಸಲಹೆ

# ಜಾತ್ರೆಗಳಿಗೆ ಹೋಗುವಂತೆ ಕೃಷಿ ಮೇಳಕ್ಕೂ ಹೋಗಿ

ಹುಳಿಯಾರು: ರೈತರು ಸುತ್ತಳ್ಳಿಯಲ್ಲಿ ಯಾವುದೇ ಜಾತ್ರೆಯಾದರೂ ತಪ್ಪದೆ ಹೋಗುತ್ತಾರೆ. ಆದರೆ ತಮ್ಮ ಕಸುಬಿಗೆ ನೆರವಾಗುವ ಕೃಷಿ ಮೇಳಗಳಿಗೆ ಹೋಗುವುದಿಲ್ಲ. ವರ್ಷಕ್ಕೊಮ್ಮೆ ಧರ್ಮಸ್ಥಳ, ತಿರುಪತಿ, ಮಂತ್ರಾಲಯ ಹೋಗ್ತಾರೆ. ಆದರೆ ಪ್ರಗತಿಪರ ರೈತನ ತೋಟಕ್ಕೆ, ಮನೆಗೆ ಭೇಟಿ ನೀಡುವುದಿಲ್ಲ ಎಂದು ಚಿಕ್ಕನಾಯಕನಹಳ್ಳಿ ತಾಲೂಕು ಪಶು ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೆ.ಮ.ನಾಗಭೂಷಣ್ ತಿಳಿಸಿದರು.



ಹುಳಿಯಾರು ಹೋಬಳಿಯ ಸಿಂಗಾಪುರದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಸಿಂಗಾಪುರ ಹಾಲು ಉತ್ಪಾದಕರ ಸಹಕಾರ ಸಂಘ, ಯಳನಾಡು ಗ್ರಾಮ ಪಂಚಾಯ್ತಿ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಮತ್ತು ಬುಧವಾರ ನಡೆದ ಜಾನುವಾರು ಆರೋಗ್ಯ ತಪಾಸಣಾ ಮತ್ತು ಗ್ರಾಮ ವಾಸ್ತವ್ಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಜಾತ್ರೆಗೆಗಳಿಗೆ ಹೋಗುವಂತೆ ಕೃಷಿ ಮೇಳಕ್ಕೂ ಹೋಗಿ, ಪುಣ್ಯಕ್ಷೇತ್ರಗಳಿಗೆ ಹೋಗುವಂತೆ ಸಾಧಕ ರೈತನ ತೋಟಗಳಿಗೂ ಭೇಟಿ ನೀಡಿ ಲಾಭದಾಯಕವಾಗಿ ಕೃಷಿ ಮತ್ತು ಹೈನುಗಾರಿಗೆ ಮಾಡಿಕೊಳ್ಳಿ ಎಂದರು.

ಕುರಿಸಾಕಾಣಿಕೆಮಾಡುವವರಿಗೆಎನ್‌ಎಲ್‌ಎಂಎಂಬ ಯೋಜನೆ ವರದಾನವಾಗಿದೆ. 100 ಕುರಿ ಸಾಕುವವರಿಗೆ 10 ಲಕ್ಷ ರೂ. ಸಹಾಯಧನ ನೀಡಲಾಗುತ್ತದೆ. 5 ಲಕ್ಷ ರೂ. ಬ್ಯಾಂಕ್ ಸಾಲ, 5 ಲಕ್ಷ ರೂ. ಫಲಾನುಭವಿಗಳ ವಂತಿಗೆ ಇದೆ. ದಬ್ಬಗುಂಟೆಯಲ್ಲಿ ಹಿರೇಮಠ್ ಹಾಗೂ ಮುತುಗದಹಳ್ಳಿಯ ದೊಡ್ಡೀರಮ್ಮ ಎಂಬುವವರಿಬ್ಬರೂ 500 ಕುರಿ ಸಾಕಾಣಿಗೆ ಈ ಯೋಜನೆಯಿಂದ 50 ಲಕ್ಷ ರೂ. ಸಹಾಯಧನ ಪಡೆಯುತ್ತಿದ್ದಾರೆ. ಆಸಕ್ತರು ಈ ಯೋಜನೆ ಸದ್ಬಳಕೆ ಮಾಡಿಕೊಂಡು ಕುರಿ ಸಾಕುವಂತೆ ತಿಳಿಸಿದರು. ಯಳನಾಡು ಪಶು ಆಸ್ಪತ್ರೆಯ ವೈದ್ಯ ಡಾ.ಪ್ರಮೋದ್‌ಪಾಲ್ ಅವರು ಮಾತನಾಡಿ ಮನುಷ್ಯ ಆಹಾರ ತಿನ್ನುವಾಗ ಕ್ಲೀನ್ ಮಾಡಿಕೊಂಡು ತಿನ್ನುತ್ತಾನೆ. ಆದರೆ ದನಕರುಗಳಿಗೆ ಹೇಗಿರುತ್ತದೋ ಹಾಗೆ ಹಾಕುತ್ತಾರೆ. ಹಾಗಾಗಿ ದನಕರುಗಳಿಗೆ ಜಂತು ಹುಳುಗಳ ಬಾದೆ ಹೆಚ್ಚಾಗಿರುತ್ತದೆ. ಇದರಿಂದ ಬೆಳವಣಿಗೆ ಮತ್ತು ಹಾಲಿನ ಇಳುವರಿ ಕುಂಠಿತವಾಗುತ್ತದೆ. ಕರುಗಳಿಗೆ 6 ತಿಂಗಳವರೆವಿಗೆ 15 ದಿನಗಳಿಗೊಮ್ಮೆ, ನಂತರ ತಿಂಗಳಿಗೊಮ್ಮೆ ಜಂತು ನಾಶಕ ಔಷಧಿ ಹಾಕಬೇಕು. ಹಸುಗಳ ದೇಹ ತೂಕದ ಶೇ.10 ರಷ್ಟು ನಿತ್ಯ ಮೇವು ಹಾಕಬೇಕು. ಇದರಲ್ಲಿ ಹಸಿ ಮೇವು, ಒಣ ಮೇವು ಹಾಗೂ ಬೂಸ ಇರಬೇಕು. ಆದರೆ ಮುಸುರೆಗೆ ಬೂಸ ಹಾಕಿ ಇಡಬೇಡಿ. ವಾರಕ್ಕೊಮ್ಮೆಯಾದರೂ ಬೂಸಕ್ಕೆ ಸೋಡ, ಉಪ್ಪು, ಬೆಲ್ಲ ಹಾಕಿ ಕೊಡಿ ಎಂದು ತಿಳಿಸಿದರು.

ಸಿಂಗಾಪುರ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ದಯಾನಂದ್ ಅಧ್ಯಕ್ಷತೆ ವಹಿಸಿದ್ದರು. ಗ್ರಾಪಂ ಅಧ್ಯಕ್ಷೆ ನಂದಿನಿ ಕಾರ್ಯಕ್ರಮ ಉದ್ಘಾಟಿಸಿದರು. ಗ್ರಾಪಂ ಸದಸ್ಯ ಶಶಿಕಿರಣ್, ಪಶು ವೈದ್ಯರಾದ ಡಾ.ಮಂಜುನಾಥ್, ಡಾ.ಶಾಂತೇಶ್, ಹಿರಿಯ ಪಶು ವೈದ್ಯಕೀಯ ಪರೀಕ್ಷಕರಾದ ರವಿಶಂಕರ್, ಕೆ.ಪಿ.ಶಿವಕುಮಾರ್, ಕಂಬಯ್ಯ, ಕಿರಿಯ ಪಶು ವೈದ್ಯಕೀಯ ಪರೀಕ್ಷಕರಾದ ಕಿರಣ್‌ಕುಮಾರ್, ಎನ್.ದಿನೇಶ್, ಸಿಬ್ಬಂದಿಗಳಾದ ದಯಾನಂದ್, ಕುಮಾರಸ್ವಾಮಿ, ಅತಾಉಲ್ಲಾ, ಹಾಲಿನ ಡೇರಿಯ ಸಿದ್ಧರಾಮಣ್ಣ, ಉಚ್ಚೆಗೌಡ್ರು, ರಾಮಲಿಂಗೇಗೌಡ್ರು, ಕುಮಾರ್, ಮಹೇಶ್, ಗಂಗರಾಜು, ಶಿವಣ್ಣ, ದೇವಿರಮ್ಮ, ಶಿವಕುಮಾರ್, ಗ್ರಾಮಸ್ಥರಾದ ಮಹೇಶ್, ಕುಮಾರ್, ಯತೀಶ್, ಶಿಲ್ಪಾ, ನಾಗಣ್ಣ, ರಂಗಸ್ವಾಮಿ, ಕಾರ್ಯದರ್ಶಿ ಉಮೇಶ್, ಹಾಲು ಪರೀಕ್ಷಕ ಮಲ್ಲಯ್ಯ ಮತ್ತಿತರರು ಇದ್ದರು.

**ನೆಲಮಂಗಲ ತಾಲೂಕಿನ ಕೆಂಗನಹಳ್ಳಿಯ ಪ್ರಕಾಶ್ ಎಂಬ ಯುವಕ ತನ್ನ ಒಂದೇ ಹಸುವಿನಿಂದ 52 ಲೀ. ಹಾಲು ಕರೆದು ದಾಖಲೆ ಮಾಡಿದ್ದಾರೆ. ಹೀಗೆ ಹಾಲು ಕೊಡಲು ಆತ ಹಸುವನ್ನು ಹೇಗೆ ಸಾಕಿದ್ದಾನೆ ಎಂಬುದನ್ನು ತೋರಿಸಲು ಚಿಕ್ಕನಾಯಕನಹಳ್ಳಿಯಿಂದ ಮುಂದಿನ ವಾರ ಪ್ರವಾಸ ಹೋಗುತ್ತಿದ್ದು ಆಸಕ್ತರು ಪಶು ಇಲಾಖೆಯ ಅಧಿಕಾರಿಗಳ ಬಳಿ ತಮ್ಮ ಹೆಸರು ನೊಂದಾಯಿಸಿಕೊಳ್ಳಬಹುದು.**

**| ಡಾ.ರೆ.ಮ.ನಾಗಭೂಷಣ್**
ಸಹಾಯಕ ನಿರ್ದೇಶಕ, ಪಶು ಇಲಾಖೆ

# ಸಂಜೆ ಟಿಪ್ಸ್



## ಗ್ರಾಮೀಣ ಜನರಿಗೆ ವಿಮೆ ಸೌಲಭ್ಯ ಒದಗಿಸಲು ಒಪ್ಪಂದ

ಭಾರತದ ಅತ್ಯಂತ ವಿಶ್ವಾಸಾರ್ಹ ಜೀವ ವಿಮೆ ಕಂಪನಿಗಳಲ್ಲಿ ಒಂದಾಗಿರುವ ಎಸ್ಬಿಐ ಲೈಫ್ ಇನ್ಶುರೆನ್ಸ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಜೊತೆಗೆ ಧರ್ಮಸ್ಥಳದಲ್ಲಿ ಒಪ್ಪಂದಕ್ಕೆ ಸಹಿ ಹಾಕಿದೆ. ಹಣಕಾಸು ಸೇರ್ಪಡೆ ಬೆಂಬಲಿಸಲು, ಗ್ರಾಮೀಣ ಮಹಿಳೆಯರನ್ನು ಸಬಲೀಕರಣಗೊಳಿಸಲು ಮತ್ತು ಪಾಲುದಾರರ ಸಾಮಾಜಿಕ ಅಭಿವೃದ್ಧಿಗೆ ಗಮನ ಕೇಂದ್ರೀಕರಿಸಲು, ಕರ್ನಾಟಕ ಮತ್ತು ಕೇರಳದಲ್ಲಿನ ಸಾಮಾಜಿಕ-ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಜೀವ ವಿಮೆ ಸೌಲಭ್ಯಗಳನ್ನು ಸುಲಭವಾಗಿ ಒದಗಿಸಲಾಗುವುದು. ಎಸ್ಬಿಐ ಲೈಫ್ ಮತ್ತು ಎಸ್ಕೆಡಿಆರ್ಡಿಪಿ ಬಿಸಿ ಟ್ರಸ್ಟ್‌ಲ ನಡುವಣ ಈ ಸಹಯೋಗವು ಈ ಪ್ರದೇಶದಲ್ಲಿ ಹಣಕಾಸು ಸೇರ್ಪಡೆಯನ್ನು ಖಾತ್ರಿಪಡಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ಅರ್ಥಪೂರ್ಣ ವಿಮೆ ಸೌಲಭ್ಯಗಳ ಮೂಲಕ ಕರ್ನಾಟಕ ಮತ್ತು ಕೇರಳದ ಗ್ರಾಮೀಣ ಕುಟುಂಬಗಳ ಹಣಕಾಸು ಪರಿಸ್ಥಿತಿಯ ಸ್ಥಿರತೆಯನ್ನು ಬಲಪಡಿಸಲು ಎಸ್ಬಿಐ ಲೈಫ್, ಎಸ್ಕೆಡಿಆರ್ಡಿಪಿ ಬಿಸಿ ಟ್ರಸ್ಟ್‌ಲ ನ ಅತ್ಯಂತ ಮಹತ್ವದ ವಿಶಾಲ ಜಾಲವನ್ನು ಸದ್ಬಳಕೆ ಮಾಡಿಕೊಳ್ಳುವ ಗುರಿ ಹೊಂದಿದೆ. ಎಸ್ಬಿಐ ಲೈಫ್ನ ಬೆಂಗಳೂರು ಪ್ರಾದೇಶಿಕ ನಿರ್ದೇಶಕ ಅಶ್ವಿನಿ ಕುಮಾರ್ ಶುಕ್ಲಾ ಮತ್ತು ಎಸ್ಕೆಡಿಆರ್ಡಿಪಿ ಬಿ.ಸಿ ಟ್ರಸ್ಟ್‌ಲನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಲ್.ಎಚ್. ಮಂಜುನಾಥ್ ಅವರು ಒಪ್ಪಂದಕ್ಕೆ ಸಹಿ ಹಾಕಿದರು. ಎಸ್ಬಿಐ ಲೈಫ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಅಮಿತ್ ಜಿಂಗ್ರಾನ್, ಎಸ್ಕೆಡಿಆರ್ಡಿಪಿ ಅಧ್ಯಕ್ಷ ಡಾ. ಡಿ.ವೀರೇಂದ್ರ ಹೆಗ್ಗಡೆ, ಜ್ಞಾನವಿಕಾಸ ಕಾರ್ಯಕ್ರಮದ ಅಧ್ಯಕ್ಷೆ ಮಾತೃ ಶ್ರೀ ಹೇಮಾವತಿ ವಿ ಹೆಗ್ಗಡೆ, ಎಸ್ಡಿಎಂಇ ಸೊಸೈಟಿಯ ಯೋಜನಾ ನಿರ್ದೇಶಕ ಡಿ ಶ್ರೇಯಸ್ ಕುಮಾರ್ ಇದ್ದರು.

## ಬಟರ್ ನಾನ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

2 ಕಪ್ ಮೈದಾ, 1 ಚಮಚ ಸಕ್ಕರೆ, 1 ಚಮಚ ಬೇಕಿಂಗ್ ಪೌಡರ್, ಕಾಲು ಚಮಚ ಬೇಕಿಂಗ್ ಸೋಡಾ, ರುಚಿಗೆ ತಕ್ಕಷ್ಟು ಉಪ್ಪು, ಕಾಲು ಕಪ್ ತಾಜಾ ಮೊಸರು, 2 ಚಮಚ ಎಣ್ಣೆ, ಅಗತ್ಯಕ್ಕೆ ತಕ್ಕಷ್ಟು ಉಗುರು ಬೆಚ್ಚಗಿನ ನೀರು, 2 ಚಮಚ ಬೆಣ್ಣೆ, ಹೆಚ್ಚಿದ ಕೊತ್ತಂಬರಿ ಸೊಪ್ಪು.

### ಮಾಡುವ ವಿಧಾನ

ಒಂದು ಬೌಲ್ ನಲ್ಲಿ ಮೈದಾ, ಸಕ್ಕರೆ, ಬೇಕಿಂಗ್ ಪೌಡರ್, ಬೇಕಿಂಗ್ ಸೋಡಾ, ಉಪ್ಪು, ಮೊಸರು, ಎಣ್ಣೆ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಉಗುರು ಬೆಚ್ಚಗಿನ ನೀರು ಸೇರಿಸಿ ಮೃದುವಾದ ಚಪಾತಿ ಹಿಟ್ಟಿನ ಹದಕ್ಕೆ ಕಲೆಸಿಕೊಳ್ಳಿ. ಒದ್ದೆ ಬಟ್ಟೆಯನ್ನು ಮುಚ್ಚಿ 2 ಗಂಟೆ ಹಾಗೇ ಬಿಡಿ. ಒಂದು ಚಿಕ್ಕ ಬೌಲ್ ನಲ್ಲಿ ಬೆಣ್ಣೆ ಮತ್ತು ಕತ್ತರಿಸಿದ ಕೊತ್ತಂಬರಿ ಸೊಪ್ಪನ್ನು ಹಾಕಿ ಮಿಕ್ಸ್ ಮಾಡಿಟ್ಟುಕೊಳ್ಳಿ. 2 ಗಂಟೆಗಳ ಬಳಿಕ ಕಲಸಿಟ್ಟ ಹಿಟ್ಟನ್ನು ತೆಗೆದುಕೊಂಡು ಚೆನ್ನಾಗಿ ನಾದಿ. ಚೆಂಡಿನ ಗಾತ್ರದ ಉಂಡೆಗಳನ್ನು ಮಾಡಿಕೊಳ್ಳಿ. ಹುಡಿ ಹಿಟ್ಟನ್ನು ತೆಗೆದುಕೊಂಡು ನಿಮಗೆ ಬೇಕಾದ ಆಕಾರಕ್ಕೆ ಸ್ವಲ್ಪ ದಪ್ಪಗೆ ಲಟ್ಟಿಸಿ. ಲಟ್ಟಿಸಿದ ನಾನ್ ಮೇಲೆ ಸ್ವಲ್ಪ ನೀರು ಹಚ್ಚಿ ಕಾದ ತವಾ ಮೇಲೆ ಹಾಕಿ. ನಾನ್ ಹೊಂಬಣ್ಣಕ್ಕೆ ಬರುವವರೆಗೆ ಬೇಯಿಸಿ, ಬೆಣ್ಣೆ ಮತ್ತು ಕೊತ್ತಂಬರಿ ಸೊಪ್ಪಿನ ಮಿಶ್ರಣವನ್ನು ಹಾಕಿ ಅಲಂಕರಿಸಿ. ಹೋಮ್ ಮೇಡ್ ಬಟರ್ ನಾನ್ ಸವಿಯಲು ಸಿದ್ಧ.

## ಜಾಕ್ವೆಲಿನ್ ಫರ್ನಾಂಡಿಸ್, ಸುಕೇಶ್ ವಿಚಾರ ಮತ್ತೆ ಮುನ್ನಲೆಗೆ



ವಂಚನೆ ಆರೋಪದಲ್ಲಿ ಜೈಲು ಸೇರಿರುವ ಸುಖೇಶ್ ಚಂದ್ರಶೇಖರ್ ದೆಹಲಿಯ ಮಂಡೋಲಿ ಜೈಲಿನಲ್ಲಿದ್ದಾನೆ. ಜೈಲಿನೊಳಗಿದ್ದರೂ ಸುಖೇಶ್ ಚಂದ್ರಶೇಖರ್ ಸುದ್ದಿಯಲ್ಲಿರುತ್ತಾನೆ. ಯಾವಾಗ ಸುಕೇಶ್ ವಿಚಾರ ಬೆಳಕಿಗೆ ಬರುತ್ತದೆಯೋ ಆಗ ನಟಿ ಜಾಕ್ವೆಲಿನ್ ಫರ್ನಾಂಡೀಸ್ ಕೂಡಾ ಚರ್ಚೆಗೆ ಗ್ರಾಸವಾಗುತ್ತಾರೆ. ಸುಕೇಶ್ ಪದೇ ಪದೇ ಜಾಕ್ವೆಲಿನ್‌ಗೆ ಪತ್ರ ಬರೆಯುವ ಕಾರಣಕ್ಕೇ ಸುದ್ದಿಯಾಗುತ್ತಾನೆ. ಸುಕೇಶ್ ಕುಕೃತ್ಯದಲ್ಲಿ ಜಾಕ್ವೆಲಿನ್ ಕೂಡಾ ಶಾಮೀಲಾಗಿದ್ದಾರೆ ಎಂದು ಆರೋಪಿಸಿದಾಗ ನಟಿ ಈ ಆರೋಪವನ್ನು ಸಾರಾಸಗಟಾಗಿ ತಳ್ಳಿ ಹಾಕಿದ್ದರು. ಸುಕೇಶ್ ಸರ್ಕಾರಿ ಅಧಿಕಾರಿ ಎಂದಷ್ಟೇ ತಿಳಿದಿತ್ತು. ವಂಚನೆಯಲ್ಲಿ ತೊಡಗಿರುವುದು ತಿಳಿದಿರಲಿಲ್ಲ ಎನ್ನುವುದನ್ನು ಸ್ಪಷ್ಟಪಡಿಸಿದ್ದರು. ಸುಕೇಶ್ ಈಗ ಮತ್ತೊಮ್ಮೆ ಸುದ್ದಿಯಲ್ಲಿದ್ದಾನೆ. ಜಾಕ್ವೆಲಿನ್ ಹೆಸರಿನಲ್ಲಿ ಮತ್ತೊಂದು ಪತ್ರ ಬರೆದಿರುವುದೇ ಇದಕ್ಕೆ ಕಾರಣ. **ಚಾಟ್ 2021ರ ಉಲ್ಲೇಖ :** ಸುಕೇಶ್ ಜಾಕ್ವೆಲಿನ್ಗೆಪತ್ರ ಬರೆದು ಹೊಸ ವರ್ಷದ ಶುಭಾಶಯ ಕೋರಿದ್ದಾನೆ. ಆ ಪತ್ರದಲ್ಲಿ ಅವರು ಜಾಕ್ವೆಲಿನ್ ಜೊತೆಗಿನ ಚಾಟ್ ಅನ್ನು ಹಂಚಿಕೊಂಡಿದ್ದಾನೆ. 2021ರಲ್ಲಿ ಇವರಿಬ್ಬರ ನಡುವೆ ನಡೆದಿರುವ ಚಾಟ್ ಎನ್ನುವುದನ್ನು ಸುಕೇಶ್ ಹೇಳಿದ್ದಾನೆ. ಜಾಕ್ವೆಲಿನ್ ತನಗೆ ಐ ಲವ್ ಯೂ ಮೆಸೇಜ್ ಗಳನ್ನೂ ಕಳುಹಿಸಿದ್ದಳು ಎನ್ನುವುದನ್ನು ಸುಕೇಶ್ ಇಲ್ಲಿ ಹೇಳಿದ್ದಾನೆ. ಮಾತ್ರವಲ್ಲ ಜಾಕ್ವೆಲಿನ್ ತನ್ನ ಬಳಿ ಕ್ಷಮೆ ಕೂಡ ಕೇಳಿರುವುದಾಗಿ ಹೇಳಿದ್ದಾರೆ. ಇತ್ತೀಚೆಗಷ್ಟೇ ಜಾಕ್ವೆಲಿನ್ ಕೂಡಾ ಸುಕೇಶ್ ಪತ್ರಗಳಿಂದ ತನಗೆ ತೊಂದರೆಯಾಗಿದೆ ಎಂದು ದೆಹಲಿ ಪೊಲೀಸರಿಗೆ ದೂರು ನೀಡಿದ್ದರು. ಅಷ್ಟೇ ಅಲ್ಲ, ಸುಕೇಶ್ನಿಂದ ತನಗೆ ಅಪಾಯವಿದೆ ಎನ್ನುವುದನ್ನು ದೆಹಲಿ ಪೊಲೀಸರು ಹಾಗೂ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

**ಕ್ಷಮೆಯಾಚಿಸಿದ ಜಾಕ್ವೆಲಿನ್ :** ಈ ಚಾಟ್ ಗಳು ತನ್ನ ಕಕ್ಷಿದಾರಸುಕೇಶ್ ಮತ್ತು ಜಾಕ್ವೆಲಿನ್ನಡುವೆ ನಡೆದಿರುವಂಥದ್ದು. ಇಲ್ಲಿ ಜಾಕ್ವೆಲಿನ್ ಒಂದು ಕಡೆ ಐಡಿಡಿಥ್ ಹೇಳುತ್ತಿದ್ದರೆ ಇನ್ನೊಂದು ಕಡೆ I love you ಎಂದು ಹೇಳುತ್ತಾರೆ ಸುಕೇಶ್ ಪರ ವಕೀಲರು ಹೇಳಿದ್ದಾರೆ. ಈ ಚಾಟ್ಗಳು 2021 ರಲ್ಲಿ ಮನಿ ಲಾಂಡರಿಂಗ್ ಪ್ರಕರಣ ಬೆಳಕಿಗೆ ಬಂದಾಗಿನ ಸಂದರ್ಭದ್ದು ಎಂದು ವಕೀಲರು ಹೇಳಿದ್ದಾರೆ. ಇತ್ತೀಚೆಗೆ ಮತ್ತೊಂದು ಚಾಟ್ ವೈರಲ್ ಆಗಿದ್ದು, ಅದರಲ್ಲಿ ಜಾಕ್ವೆಲಿನ್ ಸುಕೇಶ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಜಾಕ್ವೆಲಿನ್ ಅನ್ನು ಸುಕೇಶ್ ಯಾವ ರೀತಿ ತನ್ನ ಬಲೆಗೆ ಬೀಳಿಸಿದ್ದಾರೆ ಎಂದು ಹೇಳುತ್ತಾರೆ. ಸುಕೇಶ್ನಿಂದ ತನ್ನ ಜೀವಕ್ಕೆ ಅಪಾಯವಿದೆ ಎಂಬುದು ಸತ್ಯ ಎಂದು ದೆಹಲಿ ಪೊಲೀಸರು ಮತ್ತು ನ್ಯಾಯಾಲಯಕ್ಕೆ ನೀಡಿದ ದೂರಿನಲ್ಲಿ ಜಾಕ್ವೆಲಿನ್ ಹೇಳಿದಾಗ, ಇಬ್ಬರ ನಡುವೆ ಆರೋಪಗಳ ಸರಣಿ ಪ್ರಾರಂಭವಾಯಿತು. ಇನ್ನು ಜಾಕ್ವೆಲಿನ್ ಆರೋಪದ ಬಗ್ಗೆ, ಉತ್ತರಿಸಿದ ಸುಕೇಶ್ ಎಲ್ಲಾ ರಹಸ್ಯಗಳನ್ನು ಬಹಿರಂಗಪಡಿಸುವುದಾಗಿ ಹೇಳಿದ್ದಾರೆ. ಅಷ್ಟೇ ಅಲ್ಲ, ಜಾಕ್ವೆಲಿನ್ನ ಸತ್ಯವನ್ನು ಹೊರತರುವ ಎಲ್ಲಾ ಪುರಾವೆಗಳು ಇವೆ ಎಂದು ಹೇಳಿದ್ದಾರೆ.



## ಕಿವಿನೋವಿಗೆ ಮನೆಮದ್ದು



### ಹೆಲ್ತ್ ಟಿಪ್ಸ್

ಚಳಿಗಾಲದಲ್ಲಿ ಶೀತ, ಕೆಮ್ಮಿನ ಜೊತೆಗೆ ನಮ್ಮನ್ನು ಕಾಡುವ ಅತಿದೊಡ್ಡ ಸಮಸ್ಯೆ ಎಂದರೆ ಕಿವಿನೋವು. ಇದು ಸಹಿಸಲಸಾಧ್ಯವಾದ ಸಮಸ್ಯೆಗಳಲ್ಲೊಂದು. ಕಿವಿನೋವು ಒಮ್ಮೆ ಪ್ರಾರಂಭವಾಯಿತೆಂದರೆ ನಮ್ಮನ್ನು ಹಿಂಡಿ ಹಿಪ್ಪೆ ಮಾಡಿಬಿಡುತ್ತದೆ. ಕಿವಿ ನೋವು ಶುರುವಾದ ತಕ್ಷಣ ವೈದ್ಯರ ಬಳಿ ಓಡುವ ಬದಲು ಕೆಲವೊಂದು ಮನೆಮದ್ದುಗಳನ್ನು ಪ್ರಯತ್ನಿಸಿ.

ಕಿವಿಯಲ್ಲಿ ಕೊಳಕು ಸೇರಿಕೊಂಡಾಗ ಕೂಡ ನೋವು ಕಾಣಿಸಿಕೊಳ್ಳುತ್ತದೆ. ಇದನ್ನು ನಿವಾರಿಸಲು ಕಿವಿಗೆ ಒಂದೆರಡು ಹನಿ ಸಾಸಿವೆ ಎಣ್ಣೆಯನ್ನು ಹಾಕಿ. ಕಿವಿಗಳಲ್ಲಿ ಸಂಗ್ರಹವಾಗಿರುವ ಕೊಳೆಯನ್ನು ನಿವಾರಿಸಲು ಸಾಸಿವೆ ಎಣ್ಣೆಗೆ ಬೆಳ್ಳುಳ್ಳಿಯನ್ನು ಹಾಕಿ ಅದನ್ನು ಬಿಸಿ ಮಾಡಬೇಕು. ಅದು ಕೊಂಚ ತಣ್ಣಗಾದ ಬಳಿಕ ಒಂದೆರಡು ಹನಿಗಳನ್ನು ಕಿವಿಗೆ ಹಾಕಿ. ಇದು ಕೂಡ ಕಿವಿನೋವನ್ನು ನಿವಾರಿಸುತ್ತದೆ.

ಕಿವಿ ನೋವನ್ನು ಹೋಗಲಾಡಿಸಲು ಉಪ್ಪನ್ನು ಕೂಡ ಬಳಸಬಹುದು. ಕಲ್ಲುಪ್ಪನ್ನು ಬಿಸಿ ಮಾಡಿ ಅದನ್ನು ಹತ್ತಿಬಟ್ಟೆಯಲ್ಲಿ ಹಾಕಿ ಉಂಡೆಯಂತೆ ಕಟ್ಟಿಕೊಳ್ಳಿ. ಅದರಿಂದ ಕಿವಿಯ ಅಕ್ಕಪಕ್ಕದಲ್ಲಿ ಶಾಖ ಕೊಡುವುದರಿಂದ ನೋವು ತಕ್ಷಣವೇ ಮಾಯವಾಗುತ್ತದೆ. ಕಿವಿಯ ಊತವೂ ಕಡಿಮೆಯಾಗುತ್ತದೆ. ತುಳಸಿ ರಸವು ಅನೇಕ ರೋಗಗಳನ್ನು ಗುಣಪಡಿಸುವಲ್ಲಿ ಬಹಳ ಪ್ರಯೋಜನಕಾರಿಯಾಗಿದೆ. ಕಿವಿ ನೋವು ಕಾಣಿಸಿಕೊಂಡರೆ ತುಳಸಿ ಎಲೆಯ ರಸವನ್ನು ತೆಗೆದು ಅದನ್ನು ಸೋಸಿ ಕಿವಿಗೆ ಹಾಕಿ. ಇದರಿಂದ ನೋವು ಕಡಿಮೆಯಾಗುತ್ತದೆ.

ಈರುಳ್ಳಿ ರಸ ಕೂಡ ಕಿವಿ ನೋವು ಮತ್ತು ಕೀವುಗಳನ್ನು ಕಡಿಮೆ ಮಾಡುತ್ತದೆ. ಈರುಳ್ಳಿ ರಸವನ್ನು ತೆಗೆದು ಅದನ್ನು ಸೋಸಿಕೊಂಡು ದಿನಕ್ಕೆ 3 ಬಾರಿ ಕಿವಿಗೆ ಹಾಕಿ, ಈ ರೀತಿ ಮಾಡುವುದರಿಂದ ಕಿವಿ ನೋವು ನಿವಾರಣೆಯಾಗುತ್ತದೆ.

## ಮಕ್ಕಳು ಮತ್ತು ವಿಕಲಾಂಗ ಯುವಕರಿಗೆ ರಸಪ್ರಶ್ನೆ




ಕ್ವಿಜೇಬಲ್ಡ್ ಎಂಬುದು ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಸಾಧನಾ-ಸಾಧ್ಯತೆಗಳನ್ನು ಪ್ರದರ್ಶಿಸಲು ಅನುವು ಮಾಡಿಕೊಡುವಂತಹ ಜ್ಞಾನ-ವೇದಿಕೆಯನ್ನು ಅವರಿಗೆ ನೀಡುವ ಅನನ್ಯಕಾರ್ಯಕ್ರಮವಿದು. ಸೇವಾ-ಇನ್-ಆಕ್ಷನ್ ಸಂಸ್ಥೆಯವರು ಇದರ ಪರಿಕಲ್ಪನೆಯನ್ನು 2016 ರಲ್ಲಿ ಮಾಡಿದ್ದು, ಅಂದಿನಿಂದ ಇದನ್ನು LTIMindtree (ಹಿಂದಿನ LTI) ಅವರ CSR ಉಪಕ್ರಮದಡಿಯಲ್ಲಿ ನಡೆಸಲ್ಪಡುತ್ತಿದೆ. ಇದು ಪ್ಯಾನ್ ಇಂಡಿಯಾ ರಸಪ್ರಶ್ನೆ ಸ್ಪರ್ಧೆಯಾಗಿದ್ದು, ಭಾರತದಾದ್ಯಂತ 10 ರಾಜ್ಯಗಳಲ್ಲಿ (ಕರ್ನಾಟಕ, ತಮಿಳುನಾಡು, ತೆಲಂಗಾಣ, ಆಂಧ್ರ ಪ್ರದೇಶ, ಕೇರಳ, ದೆಹಲಿ, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಒರಿಸ್ಸಾ ಮತ್ತು ಮಹಾರಾಷ್ಟ್ರದಲ್ಲಿ 600+ ವಿಶೇಷ ಚೇತನ ವಿದ್ಯಾರ್ಥಿಗಳು ಕ್ವಿಜೇಬಲ್ಡ್ ಪ್ಲಾಟ್ಫಾರ್ಮ್ ಮೂಲಕ ಸ್ಫೂರ್ತಿ ಪಡೆದಿದ್ದಾರೆ. ವೃತ್ತಿಪರ ಕ್ವಿಜ್ಮಾಸ್ಟರ್ಗಳು ರಸಪ್ರಶ್ನೆಯನ್ನು ಅತ್ಯಾಕರ್ಷಕವಾಗಿ ನಡೆಸಿಕೊಡುತ್ತಾರೆ. ಈ ವರ್ಷ ಕ್ವಿಜೇಬಲ್ಡ್ನ 9ನೇ ವರ್ಷವಾಗಿದ್ದು, ಇದು ಪ್ರಾರಂಭವಾದಾಗಿನಿಂದ ದೃಷ್ಟಿದೋಷ, ಶ್ರವಣ ದೋಷ, ಸೆರೆಬ್ರಲ್ ಪಾಲ್ಸಿ, ಬೌದ್ಧಿಕ ನ್ಯೂನ್ಯತೆ ಮತ್ತು ಆಟಿಸಂ ಸ್ಪೆಕ್ಟ್ರಮ್ ಡಿಸಾರ್ಡರ್ ಹೊಂದಿರುವ 600ಕ್ಕೂ ಹೆಚ್ಚು ಮಕ್ಕಳು ಮತ್ತು ವಯಸ್ಕರು ಭಾಗವಹಿಸುವ ಮೂಲಕ ಪ್ರೇರೇಪಿತಗೊಂಡಿರುತ್ತಾರೆ ಹಾಗೂ ಇಲ್ಲಿಯವರೆಗೂ 400 ಶಾಲೆಗಳನ್ನು ತಲುಪಲಾಗಿದೆ. ಕ್ವಿಜೇಬಲ್ಡ್ಭಾರತದಾದ್ಯಂತ 10 ರಾಜ್ಯಗಳನ್ನು ತಲುಪಿದೆ - ದಕ್ಷಿಣದಲ್ಲಿ- ಬೆಂಗಳೂರು ಕರ್ನಾಟಕ, ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ ಮತ್ತು ಕೇರಳ; ಉತ್ತರದಲ್ಲಿ- ದೆಹಲಿ ಮತ್ತು ಉತ್ತರ ಪ್ರದೇಶ; ಪೂರ್ವದಲ್ಲಿ- ಪಶ್ಚಿಮ ಬಂಗಾಳ ಮತ್ತು ಒರಿಸ್ಸಾ; ಹಾಗೂ ಪಶ್ಚಿಮದಲ್ಲಿ ಮುಂಬೈ ಮಹಾರಾಷ್ಟ್ರ. ವೃತ್ತಿಪರ ಕ್ವಿಜ್ಮಾಸ್ಟರ್ಗಳಿಂದ ರಸಪ್ರಶ್ನೆಯನ್ನು ಅತ್ಯಾಕರ್ಷಕವಾಗಿ ನಡೆಸಲ್ಪಡುತ್ತದೆ. ಈ ವರ್ಷದ ಕ್ವಿಜಬಲ್ಡ್ (9 ನೇ ಆವೃತ್ತಿ) ಯಲ್ಲಿ ಮೊದಲ ಬಾರಿಗೆ ರಾಷ್ಟ್ರೀಯ ಅಂತಿಮ ಪಂದ್ಯವನ್ನು ಪರಿಚಯಿಸಲಾಗುತ್ತಿದೆ.

10 ರಾಜ್ಯಗಳಿಂದ ಶ್ರವಣ ದೋಷ ಮತ್ತು ದೃಷ್ಟಿ ದೋಷ ಹೊಂದಿರುವ ವಿದ್ಯಾರ್ಥಿಗಳು ಅಂತಿಮ ಹಂತದಲ್ಲಿ ಭಾಗವಹಿಸಲಿದ್ದಾರೆ. ಈ ರಾಷ್ಟ್ರೀಯ ಅಂತಿಮ ಪಂದ್ಯವು ಭಾಷೆಗಳು ಮತ್ತು ಭೌಗೋಳಿಕ ಹಿನ್ನೆಲೆಗಳು ವೈವಿಧ್ಯತೆಯಿಂದ ಕೂಡಿರುವುದು ವಿಶೇಷವಾಗಿದೆ. 6 ಜನವರಿ 2024 ರಂದು ಬಸವನಗುಡಿಯ ಃಒಖ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯುವ ಮುಕ್ತಾಯ ಕಾರ್ಯಕ್ರಮಕ್ಕೆ ಂ. ನಾರಾಯಣಸ್ವಾಮಿ, ಸಚಿವರು, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ಭಾರತ ಸರ್ಕಾರ ಇವರು ಮುಖ್ಯ ಅತಿಥಿಗಳು ಮತ್ತು ಶ್ರೀ. ಪ್ರತ್ಯೂಷ್ ಕುಮಾರ್ ಪಾಂಡಾ, ಹೆಡ್-ESG LTIMindtree ಇವರು ಗೌರವ ಅತಿಥಿಯಾಗಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು ಇದರೊಂದಿಗೆ ಲಗತ್ತಿಸಿರುವ ಆಮಂತ್ರಣ ಮತ್ತು ಕರಪತ್ರವನ್ನು ನೋಡಿ. ಹೆಚ್ಚಿನ ಮಾಹಿತಿಗಾಗಿ www.quizabled.com ಗೆ ಲಾಗಿನ್ ಮಾಡಿ.

## ದಾಳಿಂಬೆ ಸಿಪ್ಪೆಯಲ್ಲಿದೆ ಸೌಂದರ್ಯ

### ಬ್ಯೂಟಿ ಟಿಪ್ಸ್



ದಾಳಿಂಬೆ ಹಣ್ಣು ಆರೋಗ್ಯಕ್ಕೆ ತುಂಬಾ ಉತ್ತಮ. ಇದು ಅಧಿಕ ಪೋಷಕಾಂಶಗಳನ್ನು ಒಳಗೊಂಡಿದೆ. ಇದರ ಸಿಪ್ಪೆಯನ್ನು ನಾವು ವೇಸ್ಟ್ ಎಂದು ಎಸೆಯುತ್ತೇವೆ. ಆದರೆ ಇದರಿಂದ ಕೆಲವು ಸೌಂದರ್ಯ ಸಮಸ್ಯೆಗಳನ್ನು ನಿವಾರಿಸಿಕೊಳ್ಳಬಹುದು.

ದಾಳಿಂಬೆ ಸಿಪ್ಪೆಯಲ್ಲಿ ಬ್ಯಾಕ್ಟೀರಿಯಾ ವಿರೋಧಿ ಗುಣಗಳಿವೆ: ಹಾಗಾಗಿ ಮುಖದಲ್ಲಿ ಮೊಡವೆಗಳು ಮತ್ತು ಗುಳ್ಳೆಗಳು ಮೂಡಿದ್ದರೆ ದಾಳಿಂಬೆ ಸಿಪ್ಪೆಯ ಪುಡಿಗೆ, ನಿಂಬೆ ರಸ ಅಥವಾ ರೋಸ್ ವಾಟರ್ ಮಿಕ್ಸ್ ಮಾಡಿ ಮುಖಕ್ಕೆ ಹಚ್ಚಿ. ಇದರಿಂದ ಮೊಡವೆಗಳು ನಿವಾರಣೆಯಾಗುತ್ತದೆ.

ದಾಳಿಂಬೆ ಸಿಪ್ಪೆಯ ಪುಡಿಯನ್ನು ಮುಖಕ್ಕೆ ನಿಯಮಿತವಾಗಿ ಬಳಸುತ್ತಾ ಬಂದರೆ ನಿಮ್ಮ ಸುಕ್ಕುಗಳನ್ನು ನಿವಾರಿಸುತ್ತದೆ.

ಇದು ತಲೆಹೊಟ್ಟು, ಕೂದಲು ಉದುರುವಿಕೆಯನ್ನು ನಿವಾರಿಸುತ್ತದೆ. ಎಣ್ಣೆಗೆ ದಾಳಿಂಬೆ ಸಿಪ್ಪೆಯ ಪುಡಿಯನ್ನು ಬೆರೆಸಿ ಕೂದಲಿಗೆ ಹಚ್ಚಿ ಮಸಾಜ್ ಮಾಡಿ. ಬಳಿಕ ಸ್ನಾನ ಮಾಡಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ವ್ಯವಹಾರದಲ್ಲಿ ಅನುಕೂಲ, ಅಧಿಕ ಧನ ಸಂಪಾದನೆ, ರಿಯಲ್ ಎಸ್ಟೇಟ್ ನವರಿಗೆ ಅನುಕೂಲ, ಅತಿಯಾದ ಕೋಪ ಸಂಕಟ.

**ವೃಷಭ:** ಧನ ನಷ್ಟ, ಅಪಮಾನಗಳಿಗೆ ಗುರಿ, ಸಾಲದ ಸುಳಿಗೆ ಸಿಲುಕುವಿರಿ.

**ಮಿಥುನ:** ಸಾಲದ ಚಿಂತೆ, ಸಹೋದ್ಯೋಗಿಗಳಿಂದ ಸಾಲಕ್ಕೆ ಮನವಿ, ಅನಾರೋಗ್ಯ ಸಮಸ್ಯೆ.

**ಕಟಕ:** ಮಕ್ಕಳಿಂದ ನಷ್ಟ, ನೆರೆಹೊರೆಯವರಿಂದ ಕಿರಿಕಿರಿ, ನಿದ್ರಾಭಂಗ, ಉದ್ಯೋಗನಿಮಿತ್ತ ದೂರ ಪ್ರಯಾಣ.

**ಸಿಂಹ:** ಧನಾಗಮನ ಮತ್ತು ಲಾಭ, ಕೆಲಸ ಕಾರ್ಯಗಳಲ್ಲಿ ಜಯ, ಆರ್ಥಿಕ ನಷ್ಟ ಮತ್ತು ಮೋಸ.

**ಕನ್ಯಾ:** ಆಸ್ಪತ್ರೆಗೆ ದಾಖಲಾಗುವ ಸಂದರ್ಭ, ಉದ್ಯೋಗ ಒತ್ತಡಗಳಿಂದ ನಿದ್ರಾಭಂಗ, ಸ್ನೇಹಿತರಿಂದ ತೊಂದರೆ, ದಾಂಪತ್ಯದಲ್ಲಿ ಬಿರುಕು.

**ತುಲಾ:** ಸಂಗಾತಿಯಿಂದ ಧನಾಗಮನ, ತಂದೆಯೊಡನೆ ಕಿರಿಕಿರಿ, ಅನಿರೀಕ್ಷಿತ ಘಟನೆಯಿಂದ ನಷ್ಟ.

**ವೃಶ್ಚಿಕ:** ಪ್ರಯಾಣದಿಂದ ಅನುಕೂಲ, ಆಕಸ್ಮಿಕ ಅಧಿಕ ಧನಾಗಮನ, ಆರೋಗ್ಯದಲ್ಲಿ ವ್ಯತ್ಯಾಸ.

**ಧನಸ್ಸು:** ಧಾರ್ಮಿಕ ಕ್ಷೇತ್ರದಲ್ಲಿರುವವರಿಗೆ ಅನುಕೂಲ, ಅಧಿಕ ನಷ್ಟ, ಉದ್ಯೋಗ ಸ್ಥಳದಲ್ಲಿ ಅಧಿಕ ಒತ್ತಡ, ಸಂಶಯ, ಅನಿರೀಕ್ಷಿತ ತಪ್ಪು.

**ಮಕರ:** ಪಿತ್ರಾರ್ಜಿತ ಆಸ್ತಿ ಮೇಲೆ ಸಾಲ, ಮಿತ್ರರಿಂದ ಆರ್ಥಿಕ ಸಹಾಯ, ಆರೋಗ್ಯದಲ್ಲಿ ವ್ಯತ್ಯಾಸ, ದಾಂಪತ್ಯದಲ್ಲಿ ಕಲಹ.

**ಕುಂಭ:** ಆರೋಗ್ಯದಲ್ಲಿ ಏರುಪೇರು, ಗಂಡು ಮಕ್ಕಳಿಂದ ಲಾಭ, ಶತ್ರುಗಳಿಂದ ತೊಂದರೆ, ಆಯುಷ್ಯಕ್ಕೆ ಕುತ್ತು.

**ಮೀನ:** ಸ್ಥಿರಾಸ್ತಿಯಿಂದ ಧನಾಗಮನ, ಆರ್ಥಿಕ ಸಂಕಷ್ಟಗಳು ಬಗೆಹರಿಯುವುದು, ಸೇವಾವೃತ್ತಿ ಉದ್ಯೋಗ ಪ್ರಾಪ್ತಿ, ಆರೋಗ್ಯ ಸಮಸ್ಯೆಗಳು ಬಾಧಿಸುವುದು.

## ರಾಷ್ಟ್ರೀಯ ಪಕ್ಷಿ ದಿನ




ಪಕ್ಷಿಗಳು ಯಾವಾಗಲೂ ನಮ್ಮ ಹೃದಯದಲ್ಲಿ ವಿಶೇಷ ಸ್ಥಾನವನ್ನು ಹೊಂದಿರುವ ಜೀವಿಗಳಾಗಿವೆ ಮತ್ತು ಈ ಸುಂದರ ಸೃಷ್ಟಿಗಳನ್ನು ಗೌರವಿಸಲು ಪ್ರತಿ ಜನವರಿ 5 ರಂದು ರಾಷ್ಟ್ರೀಯ ಪಕ್ಷಿ ದಿನವನ್ನು ಆಚರಿಸಲಾಗುತ್ತದೆ. ರಾಷ್ಟ್ರೀಯ ಪಕ್ಷಿ ದಿನವನ್ನು ಆಚರಿಸಲು ಮತ್ತೊಂದು ಕಾರಣವೆಂದರೆ, ಹೆಚ್ಚಿನ ಸಂಖ್ಯೆಯ ಪಕ್ಷಿಗಳು ನಿರ್ದಿಷ್ಟವಾಗಿ ಅಳಿವಿನಂಚಿನಲ್ಲಿವೆ ಎಂದು ಮಾನವರ ಗಮನಕ್ಕೆ ತರಲು. ಹೀಗಾಗಿ, ಮುಂಬರುವ ಈ ಅಪಾಯದ ಕಡೆಗೆ ಎಲ್ಲರ ಗಮನವನ್ನು ತರುವುದು ಮತ್ತು ಈ ಸಮಸ್ಯೆಯನ್ನು ನಿವಾರಿಸುವುದು ನಮ್ಮ ಕರ್ತವ್ಯ.

ಅಂತರರಾಷ್ಟ್ರೀಯ ವಲಸೆ ಹಕ್ಕಿ ದಿನವು ಪಶ್ಚಿಮ ಗೋಳಾರ್ಧದಾದ್ಯಂತ ವಲಸೆ ಹಕ್ಕಿಗಳು ಮತ್ತು ಅವುಗಳ ಆವಾಸಸ್ಥಾನಗಳನ್ನು ಸಂರಕ್ಷಿಸುವ ಬಗ್ಗೆ ಜಾಗೃತಿ ಮೂಡಿಸುವ ಒಂದು ಸಂರಕ್ಷಣಾ ಉಪಕ್ರಮವಾಗಿದೆ. ಈ ಕಾರ್ಯಕ್ರಮವು ಕೆನಡಾ, ಯುನೈಟೆಡ್ ಸ್ಟೇಟ್ಸ್, ಮೆಕ್ಸಿಕೋ, ಮಧ್ಯ ಮತ್ತು ದಕ್ಷಿಣ ಅಮೇರಿಕಾ ಮತ್ತು ಕೆರಿಬಿಯನ್ನಲ್ಲಿ ಅಂತರಾಷ್ಟ್ರೀಯ ಸಂರಕ್ಷಣಾ ಪ್ರಯತ್ನಗಳು ಮತ್ತು ಪರಿಸರ ಶಿಕ್ಷಣಕ್ಕೆ ಸಮರ್ಪಿಸಲಾಗಿದೆ. ಸ್ಮಿತ್ಸೋನಿಯನ್ ವಲಸೆ ಹಕ್ಕಿ ಕೇಂದ್ರದಿಂದ ಹುಟ್ಟಿಕೊಂಡಿದೆ, ಇದು ಈಗ ಅಮೆರಿಕದ ಪರಿಸರದಿಂದ ಸಂಯೋಜಿಸಲ್ಪಟ್ಟಿದೆ. ರಾಷ್ಟ್ರೀಯ ಪಕ್ಷಿ ದಿನದಂದು ದೇಶದ ಪರಮೋಚ್ಚ ಪಕ್ಷಿ ತಜ್ಞ ಡಾ. ಸಲೀಂ ಅಲಿ ಅವರನ್ನು ದೇಶದಾದ್ಯಂತ ಸ್ಮರಿಸಲಾಗುತ್ತಿದೆ. ಅವರ ಜನ್ಮ ದಿನವನ್ನು ಪಕ್ಷಿ ದಿನವನ್ನಾಗಿ ಆಚರಿಸಲಾಗುತ್ತದೆ. ಡಾ. ಸಲೀಂ ಅವರನ್ನು ಬೆಂಗಳೂರಿನ ಜ್ಞಾನಭಾರತಿ ಪಕ್ಷಿ ತಜ್ಞರು ಸದಾ ಸ್ಮರಿಸುತ್ತಲೇ ಇರುತ್ತಾರೆ. ಜ್ಞಾನಭಾರತಿ ಆವರಣದ ಜೀವ ವೈವಿಧ್ಯ ವನ ಹಲವು ಪಕ್ಷಿಗಳಿಗೆ ಆಸರೆಯಾಗಿದೆ. ಪಕ್ಷಿ ಪ್ರಿಯರು ಇಲ್ಲಿ ಬಂದು ಪಕ್ಷಿ ವೀಕ್ಷಣೆಯಲ್ಲಿ ತೊಡಗುತ್ತಾರೆ. ಪಕ್ಷಿಗಳ ಫೋಟೋ ಕ್ಲಿಕ್ಕಿಸುತ್ತಾರೆ. ಅವರು ಕಾಣುವ ವಿಶೇಷಣಗಳನ್ನು ದಾಖಲಿಸುತ್ತಾರೆ. ಶಾಲ ಕಾಲೇಜುಗಳಿಂದ ವಿದ್ಯಾರ್ಥಿಗಳು ಬಂದು ವನಸಿರಿ ಯನ್ನು ಕಣ್ತುಂಬಿಕೊಂಡು ಹೋಗುತ್ತಾರೆ. ಕಲಿಯುತ್ತಾರೆ. ಕಲಿಸುತ್ತಾರೆ. ಈಗಾಗಲೇ ಸುಮಾರು ಇಪ್ಪತ್ತೈದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿಗೆ ಬಂದು ಹೋಗಿರುವುದನ್ನು ಸ್ಮರಿಸಬಹುದು.

ಆರೋಗ್ಯಕರ ಪಕ್ಷಿ ಜನಸಂಖ್ಯೆಯನ್ನು ಕಾಪಾಡಿಕೊಳ್ಳಲು ಮತ್ತು ಸಂತಾನವೃದ್ಧಿ, ಸಂತಾನವೃದ್ಧಿ ಮಾಡದಿರುವಿಕೆ ಮತ್ತು ವಲಸೆ ಹಕ್ಕಿಗಳು ಬಳಸುವ ಆವಾಸಸ್ಥಾನಗಳನ್ನು ರಕ್ಷಿಸುವ ಬಗ್ಗೆ ಕಾಳಜಿ ವಹಿಸಲು ಸಾರ್ವಜನಿಕರನ್ನು ತೊಡಗಿಸುತ್ತದೆ. ಅಂತರರಾಷ್ಟ್ರೀಯ ವಲಸೆ ಹಕ್ಕಿ ದಿನದ ಕಾರ್ಯಕ್ರಮಗಳು ಸಾಮಾನ್ಯವಾಗಿ ಅನೌಪಚಾರಿಕ ವಿಜ್ಞಾನ ಶಿಕ್ಷಣ ಅಥವಾ ಪಕ್ಷಿ ನಡಿಗೆಗಳು, ಕಲಾ ಸ್ಪರ್ಧೆಗಳು, ಪ್ರಕೃತಿ ಆಧಾರಿತ ಉತ್ಸವಗಳು ಮತ್ತು ಪ್ರಸ್ತುತಿಗಳಂತಹ ಅನೌಪಚಾರಿಕ ವಿಜ್ಞಾನ ಕಲಿಕೆಯ ಚಟುವಟಿಕೆಗಳಾಗಿವೆ.

# ಸಾರ್ವತ್ರಿಕ ಚುನಾವಣೆ: ಬಾಂಗ್ಲಾದಲ್ಲಿ ಸೇನೆ ನಿಯೋಜನೆ



**ಢಾಕ:** ಜನವರಿ 7ರಂದು ನಡೆಯಲಿರುವ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ಬಾಂಗ್ಲಾದೇಶದಲ್ಲಿ ಸೇನೆಯನ್ನು ನಿಯೋಜಿಸಲಾಗಿದೆ. ವಿಪಕ್ಷಗಳ ಬಹಿಷ್ಕಾರದ ನಡುವೆ ನಡೆಯಲಿರುವ ಸಾರ್ವತ್ರಿಕ ಚುನಾವಣೆಯ ಭದ್ರತಾ ವ್ಯವಸ್ಥೆಯನ್ನು ಬುಧವಾರದಿಂದ ಸೇನೆಗೆ ವಹಿಸಲಾಗಿದೆ ಎಂದು ವರದಿಯಾಗಿದೆ. ಪ್ರಧಾನಿ ಶೇಖ್ ಹಸೀನಾ ರಾಜೀನಾಮೆ ನೀಡಿ ಉಸ್ತುವಾರಿ ಸರಕಾರದ ನೇತೃತ್ವದಲ್ಲಿ ಚುನಾವಣೆ ನಡೆಯಬೇಕು ಎಂದು ನ್ಯಾಷನಲಿಸ್ಟ್ ಪಾರ್ಟಿ(ಬಿಎನ್ಪಿ) ಸೇರಿದಂತೆ ಪ್ರಮುಖ ವಿಪಕ್ಷಗಳ ಆಗ್ರಹವನ್ನು ಸರಕಾರ ತಿರಸ್ಕರಿಸಿದ ಹಿನ್ನೆಲೆಯಲ್ಲಿ ವಿಪಕ್ಷಗಳು ಚುನಾವಣೆಯನ್ನು ಬಹಿಷ್ಕರಿಸಿರುವುದರಿಂದ ಪ್ರಧಾನಿ ಹಸೀನಾರ ಗೆಲುವು ಸುಲಭ ಎಂದು ನಿರೀಕ್ಷಿಸಲಾಗಿದೆ. ಬಾಂಗ್ಲಾದಲ್ಲಿ ಸುಮಾರು 170 ದಶಲಕ್ಷ ಮತದಾರರು ಮತದಾನದ ಹಕ್ಕನ್ನು ಹೊಂದಿದ್ದಾರೆ. ಮತದಾನಕ್ಕೂ ಮುನ್ನ ಕಾನೂನು ಸುವ್ಯವಸ್ಥೆಯನ್ನು ಖಾತರಿಪಡಿಸಲು ಜನವರಿ 3ರಿಂದ 10ರವರೆಗೆ ದೇಶದಾದ್ಯಂತ ಸೇನೆಯನ್ನು ನಿಯೋಜಿಸಲಾಗಿದೆ. 62 ಜಿಲ್ಲೆಗಳಲ್ಲಿ ಸೇನಾ ತುಕಡಿ, ಸುಮಾರು 100 ಉಪ ಜಿಲ್ಲೆಗಳಲ್ಲಿ ಅರೆಸೇನಾ ಪಡೆ ಭದ್ರತೆಯ ಹೊಣೆಯನ್ನು ನಿರ್ವಹಿಸಲಿದೆ. ತುರ್ತು ಸಂದರ್ಭದಲ್ಲಿ ನೆರವಿಗೆ ಹಲವಾರು ಹೆಲಿಕಾಪ್ಟರ್ಗಳನ್ನು ಸಜ್ಜುಗೊಳಿಸಲಾಗಿದೆ ಎಂದು ಸರಕಾರದ ಹೇಳಿಕೆ ತಿಳಿಸಿದೆ.

# ವಿದ್ಯುತ್ ಆಮದು: ಭಾರತ-ನೇಪಾಳ ಒಪ್ಪಂದ



**ನವದೆಹಲಿ:** ಮುಂದಿನ 10 ವರ್ಷಗಳಲ್ಲಿ ಭಾರತಕ್ಕೆ 10,000 ಮೆಗಾವ್ಯಾಟ್ ಜಲವಿದ್ಯುತ್ ಅನ್ನು ರಫ್ತು ಮಾಡಲು ನೇಪಾಳ ಮತ್ತು ಭಾರತವು ಗುರುವಾರ ವಿದ್ಯುತ್ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೇಪಾಳದಲ್ಲಿನ ನದಿಗಳಿಂದ ವಾರ್ಷಿಕ 42 ಸಾವಿರ ಮೆಗಾವಾಟ್ ಜಲವಿದ್ಯುತ್ ಉತ್ಪಾದಿಸುವ ಸಾಮರ್ಥ್ಯವಿದೆ.

ಆದರೆ, ತಾಂತ್ರಿಕತೆ ನೆರವು, ಹಣಕಾಸು ಸಂಪನ್ಮೂಲ ಕೊರತೆಯಿಂದ ಇದು ಸಾಧ್ಯವಾಗಿಲ್ಲ. ಪ್ರಸ್ತುತ ವಾರ್ಷಿಕ 3000 ಮೆಗಾವಾಟ್ ಉತ್ಪಾದನೆಯಾಗುತ್ತಿದೆ.

ಪ್ರಸ್ತುತ ನೇಪಾಳದ ಜೊತೆಗೆ ಅಲ್ಪಾವಧಿಯ ವಿದ್ಯುತ್ ಖರೀದಿ ಒಡಂಬಡಿಕೆ ಹೊಂದಿರುವ ಭಾರತ, ನೇಪಾಳದಲ್ಲಿ ಜಲವಿದ್ಯುತ್ ಸ್ಥಾವರಗಳ ಸ್ಥಾಪನೆಗೆ ಕೋಟ್ಯಂತರ ರೂ. ಹೂಡಿಕೆ ಮಾಡುತ್ತಿದೆ. ನೆರೆ ರಾಷ್ಟ್ರದಲ್ಲಿ ತನ್ನ ಪ್ರಭಾವ ಉತ್ತಮಪಡಿಸಿಕೊಳ್ಳುವ ಉದ್ದೇಶವು ಇದೆ. ನೆರೆ ರಾಷ್ಟ್ರ ಚೀನಾ ಗಡಿಯಲ್ಲಿ ಹೆಚ್ಚು ಸಕ್ರಿಯವಾಗಿರುವ ಹಿನ್ನೆಲೆ ಈ ಒಡಂಬಡಿಕೆ ಮಹತ್ವದ್ದಾಗಿದೆ. ಪ್ರಧಾನಿ ನರೇಂದ್ರ ಮೋದಿ, ನೇಪಾಳದ ಪ್ರಧಾನಿ ಪುಷ್ಪಕಮಲ್ ದಾಹಲ್ ಅವರು ವಿದ್ಯುತ್ ಕ್ಷೇತ್ರದಲ್ಲಿ ದೀರ್ಘಾವಧಿ ಒಪ್ಪಂದ ಹೊಂದಲು ಕಳೆದ ವರ್ಷ ಸಮ್ಮತಿಸಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿದ ನೇಪಾಳದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ಪ್ರೇಮ್ ರೈ , ಗುರುವಾರ ಕಠ್ಮಂಡುವಿನಲ್ಲಿ ನಡೆದ ನೇಪಾಳ-ಭಾರತ ಜಂಟಿ ಆಯೋಗದ ಸಭೆಯಲ್ಲಿ ಔಪಚಾರಿಕವಾದ ನಾಲ್ಕು ಒಪ್ಪಂದಗಳಲ್ಲಿ ಹೊಸ ಒಪ್ಪಂದವೂ ಒಂದಾಗಿದೆ ಎಂದು ಹೇಳಿದರು.

## CBSE10, 12ನೇ ತರಗತಿ ಪರೀಕ್ಷೆಗೆ ಪರಿಷ್ಕೃತ ವೇಳಾಪಟ್ಟಿ' ಪ್ರಕಟ

**ನವದೆಹಲಿ:** ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್ 2024 ರ ಪರಿಷ್ಕೃತ ಸಿಬಿಎಸ್ಇ ಬೋರ್ಡ್ ಪರೀಕ್ಷೆಯ ವೇಳಾಪಟ್ಟಿಯನ್ನ ಬಿಡುಗಡೆ ಮಾಡಿದೆ. 10 ಮತ್ತು 12 ನೇ ತರಗತಿಯ ಪರಿಷ್ಕೃತ ವೇಳಾಪಟ್ಟಿಯನ್ನು ಅಭ್ಯರ್ಥಿಗಳು ಸಿಬಿಎಸ್ಇ ಅಧಿಕೃತ ವೆಬ್ಸೈಟ್ನಲ್ಲಿ cbse.gov.in ನಲ್ಲಿ ಪರಿಶೀಲಿಸಬಹುದು. ಪರಿಷ್ಕೃತ ವೇಳಾಪಟ್ಟಿಯ ಪ್ರಕಾರ, ಕೆಲವು ಪತ್ರಿಕೆಗಳ ಪರೀಕ್ಷಾ ದಿನಾಂಕಗಳಲ್ಲಿ ಕೆಲವು ಬದಲಾವಣೆಗಳನ್ನ ಮಾಡಲಾಗಿದೆ. ಮಾರ್ಚ್ 4, 2024 ರಂದು ನಡೆಯಬೇಕಿದ್ದ 1 ನೇ ತರಗತಿ ಟಿಬೆಟಿಯನ್ ಪತ್ರಿಕೆಯನ್ನ ಬದಲಾಯಿಸಲಾಗಿದೆ ಮತ್ತು ಈಗ ಫೆಬ್ರವರಿ 23, 2024ರಂದು ನಡೆಯಲಿದೆ. ಫೆಬ್ರವರಿ 16 ರಂದು ನಿಗದಿಯಾಗಿದ್ದ 10ನೇ ತರಗತಿ ರಿಟೈಲ್ ಪೇಪರ್ ಈಗ ಫೆಬ್ರವರಿ 28, 2024ರಂದು ನಡೆಸಲಾಗುವುದು. ಅಂತೆಯೇ, 12 ನೇ ತರಗತಿಗೆ, ಮಾರ್ಚ್ 11 ರಂದು ನಿಗದಿಯಾಗಿದ್ದ ಫ್ಯಾಷನ್ ಸ್ಟಡೀಸ್'ನ್ನ ಬದಲಾಯಿಸಲಾಗಿದೆ ಮತ್ತು ಈಗ ಮಾರ್ಚ್ 21, 2024 ರಂದು ನಡೆಸಲಾಗುವುದು. ಸಿಬಿಎಸ್ಇ 10ನೇ ತರಗತಿ ಬೋರ್ಡ್ ಪರೀಕ್ಷೆ ಫೆಬ್ರವರಿ 15 ರಂದು ಪ್ರಾರಂಭವಾಗಿ ಮಾರ್ಚ್ 13, 2024 ರಂದು ಕೊನೆಗೊಳ್ಳುತ್ತದೆ ಮತ್ತು 12 ನೇ ತರಗತಿ ಬೋರ್ಡ್ ಪರೀಕ್ಷೆ ಫೆಬ್ರವರಿ 15 ರಂದು ಪ್ರಾರಂಭವಾಗುತ್ತದೆ ಮತ್ತು ಏಪ್ರಿಲ್ 2, 2024 ರಂದು ಕೊನೆಗೊಳ್ಳುತ್ತದೆ. 10 ಮತ್ತು 12 ನೇ ತರಗತಿ ಬೋರ್ಡ್ ಪರೀಕ್ಷೆಗಳು ಎಲ್ಲಾ ದಿನಗಳಲ್ಲಿ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಒಂದೇ ಪಾಳಿಯಲ್ಲಿ ನಡೆಯಲಿವೆ.



# ಭಾರತದ ಆರ್ಥಿಕ ಬೆಳವಣಿಗೆ ಶ್ಲಾಘಿಸಿದ ಚೀನಾ ಮಾಧ್ಯಮ



ದೆಹಲಿ: ಪ್ರಧಾನಿ ಮೋದಿ ನೇತೃತ್ವದಲ್ಲಿ ಆರ್ಥಿಕ, ಸಾಮಾಜಿಕ ಆಡಳಿತ ಮತ್ತು ವಿದೇಶಾಂಗ ನೀತಿಯ ಕ್ಷೇತ್ರಗಳಲ್ಲಿ ಭಾರತದ ಮಹತ್ವದ ಪ್ರಗತಿಯನ್ನು ಶ್ಲಾಘಿಸಿರುವ ಚೀನಾದ ಗ್ಲೋಬಲ್ ಟೈಮ್ಸ್ನಲ್ಲಿನ ಲೇಖನವು ಭಾರತ್ ನಿರೂಪಣೆ ಅನ್ನು ರಚಿಸುವಲ್ಲಿ ಮತ್ತು ಅಭಿವೃದ್ಧಿಪಡಿಸುವಲ್ಲಿ ಭಾರತವು ಹೆಚ್ಚು ಹೆಚ್ಚು ಕಾರ್ಯತಂತ್ರವಾಗಿ ಆತ್ಮವಿಶ್ವಾಸ ಮತ್ತು ಕ್ರಿಯಾಶೀಲತೆ ಹೊಂದಿದೆ ಎಂದು ಹೇಳಿದೆ. ಚೀನಾದ ಪ್ರಮುಖ ಮಾಧ್ಯಮವಾದ ಗ್ಲೋಬಲ್ ಟೈಮ್ಸ್, ಶಾಂಘೈನ ಫುಡಾನ್ ವಿಶ್ವವಿದ್ಯಾಲಯದ ದಕ್ಷಿಣ ಏಷ್ಯಾ ಅಧ್ಯಯನ ಕೇಂದ್ರದ ನಿರ್ದೇಶಕ ಜಾಂಗ್ ಜಿಯಾಡಾಂಗ್ ಬರೆದ ಲೇಖನವನ್ನು ಪ್ರಕಟಿಸಿದ್ದು, ಇದು ಕಳೆದ ನಾಲ್ಕು ವರ್ಷಗಳಲ್ಲಿ ಭಾರತದ ಗಮನಾರ್ಹ ಸಾಧನೆಗಳನ್ನು ಎತ್ತಿ ತೋರಿಸುತ್ತದೆ. ಇದು ಭಾರತದ ದೃಢವಾದ ಆರ್ಥಿಕ ಬೆಳವಣಿಗೆ, ನಗರ ಆಡಳಿತದಲ್ಲಿನ ಸುಧಾರಣೆಗಳು ಮತ್ತು ಅಂತರಾಷ್ಟ್ರೀಯ ಸಂಬಂಧಗಳ ಕಡೆಗೆ, ವಿಶೇಷವಾಗಿ ಚೀನಾದೊಂದಿಗಿನ ವರ್ತನೆಯ ಬದಲಾವಣೆಯನ್ನು ಅಂಗೀಕರಿಸುತ್ತದೆ.

ಉದಾಹರಣೆಗೆ, ಚೀನಾ ಮತ್ತು ಭಾರತದ ನಡುವಿನ ವ್ಯಾಪಾರ ಅಸಮತೋಲನವನ್ನು ಚರ್ಚಿಸುವಾಗ, ಭಾರತೀಯ ಪ್ರತಿನಿಧಿಗಳು ವ್ಯಾಪಾರದ ಅಸಮತೋಲನವನ್ನು ಕಡಿಮೆ ಮಾಡಲು ಚೀನಾದ ಕ್ರಮಗಳ ಮೇಲೆ ಪ್ರಾಥಮಿಕವಾಗಿ ಗಮನಹರಿಸುತ್ತಿದ್ದರು. ಆದರೆ ಈಗ ಅವರು ಭಾರತದ ರಫ್ತು ಸಾಮರ್ಥ್ಯಕ್ಕೆ ಹೆಚ್ಚು ಒತ್ತು ನೀಡುತ್ತಿದ್ದಾರೆ ಎಂದು ಜಾಂಗ್ ತಮ್ಮ ಲೇಖನದಲ್ಲಿ ಹೇಳಿದ್ದಾರೆ.



# ಅಯೋಧ್ಯೆ ರಾಮನ ಭಕ್ತರಿಗಾಗಿ ತಯಾರಾಗುತ್ತಿದೆ ವಿಶೇಷ ಪ್ರಸಾದ




**ಅಯೋಧ್ಯೆ:** ಜ.22ರಂದು ಅಯೋಧ್ಯೆಯಲ್ಲಿ ನಿರ್ಮಾಣವಾಗುತ್ತಿರುವ ರಾಮಮಂದಿರದಲ್ಲಿ ಶ್ರೀರಾಮನ ವಿಗ್ರಹದ ಪ್ರಾಣಪ್ರತಿಷ್ಠೆಯ ಕಾರ್ಯಕ್ರಮ ನಡೆಯಲಿದ್ದು, ಈ ಸಂದರ್ಭದಲ್ಲಿ ಮಂದಿರಕ್ಕೆ ಭೇಟಿ ನೀಡುವ ಭಕ್ತರಿಗೆ ?ಇಲಾಚಿ ದಾನಾ?ವನ್ನು ಪ್ರಸಾದವಾಗಿ ನೀಡಲಾಗುವುದು.

ಭಾರತದ ಕೆಲ ದೇವಸ್ಥಾನಗಳಲ್ಲಿ ಕೊಡುವ ಪ್ರಸಾದಗಳಿಗೆ ತಮ್ಮದೇ ಆದ ವಿಶೇಷತೆಗಳಿವೆ.

ತಿರುಪತಿಯ ಲಡ್ಡು, ಕೃಷ್ಣ ದೇವಾಲಯಗಳ ವೈಷ್ಣೋ ದೇವಿ ಡ್ರೈ ಫ್ರೂಟ್ಸ್, ಪೊಂಗಲ್, ಅನ್ನ ಪ್ರಸಾದಗಳು ತಮ್ಮದೇ ಆದ ಗುರುತು ಹಾಗು ಮಹತ್ವವನ್ನು ಹೊಂದಿವೆ.

ಹೀಗಿರುವಾಗ ಹೊಸದಾಗಿ ನಿರ್ಮಾಣವಾಗಿರುವ ರಾಮಮಂದಿರದಲ್ಲಿ ಸಕ್ಕರೆ ಮತ್ತು ಏಲಕ್ಕಿ ಮಿಶ್ರಣದಿಂದ ತಯಾರಾದ ಇಲಾಚಿ ದಾನಾವನ್ನು ಪ್ರಸಾದವಾಗಿ ವಿತರಿಸಲಾಗುವುದು. ಇದನ್ನು ಈಗಾಗಲೇ ಅನೇಕ ದೇವಾಲಯಗಳಲ್ಲಿ ಕೊಡಲಾಗುತ್ತಿದ್ದು, ಏಲಕ್ಕಿಯ ಔಷದೀಯ ಗುಣಗಳು ಪ್ರಸಾದಕ್ಕೆ ಇನ್ನಷ್ಟು ಶಕ್ತಿ ತುಂಬಲಿವೆ. ರಾಮ್ವಿಲಾಸ್ ಅಂಡ್ ಸನ್ಸ್ ಸಂಸ್ಥೆಗೆ ಪ್ರಸಾದ ತಯಾರಿಕೆಯ ಜವಾಬ್ದಾರಿಯನ್ನು ವಹಿಸಲಾಗಿದೆ.

## ರಾಮಮಂದಿರ ಉದ್ಘಾಟನೆ ದಿನದವರೆಗೆ ಯುಪಿ ಸರ್ಕಾರಿ ಬಸ್‌ಗಳಲ್ಲಿ ಭಜನೆ ಪ್ರಸಾರ

**ಲಕ್ನೋ:** ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಹಿನ್ನೆಲೆಯಲ್ಲಿ ಜ.22 ರ ವರೆಗೆ ಸರ್ಕಾರಿ ಬಸ್‌ಗಳಲ್ಲಿ ರಾಮ ಭಜನೆಗಳನ್ನು ಪ್ರಸಾರ ಮಾಡಲು ಸೂಚಿಸಲಾಗಿದೆ.ಉತ್ತರ ಪ್ರದೇಶ ಸಾರಿಗೆ ಇಲಾಖೆಯು ಉತ್ತರ ಪ್ರದೇಶ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ಜನವರಿ 22 ರವರೆಗೆ ರಾಮ ಭಜನೆಗಳನ್ನು ಪ್ರಸಾರ ಮಾಡಲು ಸೂಚನೆ ನೀಡಿದೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ಅಯೋಧ್ಯೆಯಲ್ಲಿನ ಮಹಾಮಸ್ತಕಾಭಿಷೇಕ ಸಮಾರಂಭದ ಬಗ್ಗೆ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದರು. ಜನವರಿ 14 ರಿಂದ ಅಯೋಧ್ಯೆಯ ದೇವಾಲಯಗಳಲ್ಲಿ ಭಜನೆ, ರಾಮಾಯಣ ಮತ್ತು ರಾಮಚರಿತಮಾನಗಳ ಪಠಣ ಮತ್ತು ಸುಂದರಕಾಂಡದಂತಹ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ದೇಶನ ನೀಡಿದ್ದಾರೆ. ಜನವರಿ 22 ಕ್ಕಾಗಿ ಸಾರಿಗೆ ಇಲಾಖೆ ಸಿದ್ಧಪಡಿಸಿರುವ ಕ್ರಿಯಾ ಯೋಜನೆಯ ಪ್ರಕಾರ, ಎಲ್ಲಾ ಪ್ರಯಾಣಿಕ ವಾಹನಗಳು ಮತ್ತು ಬಸ್ ನಿಲ್ದಾಣಗಳಲ್ಲಿ ಶುಚಿತ್ವ ಇರಬೇಕು. ಪ್ರಯಾಣಿಕರಲ್ಲಿ ಭಕ್ತಿ ಭಾವ ಮೂಡಿಸಲು ಬಸ್‌ಗಳಲ್ಲಿ ರಾಮ ಭಜನೆಗಳನ್ನು ಪ್ರಸಾರ ಮಾಡಬೇಕು. ಬಸ್ ಚಾಲಕರಿಂದ ಸುರಕ್ಷಿತ ಚಾಲನೆ, ಸಂಚಾರ ನಿಯಮಗಳ ಅನುಸರಣೆ, ಪ್ರಯಾಣಿಕರೊಂದಿಗೆ ಸರಿಯಾದ ನಡವಳಿಕೆ, ಚಾಲಕರು ಕಡ್ಡಾಯವಾಗಿ ಸಮವಸ್ತ್ರ ಧರಿಸುವುದು, ಶುಚಿತ್ವ ಕಾಪಾಡುವುದು, ನಿಗದಿತ ದರಕ್ಕಿಂತ ಹೆಚ್ಚಿನ ಶುಲ್ಕ ವಿಧಿಸದೇ ಇರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

# ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಯೂನಸ್‌ಗೆ ಜೈಲು!



**ಢಾಕಾ:** ಕಾರ್ಮಿಕ ಕಾನೂನುಗಳ ಉಲ್ಲಂಘನೆ ಆರೋಪದ ಮೇಲೆ ಬಾಂಗ್ಲಾದೇಶದ ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತ ಆರ್ಥಶಾಸ್ತ್ರಜ್ಞ ಮುಹಮ್ಮದ್ ಯೂನಸ್ ಅವರಿಗೆ ಸ್ಥಳೀಯ ನ್ಯಾಯಾಲಯ ಆರು ತಿಂಗಳ ಕಾರಾಗೃಹ ಸೆರೆವಾಸ ಶಿಕ್ಷೆ ವಿಧಿಸಿದೆ. ಯೂನಸ್ ಜತೆ ಗ್ರಾಮೀಣ ಟೆಲಿಕಾಂನಲ್ಲಿ ಕೆಲಸ ಮಾಡುತ್ತಿದ್ದ ಅವರ ಮೂವರು ಸಹದ್ಯೋಗಿಗಳಿಗೂ ಆರು ತಿಂಗಳ ಜೈಲು ಶಿಕ್ಷೆ ವಿಧಿಸಲಾಗಿದೆ.

ಕಾರ್ಮಿಕ ಕಾನೂಗಳ ಉಲ್ಲಂಘನೆಯ ಗಂಭಿರ ಆರೋಪದ ಮೇಲೆ ಬಾಂಗ್ಲಾದೇಶದ ಮೂರನೇ ಕಾರ್ಮಿಕ ನ್ಯಾಯಾಲಯದ ನ್ಯಾ. ಶೇಖ್ ಮೆರಿನಾ ಸುಲ್ತಾನಾ ಅವರು ಮುಹಮ್ಮದ್ ಯೂನಸ್ ಮತ್ತವರ ಸಹದ್ಯೋಗಿಗಳಿಗೆ ಸಾದಾ ಕಾರಾಗೃಹ ಶಿಕ್ಷೆ ವಿಧಿಸಿ ತೀರ್ಪು ನೀಡಿದರು. ಇದೇ ವೇಳೆ ನಾಲ್ವರಿಗೂ ತಲಾ 25 ಸಾವಿರ ರೂ. ದಂಡ ವಿಧಿಸಿದರು. ಕೋರ್ಟ್ ತೀರ್ಪಿನ ಬೆನ್ನಿಗೆ 5 ಸಾವಿರ ರೂ. ಬಾಂಡ್ ಆಧಾರದಲ್ಲಿ ಎಲ್ಲಾ ನಾಲ್ಕು ಮಂದಿಗೆ ನ್ಯಾಯಾಧೀಶರು ಜಾಮೀನು ಮಂಜೂರು ಮಾಡಿದರು.

ಬಾಂಗ್ಲಾದೇಶ ಸಾರ್ವತ್ರಿಕ ಚುನಾವಣೆ ಸನಿಹದಲ್ಲೇ (ಜ. 7ಕ್ಕೆ ಮತದಾನ) ನೊಬೆಲ್ ಶಾಂತಿ ಪುರಸ್ಕೃತ ಮುಹಮ್ಮದ್ ಯೂನಸ್ಗೆ ಶಿಕ್ಷೆ ವಿಧಿಸಿರುವ ಕೋರ್ಟ್ ತೀರ್ಪು ರಾಜಕೀಯ ಸಂಘರ್ಷಕ್ಕೆ ಕಾರಣವಾಗಿದೆ. ಪ್ರಧಾನಿ ಶೇಕ್ ಹಸೀನಾ ಅವರು ರಾಜಕೀಯ ವಿರೋಧಿಗಳನ್ನು ಮುಗಿಸಲು ಸಂಚು ಮಾಡಿದ್ದಾರೆ ಎಂದು ಯೂನಸ್ ಬೆಂಬಲಿಗರು ಆರೋಪಿಸಿದ್ದಾರೆ.

# ಇರಾನ್‌ನಲ್ಲಿನ ಅವಳಿ ಬಾಂಬ್ ಸ್ಫೋಟದ ಹೊಣೆ ಹೊತ್ತ ಇಸ್ಲಾಮಿಕ್ ಸ್ಟೇಟ್

**ಟೆಹ್ರಾನ್:** ಇರಾನ್‌ನಲ್ಲಿ ಅವಳಿ ಬಾಂಬ್ ಸ್ಫೋಟಗೊಂಡು 103 ಮಂದಿ ಸಾವನ್ನಪ್ಪಿ, 141 ಮಂದಿ ಗಾಯಗೊಂಡಿರುವ ಘಟನೆ ಬುಧವಾರ ನಡೆದಿದೆ. ಇರಾನ್ನ ದಕ್ಷಿಣ ನಗರಿ ಕೆರ್ಮಾನ್ನಲ್ಲಿ ಕಮಾಂಡರ್ ಕಾಸ್ಸೇಮ್ ಸೋಲೈಮನಿ ಅವರ ಸ್ಮರಣೆಯ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿತ್ತು. ಈ ವೇಳೆ ದುರ್ಘಟನೆ ನಡೆದಿದ್ದು, ಭಾರೀ ಆತಂಕವನ್ನೂ ಸೃಷ್ಟಿ ಮಾಡಿದೆ.

ಇನ್ನು ಸುಮಾರು 103 ಜನರ ಸಾವಿಗೆ ಕಾರಣವಾದ ಮತ್ತು ಅನೇಕರು ಗಾಯಗೊಂಡ ಎರಡು ಸ್ಫೋಟಗಳ ಜವಾಬ್ದಾರಿಯನ್ನ ಇಸ್ಲಾಮಿಕ್ ಸ್ಟೇಟ್ ಗುರುವಾರ ವಹಿಸಿಕೊಂಡಿದೆ. ಗುಂಪು ತನ್ನ ಸಂಯೋಜಿತ ಟೆಲಿಗ್ರಾಮ್ ಚಾನೆಲ್ಗಳಲ್ಲಿ ಹೇಳಿಕೆಯನ್ನು ಬಿಡುಗಡೆ ಮಾಡಿದೆ ಎಂದು ವರದಿಯಾಗಿದೆ. 2020ರಲ್ಲಿ ಅಮೆರಿಕಾವು ಬಾಗ್ದಾದ್ದ ವಿಮಾನ ನಿಲ್ದಾಣದ ಮೇಲೆ ಡ್ರೋಣ್ ದಾಳಿ ನಡೆಸಿತ್ತು. ಈ ದಾಳಿಯಲ್ಲಿ ಕಮಾಂಡರ್ ಕಾಸ್ಸೇಮ್ ಸೋಲೈಮನಿ ಹತರಾಗಿದ್ದರು. ಇವರ ಸ್ಮರಣಾರ್ಥ ಕಾರ್ಯಕ್ರಮವನ್ನು ಪ್ರತಿ ವರ್ಷ ಇರಾನ್ನಲ್ಲಿ ಆಯೋಜಿಸಲಾಗುತ್ತಿದೆ. ಕೆರ್ಮಾನ್ನಲ್ಲಿರುವ ಕಾಸ್ಸೇಮ್ ಸೋಲೈಮನಿ ಅವರ ಸ್ಮಾರಕದ ಬಳಿಯೇ ಈ ಕಾರ್ಯಕ್ರಮವನ್ನು ನಡೆಸಿಕೊಂಡು ಬರಲಾಗುತ್ತಿದೆ. ಈ ವರ್ಷದ ಕಾರ್ಯಕ್ರಮವನ್ನು ಬುಧವಾರ ಆಯೋಜನೆ ಮಾಡಲಾಗಿದ್ದು, ಇದೇ ಸಂದರ್ಭ ಅವಳಿ ಬಾಂಬ್ ಸ್ಫೋಟ ನಡೆದಿದೆ. ಘಟನೆಯ ಸಂದರ್ಭದಲ್ಲಿ ಅಪಾರ ಸಂಖ್ಯೆಯಲ್ಲಿ ಸ್ಥಳೀಯರು ಸ್ಥಳದಲ್ಲಿ ಜಮಾಯಿಸಿದ್ದರು. ಈ ವೇಳೆ ಮೊದಲು ಅನಿಲ ತುಂಬಿದ ಡಬ್ಬಿಯನ್ನು ಎಸೆಯಲಾಯಿತು. ಇದು ಸಿಡಿಯುತಲೇ ಇನ್ನಷ್ಟು ಡಬ್ಬಗಳನ್ನು ನಿರಂತರವಾಗಿ ಎಸೆಯಲಾಯಿತು.

## ಅರ್ಜುನ ಪ್ರಶಸ್ತಿ ಪುರಸ್ಕೃತ ಪೊಲೀಸ್ ಅಧಿಕಾರಿ ಕೊಲೆ

**ನವದೆಹಲಿ:** ಅರ್ಜುನ ಪ್ರಶಸ್ತಿ ಪುರಸ್ಕೃತ ಪೊಲೀಸ್ ಅಧಿಕಾರಿಯೊಬ್ಬರ ಕೊಲೆ ಪ್ರಕರಣವನ್ನು ಜಲಂಧರ್ ಪೊಲೀಸರು ಸುಧಾರಿತ ತಾಂತ್ರಿಕ ತನಿಖಾ ವಿಧಾನದ ಮೂಲಕ 48 ಗಂಟೆಗಳಲ್ಲಿ ಭೇದಿಸಿದ್ದಾರೆ. ಪೊಲೀಸ್ ಅಧಿಕಾರಿ ದಲ್ಬೀರ್ ಸಿಂಗ್ ಡಿಯೋಲ್ ಅವರು, ತಲೆಯ ಮೇಲೆ ಬಿದ್ದಿದ್ದ ಗುಂಡಿನ ಗಾಯದಿಂದ ಬುಧವಾರ ಸಾವನ್ನಪ್ಪಿದ್ದರು. ಆಟೋರಿಕ್ಷಾ ಚಾಲಕನನ್ನು ಬಂಧಿಸುವ ಮೂಲಕ ಪೊಲೀಸರು ಪ್ರಕರಣ ಭೇದಿಸಿದ್ದಾರೆ. ಆಟೋ ಚಾಲಕ ಮನೆಗೆ ಡ್ರಾಪ್ ಕೊಡುವ ವೇಳೆ ನಡೆದ ಮಾತಿನ ಚಕಮಕಿಯಿಂದ ಪೊಲೀಸ್ ಅಧಿಕಾರಿಯ ಮೇಲೆ ಗುಂಡು ಹಾರಿಸಿದ್ದಾನೆ. ಪೊಲೀಸ್ ಅಧಿಕಾರಿ ಜುಗಲ್ ಕಿಶೋರ್ ಅವರು ಕರ್ತವ್ಯ ಮುಗಿಸಿ ಮನೆಗೆ ಮರಳುತ್ತಿದ್ದಾಗ ಕಾಲುವೆ ಬಳಿ ಶವವನ್ನು ನೋಡಿದ್ದಾರೆ. ಕಿಶೋರ್ ತಕ್ಷಣ ತನ್ನ ಸಹೋದ್ಯೋಗಿಗಳಿಗೆ ಕರೆ ಮಾಡಿ ಶೀಘ್ರದಲ್ಲೇ ತನಿಖೆ ನಡೆಸಿದ್ದಾರೆ. ತನಿಖೆ ಆರಂಭಿಸಿದ ಪೊಲೀಸರು ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸಿದ್ದಾರೆ. ಅವುಗಳ ಪೈಕಿ ಒಂದರಲ್ಲಿ ಡಿಯೋಲ್ ಆಟೋರಿಕ್ಷಾದಲ್ಲಿ ಪ್ರಯಾಣಿಸಿರುವುದು ಕಂಡುಬಂದಿದೆ. ಆ ವಾಹನ ಸಂಖ್ಯೆ ನಮೂದಿಸಿಕೊಂಡು ಪೊಲೀಸರು, ಆಟೋ ಹೋದ ಮಾರ್ಗಗಳಲ್ಲಿ ಇದ್ದ ಸಿಸಿಟಿವಿಗಳನ್ನು ಪರಿಶೀಲಿಸಿದ್ದಾರೆ. ಈ ವೇಳೆ ಆಟೋರಿಕ್ಷಾ ಪತ್ತೆಯಾಗಿದೆ. ಆರೋಪಿ ವಿಜಯ್ ಕುಮಾರ್ ಸರ್ವಿಸ್ ಪಿಸ್ತೂಲ್ ಕಸಿದುಕೊಂಡು ಡಿಯೋಲ್ ಅವರ ತಲೆಗೆ ಗುಂಡು ಹಾರಿಸಿದ್ದಾನೆ. ನಂತರ ಮೃತದೇಹವನ್ನು ಕಾಲುವೆ ಬಳಿ ಎಸೆದು ಹೋಗಿದ್ದಾನೆ. ಮೃತದೇಹದ ಬಳಿ ಮಾರಕಾಸ್ತ್ರ ಪತ್ತೆಯಾಗಿದೆ. ಪೊಲೀಸ್ ಅಧಿಕಾರಿ ತಾನು ಹೇಳಿದ ಜಾಗಕ್ಕೆ ಬಿಡಲು ಚಾಲಕ ನಿರಾಕರಿಸಿದ್ದು, ಜಗಳಕ್ಕೆ ಕಾರಣವಾಯಿತು. ವಾಗ್ವಾದದ ನಡುವೆ ಆರೋಪಿಯು ಡಿಯೋಲ್‌ನಿಂದ ಸರ್ವಿಸ್ ಪಿಸ್ತೂಲ್ ಕಸಿದುಕೊಂಡು ಆತನ ತಲೆಗೆ ಗುಂಡು ಹಾರಿಸಿದ್ದಾನೆ ಎಂಬುದು ವಿಚಾರಣೆಯಿಂದ ತಿಳಿದುಬಂದಿದೆ.

# ಕೋರ್ಟ್ ವಿಚಾರಣೆ ವೇಳೆ ನ್ಯಾಯಾಧೀಶೆ ಮೇಲೆ ಕೈದಿ ದಾಳಿ

**ಅಮೆರಿಕಾ:** ಇಲ್ಲಿನ ನೆವಾಡಾ ಕೋರ್ಟ್ನಲ್ಲಿಬಂಧಿತ ಕೈದಿಯ ವಿಚಾರಣೆ ವೇಳೆ ನ್ಯಾಯಾಧೀಶೆಮೇಲೆ ಕೈದಿ ದಾಳಿ ಮಾಡಿದ ಘಟನೆ ಬುಧವಾರ (ಜ.3)ರಂದು ನಡೆದಿದೆ. ಡಿಯೋಬ್ರಾ ರೆಡ್ಡನ್ (30) ವರ್ಷ



ಅಪರಾಧಿ ಬ್ಯಾಟರಿ ದಂಥೆ ಪ್ರಕರಣದಲ್ಲಿ ವಿಚಾರಣೆಯಲ್ಲಿ ಶಿಕ್ಷೆ ಪ್ರಕಟಿಸುತ್ತಿರುವ ವೇಳೆ ಏಕಾಏಕಿ ನ್ಯಾಯಾಧೀಶೆ ಎದುರಿಗಿದ್ದ ಟೇಬಲ್ ಮೇಲೆ ಹಾರಿ ಹಲ್ಲೆ ನಡೆಸಿದ್ದಾನೆ.

ಈ ವೇಳೆ ಜಡ್ಜ್ ಮೇರಿ ಕೆ ಹೋಲ್ತಸ್ ಕೆಳಗಡೆ ಬಿದ್ದಿದ್ದು ಅವರ ತಲೆಗೆ ಪೆಟ್ಟಾಗಿದೆ. ದಾಳಿ ತಡೆಯಲು ಬಂದ ಕೋರ್ಟ್ ಮಾರ್ಷಲ್ಗೂ ಕೂಡ ಏಟಾಗಿದ್ದು ಇಬ್ಬರನ್ನೂ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೈದಿ ಡಿಯೋಬ್ರಾ ರೆಡ್ಡನ್ ಮೇಲೆ ಈಗಾಗಲೇ ಅನೇಕ ಪ್ರಕರಣಗಳಿದ್ದ, ಆತ ಜೈಲು ಶಿಕ್ಷೆಯನ್ನೂ ಅನುಭವಿಸಿದ್ದಾನೆ. ನ್ಯಾಯಾಧೀಶರ ಮೇಲೆ ದಾಳಿ ಬಳಿಕ ಆತನನ್ನ ಕ್ಲಾರ್ಕ್ ಕವಂಟಿ ಡೆಟೆನ್ಷನ್ ಸೆಂಟರ್ ಜೈಲಿಗೆ ಕಳುಹಿಸಲಾಗಿದೆ. ದಾಳಿ ವಿಡಿಯೋ ಸಾಮಾಜಿಕ ಜಾಲತಣದಲ್ಲಿ ವೈರಲ್ ಆಗಿದೆ.

# ಟೆಟ್ರಿಸ್ ಜಯಿಸಿದ ಮೊದಲ ಮಾನವ



**ಅಮೇರಿಕಾ:** ಟೆಟ್ರಿಸ್ ಎಂಬ ಸರಳ ಹಾಗು ಅಷ್ಟೇ ಸವಾಲಿನ ಆಟವೊಂದನ್ನು ಜಯಿಸಿದ ಮೊದಲ ಮಾನವನೆಂಬ ಹೆಗ್ಗಳಿಕೆಗೆ ಅಮೇರಿಕಾದ 13 ವರ್ಷದ ವಿಲ್ಲಿಸ್ ಗಿಬ್ಸನ್ ಪಾತ್ರರಾಗಿದ್ದಾರೆ. ಬ್ಲೂ ಸ್ಕುಟಿ ಎಂಬ ಹೆಸರಿನಿಂದಲೂ ಗುರುತಿಸಿಕೊಂಡಿರುವ ಗಿಬ್ಸನ್, ಕೃತಕ ಬುದ್ಧಿಮತ್ತೆಯಿಂದ ಮಾತ್ರ ಭೇದಿಸಲು ಸಾಧ್ಯವಾಗಿದ್ದ ಈ ಆಟವನ್ನು ಗೆದ್ದು ಅದರ 40 ನಿಮಿಷಗಳ ವಿಡಿಯೋ ತುಣುಕನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡು ಹರ್ಷಿಸಿದ್ದಾರೆ.ವಿಡಿಯೋ ಗೇಮ್ ಗಳು ಇಂದು ಬರಿ ಮನೋರಂಜನೆಗೆ ಸೀಮಿತವಾಗಿ ಉಳಿಯದೆ, ಆಟವಾಡುವವರ ನಡುವೆ ತೀವ್ರ ಸ್ಪರ್ಧೆಯೂ ಏರ್ಪಡುತ್ತಿದೆ. ಇಂತಹ ಆಟದಲ್ಲಿ ಯಾರೂ ತಲುಪಲಾಗದ ಹಂತವನ್ನು ಹೊಕ್ಕ ವಿಲ್ಲಿಸ್ ಮೆಚ್ಚುಗೆ ಗಳಿಸಿದ್ದಾನೆ. ಟೆಟ್ರಿಸ್ ನ ಮುಖ್ಯ ಕಾರ್ಯನಿರ್ವಾಹಕಿ ಮಾಯಾ ರೋಜರ್ ಈ ಸಂಭ್ರಮದಲ್ಲಿ ಭಾಗಿಯಾಗಿ, ಆಟದ 40ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿನ ಅತ್ಯುತ್ತಮ ಸಾಧನೆ ಎಂದಿದ್ದಾರೆ.

# ಇಸ್ರೇಲ್‌ನಿಂದ ಹಮಾಸ್‌ನ ನಂ.2 ನಾಯಕ ಸಲೇಹ್ ಅರೋರಿ ಹತ್ಯೆ



**ಬೇರೂತ್:** ಹಮಾಸ್ ಉಗ್ರರನ್ನು ಮಟ್ಟ ಹಾಕಲೇಬೇಕು ಎಂದು ತೀರ್ಮಾನಿಸಿರುವ ಇಸ್ರೇಲ್ ಸೇನಾ ಪಡೆ ಈಗ ಗಾಜಾದಾಚೆಗೂ ಹೆಜ್ಜೆಯಿಟ್ಟಿದ್ದು, ಲೆಬನಾನ್ನಲ್ಲಿ ಕೂಡ ಕಾರ್ಯಾಚರಣೆ ಶುರು ಮಾಡಿದೆ. ಲೆಬನಾನ್ ರಾಜಧಾನಿ ಬೇರೂತ್ನಲ್ಲಿ ಇಸ್ರೇಲ್ ಸೇನೆ ಮಂಗಳವಾರ ರಾತ್ರಿ ವೈಮಾನಿಕ ದಾಳಿ ನಡೆಸಿ, ಹಮಾಸ್ ಉಗ್ರ ಸಂಘಟನೆಯ ನಂ.2 ನಾಯಕ ಸಲೇಹ್ ಅರೋರಿಯನ್ನು ಹತ್ಯೆಗೈದಿದೆ. ಅ.7ರಂದು ಇಸ್ರೇಲ್-ಹಮಾಸ್ ಯುದ್ಧ ಆರಂಭವಾದ ಬಳಿಕ ಹತರಾದ ಹಮಾಸ್ ಸಂಘಟನೆಯ ಅತ್ಯುನ್ನತ ನಾಯಕರಲ್ಲಿ ಈತನೂ ಒಬ್ಬ. ಘಾತಕ ಕಾರ್ಯಾಚರಣೆ ನಡೆಸುವ ಮಿಲಿಟರಿ ಘಟಕ ಸ್ಥಾಪನೆಯಲ್ಲಿ ಈತ ಪ್ರಮುಖ ಪಾತ್ರ ವಹಿಸಿದ್ದ ಎಂದು ಹೇಳಲಾಗುತ್ತಿದೆ. ಈ ಹಿಂದೆಯೇ ಉಗ್ರ, ಅರೋರಿಯ ಬಂಧಿಸಲು ನೆರವಾದವರಿಗೆ ಇಸ್ರೇಲ್ ಮತ್ತು ಅಮೆರಿಕ ಸರ್ಕಾರಗಳು 5 ಮಿಲಿಯನ್ ಡಾಲರ್ ಬಹುಮಾನವನ್ನೂ ಪ್ರಕಟಿಸಿದ್ದವು. ಮಂಗಳವಾರ ರಾತ್ರಿ, ಬೇರೂತ್ ಸಮೀಪದ ಶಿಟೆ ಎಂಬಲ್ಲಿರುವ ವಸತಿ ಸಮುಚ್ಚಯದಲ್ಲಿ ಅರೋರಿ ಇದ್ದಾನೆ ಎಂಬ ಸುಳಿವಿನ ಮೇರೆಗೆ ಇಸ್ರೇಲ್ ದಾಳಿ ನಡೆಸಿತ್ತು.

### ಮಧ್ಯಪ್ರಾಚ್ಯಕ್ಕೂ ವಿಸ್ತರಿಸಲಿದೆಯೇ ಸಂಘರ್ಷ

ಅರೋರಿ ಸಾವಿನ ಬೆನ್ನಲ್ಲೇ ಇಸ್ರೇಲ್-ಹಮಾಸ್ ಸಂಘರ್ಷ ಮಧ್ಯಪ್ರಾಚ್ಯವನ್ನು ಮೀರಿ ವಿಸ್ತರಿಸಲಿದೆ ಎಂಬ ಆತಂಕ ಈಗ ವೇದ್ಯವಾಗತೊಡಗಿದೆ. ಲೆಬನಾನ್ ಮೂಲದ ಹೆಜ್ಬುಲ್ಲಾ, ಹಮಾಸ್ ಮತ್ತು ಇತರೆ ಉಗ್ರ ಸಂಘಟನೆಗಳು ಕ್ರುದ್ಧಗೊಂಡಿದ್ದು, ಇಸ್ರೇಲ್ ವಿರುದ್ಧ ಪ್ರತೀಕಾರದ ಶಪಥ ಮಾಡಿವೆ. ಮತ್ತೊಂದೆಡೆ, ''ನಾವು ಎಲ್ಲದಕ್ಕೂ ಸಿದ್ಧ' ಎಂದು ಇಸ್ರೇಲ್ ಹೇಳಿದೆ.

# ಚುನಾವಣೆಯಲ್ಲಿ ಜಯಗಳಿಸಿದರೆ ಹಿಂದುಗಳ ಸಮಸ್ಯೆ ಬಗೆಹರಿಸುವೆ



**ಇಸ್ಲಾಮಾಬಾದ (ಪಾಕಿಸ್ತಾನ):** ಪಾಕಿಸ್ತಾನದ ಖೈಬರ್ ಪಾಖ್ತುನಖ್ವ ಈ ಪ್ರಾಂತ್ಯದಲ್ಲಿನ ಬುನೆರದಿಂದ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಮೊಟ್ಟಮೊದಲು ಹಿಂದೂ ಮಹಿಳೆ ಡಾ. ಸವಿರಾ ಪ್ರಕಾಶ ಇವರ ಕುರಿತು ಪಾಕಿಸ್ತಾನದಲ್ಲಿ ಎಲ್ಲಾ ಕಡೆ ಚರ್ಚೆ ನಡೆಯುತ್ತಿದೆ. ಅವರು ತಮ್ಮನ್ನು ಓರ್ವ 'ದೇಶಭಕ್ತ ಹಿಂದೂ' ಎಂದು ಹೇಳಿದ್ದಾರೆ. ಡಾ. ಸವಿರಾ ಇವರು, ನಾನು ಏನಾದರೂ ಚುನಾವಣೆಯಲ್ಲಿ ಗೆದ್ದರೆ, ಭಾರತ ಮತ್ತು ಪಾಕಿಸ್ತಾನ ನಡುವೆ ಸೇತುವೆಯ ಕೆಲಸ ಮಾಡಿ ಪಾಕಿಸ್ತಾನದಲ್ಲಿನ ಹಿಂದುಗಳ ಸಮಸ್ಯೆ ಪರಿಹರಿಸಲು ಸಹಾಯ ಮಾಡುವೆ ಎಂದು ಹೇಳಿದರು. ಡಾ. ಸವಿರಾ ಇವರು ಮಾತು ಮುಂದುವರಿಸಿ, ಚುನಾವಣಾ ಕ್ಷೇತ್ರದಲ್ಲಿನ ಮುಸಲ್ಮಾನರು ನನಗೆ ಮತ ನೀಡುವ ಆಶ್ವಾಸನೆ ನೀಡಿ ನನಗೆ ಬೆಂಬಲ ನೀಡಿದ್ದಾರೆ. ನನ್ನ ವಿಜಯದ ನಂತರ ಎರಡು ದೇಶದಲ್ಲಿನ ಹಿಂದೂಗಳು ನನ್ನ ಜೊತೆ ನಿರ್ಭಯತೆಯಿಂದ ಸಂಪರ್ಕಿಸಬಹುದು. ಎರಡೂ ದೇಶಗಳಲ್ಲಿನ ಸಂಬಂಧ ದೃಢಗೊಳಿಸುವುದಕ್ಕಾಗಿ ನಾನು ಸಕಾರಾತ್ಮಕ ನಿಲುವು ತಾಳಿ ಪ್ರಯತ್ನ ಮಾಡುವೆನು ಎಂದು ಹೇಳಿದರು.

**ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಮೊಟ್ಟಮೊದಲು ಹಿಂದೂ ಮಹಿಳೆ ಡಾ. ಸವಿರಾ ಪ್ರಕಾಶ ಭರವಸೆ**

ಸಂಜೆ ಮುಗಿಲು
Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಾಮನ ಭಜನೆ ಮೂಲಕ ಪ್ರಧಾನಿ ನರೇಂದ್ರ ಮೋದಿ ಮನ ಗೆದ್ದ ಸ್ವಾತಿ ಮಿಶ್ರಾ




ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆಗೆ ದಿನಗಣನೆ ಆರಂಭ ಆಗಿದೆ. ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲು ಕೋಟ್ಯಂತರ ಮಂದಿ ಕಾದಿದ್ದಾರೆ. ಈ ಸಂದರ್ಭದಲ್ಲಿ ಗಾಯಕಿ ಸ್ವಾತಿ ಮಿಶ್ರಾ ಅವರು ಹಾಡಿರುವ ರಾಮನ ಭಜನೆ ವೈರಲ್ ಆಗಿದೆ. 'ರಾಮ್ ಆಯೆಂಗೆ..' ಎಂಬ ಈ ಭಜನೆಯನ್ನು ಕೇಳಿ ಪ್ರಧಾನಿ ನರೇಂದ್ರ ಮೋದಿ ಕೂಡ ಮೆಚ್ಚಿಕೊಂಡಿದ್ದಾರೆ. ಈ ಬಗ್ಗೆ ಟ್ವಿಟರ್ ನಲ್ಲಿ ಪೋಸ್ಟ್ ಮಾಡಿರುವ ಅವರು, 'ರಾಮ್ ಲಲ್ಲಾನ ಸ್ವಾಗತದ ಸಮಯದಲ್ಲಿ ಸ್ವಾತಿ ಮಿಶ್ರಾ ಅವರ ಈ ಭಜನೆ ಮಂತ್ರಮುಗ್ಧಗೊಳಿಸುವ ರೀತಿಯಲ್ಲಿ ಇದೆ' ಎಂದು ಬರೆದುಕೊಂಡಿದ್ದಾರೆ.

ಸುಮಧುರ ಕಂಠ ಹೊಂದಿರುವ ಸ್ವಾತಿ ಮಿಶ್ರಾ ಅವರು ಮುಂಬೈನವರು. ತಮ್ಮ ಹಾಡುಗಳ ಮೂಲಕ ಅವರು ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆ. ತಮ್ಮದೇ ಯೂಟ್ಯೂಬ್ ಚಾನೆಲ್ ಹೊಂದಿರುವ ಅವರು ಅನೇಕ ಹಾಡುಗಳನ್ನು ರಿಲೀಸ್ ಮಾಡಿದ್ದಾರೆ. ಹಲವು ಸಂಗೀತ ಕಾರ್ಯಕ್ರಮಗಳಲ್ಲಿ ಅವರು ಭಾಗವಹಿಸಿದ್ದಾರೆ. ಸೋಶಿಯಲ್ ಮೀಡಿಯಾದಲ್ಲೂ ಸ್ವಾತಿ ಮಿಶ್ರಾ ಆ ಯಕ್ಟೀವ್ ಆಗಿದ್ದಾರೆ.

ಸ್ವಾತಿ ಮಿಶ್ರಾ ಅವರು ಬಹುಮುಖ ಪ್ರತಿಭೆ ಎನಿಸಿಕೊಂಡಿದ್ದಾರೆ. ಹಾಡುವುದರ ಜೊತೆಗೆ ಸಾಹಿತ್ಯವನ್ನೂ ಅವರು ರಚಿಸುತ್ತಾರೆ. ಅನೇಕ ಭಕ್ತಿ ಗೀತೆಗಳನ್ನು ಅವರು ಬರೆದಿದ್ದಾರೆ. ಇತ್ತೀಚೆಗೆ ಅವರು ಬಿಡುಗಡೆ ಮಾಡಿದ 'ಜನಮ್ ಭೂಮಿ ಕೆ ಲಾಲ್ ರಾಮ್ ಆಯೆ ಹೈ..' ಹಾಡು ಕೂಡ ಫೇಮಸ್ ಆಗಿದೆ. 'ರಾಮ್ ಆಯೆಂಗೆ..' ಭಜನೆಯು ಯೂಟ್ಯೂಬ್ ನಲ್ಲಿ 44 ಮಿಲಿಯನ್ ಗಿಂತಲೂ ಹೆಚ್ಚು ಬಾರಿ ವೀಕ್ಷಣೆ ಕಂಡಿದೆ.

ಅನೇಕ ಕವರ್ ಸಾಂಗ್ ಗಳಿಗೆ ಸ್ವಾತಿ ಮಿಶ್ರಾ ಧ್ವನಿ ನೀಡಿದ್ದಾರೆ. 'ರಾಮ್ ಆಯೆಂಗೆ..' ಭಜನೆಯನ್ನು ಅವರು 2023ರ ಅಕ್ಟೋಬರ್ ನಲ್ಲಿ ರಿಲೀಸ್ ಮಾಡಿದ್ದರು. ಈಗ ಇದರ ಬಗ್ಗೆ ನರೇಂದ್ರ ಮೋದಿ ಟ್ವೀಟ್ ಮಾಡಿದ ಬಳಿಕ ವೀಕ್ಷಣೆ ಹೆಚ್ಚಾಗಿದೆ. ಸ್ವಾತಿ ಮಿಶ್ರ ಅವರ ಜನಪ್ರಿಯತೆ ಕೂಡ ದುಪ್ಪಟ್ಟಾಗಿದೆ. ಇನ್ ಸ್ಟಾಗ್ರಾಮ್ ನಲ್ಲಿ ಸ್ವಾತಿ ಮಿಶ್ರಾ ಅವರನ್ನು ಏಳೂವರೆ ಲಕ್ಷಕ್ಕೂ ಅಧಿಕ ಮಂದಿ ಫಾಲೋ ಮಾಡುತ್ತಿದ್ದಾರೆ.





# ಸಿಂಗಂ ಅಗೇನ್ ಚಿತ್ರದಲ್ಲಿ ಪೊಲೀಸ್ ಆದ್ರಾ ರಣಬೀರ್ ಕಪೂರ್!

ನಿರ್ದೇಶಕ ರೋಹಿತ್ ಶೆಟ್ಟಿ ಅವರು 'ಸಿಂಗಂ ಅಗೇನ್' ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಇದ್ದಾರೆ. ಈ ಚಿತ್ರದಲ್ಲಿ ದೊಡ್ಡ ಪಾತ್ರವರ್ಗ ಇದೆ. ಈಗ ರಣಬೀರ್ ಕಪೂರ್ ಕೂಡ ಇದಕ್ಕೆ ಸೇರ್ಪಡೆ ಆದರೇ ಎನ್ನುವ ಪ್ರಶ್ನೆ ಮೂಡಿದೆ.

ರಣಬೀರ್ ಕಪೂರ್ ಅವರು ಪೊಲೀಸ್ ಡ್ರೆಸ್ ಹಾಕಿ ಸೆಟ್ ನಲ್ಲಿ ಕುಳಿತ ಫೋಟೋ ವೈರಲ್ ಆಗಿದೆ. ಇದರಿಂದ ಸಾಕಷ್ಟು ಕುತೂಹಲ ಮೂಡಿದೆ. ರಣಬೀರ್ ಪಾತ್ರ ಹೇಗಿರಬಹುದು ಎಂದು ಫ್ಯಾನ್ಸ್ ಊಹಿಸುತ್ತಿದ್ದಾರೆ.

ರಣಬೀರ್ ಕಪೂರ್ ಅವರು ಚಾಕೊಲೇಟ್ ಬಾಯ್ ರೀತಿಯ ಪಾತ್ರ ಮಾಡಿದ್ದೇ ಹೆಚ್ಚು. ಇತ್ತೀಚೆಗೆ ಅವರು ಪಾತ್ರದ ಆಯ್ಕೆಯಲ್ಲಿ ಬದಲಾವಣೆ ಮಾಡಿಕೊಂಡಿದ್ದಾರೆ. ಈಗ ಅವರು ಖಡಕ್ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಮಿಂಚೋಕೆ ರೆಡಿ ಆಗಿದ್ದಾರೆ.

'ಸಿಗಂ ಅಗೇನ್' ಸಿನಿಮಾದಲ್ಲಿ ದೀಪಿಕಾ ಪಡುಕೋಣೆ, ಟೈಗರ್ ಶ್ರಾಫ್, ಅಜಯ್ ದೇವಗನ್, ರಣವೀರ್ ಸಿಂಗ್ ಮೊದಲಾದವರು ನಟಿಸಿದ್ದಾರೆ. ಈಗ ಇದಕ್ಕೆ ರಣಬೀರ್ ಕಪೂರ್ ಕೂಡ ಸೇರ್ಪಡೆ ಆಗಿರೋದು ವಿಶೇಷ.

ಅಂದಹಾಗೆ, ರೋಹಿತ್ ಶೆಟ್ಟಿ ಕಡೆಯಿಂದ ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಹೊರ ಬಿದ್ದಿಲ್ಲ. ಅವರು ಈ ಬಗ್ಗೆ ಸ್ಪಷ್ಟನೆ ನೀಡಲಿ ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ. ಈ ವರ್ಷವೇ ಸಿನಿಮಾ ರಿಲೀಸ್ ಆಗಲಿದೆ.

ರಣಬೀರ್ ಕಪೂರ್ ಅವರು 'ಅನಿಮಲ್' ಚಿತ್ರದಿಂದ ದೊಡ್ಡ ಗೆಲುವು ಕಂಡಿದ್ದಾರೆ. ಈ ಸಿನಿಮಾದಿಂದ ಅವರು ಗೆದ್ದು ಬೀಗಿದ್ದಾರೆ. ಈ ಸಿನಿಮಾ ಬಾಕ್ಸ್ ಆಫೀಸ್ ನಲ್ಲಿ ನೂರಾರು ಕೋಟಿ ರೂಪಾಯಿ ಬಿಸ್ನೆಸ್ ಮಾಡಿದೆ.




# 'ದಿ ಬುಲ್' ಚಿತ್ರಕ್ಕಾಗಿ ಬದಲಾದ ಸಲ್ಲು

## ಬಾಡಿ ಬಿಲ್ಡ್ ಮಾಡಲು ನಿತ್ಯ ಮೂರುವರೆ ಗಂಟೆ ಜಿಮ್



2023ರಲ್ಲಿ ಸಲ್ಮಾನ್ ಖಾನ್ ನಟನೆಯ ಎರಡು ಸಿನಿಮಾಗಳು ರಿಲೀಸ್ ಆದವು. 'ಕಿಸಿ ಕ ಭಾಯ್ ಕಿಸಿ ಕಿ ಜಾನ್' ಸಿನಿಮಾ ಸೋತರೆ, 'ಟೈಗರ್ 3' ಚಿತ್ರ ಸಾಧಾರಣ ಗೆಲುವು ಕಂಡಿತು. ಈಗ ಸಲ್ಮಾನ್ ಖಾನ್ ಹೊಸ ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಆಗಿದ್ದಾರೆ. ಈ ಚಿತ್ರಕ್ಕೆ 'ದಿ ಬುಲ್' ಎನ್ನುವ ಶೀರ್ಷಿಕೆ ಇಡಲಾಗಿದೆ. ಈ ಸಿನಿಮಾಗಾಗಿ ಅವರು ತೂಕ ಹೆಚ್ಚಿಸಿಕೊಳ್ಳುತ್ತಿದ್ದಾರೆ. ಸಲ್ಲು ಜಿಮ್ ನಲ್ಲಿ ನಿತ್ಯ ಮೂರುವರೆ ಗಂಟೆ ವರ್ಕೌಟ್ ಮಾಡುತ್ತಿದ್ದಾರೆ.

ಸಲ್ಮಾನ್ ಖಾನ್ ಅವರು ಈ ಬಾರಿ ಕರಣ್ ಜೋಹರ್ ಒಡೆತನದ 'ಧರ್ಮ ಪ್ರೊಡಕ್ಷನ್' ಜೊತೆ ಕೈ ಜೋಡಿಸಿದ್ದಾರೆ. 1988ರಲ್ಲಿ ಮಾಲ್ಡೀವ್ಸ್ ನಲ್ಲಿ ಭಾರತದ ಶಸಸ್ತ್ರ ಪಡೆ ಆಪರೇಷನ್ ನಡೆಸಿತ್ತು. ಬ್ರಿಗೇಡಿಯರ್ ಫಾರುಕ್ ಪುಲ್ಸಾರಾ ಅವರು ಈ ಆಪರೇಷನ್ ನ ನೇತೃತ್ವ ವಹಿಸಿದ್ದರು. ಫಾರುಕ್ ಪಾತ್ರದಲ್ಲಿ ಸಲ್ಲು ನಟಿಸುತ್ತಿದ್ದಾರೆ. ಕಳೆದ ಡಿಸೆಂಬರ್ 29ರಂದು 'ದಿ ಬುಲ್' ಚಿತ್ರಕ್ಕೆ ಮುಹೂರ್ತ ನೆರವೇರಿದ್ದು, ಫೆಬ್ರವರಿಯಲ್ಲಿ ಶೂಟಿಂಗ್ ಶುರುವಾಗಲಿದೆ.

ಸಲ್ಮಾನ್ ಖಾನ್ ಅವರು ಬಾಡಿ ಬಿಲ್ಡ್ ಮಾಡಿಕೊಳ್ಳಲು ನಿತ್ಯ ಮೂರುವರೆಗೆ ಗಂಟೆ ಜಿಮ್ ಮಾಡುತ್ತಿದ್ದಾರೆ. ಅವರು ಆಹಾರ ಕ್ರಮದಲ್ಲೂ ಬದಲಾವಣೆ ಮಾಡಿಕೊಂಡಿದ್ದಾರೆ. ಒಂದು ತಿಂಗಳುಗಳ ಕಾಲ ಸಲ್ಲು ವರ್ಕೌಟ್ ಬಗ್ಗೆ ಹೆಚ್ಚು ಒತ್ತು ನೀಡಲಿದ್ದಾರೆ. ಅವರ ಟ್ರಾನ್ಸ್ ಫಾರ್ಮೇಷನ್ ನೋಡಲು ಫ್ಯಾನ್ಸ್ ಕಾದಿದ್ದಾರೆ. ಇದಲ್ಲದೆ, 'ಬಿಗ್ ಬಾಸ್ ಹಿಂದಿ ಸೀಸನ್ 17' ನಡೆಸಿಕೊಡುತ್ತಿದ್ದಾರೆ. ಈ ತಿಂಗಳಾಂತ್ಯಕ್ಕೆ ಫಿನಾಲೆ ನಡೆಯಲಿದೆ.

ವಿಷ್ಣು ವರ್ಧನ್ ಅವರು 'ದಿ ಬುಲ್' ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಉದ್ಯಮಿ ಅಬ್ದುಲ್ ಲುಥುಪಿ ಹಾಗೂ ಪಿಪಲ್ಸ್ ಲಿಬರೇಷನ್ ಆರ್ಗನೈಸೇಷನ್ ಆಫ್ ತಮಿಳ್ ಈಳಂ ಅವರು ಥೈಲೆಂಡ್ ನ ಕಬ್ಜ ಮಾಡಿದ್ದರು. ನಂತರ ಭಾರತದ ಸಹಾಯದಿಂದ ಮತ್ತೆ ಸರ್ಕಾರ ಮರುಸ್ಥಾಪನೆ ಆಯಿತು.

# ಭಾರತ-ಪಾಕಿಸ್ತಾನ್ ಮುಖಾಮುಖಿಗೆ ಡೇಟ್ ಫಿಕ್ಸ್




ಟಿ20 ವಿಶ್ವಕಪ್ 2024ರ ತಾತ್ಕಾಲಿಕ ವೇಳಾಪಟ್ಟಿ ಪ್ರಕಟವಾಗಿದೆ. ಈ ವೇಳಾಪಟ್ಟಿಯಂತೆ ಜೂನ್ 4 ರಿಂದ ವಿಶ್ವಕಪ್ ಶುರುವಾಗಲಿದೆ. ಮೊದಲ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಇಂಗ್ಲೆಂಡ್ ಹಾಗೂ ಪಾಕಿಸ್ತಾನ್ ತಂಡಗಳು ಕಣಕ್ಕಿಳಿಯುವ ಸಾಧ್ಯತೆಯಿದೆ. ಹಾಗೆಯೇ ಜೂನ್ 5 ರಿಂದ ಟೀಮ್ ಇಂಡಿಯಾ ಟಿ20 ವಿಶ್ವಕಪ್ ಅಭಿಯಾನ ಶುರು ಮಾಡಲಿದೆ. ಪ್ರಸ್ತುತ ವೇಳಾಪಟ್ಟಿ ಪ್ರಕಾರ, ಭಾರತ ತಂಡವು ತನ್ನ ಮೊದಲ ಪಂದ್ಯದಲ್ಲಿ ಐರ್ಲೆಂಡ್ ತಂಡವನ್ನು ಎದುರಿಸಲಿದೆ. ಇನ್ನು ಟೀಮ್ ಇಂಡಿಯಾದ 2ನೇ ಎದುರಾಳಿ ಪಾಕಿಸ್ತಾನ್.

**ನ್ಯೂಯಾರ್ಕ್ ನಲ್ಲಿ ಹೈವೋಲ್ಟೇಜ್ ಪಂದ್ಯ:** ಜೂನ್ 9 ರಂದು ನ್ಯೂಯಾರ್ಕ್ ನಲ್ಲಿ ನಡೆಯಲಿರುವ ಹೈವೋಲ್ಟೇಜ್ ಪಂದ್ಯದಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮುಖಾಮುಖಿಯಾಗಲಿದೆ ಎಂದು ವರದಿಯಾಗಿದೆ. ಹಾಗೆಯೇ ಮೂರನೇ ಪಂದ್ಯದಲ್ಲಿ ಭಾರತ ತಂಡವು ಯುಎಸ್ ಎ ವಿರುದ್ಧ ಕಣಕ್ಕಿಳಿಯಲಿದೆ. ಇನ್ನು ತನ್ನ ಕೊನೆಯ ಲೀಗ್ ಪಂದ್ಯದಲ್ಲಿ ಟೀಮ್ ಇಂಡಿಯಾ ಎದುರಾಳಿ ಕೆನಡಾ. ಈ ಪಂದ್ಯವು ಫ್ಲೋರಿಡಾದಲ್ಲಿ ನಡೆಯಲಿದೆ.

**ಎರಡು ದೇಶಗಳಲ್ಲಿ ವಿಶ್ವಕಪ್:** 2024 ರ ಟಿ20 ವಿಶ್ವಕಪ್ ಅನ್ನು ವೆಸ್ಟ್ ಇಂಡೀಸ್ ಹಾಗೂ ಯುಎಸ್ ಎ ಜಂಟಿಯಾಗಿ ಆಯೋಜಿಸಲಿದೆ. ಅದರಂತೆ ಲೀಗ್ ಹಂತದ ಪಂದ್ಯಗಳು ಯುಎಸ್ಎನಲ್ಲಿ ನಡೆಯಲಿದೆ. ಹಾಗೆಯೇ ಸೂಪರ್-8 ಪಂದ್ಯಗಳಿಗೆ ವೆಸ್ಟ್ ಇಂಡೀಸ್ ಆತಿಥ್ಯವಹಿಸಲಿದೆ. ಇನ್ನು ಫೈನಲ್ ಪಂದ್ಯಕ್ಕೂ ಕೆರಿಬಿಯನ್ ರಾಷ್ಟ್ರ ಆತಿಥ್ಯವಹಿಸುವ ಸಾಧ್ಯತೆಯಿದೆ ಎಂದು ವರದಿಯಾಗಿದೆ.

**ಕಣದಲ್ಲಿ 20 ತಂಡಗಳು:** ಈ ಬಾರಿಯ ಟಿ20 ವಿಶ್ವಕಪ್ ನಲ್ಲಿ ಬರೋಬ್ಬರಿ 20 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳನ್ನು 4 ಗುಂಪುಗಳಲ್ಲಿ ವಿಂಗಡಿಸಲಾಗುತ್ತದೆ. ಅದರಂತೆ ಪ್ರತಿ ಗುಂಪುಗಳಿಂದ 2 ತಂಡಗಳು ಸೂಪರ್-8 ಹಂತಕ್ಕೇರಲಿದೆ. ಈ ಹಂತದಲ್ಲಿ 8 ತಂಡಗಳ ನಡುವೆ ಪೈಪೋಟಿ ನಡೆಯಲಿದ್ದು, ಇದರಲ್ಲಿ ಅಗ್ರ ನಾಲ್ಕರಲ್ಲಿ ಕಾಣಿಸಿಕೊಳ್ಳುವ ತಂಡಗಳು ಸೆಮಿಫೈನಲ್ ಆಡಲಿದೆ.

# ಕ್ರಿಕೆಟ್ ಬದುಕಿಗೆ ಆರೋನ್ ಫಿಂಚ್ ಗುಡ್ ಬೈ..!




ಆಸ್ಟ್ರೇಲಿಯಾ ತಂಡದ ಮಾಜಿ ನಾಯಕ ಆರೋನ್ ಫಿಂಚ್ ಕ್ರಿಕೆಟ್ ಬದುಕಿಗೆ ನಿವೃತ್ತಿ ಘೋಷಿಸಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಬಿಗ್ ಬ್ಯಾಷ್ ಲೀಗ್ ಮೂಲಕ ಎಲ್ಲಾ ಮಾದರಿಯ ಕ್ರಿಕೆಟ್ ಗೆ ವಿದಾಯ ಹೇಳುವುದಾಗಿ ಫಿಂಚ್ ತಿಳಿಸಿದ್ದಾರೆ.

ಆರೋನ್ ಫಿಂಚ್ 2022 ರಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದರು. ಇದಾಗ್ಯೂ ಅವರು ವಿಶ್ವದ ಪ್ರಮುಖ ಲೀಗ್‌ಗಳಲ್ಲಿ ಕಾಣಿಸಿಕೊಂಡಿದ್ದರು. ಇದೀಗ 37 ವರ್ಷದ ಫಿಂಚ್ ಎಲ್ಲಾ ಮಾದರಿಯ ಕ್ರಿಕೆಟ್‌ಗೆ ವಿದಾಯ ಹೇಳಲು ನಿರ್ಧರಿಸಿದ್ದಾರೆ.

ಪ್ರಸ್ತುತ ನಡೆಯುತ್ತಿರುವ ಬಿಗ್ ಬ್ಯಾಷ್ ಲೀಗ್‌ನಲ್ಲಿ ಮೆಲ್ಬೋರ್ನ್ ರೆನೆಗೇಡ್ಸ್ ತಂಡದ ನಾಯಕರಾಗಿರುವ ಆರೋನ್ ಫಿಂಚ್, ಬಿಬಿಎಲ್ ಮೂಲಕವೇ ವೃತ್ತಿ ಬದುಕಿಗೆ ವಿದಾಯ ಹೇಳಲು ಮುಂದಾಗಿದ್ದಾರೆ.

ವಿಶೇಷ ಎಂದರೆ ಆರೋನ್ ಫಿಂಚ್ ಬಿಬಿಎಲ್ ನಲ್ಲಿ ಮೆಲ್ಬೋರ್ನ್ ರೆನೆಗೇಡ್ಸ್ ತಂಡದ ಪರ ಮಾತ್ರ ಆಡಿದ್ದಾರೆ. ಒಟ್ಟು ರೆನೆಗೇಡ್ಸ್ ಪರ 106 ಪಂದ್ಯಗಳನ್ನಾಡಿರುವ ಫಿಂಚ್ 2 ಭರ್ಜರಿ ಶತಕ ಹಾಗೂ 26 ಅರ್ಧಶತಕಗಳೊಂದಿಗೆ ಒಟ್ಟು 3311 ರನ್ ಕಲೆಹಾಕಿದ್ದಾರೆ.

ಅಲ್ಲದೆ ಮೆಲ್ಬೋರ್ನ್ ರೆನೆಗೇಡ್ಸ್ ತಂಡದ ಪರ ಅತ್ಯಧಿಕ ರನ್ ಕಲೆಹಾಕಿದ ದಾಖಲೆಯನ್ನು ಹೊಂದಿದ್ದಾರೆ. ಹಾಗೆಯೇ ಬಿಗ್ ಬ್ಯಾಷ್ ಲೀಗ್ ಇತಿಹಾಸದಲ್ಲೇ ಅತ್ಯಧಿಕ ರನ್ ಕಲೆಹಾಕಿದ 2ನೇ ಬ್ಯಾಟರ್ ಎಂಬ ದಾಖಲೆ ಕೂಡ ಆರೋನ್ ಫಿಂಚ್ ಹೆಸರಿನಲ್ಲಿದೆ.

ಇನ್ನು 2018/19 ರ ಬಿಗ್ ಬ್ಯಾಷ್ ಲೀಗ್‌ನಲ್ಲಿ ಆರೋನ್ ಫಿಂಚ್ ನಾಯಕತ್ವದಲ್ಲಿ ಮೆಲ್ಬೋರ್ನ್ ರೆನೆಗೇಡ್ಸ್ ತಂಡವು ಚಾಂಪಿಯನ್ ಪಟ್ಟ ಅಲಂಕರಿಸಿತ್ತು. ಇದೀಗ ತಮ್ಮ ನೆಚ್ಚಿನ ತಂಡದ ಪರ ಕೊನೆಯ ಪಂದ್ಯವಾಡುವ ಮೂಲಕ ಕ್ರಿಕೆಟ್ ಬದುಕಿಗೆ ವಿದಾಯ ಹೇಳಲು ಆರೋನ್ ಫಿಂಚ್ ನಿರ್ಧರಿಸಿದ್ದಾರೆ.

# ಶ್ರೀಕಾಂತ್ ಪೂಜಾರಿ ವಿರುದ್ಧದ ಕೇಸ್ ಲಿಸ್ಟ್‌ನಲ್ಲಿ ಟ್ವಿಸ್ಟ್; ಪೊಲೀಸ್ ಕಾರ್ಯವೈಖರಿ ಮೇಲೆ ಸಂಶಯ




**ಹುಬ್ಬಳ್ಳಿ:** ರಾಮಜನ್ಮಭೂಮಿ ಹೋರಾಟಗಾರ ಶ್ರೀಕಾಂತ್ ಪೂಜಾರಿ ಬಂಧನದ ವಿಚಾರ ದೊಡ್ಡ ಸುದ್ದಿಯಾಗುತ್ತಿದ್ದಂತೆ ಅಲರ್ಟ್ ಆದ ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಪೊಲೀಸರು ಶ್ರೀಕಾಂತ್ ವಿರುದ್ಧ ದಾಖಲಾದ ಪ್ರಕರಣಗಳ ಪಟ್ಟಿ ಬಿಡಿಗಡೆ ಮಾಡಿದರು. ಹೀಗೆ ಬಿಡುಗಡೆ ಮಾಡಿದ ಕೇಸ್ ಲಿಸ್ಟ್ ನಲ್ಲಿ ಮತ್ತೊಂದು ಟ್ವಿಸ್ಟ್ ಸಿಕ್ಕಿದ್ದು, ಪೊಲೀಸರ ಕಾರ್ಯವೈಖರಿ ಅನುಮಾನಕ್ಕೆ ಕಾರಣವಾಗಿದೆ.

ರಾಮಜನ್ಮಭೂಮಿಗಾಗಿ 1992 ರಲ್ಲಿ ನಡೆದ ಹೋರಾಟದ ವೇಳೆ ನಡೆದ ಗಲಭೆ ವಿಚಾರವಾಗಿ ಶ್ರೀಕಾಂತ್ ಪೂಜಾರಿ ವಿರುದ್ಧ ಹುಬ್ಬಳ್ಳಿ ಪೊಲೀಸರು ಪ್ರಕರಣ ದಾಖಲಿಸಿದ್ದರು. ಸದ್ಯ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತಿದ್ದ ಜನವರಿ 22 ರಂದು ಶ್ರೀರಾಮನ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ನಡೆಯಲಿದೆ. ಈ ನಡುವೆ ಪ್ರಕರಣವನ್ನು ರೀಓಪನ್ ಮಾಡಿದ ಪೊಲೀಸರು ಶ್ರೀಕಾಂತ್ ನನ್ನು ಬಂಧಿಸಿದ್ದಾರೆ.

ಇದು ಹಿಂದೂ ಸಂಘಟನೆಗಳು ಹಾಗೂ ವಿಪಕ್ಷ ಬಿಜೆಪಿ ಆಕ್ರೋಶಕ್ಕೆ ಕಾರಣವಾಯಿತು. ರಾಮ ಜನ್ಮಭೂಮಿ ಹೋರಾಟಗಾರದ ಬಂಧನ ದೊಡ್ಡಮಟ್ಟದಲ್ಲಿ ಟೀಕೆ ವ್ಯಕ್ತವಾಗುತ್ತಿದ್ದಂತೆ ಕಾಂಗ್ರೆಸ್ ಸರ್ಕಾರ ಹಾಗೂ ಪೊಲೀಸರು ಅಲರ್ಟ್ ಆದರು. ಅದರಂತೆ ಶ್ರೀಕಾಂತ್ ಪೂಜಾರಿ ಮೇಲಿನ ಕ್ರೈಂ ರೆಕಾರ್ಡ್ ಅನ್ನು ಪೊಲೀಸರು ಬಿಡುಗಡೆ ಮಾಡಿದ್ದರು.

1992 ರಲ್ಲಿ ಜೈಲಿಗೆ ಹೋಗಿ ಬಂದಿದ್ದ ಶ್ರೀಕಾಂತ್ ಪೂಜಾರಿ ವಿರುದ್ಧ 1994 ರಿಂದ 2014 ವರೆಗೆ ಒಟ್ಟು 12 ಪ್ರಕರಣಗಳನ್ನು ಪೊಲೀಸರು ದಾಖಲಿಸಿದ್ದಾರೆ. ಇದರಲ್ಲಿ ಮೂರು ದೊಂಬಿ ಗಲಭೆ ಕೇಸ್, ಎಂಟು ಅಬಕಾರಿ ಕಾಯ್ದೆಯಡಿ ಸಾರಾಯಿ ಮಾರಾಟ ಪ್ರಕರಣ, ಒಂದು ಮಟ್ಕಾ ಜೂಜಾಟ ಪ್ರಕರಣ ಸೇರಿದೆ.

ಆದರೆ, ಪೊಲೀಸರು ಬಿಡುಗಡೆ ಮಾಡಿದ ಈ ಪ್ರಕರಣಗಳ ಪಟ್ಟಿ ಮತ್ತೊಂದು ಟ್ವಿಸ್ಟ್ ನೀಡಿದೆ. ಶ್ರೀಕಾಂತ್ ಪೂಜಾರಿ ಬಂಧನ ದೀರ್ಘ ಕಾಲದ ಬಾಕಿ ಉಳಿಸಿಕೊಂಡ ಪ್ರಕರಣ ಎಂದಿದ್ದ ಪೊಲೀಸರು, ಶ್ರೀಕಾಂತ್ ಪೂಜಾರಿಯನ್ನು ಮೂರು ಬಾರಿ ಠಾಣೆಗೆ ಕರೆಸಿ ಮುಚ್ಚಳಿಕೆ ಕರೆಸಿಕೊಳ್ಳತ್ತಿದ್ದ ವಿಚಾರ ಬೆಳಕಿಗೆ ಬಂದಿದೆ.

ಮುಂಜಾಗ್ರತಾ ಕ್ರಮವಾಗಿ 2004, 2009 ಹಾಗೂ 2018 ರಲ್ಲಿ ಶ್ರೀಕಾಂತ್ ಪೂಜಾರಿಯನ್ನ ಠಾಣೆಗೆ ಕರೆಸಿ ಮುಚ್ಚಳಿಕೆ ಬರೆಸಿಕೊಳ್ಳಲಾಗಿದೆ. ಯಾವುದ ಪ್ರಕರಣದಲ್ಲಿ ಶ್ರೀಕಾಂತ್ ಪೂಜಾರಿ ತಲೆಮರೆಸಿಕೊಂಡಿರಲಿಲ್ಲ. ಠಾಣೆಗೆ ಹಾಜರಾದಾಗಲೂ ಬಂಧಿಸಿರಲಿಲ್ಲ. ರಾಮ ಜನ್ಮಭೂಮಿಯಲ್ಲಿ ರಾಮಮಂದಿರ ತಲೆ ಎತ್ತುತ್ತಿರುವಾಗಲೇ ಬಂಧನ ಮಾಡಿರುವುದು ಸಂಶಯಕ್ಕೆ ಎಡೆಮಾಡಿಕೊಟ್ಟಿದೆ.

# ಕಾಂಗ್ರೆಸ್ಸಿಗರು ರಾಜ್ಯದಲ್ಲಿ ಭಯದ ವಾತಾವರಣ ಸೃಷ್ಟಿಸುತ್ತಿದ್ದಾರೆ



**ಬೆಂಗಳೂರು:** ಸಿಎಂ ಸಿದ್ದರಾಮಯ್ಯ, ಎಂಎಲ್‌ಸಿ BK ಹರಿಪ್ರಸಾದ್ ಮತ್ತು ಮಾಜಿ ಶಾಸಕ ಯತೀಂದ್ರ ಒಂದೊಂದು ಹೇಳಿಕೆ ನೀಡುವ ಮೂಲಕ ಕಾಂಗ್ರೆಸ್ಸಿಗರು ರಾಜ್ಯದಲ್ಲಿ ಭಯದ ವಾತಾವರಣ ಸೃಷ್ಟಿ ಮಾಡುತ್ತಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ಮಾಡಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಕೆ ಹರಿಪ್ರಸಾದ್ ಅವರಿಗೆ ಮಾಹಿತಿ ಇದ್ದರೆ ಗೃಹ ಇಲಾಖೆಗೆ ಕೊಡಲಿ. ದಾಖಲೆ ಕೊಡಿ, ನಮಗೂ ಕೊಡಿ ಮಾಧ್ಯಮಗಳಿಗೆ ಕೊಡಿ ಎಂದು ಹೇಳಿದ್ದಾರೆ.

ಜಗದೀಶ್ ಶೆಟ್ಟರ್ ನಾನು ದುಡ್ಡು ಕೊಟ್ಟಿದ್ದೇನೆ ಅಂತಾ ಹೇಳಿದ್ದಾರೆ. ಶೆಟ್ಟರ್‌ಗಿಂತಲೂ ನಾನು ಹೆಚ್ಚು ಹಣ ಸಂಗ್ರಹ ಮಾಡಿಕೊಟ್ಟಿದ್ದೇನೆ ಎಂದಿದ್ದಾರೆ.

ಶ್ರೀರಾಮಮಂದಿರದಲ್ಲಿ ರಾಮಲಲ್ಲಾ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮಕ್ಕೆ ಆಹ್ವಾನ ವಿಚಾರವಾಗಿ ಮಾತನಾಡಿದ ಅವರು, ಅಂದು ಪೂಜೆಗೆ ಯಾರು ಅವಶ್ಯಕವಾಗಿ ಬೇಕೋ ಅವರಿಗಷ್ಟೇ ಆಹ್ವಾನ ನೀಡಲಾಗಿದೆ. ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆಗೂ ಆಹ್ವಾನ ಹೋಗಿದೆ. ಆದರೆ ಕಾರ್ಯಕ್ರಮಕ್ಕೆ ಸೋನಿಯಾ, ಖರ್ಗೆ ಹೋಗ್ತಾರೋ ಇಲ್ಲವೋ ಗೊತ್ತಿಲ್ಲ ಎಂದು ಹೇಳಿದ್ದಾರೆ.

ಶ್ರೀಕಾಂತ್ ಪೂಜಾರಿ ಮೇಲೆ ಸಿಎಂ ಬ್ರಹ್ಮಾಸ್ತ್ರ ಮುಂದುವರಿಸಿದ್ದಾರೆ

ಶ್ರೀಕಾಂತ್ ಪೂಜಾರಿ ಮೇಲೆ ಸಿಎಂ ಸಿದ್ದರಾಮಯ್ಯ ಬ್ರಹ್ಮಾಸ್ತ್ರ ಮುಂದುವರಿಸಿದ್ದಾರೆ. ಶ್ರೀಕಾಂತ್ ಪೂಜಾರಿ ಮೇಲೆ ಬಹಳಷ್ಟು ಕೇಸ್ ಗಳಿವೆ ಅಂತಾ ಹೇಳುತ್ತಾರೆ. ಶ್ರೀಕಾಂತ್ ಪೂಜಾರಿ ಅಮಾಯಕ, ಆಟೋ ಡ್ರೈವರ್. ರಾಮಮಂದಿರ ಕಾರ್ಯಕ್ರಮ ಸಂದರ್ಭದಲ್ಲಿ ಬಂಧಿಸುವ ಅಗತ್ಯವೇನಿತ್ತು? ಶ್ರೀಕಾಂತ್ ಪೂಜಾರಿ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಾಗಿದೆ ಅಂತೀರಲ್ಲ. ಡಿ.ಕೆ.ಶಿವಕುಮಾರ್ ಹಾಗೂ ಬಿ.ನಾಗೇಂದ್ರ ವಿರುದ್ಧ ಯಾವ ಕೇಸ್ ಇದೆ ಎಂದು ಪ್ರಶ್ನಿಸಿದ್ದಾರೆ.

ರಾಹುಲ್, ಸೋನಿಯಾ ಗಾಂಧಿ ವಿರುದ್ಧ ಕ್ರಿಮಿನಲ್ ಕೇಸ್ ತಾನೇ ಇದ್ದಿದ್ದು. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಬೇಲ್ ಮೇಲೆ ಹೊರಗೆ ಬಂದಿದ್ದಾರೆ. ನಾವು ದ್ವೇಷದ ರಾಜಕಾರಣ ಮಾಡುತ್ತಿಲ್ಲ ಎಂದಿದ್ದಾರೆ.

**ಹರಿಪ್ರಸಾದ್ ಹೇಳಿಕೆಗೆ ಬಿಜೆಪಿ ಶಾಸಕ ಅಭಯ್ ಪಾಟೀಲ್ ಕಿಡಿ:** 'ಮತ್ತೊಂದು ಗೋಧ್ರಾ ಹತ್ಯಾಕಾಂಡ ಆಗದಂತೆ ನೋಡಿಕೊಳ್ಳಿ' ಎಂಬ ಹರಿಪ್ರಸಾದ್ ಹೇಳಿಕೆಗೆ ಬಿಜೆಪಿ ಶಾಸಕ ಅಭಯ್ ಪಾಟೀಲ್ ಪ್ರತಿಕ್ರಿಯಿಸಿದ್ದು, ಗೋಧ್ರಾ ಹತ್ಯಾಕಾಂಡ ಪ್ರಾರಂಭ ಮಾಡಿದವರು ಯಾರು? ಬಹುತೇಕ ಹರಿಪ್ರಸಾದ್ ಮಾಡ್ತಿರಬಹುದು. ರೈಲಿನಲ್ಲಿ ರಾಮ ಭಕ್ತರನ್ನು ಸುಡುವ ಸಂಚು ಮಾಡಿದವರು ಯಾರು? ಬಿ.ಕೆ. ಹರಿಪ್ರಸಾದ್ ಬಹುತೇಕ ಆ ಯೋಜನೆ ಹಾಕಿದಂತೆ ಕಾಣಿಸುತ್ತೆ. ಈ ರೀತಿ ಹತ್ಯಾಕಾಂಡ ಮಾಡಿ ಸಿಎಂರನ್ನು ಕೆಳಗಿಳಿಸುವ ಪ್ರಯತ್ನ ಎಂದು ಆರೋಪಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com